ಸಂಪುಟ: 05 ಸಂಚಿಕೆ: 137 ಪುಟಗಳು: 08 ಬುಧವಾರ 30 ಜುಲೈ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

**ಮುಂಜಾನೆ ಮಾತು**

ಕನಸು, ಕನಸು, ಕನಸು. ಕನಸುಗಳು ಆಲೋಚನೆಗಳಾಗಿ ರೂಪಾಂತರಗೊಳ್ಳುತ್ತವೆ ಮತ್ತು ಆಲೋಚನೆಗಳು ಕಾರ್ಯರೂಪಕ್ಕೆ ಬರುತ್ತವೆ.

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಮುಖ್ಯಮಂತ್ರಿ, ಗೃಹ ಸಚಿವ ರಾಜೀನಾಮೆ ನೀಡಲಿ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಮಾದಕ ವಸ್ತು ತಯಾರಿಕಾ ಘಟಕ ತಲೆ ಎತ್ತಿದ್ದರೂ ಅದನ್ನು ಗುರುತಿಸುವಲ್ಲಿ, ತಡೆಯುವಲ್ಲಿ ರಾಜ್ಯ ಸರ್ಕಾರ ಹಾಗೂ ಗೃಹ ಇಲಾಖೆ ವಿಫಲವಾಗಿದೆ. ಇದರ ಹೊಣೆ ಹೊತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಗೃಹ ಸಚಿವ ಜಿ.ಪರಮೇಶ್ವರ ಅವರು ರಾಜೀನಾಮೆ ನೀಡಬೇಕು ಎಂದು ಬಿಜೆಪಿ ಯುವ ಮೋರ್ಚಾ ರಾಜ್ಯ ಘಟಕದ ಅಧ್ಯಕ್ಷ ಧೀರಜ್ ಮುನಿರಾಜು ಆಗ್ರಹಿಸಿದರು.
ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಒಂದು ವರ್ಷದ ಅವಧಿಯಲ್ಲಿ, ರಾಜ್ಯದಲ್ಲಿ 1,300 ಕೋಟಿ ಮೌಲ್ಯದಷ್ಟು ಮಾದಕ ವಸ್ತುಗಳನ್ನು ವಶಕ್ಕೆ ಪಡೆಯಲಾಗಿದೆ.
ಎಐಸಿಸಿ ಅಧ್ಯಕ್ಷರ ತವರು ಜಿಲ್ಲೆ ಕಲಬುರಗಿಯಲ್ಲಿ ಮಾದಕ ವಸ್ತುಗಳ ಮಾರಾಟ ಎಗ್ಗಿಲ್ಲದೆ ನಡೆಯುತ್ತಿದ್ದರೆ, ಮುಖ್ಯಮಂತ್ರಿ ತವರು ಜಿಲ್ಲೆ ಮೈಸೂರಿನಲ್ಲಿ ತಯಾರಿಕೆ ನಡೆಯುತ್ತಿತ್ತು. ಆದರೆ ರಾಜ್ಯ ಸರ್ಕಾರ ಯಾವುದೇ ಕ್ರಮ ತೆಗೆದುಕೊಂಡಿಲ್ಲ' ಎಂದು ಆರೋಪಿಸಿದರು.

## ಪೈಪ್ ತಯಾರಿಕೆ: 758 ಕೋಟಿ ಹೂಡಿಕೆ ಮಾಡಲು ತೀರ್ಮಾನ

• ಉದಯವಾಹಿನಿ, ಬೆಂಗಳೂರು

ಸಿಪಿಸಿ ಮತ್ತು ಪಿಪಿಸಿ ಪೈಪುಗಳನ್ನು ಉತ್ಪಾದಿಸುವ ಪೊದ್ದಾರ್ ಪ್ಲಂಬಿಂಗ್ ಸಿಸ್ಟಂ ರಾಜ್ಯದಲ್ಲಿ 758 ಕೋಟಿ ಹೂಡಿಕೆ ಮಾಡಲು ತೀರ್ಮಾನಿಸಿದ್ದು, ಕೋಲಾರ ಜಿಲ್ಲೆಯ ವೇಮಗಲ್ ಕೈಗಾರಿಕಾ ಪ್ರದೇಶದಲ್ಲಿ ಎರಡನೇ ಹಂತದ ಉತ್ಪಾದನೆ ಆರಂಭಿಸಲಿದೆ ಎಂದು ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ ಹೇಳಿದರು.

ಕಂಪನಿಯ ವ್ಯವಸ್ಥಾಪಕ ನಿರ್ದೇಶಕ ದೀಪಕ್ ಪೊದ್ದಾರ್, ನಿರ್ದೇಶಕ ವರುಣ್ ಪೊದ್ದಾರ್ ಅವರೊಂದಿಗೆ ಚರ್ಚೆ ನಡೆಸಿದ ಬಳಿಕ ಅವರು ಮಾತನಾಡಿದರು. ವೇಮಗಲ್ ಕೈಗಾರಿಕಾ ಪ್ರದೇಶದ ಹಂತ-2ರಲ್ಲಿ 33 ಎಕರೆ ಜಮೀನು ನೀಡಲಾಗಿದೆ. 2026ರ ಆಗಸ್ಟ್ ವೇಳೆಗೆ ಉತ್ಪಾದನಾ ಚಟುವಟಿಕೆ ಆರಂಭವಾಗಲಿದೆ. ಯೋಜನೆಯಿಂದ 12 ಸಾವಿರ ಉದ್ಯೋಗ ಸೃಷ್ಟಿಯಾಗಲಿದೆ. ನಂತರ ವಿಜಯಪುರ ಜಿಲ್ಲೆಯಲ್ಲೂ ಘಟಕವನ್ನು ತೆರೆಯಲಿದೆ. ಮುಂದಿನ ಹತ್ತು ವರ್ಷಗಳಲ್ಲಿ ಕಂಪನಿ 1,500 ಕೋಟಿ ಹೂಡಿಕೆ ಮಾಡುವುದಾಗಿ ಹೇಳಿದೆ. ಸರ್ಕಾರಕ್ಕೆ 3 ಸಾವಿರ ಕೋಟಿ ತೆರಿಗೆ ಬರಲಿದೆ ಎಂದರು. ಸಿಪಿಸಿ ಮತ್ತು ಪಿಪಿಸಿ ಪೈಪುಗಳು ನಿರ್ಮಾಣ ಕಾಮಗಾರಿ, ಕೃಷಿ ಮತ್ತು ಕೈಗಾರಿಕಾ ವಲಯಗಳಲ್ಲಿ ವ್ಯಾಪಕವಾಗಿ ಬಳಕೆಯಾಗುತ್ತಿವೆ. ಕಂಪನಿಯು ಈಗಾಗಲೇ ಆಶೀರ್ವಾದ್ ಬ್ರಾಂಡ್ ಹೆಸರಿನ ಪೈಪ್ ತಯಾರಿಸುತ್ತಿದೆ. ಏಳು ಸಾವಿರ ಜನರಿಗೆ ಉದ್ಯೋಗ ನೀಡಿದೆ ಎಂದು ಮಾಹಿತಿ ನೀಡಿದರು.

## ಲೈಸೆನ್ಸ್ ಇಲ್ಲದಿರುವುದೇ ಅಪಘಾತಕ್ಕೆ ಸಂಪೂರ್ಣ ಕಾರಣವಲ್ಲ: ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು

ರಸ್ತೆ ಅಪಘಾತಕ್ಕೊಳಗಾದ ಸವಾರ ವಾಹನ ಚಾಲನಾ ಪರವಾನಗಿ ಹೊಂದಿಲ್ಲವೆಂದ ಮಾತ್ರಕ್ಕೆ ಘಟನೆಗೆ ಆತನ ನಿರ್ಲಕ್ಷ್ಯವೇ ಸಂಪೂರ್ಣ ಕಾರಣವೆನ್ನಲಾಗದು ಎಂದು ಕರ್ನಾಟಕ ಹೈಕೋರ್ಟ್ ಹೇಳಿದೆ. ಮೋಟಾರು ವಾಹನಗಳ ಪರಿಹಾರ ನ್ಯಾಯಾಧೀಕರಣ ನೀಡಿದ್ದ ಆದೇಶ ಪ್ರಶ್ನಿಸಿ ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ಮೂಲದ ಶಿವೇಗೌಡ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಡಾ. ಚಿಲಕೂರು ಸುಮಲತಾ ಅವರಿದ್ದ ಏಕಸದಸ್ಯ ಪೀಠ, ಈ ಆದೇಶ ನೀಡಿದೆ. ಅರ್ಜಿಯನ್ನು ಭಾಗಶಃ ಪುರಸ್ಕರಿಸಿರುವ ಘನವೆತ್ತ ನ್ಯಾಯಾಲಯ, ಅಪಘಾತಕ್ಕೆ ಇನ್ನೊಂದು ವಾಹನ ಸವಾರ ನೇರ ಕಾರಣ ಎಂಬುದನ್ನು ಒಪ್ಪಿಕೊಳ್ಳಲು ಅರ್ಜಿದಾರರು ಸಾಕಷ್ಟು ಪುರಾವೆಗಳನ್ನೂ ನ್ಯಾಯಪೀಠದ ಮುಂದೆ ಪ್ರಸ್ತುತಪಡಿಸಿದರು. ಹೀಗಿರುವಾಗ, ಅವರು ಚಾಲನಾ ಪರವಾನಗಿ ಹೊಂದಿಲ್ಲವೆಂಬ ಕಾರಣಕ್ಕೆ ಅವರ ನಿರ್ಲಕ್ಷ್ಯದಿಂದಲೇ ಘಟನೆ ಸಂಭವಿಸಿದೆ ಎನ್ನುವುದು ಸರಿಯಲ್ಲ ಎಂದು ತನ್ನ ಆದೇಶದಲ್ಲಿ ಉಲ್ಲೇಖಿಸಿದೆ.



● ವಿಪಕ್ಷಗಳು ಎತ್ತಿದ ಪ್ರಶ್ನೆಗಳಿಗೆ ಖಡಕ್ ಉತ್ತರ ಕೊಟ್ಟ ಶಾ ● ಆಪರೇಷನ್ ಸಿಂದೂರ್‌ಗೆ ಇಡೀ ಜಗತ್ತು ಬೆಂಬಲ ನೀಡಿತ್ತು, ಆದ್ರೆ ಕಾಂಗ್ರೆಸ್‌ನಿಂದ ಸಿಗಲಿಲ್ಲ ● ವಿಪಕ್ಷಕ್ಕೆ ಉತ್ತರಿಸಿದ ಮೋದಿ..! ಪೆಹಲ್ಗಾಮ್ ಉಗ್ರರ ಹತ್ಯೆ ದೃಢ ● ಪೆಹಲ್ಗಾಮ್ ಹತ್ಯಾಕಾಂಡ ನಡೆಸಿದ ಮೂವರು ಉಗ್ರರ ಸಂಹಾರ

### ಪಾಕಿಸ್ತಾನ ಉಗ್ರರು ಎಂಬುದಕ್ಕೆ ಸಾಕ್ಷ್ಯಗಳಿವೆ

ಪೆಹಲ್ಗಾಮ್ ದಾಳಿಯ ನಂತರ ಉಗ್ರರು ತಲೆಮರೆಸಿಕೊಂಡಿದ್ದರು. ನಮ್ಮ ಭದ್ರತಾ ಪಡೆಗಳು ಅವರು ಇಲ್ಲಿಂದ ತಪ್ಪಿಸಿಕೊಳ್ಳದಂತೆ ದಿಗ್ಬಂಧನ ಹಾಕಿದ್ದರು. ಸತತ ಶೋಧದ ಬಳಿಕ ಮೂವರನ್ನೂ ಹತ್ಯೆ ಮಾಡಲಾಗಿದೆ. ಎಲ್ಲರೂ ಪೆಹಲ್ಗಾಮ್ ದಾಳಿಕೋರರು ಎಂಬುದಕ್ಕೆ ಪುರಾವೆಗಳು ಸಿಕ್ಕಿವೆ. ಅವರ ಬಳಿ M-9, AK-47 ರೈಫಲ್‌ಗಳು, ಪಾಕಿಸ್ತಾನಿ ಮತದಾರರ ಗುರುತಿನ ಚೀಟಿಗಳು ಹಾಗೂ ಪಾಕಿಸ್ತಾನದಲ್ಲಿ ತಯಾರಿಸಿದ ಚಾಕೊಲೇಟ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಗೃಹ ಸಚಿವರು ಮಾಹಿತಿ ನೀಡಿದರು.

# ಸದನದಲ್ಲಿ ಸಿಂದೂರ ಸಮರ

**ನಮೋ ಅಬ್ಬರ**

• ಉದಯವಾಹಿನಿ, ನವದೆಹಲಿ

ಪ್ರಧಾನಿ ಮೋದಿ ಮಂಗಳವಾರ ಕಾಂಗ್ರೆಸ್ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದು, ಆಪರೇಷನ್ ಸಿಂದೂರ್ ಕಾರ್ಯಾಚರಣೆಗೆ ಭಾರತವು ವಿಶ್ವದಾದ್ಯಂತದ ದೇಶಗಳ ಬೆಂಬಲವನ್ನು ಹೊಂದಿತ್ತು, ಆದರೆ ಕಾಂಗ್ರೆಸ್ ಪಕ್ಷವು ಸಶಸ್ತ್ರ ಪಡೆಗಳ ಧೈರ್ಯವನ್ನು ಬೆಂಬಲಿಸಲು ಸಿದ್ಧವಿರಲಿಲ್ಲ ಎಂದು ಹೇಳಿದ್ದಾರೆ. ಲೋಕಸಭೆಯಲ್ಲಿ ಪೆಹಲ್ಗಾಮ್ ದಾಳಿ ಮತ್ತು ಆಪರೇಷನ್ ಸಿಂದೂರ್ ಕುರಿತ ಚರ್ಚೆಯಲ್ಲಿ ಮಾತನಾಡಿದ ಪ್ರಧಾನಿ ಮೋದಿ, ಭಾರತ ತನ್ನ ಆತ್ಮರಕ್ಷಣೆಗಾಗಿ ಕಾರ್ಯನಿರ್ವಹಿಸುವುದನ್ನು ತಡೆಯಲು ಯಾವುದೇ ದೇಶ ಪ್ರಯತ್ನಿಸಲಿಲ್ಲ ಎಂದು ಹೇಳಿದರು.ವಿದೇಶಾಂಗ ನೀತಿಯ ಬಗ್ಗೆ ಸಾಕಷ್ಟು ಚರ್ಚೆಗಳು ನಡೆದಿವೆ ಮತ್ತು ಭಾರತಕ್ಕೆ ಜಾಗತಿಕ ಬೆಂಬಲ ಸಿಕ್ಕಿದೆ. ವಿಶ್ವದ ಯಾವುದೇ ದೇಶವು ಭಾರತವು ತನ್ನನ್ನು ತಾನು ರಕ್ಷಿಸಿಕೊಳ್ಳಲು ಕ್ರಮ ಕೈಗೊಳ್ಳುವುದನ್ನು ತಡೆಯಲಿಲ್ಲ. 193 ದೇಶಗಳಲ್ಲಿ ಕೇವಲ ಮೂರು ದೇಶಗಳು ಮಾತ್ರ ಪಾಕಿಸ್ತಾನವನ್ನು ಬೆಂಬಲಿಸಿವೆ ಎಂದು ಅವರು ಹೇಳಿದರು.

ಆಪರೇಷನ್ ಸಿಂದೂರ್ ಯಶಸ್ಸಿನ ನಂತರ ಪ್ರಧಾನಿ ಮೋದಿ ಮೂರು ಅಂಶಗಳನ್ನು ಎತ್ತಿ ತೋರಿಸಿದರು. ಭಾರತವು ತನ್ನದೇ ಆದ ಪರಿಸ್ಥಿತಿಗಳು ಮತ್ತು ಸಮಯದಲ್ಲಿ ಭಯೋತ್ಪಾದಕ ದಾಳಿಗಳಿಗೆ ಪ್ರತಿಕ್ರಿಯಿಸುತ್ತದೆ, ಭಯೋತ್ಪಾದಕ ಬೆಂಬಲಿತ ಸರ್ಕಾರಗಳು ಮತ್ತು ಭಯೋತ್ಪಾದಕ ಮಾಸ್ಟರ್‌ಮೈಂಡ್‌ಗಳನ್ನು ಎರಡು ಪ್ರತ್ಯೇಕ ಘಟಕಗಳಾಗಿ ನೋಡುವುದಿಲ್ಲ ಮತ್ತು ಪರಮಾಣು ಬೆದರಿಕೆಯ ಬ್ಲ್ಯಾಕ್‌ಮೇಲ್ ನಮ್ಮ ಎದುರು ನಡೆಯೋದಿಲ್ಲ ಎಂದಿದ್ದಾರೆ.ಮಂಗಳವಾರ ಆದರೆ ದುರದೃಷ್ಟವಶಾತ್, ನನ್ನ ದೇಶದ ಧೈರ್ಯಶಾಲಿ ಯೋಧರ ಶೌರ್ಯಕ್ಕೆ ಕಾಂಗ್ರೆಸ್ ಬೆಂಬಲ ಸಿಗಲಿಲ್ಲ ಎಂದು ಅವರು ಹೇಳಿದರು. ಏಪ್ರಿಲ್ 22ರಂದು 26 ಜನರ ಸಾವಿಗೆ ಕಾರಣವಾದ ಪೆಹಲ್ಗಾಮ್ ದಾಳಿಯ ಬಗ್ಗೆ ಮಾತನಾಡಿದ ಪ್ರಧಾನಿ ಮೋದಿ, ಈ ಹತ್ಯಾಕಾಂಡವನ್ನು ಕ್ರೂರ ಎಂದು ಬಣ್ಣಿಸಿದರು ಮತ್ತು ಭಾರತವನ್ನು ಹಿಂಸಾಚಾರದ ಬೆಂಕಿಗೆ ಎಸೆಯಲು ನಡೆಸಿದ ಯೋಜಿತ ಪಿತೂರಿ ಎಂದು ಹೇಳಿದರು.ಭಯೋತ್ಪಾದಕರು ಅಮಾಯಕ ಜನರನ್ನು ಅವರ ಧರ್ಮದ ಬಗ್ಗೆ ಕೇಳಿದ ನಂತರ ಗುಂಡು ಹಾರಿಸಿದ ರೀತಿ ಕ್ರೌರ್ಯದ ಪರಮಾವಧಿ. ಇದು ಭಾರತದಲ್ಲಿ ಗಲಭೆ ಹರಡಲು ನಡೆದ ಪಿತೂರಿಯಾಗಿತ್ತು. ಇಂದು, ದೇಶವು ಆ ಪಿತೂರಿಯನ್ನು ಒಗ್ಗಟ್ಟಿನಿಂದ ವಿಫಲಗೊಳಿಸಿದ್ದಕ್ಕಾಗಿ ನಾನು ದೇಶವಾಸಿಗಳಿಗೆ ಧನ್ಯವಾದ ಹೇಳುತ್ತೇನೆ ಎಂದು ಅವರು ಹೇಳಿದರು. ಭಾರತದ ಮಿಲಿಟರಿ ಕ್ರಮಕ್ಕೆ ಹೆದರಿ ಕಂಗಾಲಾದ ಪಾಕಿಸ್ತಾನ ಪರಮಾಣು ಬೆದರಿಕೆ ಹಾಕುತ್ತಿತ್ತು ಎಂದು ಪ್ರಧಾನಿ ಹೇಳಿದರು.

**ಗುಡುಗಿದ ಶಾ:** ಜೈಶಂಕರ್ ಭಾಷಣಕ್ಕೆ ಪದೇ ಪದೇ ಅಡ್ಡಿಪಡಿಸುತ್ತಿದ್ದ ವಿಪಕ್ಷಗಳನ್ನು ತರಾಟೆಗೆ ತೆಗೆದುಕೊಂಡ ಶಾ, ಇಂತಹ ವರ್ತನೆಯಿಂದಲೇ ಇನ್ನೂ 20 ವರ್ಷ ನೀವು ಪ್ರತಿಪಕ್ಷ ಸ್ಥಾನದಲ್ಲೇ ಕುಳಿತಿರುತ್ತೀರಿ ಎಂದು ಹರಿಹಾಯ್ದರು. ಇದೇ ಧಾಟಿಯಲ್ಲಿ ರಾಜನಾಥ್ ಸಿಂಗ್ ಕೂಡ, ಪಾಕಿಸ್ತಾನಕ್ಕೆ ನಾವು ಮಾಡಿದ ಹಾನಿಯನ್ನು ಪ್ರಶ್ನಿಸಿ ಎಂದು ವಿಪಕ್ಷಗಳ ಕಾಲೆಳೆದಿದ್ದನ್ನು ಇಲ್ಲಿ ಸ್ಮರಿಸಬಹುದು. ವಿರೋಧ ಪಕ್ಷ ಸದಸ್ಯರಿಗೆ ಭಾರತದ ವಿದೇಶಾಂಗ ಸಚಿವರ ಮೇಲೆ ನಂಬಿಕೆ ಇಲ್ಲ. ದೇಶದ ಅಧ್ಯಕ್ಷರ ಹೇಳಿಕೆಗಳನ್ನು ಅವರು ನಂಬುತ್ತಾರೆ. ಇದಕ್ಕೆ ನನ್ನ ತೀವ್ರ ಆಕ್ಷೇಪವಿದೆ.

1 ಸಿಂಧೂರ ಸಮರ - ಸದನ ಕೋಲಾಹಲ

2 ಪಹಲ್ಗಾಮ್ ಪಾತಕಿಗಳನ್ನ ಕೊಂದಿದ್ದೇವೆ ಸಿಂಧೂರ ಚರ್ಚೆ ವೇಳೆ ಅಬ್ಬರಿಸಿದ ಅಮಿತ್ ಶಾ

3 ವಿಪಕ್ಷಗಳಿಗೆ ಮಂಗಳವಾರ ಮೋದಿ ಉತ್ತರ

### ಚಿದುಗೆ ತಿರುಗೇಟು

ಪೆಹಲ್ಗಾಮ್ ದಾಳಿಕೋರರು ಪಾಕಿಸ್ತಾನದವೇ ಎನ್ನುವುದಕ್ಕೆ ಏನು ದಾಖಲೆ ಇದೆ ಎಂದು ಮಾಜಿ ಕೇಂದ್ರ ಗೃಹ ಸಚಿವ ಪಿ. ಚಿದಂಬರಂ ಪ್ರಶ್ನಿಸಿದ್ದರು, ಅದಕ್ಕೆ ಭದ್ರತಾ ಪಡೆಗಳು ತಕ್ಕ ಉತ್ತರ ನೀಡಿದ್ದಾರೆ, ನಿಮ್ಮ ಬಳಿ ಎಲ್ಲಿಂದ ಬಂದಿದ್ದಾರೆ ಎನ್ನುವ ದಾಖಲೆ ಇದೆಯೇ ಅಮಿತ್ ಶಾ ತಿರುಗೇಟು ನೀಡಿದ್ದಾರೆ. ಜೊತೆಗೆ ಭಯೋತ್ಪಾದಕರು ಎಲ್ಲಿಂದ ಬಂದರು ಮತ್ತು ಅದಕ್ಕೆ ಹೊಣೆ ಯಾರು ಎಂದು ನಮ್ಮನ್ನು ಕೇಳಿದ್ದಾರೆ. ಅಧಿಕಾರದಲ್ಲಿರುವುದರಿಂದ ಅದಕ್ಕೆ ನಾವೇ ಜವಾಬ್ದಾರರು, ಆದರೆ ಭಾರತದ ತಂಟೆಗೆ ಬಂದ ಯಾರನ್ನು ಸುಮ್ಮನೆ ಬಿಡುವುದಿಲ್ಲ ಎನ್ನುವುದಕ್ಕೆ ಅನೇಕ ಉದಾಹರಣೆಗಳು ನಮ್ಮ ಮುಂದಿವೆ. ಅದರಲ್ಲಿ ಪೆಹಲ್ಗಾಮ್ ದಾಳಿಕೋರರನ್ನು ಹತ್ಯೆ ಮಾಡಿರುವೇ ಸಾಕ್ಷಿ ಎಂದಿದ್ದಾರೆ.

### ಕಾಂಗ್ರೆಸ್ ವೈಫಲ್ಯಗಳ ಬಗ್ಗೆ ಟೀಕೆ

ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ನಡೆದ ಭಯೋತ್ಪಾದನೆ ಮತ್ತು ರಕ್ತಪಾತವನ್ನು ಎಳೆ -ಎಳೆಯಾಗಿ ಗೃಹಸಚಿವರು ಹಂಚಿಕೊಂಡರು. ಕೇಂದ್ರ ಸರ್ಕಾರವನ್ನು ಪೆಹಲ್ಗಾಮ್ ದಾಳಿಯ ಕುರಿತು ಪ್ರಶ್ನಿಸಲಾಗುತ್ತಿದೆ. ಆದರೆ, ಕಾಂಗ್ರೆಸ್ ಆಡಳಿತ ವೇಳೆ ನಡೆದ ಹಲವಾರು ದಾಳಿಗಳ ಬಗ್ಗೆ ಏಕೆ ಆ ಪಕ್ಷ ದೇಶಕ್ಕೆ ಉತ್ತರ ನೀಡುತ್ತಿಲ್ಲ ಎಂದು ಮರುಪ್ರಶ್ನೆ ಮಾಡಿದರು. ವಿಪಕ್ಷ ನಾಯಕ ರಾಹುಲ್ ಗಾಂಧಿ ಅವರು ತಮ್ಮ ಪಕ್ಷದ ನೇತೃತ್ವದ ಸರ್ಕಾರದ ಅವಧಿಯಲ್ಲಿ ಆದ ಅನಾಹುತಗಳ ಬಗ್ಗೆ ಮಾತನಾಡಬೇಕು. ಅವುಗಳಿಗೆ ಉತ್ತರ ನೀಡಬೇಕು ಎಂದು ಆಗ್ರಹಿಸಿದರು.

### 100 ಪ್ರತಿಶತವನ್ನು ಸಾಧಿಸಿವೆ

ಮೇ 6-7ರ ಮಧ್ಯರಾತ್ರಿ, ಭಾರತ ನಿರ್ಧರಿಸಿದಂತೆ ಕ್ರಮ ಕೈಗೊಂಡಿತು. ಪಾಕಿಸ್ತಾನಕ್ಕೆ ಏನೂ ಮಾಡಲು ಸಾಧ್ಯವಾಗಲಿಲ್ಲ. ನಮ್ಮ ಸಶಸ್ತ್ರ ಪಡೆಗಳು ಏಪ್ರಿಲ್ 22 ರಂದು 22 ನಿಮಿಷಗಳಲ್ಲಿ ನಿಖರವಾದ ದಾಳಿಯೊಂದಿಗೆ ಸೇಡು ತೀರಿಸಿಕೊಂಡವು ಎಂದು ಅವರು ಹೇಳಿದರು. ಸಶಸ್ತ್ರ ಪಡೆಗಳು ತಮ್ಮ ಗುರಿಗಳಲ್ಲಿ 100 ಪ್ರತಿಶತವನ್ನು ಸಾಧಿಸಿವೆ ಎಂದು ಅವರು ಹೇಳಿದ್ದಲ್ಲದೆ, ಕೆಲವರು ಭಯೋತ್ಪಾದಕರ ಪರವಾಗಿ ನಿಂತ ಪಾಕಿಸ್ತಾನವನ್ನು ಟೀಕಿಸಿದರು.ಅಗಾಧ ನಷ್ಟಗಳನ್ನು ಅನುಭವಿಸಿದ ನಂತರ, ಪಾಕ್ ಡಿಜಿಎಂಒ ಬಂದು 'ನಮ್ಮ ಮೇಲೆ ದಾಳಿ ಮಾಡಬೇಡಿ. ನಾವು ಇನ್ನು ಮುಂದೆ ಬಳಲಲು ಸಾಧ್ಯವಿಲ್ಲ' ಎಂದು ಮನವಿ ಮಾಡಿದರು ಎಂದು ಎನ್‌ಡಿಎ ಸಂಸದರ ಹರ್ಷೋದ್ಗಾರ ಮತ್ತು ವಿರೋಧ ಪಕ್ಷದ ಹರ್ಷೋತ್ಕರ್ಷದ ನಡುವೆ ಪ್ರಧಾನಿ ಮೋದಿ ಹೇಳಿದರು.

## ಅನುದಾನ, ಅಭಿವೃದ್ಧಿಯ ಚರ್ಚೆ ಜತೆಗೆ ಶಾಸಕರಿಗೆ ಸಲಹೆ ನೀಡಿದ ಸಿದ್ದರಾಮಯ್ಯ

■ ಅನುದಾನದಲ್ಲಿ ಕೈಗೆತ್ತುಕೊಂಡ ಕಾಮಗಾರಿಗಳ ಬಗ್ಗೆ ಮಾತುಕತೆ ■ ಅಭಿವೃದ್ಧಿಯಲ್ಲಿ ಏನೆಲ್ಲ ತೊಡಕುಗಳಿವೆ ಎಂದು ಚರ್ಚೆ

• ಉದಯವಾಹಿನಿ, ಬೆಂಗಳೂರು

ಸಿಎಂ ಸಿದ್ದರಾಮಯ್ಯ ಅವರು 6 ಜಿಲ್ಲೆಗಳ ಶಾಸಕರು ಹಾಗೂ ಉಸ್ತುವಾರಿ ಸಚಿವರುಗಳ ಜೊತೆಗೆ ಮಂಗಳವಾರ ಮೊದಲ ಸುತ್ತಿನ ಸಭೆ ನಡೆಸಿದರು. ಮೈಸೂರು, ಚಾಮರಾಜನಗರ, ತುಮಕೂರು, ಕೊಡಗು, ಹಾಸನ, ದಕ್ಷಿಣ ಕನ್ನಡ ಜಿಲ್ಲೆಗಳ ಶಾಸಕರ ಜೊತೆಗೆ ಸಭೆ ನಡೆದಿದೆ. ಸಭೆಯಲ್ಲಿ ಅನುದಾನ, ಅಭಿವೃದ್ಧಿ ವಿಚಾರಗಳ ಬಗ್ಗೆ ಚರ್ಚೆ ನಡೆಯುವುದರ ಜೊತೆಗೆ ಸಿದ್ದರಾಮಯ್ಯ ಅವರು ಕೆಲವೊಂದು ಸಲಹೆ ಸೂಚನೆಗಳನ್ನು ಶಾಸಕರಿಗೆ ನೀಡಿದ್ದಾರೆ.

ಆರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲೆಯನ್ನು ಪ್ರತಿನಿಧಿಸುವ ಸಚಿವರು ಮತ್ತು ಶಾಸಕರುಗಳ ಜೊತೆ ವಿಧಾನಸೌಧದ ತಮ್ಮ ಕಚೇರಿಯಲ್ಲಿ ಸಭೆ ನಡೆಸಿದರು.



ಶಾಸಕರ ಸಮಸ್ಯೆಗಳನ್ನು ಸಿದ್ದರಾಮಯ್ಯ ಆಲಿಸಿದ್ದಾರೆ. ಜಿಲ್ಲಾವಾರು ಶಾಸಕರು ಯಾವ ರೀತಿಯಲ್ಲಿ ಅಭಿವೃದ್ಧಿ ಹಾಗೂ ಅನುದಾನದಲ್ಲಿ ತೊಡಕುಗಳು ಉಂಟಾಗಿವೆ ಎಂಬ ಬಗ್ಗೆ ತಮ್ಮ ಅಭಿಪ್ರಾಯಗಳನ್ನು ತಿಳಿಸಿದ್ದಾರೆ.

**ಸಭೆಯ ಹೈಲೈಟ್ ಏನೇನು:** ಜಿಲ್ಲೆಯಲ್ಲಿ ಪ್ರಮುಖವಾಗಿ ನಡೆಯುತ್ತಿರುವ ಅಭಿವೃದ್ಧಿ ಕೆಲಸಗಳ ಸ್ಥಿತಿ ಗತಿ, ಕೃಷಿ ಚಟುವಟಿಕೆಗಳು ಮತ್ತು ಬಿಡುಗಡೆಯಾಗಿರುವ ಅನುದಾನದಲ್ಲಿ ಖರ್ಚಾಗಿರುವ ಹಣದ ಪ್ರಮಾಣ, ಕಾಮಗಾರಿ ಪೂರ್ಣಗೊಳಿಸಲು ಕಾಲಾವಧಿ ನಿಗಧಿ ಮಾಡುವ ಕುರಿತು ಚರ್ಚೆ ನಡೆಸಲಾಯಿತು. ಕ್ಷೇತ್ರವಾರು ಬಿಡುಗಡೆಯಾಗಿರುವ ಅನುದಾನ, ಇಲಾಖಾವಾರು ಅನುದಾನಗಳ ಬಗ್ಗೆ ಚರ್ಚೆ ಆಗಿದೆ.

ಅಲ್ಲದೆ ಬಜೆಟ್‌ನಲ್ಲಿ ಘೋಷಿಸಿರುವ ಯೋಜನೆಗಳ ಜಾರಿಯ ಸ್ಥಿತಿ ಗತಿ ಕುರಿತಾಗಿಯೂ ಚರ್ಚಿಸಲಾಯ್ತು. ಶಾಸಕರ ಅನುದಾನದಲ್ಲಿ ಕೈಗೆತ್ತಿಕೊಂಡಿರುವ ಕಾಮಗಾರಿಗಳು, ಪ್ರಮುಖವಾಗಿ ಕ್ಷೇತ್ರಕ್ಕೆ ಆಗಬೇಕಾದ ಕೆಲಸಗಳಿಗೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ ಮುಖ್ಯಮಂತ್ರಿಗಳು ಮಾಹಿತಿ ಪಡೆದು ಸಲಹೆ, ಸೂಚನೆಗಳನ್ನು ನೀಡಿದರು. ಗ್ಯಾರಂಟಿಗಳ ಯಶಸ್ವೀ ಜಾರಿಯಿಂದ ಜಿಲ್ಲೆಯ ಆರ್ಥಿಕತೆ ಮೇಲೆ ಆಗಿರುವ ಸಕಾರಾತ್ಮಕ ಪರಿಣಾಮಗಳ ಬಗ್ಗೆ ಶಾಸಕರುಗಳ ಗಮನವನ್ನು ಸೆಳೆದರು. ಸರ್ಕಾರ ಪ್ರತೀ ಕ್ಷೇತ್ರಕ್ಕೂ ಸಾವಿರ ಕೋಟಿಗೂ ಅಧಿಕ ಮೊತ್ತದ ಅಭಿವೃದ್ಧಿ ಕೆಲಸಗಳನ್ನು ಒದಗಿಸಿದ್ದು, ಇದನ್ನು ಕ್ಷೇತ್ರದ ಜನರ, ಫಲಾನುಭವಿಗಳ ಮನೆ ಬಾಗಿಲಿಗೆ ತಲುಪಿಸುವ ಜೊತೆಗೆ ಅವರ ಫಲಾನುಭವಿಗಳ ಜೊತೆ ಸಂಪರ್ಕದಲ್ಲಿ ಇರುವಂತೆ ಸಿಎಂ ಸೂಚನೆ ನೀಡಿದರು. ಎಲ್ಲಾ ಕೆಡಿಪಿ ಸಭೆಗಳಲ್ಲೂ ಶಾಸಕರು, ಸಚಿವರು ಅರ್ಥಪೂರ್ಣವಾಗಿ ಪಾಲ್ಗೊಳ್ಳಬೇಕು. ಅದಕ್ಕೆ ಮೊದಲು ಜನರ ಸಮಸ್ಯೆಗಳ ಬಗ್ಗೆ, ಕಾಮಗಾರಿಗೆ ಇರುವ ತಾಂತ್ರಿಕ ತೊಂದರೆಗಳ ಬಗ್ಗೆ, ಅಧಿಕಾರಿಗಳ ನಿರ್ಲಕ್ಷ್ಯ ಮತ್ತು ನಿಧಾನ ಧೋರಣೆ ಬಗ್ಗೆ ಕೆಡಿಪಿ ಸಭೆಗಳಲ್ಲಿ ಚರ್ಚಿಸಿ ಪರಿಹಾರ ಕಂಡುಕೊಳ್ಳುವಂತೆ ಸೂಚಿಸಲಾಯಿತು.

## ಉದ್ಯೋಗಿಗಳ ಕೆಲಸದ ಅವಧಿ 10 ಗಂಟೆಗೆ ಹೆಚ್ಚಳ ಬೇಡ



• ಉದಯವಾಹಿನಿ, ಬೆಂಗಳೂರು

ಕಾರ್ಮಿಕರ ಕೆಲಸ ಅವಧಿಯನ್ನು 9 ರಿಂದ 10 ಗಂಟೆಗೆ ಹೆಚ್ಚಿಸುವ ಕೇಂದ್ರ ಸರ್ಕಾರದ ಕ್ರಮವನ್ನು ರಾಜ್ಯ ಸರ್ಕಾರ ತಿರಸ್ಕರಿಸಲು ನಿರ್ಧರಿಸಿದೆ.

1961ರ ಕರ್ನಾಟಕ ಅಂಗಡಿ ಮತ್ತು ಸ್ಥಾಪನೆ ಕಾಯಿದೆಗೆ ತಿದ್ದುಪಡಿ ತರುವ ಹಾಗೂ ಕಾರ್ಮಿಕರ ಕೆಲಸದ ಅವಧಿಯನ್ನು 9 ರಿಂದ 10 ಗಂಟೆಗೆ ಹೆಚ್ಚಿಸುವ ಪ್ರಸ್ತಾವನೆಯನ್ನು ಕೇಂದ್ರ ಕಾರ್ಮಿಕ ಇಲಾಖೆ ಎಲ್ಲರಾಜ್ಯಗಳಿಗೂ ಕಳುಹಿಸಿದೆ. ಆದರೆ, ರಾಜ್ಯದಲ್ಲಿಈ ಪ್ರಸ್ತಾವನೆಗೆ ಕಾರ್ಮಿಕ ಸಂಘಟನೆಗಳಿಂದ ವಿರೋಧ ವ್ಯಕ್ತವಾದ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ತಿರಸ್ಕರಿಸಲು ಮುಂದಾಗಿದೆ ಎಂದು ಉನ್ನತ ಮೂಲಗಳು ತಿಳಿಸಿವೆ.

**ನಿಯಮ ವಿರೋಧಕ್ಕೆ ಸರ್ಕಾರ ಕೊಟ್ಟ ಕಾರಣವೇನು?**

ರಾಜ್ಯ ಸರಕಾರವು ಸಮಾನ ನೀತಿ ಅವಕಾಶ ಹೊಂದಿದೆ. ಈಗಾಗಲೇ ಕಾರ್ಮಿಕರು ದಿನಕ್ಕೆ 9 ಗಂಟೆ ಮತ್ತು ವಾರದಲ್ಲಿ 48 ಗಂಟೆಗಳ ಕಾಲ ಕೆಲಸ ಮಾಡುತ್ತಿದ್ದಾರೆ. ಅಲ್ಲದೆ, ಅಗತ್ಯಕ್ಕೆ ಅನುಗುಣವಾಗಿ ಹೆಚ್ಚುವರಿ ಅವಧಿ ಕಾರ್ಯದ ನಿಬಂಧನೆ ಕೂಡ ಇದೆ. ನಿತ್ಯ 10 ಗಂಟೆ ಕೆಲಸಕ್ಕೆ ಅವಧಿಗೆ ಈಗಾಗಲೇ ಕಾರ್ಮಿಕ ಸಂಘಟನೆಗಳ ತೀವ್ರ ವಿರೋಧ ಇದೆ ಎಂಬ ಕಾರಣಗಳನ್ನು ನೀಡಿ, ಕೇಂದ್ರದ ಪ್ರಸ್ತಾವನೆಯನ್ನು ಸಂಪುಟ ಸಭೆಯಲ್ಲಿ ಮುಖ್ಯಮಂತ್ರಿ ಹಾಗೂ ಸಚಿವರು ಪ್ರಸ್ತಾವನೆಯನ್ನು ವಿರೋಧಿಸಿದ್ದಾರೆ. ಆದರೆ, ಇನ್ನೂ ಅಧಿಕೃತವಾಗಿ ಕೇಂದ್ರಕ್ಕೆ ತಿಳಿಸಿಲ್ಲ. ಸಮಗ್ರ ಚರ್ಚೆ ಬಳಿಕ ಈ ನಿರ್ಧಾರ ಪ್ರಕಟಿಸುವ ಸಾಧ್ಯತೆಯಿದೆ ಎಂದು ಕಾರ್ಮಿಕ ಇಲಾಖೆಯ ಮೂಲಗಳಿಂದ ತಿಳಿದು ಬಂದಿದೆ.

## ನಟಿ ರಮ್ಯಾ ಅವಹೇಳನ: ಸಿಸಿಬಿಗೆ ತನಿಖೆ ಹೊಣೆ, ಎಸಿಪಿ ನಿಯೋಜನೆ

● ನಟಿ ರಮ್ಯಾ ಅವಹೇಳನ: ಸಿಸಿಬಿಗೆ ತನಿಖೆ ಹೊಣೆ, ಎಸಿಪಿ ನಿಯೋಜನೆ ● ಹೆಚ್ಚಿನ ತನಿಖೆಗಾಗಿ ಸಿಸಿಬಿಗೆ ವರ್ಗಾವಣೆ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು: ಚಿತ್ರ ನಟಿ ರಮ್ಯಾ ಅವರಿಗೆ ಸಾಮಾಜಿಕ ಜಾಲತಾಣದಲ್ಲಿ ಅಶ್ಲೀಲ ಹಾಗೂ ಅವಹೇಳನಕಾರಿ ಸಂದೇಶಗಳನ್ನು ಹಾಕಿದ ಸಂಬಂಧ ಸೈಬರ್ ಪೊಲೀಸ್ ಠಾಣೆಯಲ್ಲಿ ಈ ಪ್ರಕರಣ ದಾಖಲಾಗಿದ್ದು, ಪ್ರಕರಣವನ್ನು ಹೆಚ್ಚಿನ ತನಿಖೆಗಾಗಿ ಮಂಗಳವಾರ ಸಿಸಿಬಿಗೆ ವರ್ಗಾಯಿಸಲಾಗಿದೆ.

ಅಶ್ಲೀಲ ಹಾಗೂ ಅವಹೇಳನಕಾರಿ ಸಂದೇಶಗಳನ್ನು ಹಾಕಿದ್ದ ನಟ ದರ್ಶನ್ ಅಭಿಮಾನಿಗಳ ವಿರುದ್ಧ ನಟಿ ರಮ್ಯಾ ಅವರು ಬೆಂಗಳೂರು ನಗರ ಪೊಲೀಸ್ ಆಯುಕ್ತರಿಗೆ ಸೋಮವಾರ ನಾಲ್ಕು ಪುಟಗಳ ದೂರು ಕೊಟ್ಟಿದ್ದರು. ಅಲ್ಲದೆ, ಅವಹೇಳನಕಾರಿ ಸಂದೇಶಗಳ ಒಳಗೊಂಡಿರುವ ಸ್ಕ್ರೀನ್‌ಶಾಟ್‌ಗಳನ್ನು ದೂರಿನ ಜತೆ ಸಲ್ಲಿಸಿದ್ದರು. ಇದರ ಬೆನ್ನಲ್ಲೇ ನಗರ ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್ ಅವರು ದೂರಿನ ಪ್ರತಿಯನ್ನು ಸೈಬರ್ ಠಾಣೆಗೆ ವರ್ಗಾಯಿಸಿ ತನಿಖೆಗೆ ಆದೇಶಿಸಿದ್ದರು.



**43 ಮಂದಿಯ ಇನ್‌ಸ್ಟಾಗ್ರಾಮ್ ಖಾತೆಗಳ ವಿರುದ್ಧ ದೂರು:** ರಮ್ಯಾ ದೂರು ಆಧರಿಸಿ ಪ್ರಮೋದ್‌ಗೌಡ, ಡಿ ಬಾಸ್ ಗಂಗಾ, ದೊಣ್ಣೂರು ನಾಗರಾಜ್, ಅಪ್ಪು ಬಡಿಗೇರ್, ರಾಜು, ಆಕಾಶ್, ಡೆವಿಲ್ ಲವ್ವರ್, ಹೇಮಂತ್, ಚಿನ್ಮಯ್, ಹರೀಶಣ್ಣ, ವಿನು, ಸುಜನ್ ಇನ್ನು ಹಲವರು ಸೇರಿದಂತೆ 43 ಮಂದಿಯ ಇನ್‌ಸ್ಟಾಗ್ರಾಮ್ ಖಾತೆಗಳ ವಿರುದ್ಧ ಸೈಬರ್ ಪೊಲೀಸರು ದೂರು ದಾಖಲಿಸಿದ್ದಾರೆ. ಕ್ರಿಮಿನಲ್ ಬೆದರಿಕೆ ಉದ್ದೇಶದ ಅಪರಾಧ, ಬೆದರಿಕೆ, ಶಾಂತಿಭಂಗ ಯತ್ನ, ಲೈಂಗಿಕ ಕಿರುಕುಳ, ಮಹಿಳೆಯ ಗೌರವಕ್ಕೆ ಧಕ್ಕೆ ಆರೋಪದಡಿ ಮಾಹಿತಿ ತಂತ್ರಜ್ಞಾನ ಕಾಯಿದೆ ಹಾಗೂ ಭಾರತೀಯ ನ್ಯಾಯ ಸಂಹಿತೆ (ಬಿಎನ್‌ಎಸ್) ಕಾಯಿದೆಯ ವಿವಿಧ ಸೆಕ್ಷನ್‌ಗಳ ಅನ್ವಯ ಪ್ರಕರಣ ದಾಖಲಿಸಲಾಗಿದೆ.

### ಎಸಿಪಿ ದರ್ಜೆಯ ಅಧಿಕಾರಿ ನೇಮಕ

ಪ್ರಕರಣ ಸಿಸಿಬಿಗೆ ವರ್ಗಾವಣೆಯಾದ ಬೆನ್ನಲ್ಲೇ ಎಸಿಪಿ ದರ್ಜೆಯ ಅಧಿಕಾರಿಯನ್ನು ತನಿಖೆಗೆ ನೇಮಿಸಲಾಗಿದೆ. ಎಸಿಪಿಯು ಜಂಟಿ ಪೊಲೀಸ್ ಆಯುಕ್ತರ ಮೇಲ್ವಿಚಾರಣೆಯಲ್ಲಿತನಿಖೆ ನಡೆಸಲಿದ್ದಾರೆ. ಸೈಬರ್ ಠಾಣೆಯಲ್ಲಿದಾಖಲಾಗಿರುವ ಪ್ರಕರಣದ ಕಡತವನ್ನು ಪಡೆದಿರುವ ಎಸಿಪಿ ನೇತೃತ್ವದ ತನಿಖಾ ತಂಡವು ರಮ್ಯಾ ಅವರನ್ನು ಭೇಟಿಯಾಗಿ ಪ್ರಕರಣ ಸಂಬಂಧ ಮಾಹಿತಿ ಕಲೆಹಾಕಿದೆ.

**ಆರೋಪಿಗಳ ಪತ್ತೆ ಕಾರ್ಯ ಆರಂಭ**

''ಜಂಟಿ ಪೊಲೀಸ್ ಆಯುಕ್ತರ ಮೇಲ್ವಿಚಾರಣೆಯಲ್ಲಿಎಸಿಪಿ ದರ್ಜೆಯ ಅಧಿಕಾರಿಯನ್ನು ಪ್ರಕರಣದ ತನಿಖೆಗೆ ನೇಮಿಸಲಾಗಿದೆ. ನಟಿ ರಮ್ಯಾ ಅವರಿಗೆ ಇನ್‌ಸ್ಟಾಗ್ರಾಮ್‌ನಲ್ಲಿ ಬೆದರಿಕೆ ಹಾಕಿದ್ದ ಆರೋಪಿಗಳ ಪತ್ತೆ ಕಾರ್ಯ ನಡೆಯುತ್ತಿದೆ,'' ಎಂದು ಸೀಮಂತ್‌ಕುಮಾರ್ ಸಿಂಗ್ ತಿಳಿಸಿದ್ದಾರೆ. ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಲಾಗಿದ್ದು, ಕ್ರಮಕ್ಕಾಗಿ ಪೊಲೀಸ್ ಆಯುಕ್ತರಿಗೆ ಸೂಚನೆ ನೀಡಲಾಗಿದೆ. ಜಾಲತಾಣಗಳಲ್ಲಿ ನಡೆಯುತ್ತಿರುವ ಇಂಥದ್ದಕ್ಕೆಲ್ಲಾ ಕಡಿವಾಣ ಹಾಕಲೇಬೇಕಿದೆ.

ರಮ್ಯಾ ಅವರಿಗೆ ಆಗಿರುವುದು ಮುಂದೆ ಬೇರೆಯವರಿಗೆ ಆಗಬಾರದು. ಈ ನಿಟ್ಟಿನಲ್ಲಿ ಸೂಕ್ತ ಕ್ರಮ ಆಗಲಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ.



**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹9,982/Gram24ct ₹9,150/Gram22ct ಬೆಳ್ಳಿ: ₹116.00/Gram

# ಹಳದಿ ಮಾರ್ಗಕ್ಕೆ ನಾಲ್ಕನೇ ಚಾಲಕರಹಿತ ಮೆಟ್ರೋ ರೈಲು ರೆಡಿ

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೋ ಹಳದಿ ಮಾರ್ಗದ ಅಂತಿಮ ಹಂತದ ಪರಿಶೀಲನೆಗಳು ನಡೆಯುತ್ತಿದ್ದು, ಆಗಸ್ಟ್ ಅಂತ್ಯಕ್ಕೆ ವಾಣಿಜ್ಯ ಸಂಚಾರ ಆರಂಭ ಆಗುವ ಮುನ್ಸೂಚನೆಗಳು ಸಿಕ್ಕಿವೆ, ಈ ನಡುವೆ ಈ ಮಾರ್ಗಕ್ಕೆ ಬೇಕಾದ 4 ನೇ ಮೆಟ್ರೋ ರೈಲು ಕೂಡಾ ನಿರ್ಮಾಣಗೊಂಡು ಪಶ್ಚಿಮ ಬಂಗಾಳದಿಂದ ಬೆಂಗಳೂರಿಗೆ ರವಾನಿಸಲಾಗುತ್ತಿದೆ. ಹೌದು ಈ ಮಾರ್ಗದ ಓಡಾಡಕ್ಕೆ ಬೇಕಾಗುವ, ಚಾಲಕರಹಿತ ಮೆಟ್ರೋ ರೈಲು ಈಗಾಗಲೇ 3 ಸಿದ್ಧವಿದೆ. ನಾಲ್ಕನೇ ರೈಲಿನ 2 ಬೋಗಿಗಳನ್ನು ರಾತ್ರಿ ಬಂಗಾಳದ ಟೀಟಾಘರ್ ರೈಲ್ವೆ ಸಿಸ್ಟಂ ಲಿಮಿಟೆಡ್‌ನಿಂದ ರವಾನಿಸಲಾಗಿದೆ ಎಂದು ಹೇಳಲಾಗಿದೆ.


ಇದೇ ರೈಲಿನ ಇನ್ನುಳಿದ ನಾಲ್ಕು ಬೋಗಿಗಳನ್ನು ಮಂಗಳವಾರ ಪ್ಯಾಕಿಂಗ್ ಮಾಡಿ ಕಳುಹಿಸಲಾಗುತ್ತದೆ. ಒಟ್ಟಿನಲ್ಲಿ ರಸ್ತೆ ಹಾಗೂ ಸಂಚಾರ ದಟ್ಟಣೆಯ ಪರಿಸ್ಥಿತಿ ನೋಡಿಕೊಂಡು, ಮುಂದಿನ 2 ವಾರದೊಳಗೆ ಈ ರೈಲು ಬೋಗಿಗಳನ್ನು ಬೆಂಗಳೂರಿಗೆ ತಲುಪಿಸಲಾಗುತ್ತದೆ ಎಂದು ಹೇಳಲಾಗಿದೆ. ಪಶ್ಚಿಮ ಬಂಗಾಳದಲ್ಲಿ ಭಾರೀ ಮಳೆಯಾಗುತ್ತಿದ್ದು, 3 ಕೋಚ್‌ಗಳನ್ನು ಕಳಿಸುವ ಬದಲಿಗೆ 2 ಕೋಚ್‌ಗಳನ್ನು ಮಾತ್ರವೇ ಪ್ಯಾಕ್ ಮಾಡಿ ಕಳಿಸಲು ಸಾಧ್ಯವಾಗಿದೆ. ಟ್ರೈಲರ್‌ಗಳ ಮೂಲಕ ರಸ್ತೆಮಾರ್ಗದಲ್ಲಿ ಬೋಗಿಗಳನ್ನು ರವಾನಿಸಲಾಗುತ್ತಿದ್ದು, ಟ್ರೈಲರ್



ಉದಯವಾಹಿನಿ ಚಿತ್ರ

ಗಳಿಗೆ ವೇಗ ಮಿತಿ ಇದೆ ಹಾಗೂ ಸಾಮರ್ಥ್ಯದ ಮಿತಿ ಇದೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಈಗಾಗಲೇ ವಿಳಂಬ ಆಗಿರುವ ಎಲೆಕ್ಟ್ರಾನಿಕ್ ಸಿಟಿ ಮಾರ್ಗದ ಯೆಲ್ಲೋ ಮೆಟ್ರೋ ಲೈನ್ ಆಗಸ್ಟ್‌ನಲ್ಲಿ ಆರಂಭ ಆಗುವ ಮುನ್ಸೂಚನೆ ಇದೆ. ಕಳೆದ ವಾರವೇ ಮೆಟ್ರೋ ರೈಲು ಸುರಕ್ಷತಾ ಆಯುಕ್ತರು ಆರ್ ವಿರಸ್ತೆ- ಬೊಮ್ಮಸಂದ್ರ ಕಾರಿಡಾರ್‌ನ 19.15 ಕಿಮೀ ರಸ್ತೆ ಪರಿಶೀಲನೆ ನಡೆಸಿದ್ದು ಈ ವಾರ ವರದಿ ಬರಲಿದೆ. ಎಲ್ಲಾ ಅಂದುಕೊಂಡಂತಾದರೆ ಆಗಸ್ಟ್‌ನಿಂದ ಪ್ರತೀ 20 ನಿಮಿಷ ಅಂತರದಲ್ಲಿ 3 ರೈಲುಗಳ ವಾಣಿಜ್ಯ ಸಂಚಾರ ಆರಂಭ ಆಗಲಿದೆ.

**ನಾಲ್ಕನೇ ರೈಲು ಆಗಸ್ಟ್ ಮಧ್ಯದಲ್ಲಿ ಬರಲಿದ್ದು, ಪರೀಕ್ಷೆಗೊಳಪಟ್ಟ ಬಳಿಕ ಕಾರ್ಯಾಚರಣೆಗೆ ಬರಲಿದೆ. ನೇರಳೆ ಮಾರ್ಗ ಹಳದಿ ಮಾರ್ಗ ಸೇರಿದಂತೆ ಈ ವರೆಗೆ 4 ಮೆಟ್ರೋ ರೈಲುಗಳನ್ನು ಬಿಎಂಆರ್‌ಸಿಎಲ್ ಚೀನಾ ಕಂಪನಿಯಿಂದಲೂ ತರಿಸಿದೆ. ಬಂಗಾಳದ ಸಂಸ್ಥೆಯಿಂದ 5-6ನೇ ರೈಲುಗಳು ಆಗಸ್ಟ್ ಸಪ್ಟೆಂಬರ್ ವೇಳೆಗೆ ರವಾನೆ ಆಗಲಿದೆ. ಹಳದಿ ಮಾರ್ಗಕ್ಕೆ ಬೇಕಾದ ಎಲ್ಲಾ 15 ರೈಲುಗಳು 2026ರ ಮಾರ್ಚ್ ಒಳಗೆ ಸಿಗಲಿದೆ ಎಂದು ಬಿಎಂಆರ್‌ಸಿಎಲ್ ನಿರೀಕ್ಷಿಸಿದೆ.**



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

**ಬೆಂಗಳೂರಿನ ಗಿರಿನಗರದಲ್ಲಿ ಇತ್ತೀಚೆಗೆ ಮರ ಬಿದ್ದು ಸಾವನಪ್ಪಿದ ಅಕ್ಷಯ್ ಕುಟುಂಬಕ್ಕೆ 50 ಲಕ್ಷ ರೂ ಪರಿಹಾರ ನೀಡುವಂತೆ ಒತ್ತಾಯಿಸಿ ರಾಷ್ಟ್ರೀಯ ಅಂಬೇಡ್ಕರ್ ಸೇನೆ ವತಿಯಿಂದ ಅರಣ್ಯ ಸಚಿವರ ಆಪ್ತ ಕಾರ್ಯದರ್ಶಿ ರವಿಯವರಿಗೆ ಮನವಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಸಾಹಿತಿ ಡಾ. ಸತ್ಯಮೂರ್ತಿ ಡಾ. ಗೋವಿಂದಯ್ಯ, ಅರ್ಜುನ್ ಗೋಪಾಲಯ್ಯ, ಮುಂತಾದ ಮುಖಂಡರು ಹಾಜರಿದ್ದರು.**

## ಮೂವರು ಮನೆಗಳ್ಳರ ಬಂಧನ, 78.5 ಲಕ್ಷ ಮೌಲ್ಯದ ಚಿನ್ನಾಭರಣ ವಶ

• ಉದಯವಾಹಿನಿ, ಬೆಂಗಳೂರು

ಮನೆಯೊಂದರ ಮುಂಬಾಗಿಲಿನ ಬೀಗ ಒಡೆದು ಒಳನುಗ್ಗಿ ಹಣ, ಆಭರಣ ಕಳವು ಮಾಡಿ ಪರಾರಿಯಾಗಿದ್ದ, ಮೂವರು ಆರೋಪಿಗಳನ್ನು ಜಯನಗರ ಠಾಣೆ ಪೊಲೀಸರು ಬಂಧಿಸಿ 78.50 ಲಕ್ಷ ರೂ. ಮೌಲ್ಯದ ಚಿನ್ನದ ಗಟ್ಟಿ, ಆಭರಣ ವಶಪಡಿಸಿ ಕೊಂಡಿದ್ದಾರೆ. ಬೆಂಗಳೂರು ನಗರದ ನಿವಾಸಿಗಳಾದ ಮಿಥುನ್ (24), ರಘು (25), ಜೈದೀಪ್ ಬಂಧಿತ ಆರೋಪಿಗಳು. ಜಯನಗರ 5ನೇ ಬ್ಲಾಕ್‌ನ ನಿವಾಸಿಯೊಬ್ಬರು ಮಗನನ್ನು ಏರ್‌ಪೋರ್ಟ್‌ಗೆ ಬಿಟ್ಟು ಬರಲು ಹೋಗಿದ್ದಾಗ ಇತ್ತ ಕಳ್ಳರು ಇವರ ಮನೆಯ ಬೀಗ ಒಡೆದು ಒಳನುಗ್ಗಿ 1ಕೋಟಿ ರೂ. ಬೆಲೆ ಬಾಳುವ 1.5ಕೆಜಿ ಚಿನ್ನಾಭರಣ, ಬೆಳ್ಳಿ ವಸ್ತುಗಳು, 3 ಲಕ್ಷ ರೂ. ಬೆಲೆಯ ರೋಲೆಕ್ಸ್ ವಾಚ್, 50 ಸಾವಿರ ಹಣ ಕಳವು ಮಾಡಿಕೊಂಡು ಪರಾರಿಯಾಗಿದ್ದರು. ಏರ್‌ಪೋರ್ಟ್‌ನಿಂದ ವಾಪಸ್ ಆದಾಗ ಮನೆಯಲ್ಲಿ ಕಳ್ಳತನವಾಗಿರುವುದು ಕಂಡು ಬಂದಿದೆ. ತಕ್ಷಣ ಅವರು ಪೊಲೀಸರಿಗೆ ದೂರು ನೀಡಿದ್ದಾರೆ.

ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡ ಪೊಲೀಸರು ವಿವಿಧ ಆಯಾಮಗಳಲ್ಲಿ ಮಾಹಿತಿಗಳನ್ನು ಕಲೆಹಾಕಿ ತಲಘಟ್ಟಪುರದ ತುರಹಳ್ಳಿ ಫಾರೆಸ್ಟ್‌ನ ಖಾಲಿ ಜಾಗದಲ್ಲಿ ಮೂವರನ್ನು ಚಿನ್ನಾಭರಣಗಳ ಸಮೇತ ವಶಕ್ಕೆ ಪಡೆದು ವಿಚಾರಣೆಗೆ ಒಳಪಡಿಸಿದಾಗ ಮನೆಗಳ್ಳತನ ಮಾಡಿರುವುದಾಗಿ ತಿಳಿಸಿದ್ದಾರೆ. ಆರೋಪಿಗಳಿಂದ 1 ಕೆಜಿ 35 ಗ್ರಾಂ ಚಿನ್ನಾಭರಣಗಳನ್ನು ವಶಪಡಿಸಿಕೊಂಡು ಸುದೀರ್ಘವಾಗಿ ವಿಚಾರಣೆಗೆ ಒಳಪಡಿಸಿ 1 ದ್ವಿಚಕ್ರವಾಹನ, ಸ್ನೇಹಿತನಿಗೆ ನೀಡಿದ್ದ 50 ಗ್ರಾಂ ಚಿನ್ನದ ಗಟ್ಟಿಯನ್ನು ವಶಪಡಿಸಿಕೊಳ್ಳುವಲ್ಲಿ ಇನ್ಸ್‌ಪೆಕ್ಟರ್ ದೀಪಕ್ ಸಿಬ್ಬಂದಿ ತಂಡ ಯಶಸ್ವಿಯಾಗಿದೆ.

## ಐಪಿಎಸ್ ಅಧಿಕಾರಿಗಳ ಅಮಾನತು ರದ್ದು, ಸಿಎಂ, ಡಿಸಿಎಂ ಕ್ಷಮೆ ಕೇಳಬೇಕು

• ಉದಯವಾಹಿನಿ, ಬೆಂಗಳೂರು

ಕರ್ತವ್ಯ ಲೋಪದ ಆರೋದಡಿ ಅಮಾನತುಗೊಂಡ ಬಳಿಕ ಇದೀಗ 5 ಮಂದಿ ಐಪಿಎಸ್ ಅಧಿಕಾರಿಗಳ ಅಮಾನತು ರದ್ದುಪಸಿರುವ ಹಿನ್ನಲೆಯಲ್ಲಿ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ ಶಿವಕುಮಾರ್ ಕ್ಷಮೆ ಕೇಳಬೇಕು ಎಂದು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ ವಿಜಯೇಂದ್ರ ಆಗ್ರಹಿಸಿದ್ದಾರೆ. ಈ ಕುರಿತು ತಮ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಸಿಎಂ, ಡಿಸಿಎಂ, ಗೃಹ ಸಚಿವರು, ಸರ್ಕಾರದ ಉನ್ನತ ಸ್ಥಾನದಲ್ಲಿರುವ ಅಧಿಕಾರಿಗಳ ತುಘಲಕ್ ನಿರ್ಧಾರದಿಂದ ಇಂಥಾ ಘೋರ ದುರಂತ ಸಂಭವಿಸಿತು ಎಂದು ಕಿಡಿಕಾರಿದ್ದಾರೆ. ಎಂಬ ವಾಸ್ತವ ಸತ್ಯದ ಹಿನ್ನಲೆಯಲ್ಲಿ ಜನಾಕೋಶ ಎದುರಿಸಲಾಗದೆ ಆಬೀಸುವ ದೊಣ್ಣೆಯಿಂದ ತಪ್ಪಿಸಿಕೊಳ್ಳಲು ಭಂಡತನದಿಂದ ಅಧಿಕಾರದಲ್ಲಿ ಉಳಿಯಲು ತಪ್ಪೆಸಗದ ಪೊಲೀಸ್ ಅಧಿಕಾರಿಗಳಿಗೆ ಅಮಾನತು ಶಿಕ್ಷೆ ವಿಧಿಸಿ ಹೊಣೆಗೇಡಿತನದಿಂದ ಪಾರಾಗಲು ಮುಖ್ಯಮಂತ್ರಿ, ಉಪಮುಖ್ಯಮಂತ್ರಿಗಳು ಪ್ರಯತ್ನಿಸಿದ್ದರು. ಇದೀಗ ಗತ್ಯಂತರವಿಲ್ಲದೆ ಪ್ರಾಯಶ್ಚಿತ್ತ ಮಾಡಿಕೊಳ್ಳಲು ಅಧಿಕಾರಿಗಳ ಅಮಾನತು ರದ್ದುಗೊಳಿಸಲಾಗಿದೆ, ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳು, ಇತರರು ಅಮಾನತು ರದ್ದುಗೊಂಡ ಅಧಿಕಾರಿಗಳ ಕ್ಷಮೆಯಾಚಿಸಬೇಕು ಎಂದು ಒತ್ತಾಯ ಮಾಡಿದ್ದಾರೆ. ಮಹರ್ಷಿ ವಾಲೀಕಿ ಅಭಿವೃದ್ಧಿ ನಿಗಮದ ಹಗರಣ, ಮುಡಾ ಹಗರಣ, ಹದಗೆಟ್ಟ ಕಾನೂನು ಸುವ್ಯವಸ್ಥೆಯ ನಿರಂತರ ವೈಫಲ್ಯ, ಇವೆಲ್ಲವನ್ನೂ ಮುಚ್ಚಿಕೊಳ್ಳಲು ಆಯೋಗಗಳನ್ನು ರಚಿಸುವುದು, ಪ್ರಾಮಾಣಿಕ ಅಧಿಕಾರಿಗಳ ಬಲಿ ತೆಗೆದುಕೊಳ್ಳುವುದು ಕಾಂಗ್ರೆಸ್ ಸರ್ಕಾರದ ಜನರ ದಿಕ್ಕು ತಪ್ಪಿಸುವ ಕುತಂತ್ರ ನಡವಳಿಕೆಯಾಗಿದೆ ಎಂದು ವಾಗ್ದಳಿ ನಡೆಸಿದ್ದಾರೆ. ಬೆಂಗಳೂರಿನ ವಿಜಯೋತ್ಸವದ ಸಂಭ್ರಮಾಚರಣೆಯನ್ನು ರಾಜಕೀಯ ಬಂಡವಾಳ ಮಾಡಿಕೊಳ್ಳಲು ಹೊರಟು ದೂರದೃಷ್ಟಿ ಹಾಗೂ ಜನಕಾಳಜಿ ಇಲ್ಲದ ಅವಿವೇಕಿ ನಿರ್ಧಾರ ತೆಗೆದುಕೊಂಡ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ ಶಿವಕುಮಾರ್ ಅವರು ತಲೆದಂಡ ತಪ್ಪಿಸಿಕೊಳ್ಳಲು ನಾಲ್ವರು ಪೊಲೀಸ್ ಅಧಿಕಾರಿಗಳನ್ನು ಬಲಿಪಶು ಮಾಡಿದ್ದ ಈ ಸರ್ಕಾರ ಇದೀಗ ಅವರ ಅಮಾನತ್ತನ್ನು ರದ್ದುಗೊಳಿಸಿ ಮುಖ ಮುಚ್ಚಿಕೊಳ್ಳಲು ಹೊರಟಿದೆ ಎಂದು ವಿಜಯೇಂದ್ರ ಅವರು ಅನುಮಾನ ವ್ಯಕ್ತಪಡಿಸಿದ್ದಾರೆ.

## ಸಾಲುಸಾಲು ಹಬ್ಬಗಳ ಹಿನ್ನೆಲೆಯಲ್ಲಿ ಗಗನಕ್ಕೇರಿದ ಹೂವು ಹಣ್ಣು ಬೆಲೆ

• ಉದಯವಾಹಿನಿ, ಬೆಂಗಳೂರು

ಶ್ರಾವಣ ಮಾಸದಲ್ಲಿ ಬರುವ ಸಾಲುಸಾಲು ಹಬ್ಬಗಳ ಹಿನ್ನೆಲೆಯಲ್ಲಿ ಹೂವು, ಹಣ್ಣು, ತರಕಾರಿ ಬೆಲೆ ಗಗನಕ್ಕೇರಿದೆ. ಕಳೆದ ಕೆಲವು ತಿಂಗಳುಗಳಿಂದ ಬೆಲೆ ಕುಸಿತದಿಂದ ಸೊರಗಿದ್ದ ಟೊಮ್ಯಾಟೋ ಬೆಲೆ ದಿಢೀರನೆ ಏರಿಕೆಯಾಗಿದ್ದು, ಕಳೆದ ಒಂದು ವಾರದಿಂದೀಚೆಗೆ ಕೆಜಿಗೆ 20ರೂ. ಏರಿಕೆಯಾಗಿದೆ. ಕಳೆದ ವಾರ ಚಿಲ್ಲರೆ ದರದಲ್ಲಿ ಕೆಜಿಗೆ 15 ರಿಂದ 20ರೂ.ಗೆ ಮಾರಾಟವಾಗುತ್ತಿತ್ತು. ಇದೀಗ 35 ರಿಂದ 40ರೂ.ಗೆ ಮಾರಾಟವಾಗುತ್ತಿದೆ. ರಾಜ್ಯದ ವಿವಿಧೆಡೆ ಮಳೆಯಾಗುತ್ತಿದ್ದು, ಇಳುವರಿ ಕುಂಠಿತಗೊಂಡಿದೆ.

ಬೇಡಿಕೆ ಹೆಚ್ಚಾದ ಪರಿಣಾಮ ಬೆಲೆ ಹೆಚ್ಚಳವಾಗಿದೆ. ಲಾಟರಿ ಬೆಳೆ ಎಂದೇ ಕರೆಯಲಾಗುತ್ತಿದ್ದ ಕೆಂಪು ಸುಂದರಿ ಟೊಮ್ಯಾಟೋಗೆ ಕಳೆದ ಮೂರ್ನಾಲ್ಕು ತಿಂಗಳುಗಳಿಂದ ಬೆಲೆ ಇಲ್ಲದೆ ರೈತರು ಕಂಗಾಲಾಗಿದ್ದರು. ಇದೀಗ ಚೇತರಿಸಿಕೊಳ್ಳುತ್ತಿದ್ದು, ಬೆಲೆ ಮತ್ತಷ್ಟು ಏರಿಕೆಯಾಗುವ ಸಾಧ್ಯತೆ ಇದೆ. ಮೋಡ ಕವಿದ ವಾತಾವರಣ, ತುಂತುರು ಮಳೆಯಿಂದಾಗಿ ಮಾರುಕಟ್ಟೆಗೆ ನಿಗದಿತ ಪ್ರಮಾಣದಲ್ಲಿ ಮಾಲು ಬರುತ್ತಿಲ್ಲ. ಜತೆಗೆ ಮಹಾರಾಷ್ಟ್ರದಲ್ಲಿ ಹೆಚ್ಚು ಮಳೆಯಾಗುತ್ತಿದ್ದು, ರಾಜ್ಯದಿಂದ ಟೊಮ್ಯಾಟೋ ರವಾನೆಯಾಗುತ್ತಿದ್ದು, ಬೇಡಿಕೆ ಹೆಚ್ಚಾಗಿದೆ.


### ರಾಜ್ಯ ರಾಜಕೀಯದಲ್ಲಿ ಭಾರೀ ಸಂಚಲನ ಮೂಡಿಸಿದ ಖರ್ಗೆ ಹೇಳಿಕೆ

# ರಂಗಪ್ರವೇಶಕ್ಕೆ ಪರೋಕ್ಷವಾಗಿ ವಿರೋಧ

• ಉದಯವಾಹಿನಿ, ಬೆಂಗಳೂರು

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಹೇಳಿಕೆ ರಾಜ್ಯ ರಾಜಕೀಯದಲ್ಲಿ ಭಾರೀ ಸಂಚಲನ ಮೂಡಿಸಿದ್ದು, ನಾಯಕತ್ವ ಬದಲಾವಣೆ ಬಗೆಗಿನ ಚರ್ಚೆಗೂ ಇಂಬು ನೀಡಿದೆ. ಈ ಹಿಂದೆ ತಮಗೆ ಮುಖ್ಯಮಂತ್ರಿಯಾಗುವ ಅವಕಾಶಗಳು ತಪ್ಪಿ ಹೋದ ಬಗ್ಗೆ ವಿಜಯಪುರದ ಕಾರ್ಯಕ್ರಮದಲ್ಲಿ ಮಲ್ಲಿಕಾರ್ಜುನ ಖರ್ಗೆ ಹೇಳಿಕೆ ನೀಡುವ ಮೂಲಕ ಮೊದಲ ಬಾರಿಗೆ ತಮ ಅಸಮಾಧಾನವನ್ನು ಹೊರಹಾಕಿದ್ದರು. ಆದರೆ ಅವರು ತಮ ಹೇಳಿಕೆ ನೀಡುವ ವೇಳೆಯಲ್ಲಿ ಸ್ಥಾನಮಾನಗಳು ಸಿಗಲಿ, ಸಿಗದೇ ಇರಲಿ ಪಕ್ಷನಿಷ್ಠೆ ಮುಖ್ಯ ಎಂಬ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದರು. ಇದಕ್ಕೆ ಪ್ರತಿಯಾಗಿ ಸಿದ್ದರಾಮಯ್ಯನವರನ್ನು ಅಸಹನೆ ಯಿಂದಲೇ ಸಹಿಸಿಕೊಂಡಿರುವ ಕೆಲ ಸಚಿವರು, ಶಾಸಕರು ಮಲ್ಲಿಕಾರ್ಜುನ ಖರ್ಗೆಯವರಿಗೆ ಪ್ರಧಾನಿಯಾಗುವ ಅರ್ಹತೆ ಇದೆ.

ಸಿಎಂ ಸೇರಿದಂತೆ ಯಾವುದೇ ಸ್ಥಾನಗಳನ್ನು ನಿಭಾಯಿಸುವ ಸಾಮರ್ಥ್ಯ ಅವರಿಗಿದೆ. 50 ವರ್ಷಗಳ ಹಿರಿಯ ಅನುಭವಿ ರಾಜಕಾರಣಿ ಮಲ್ಲಿಕಾರ್ಜುನ ಖರ್ಗೆಯವರು ರಾಜ್ಯ ರಾಜಕಾರಣಕ್ಕೆ ಬಂದರೆ ಅದರಲ್ಲಿ ತಪ್ಪೇನೂ ಇಲ್ಲ ಎಂದು ಅಡ್ಡಗೋಡೆ ಮೇಲೆ ದೀಪ ಇಡುವಂತಹ ಮಾತುಗಳನ್ನಾಡುತ್ತಿದ್ದಾರೆ. ಖರ್ಗೆ ರಾಜ್ಯ ರಾಜಕಾರಣಕ್ಕೆ ಬರುತ್ತಾರೋ, ಇಲ್ಲವೋ ಎಂಬುದು ಮಿಲಿಯನ್ ಡಾಲರ್ ಪ್ರಶ್ನೆಯಾಗಿದ್ದು, ಇದಕ್ಕೆ ಸದ್ಯಕ್ಕೆ ನಿಖರ ಉತ್ತರ ದೊರೆಯುವ ಸಾಧ್ಯತೆಗಳು ಕಡಿಮೆ. ಖರ್ಗೆಯವರು ಅತ್ಯಂತ ಪಕ್ಷನಿಷ್ಠರಾಗಿದ್ದು, ಈವರೆಗೂ ಯಾವುದೇ ವೇದಿಕೆಗಳಲ್ಲಿ ತಮಗಾದ ರಾಜಕೀಯ ಅನ್ಯಾಯದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿರಲಿಲ್ಲ. ಪಕ್ಷದಲ್ಲಿ ಬಹಳಷ್ಟು ಉನ್ನತ ಸ್ಥಾನಗಳನ್ನು ಅನುಭವಿಸಿದ ಉನ್ನತ ನಾಯಕರು ಕಾಂಗ್ರೆಸ್ ತೊರೆದು ಹೊರ ಹೋದರು. ಈ ಹಿಂದೆ ವಿಧಾನಸಭೆ ಚುನಾವಣೆಯಲ್ಲಿ ಡಿಕೆಶಿ ಬಹಿರಂಗ ಹೇಳಿಕೆ ನೀಡಿ ಖರ್ಗೆಯವರು ಮುಖ್ಯಮಂತ್ರಿಯಾಗುವುದಾದರೆ ತಾವು ರೇಸ್‌ನಿಂದ ಹಿಂದೆ ಸರಿಯುವುದಾಗಿ ಹೇಳಿದ್ದರು. ಆದರೆ ಆ ವೇಳೆ ಮಲ್ಲಿಕಾರ್ಜುನ ಖರ್ಗೆ ತಾವು ರಾಜಕೀಯಕ್ಕೆ ಮರಳುವುದಿಲ್ಲ ಎಂದಿದ್ದರು. ಈ ಮತ್ತೆ ಖರ್ಗೆಯವರನ್ನು ಎಳೆದು ತರುವ ಮೂಲಕ ಸಿದ್ದರಾಮಯ್ಯನವರ ನಾಯಕತ್ವದ ಅಧಿಪತ್ಯಕ್ಕೆ ಅಡೆತಡೆ ಸೃಷ್ಟಿಸುವ ಪ್ರಯತ್ನಗಳಾಗಿದ್ದವು ಎಂಬ ಚರ್ಚೆಗಳಾಗುತ್ತಿವೆ.



**ಅವಕಾಶ ತಪ್ಪಿದ್ದರ ಬಗ್ಗೆ ವಿಷಾದ**

**ಪದೇ ಪದೇ ಅವಕಾಶ ವಂಚಿತರಾದರೂ ಕೂಡ ಖರ್ಗೆಯವರು ಪಕ್ಷದಲ್ಲೇ ಉಳಿಯುವ ಮೂಲಕ ಸೈದ್ಧಾಂತಿಕ ನಿಷ್ಠೆ ಪ್ರದರ್ಶಿಸಿದರು. ಎಐಸಿಸಿ ಅಧ್ಯಕ್ಷರಾಗಿರುವ ಅವರು ಈಗ ತಮಗೆ ಅವಕಾಶ ತಪ್ಪಿದ್ದರ ಬಗ್ಗೆ ವಿಷಾದ ವ್ಯಕ್ತಪಡಿಸಿದ್ದು ವ್ಯಾಪಕ ಚರ್ಚೆಗೆ ಗಾಸವಾಗಿದೆ. ರಾಜ್ಯದಲ್ಲಿ ಸಿಎಂ ಸ್ಥಾನದ ಮೇಲೆ ಡಿಸಿಎಂ ಡಿ.ಕೆ.ಶಿವಕುಮಾರ್, ಸಚಿವರಾದ ಪರಮೇಶ್ವರ್, ಎಂ.ಬಿ.ಪಾಟೀಲ್ ಸೇರಿದಂತೆ ಅರ್ಧ ಡಜನ್‌ಗೂ ಹೆಚ್ಚಿನ ನಾಯಕರು ಕಣ್ಣಿಟ್ಟಿದ್ದಾರೆ.**

**ಕೈ ಸಚಿವರು, ಶಾಸಕರಿಗೆ ಬಿಸಿ ತುಪ್ಪ**

**ಖರ್ಗೆಯವರ ಹೇಳಿಕೆಗಳನ್ನು ಬೇರೆ ರೀತಿಯಲ್ಲೇ ಬಿಂಬಿಸ ಲಾಗುತ್ತಿದೆ. ರಾಷ್ಟ್ರ ರಾಜಕಾರಣದಿಂದ ರಾಜ್ಯ ರಾಜಕಾರಣಕ್ಕೆ ಖರ್ಗೆ ಮರಳುತ್ತಾರೆ. ಸಿಎಂ ಯಾಗುತ್ತಾರೆ ಎಂಬೆಲ್ಲಾ ಚರ್ಚೆಗಳು ನಡೆಯುತ್ತವೆ. ಇದು ಕಾಂಗ್ರೆಸ್‌ನ ಸಚಿವರು, ಶಾಸಕರಿಗೆ ಬಿಸಿ ತುಪ್ಪವಾಗಿದೆ. ಸಿದ್ದರಾಮಯ್ಯ ಅವರ ಬೆಂಬಲಿಗರು ಶಾಸಕಾಂಗ ಸಭೆಯಲ್ಲಿ 5 ವರ್ಷಗಳಿಗೆ ಸಿದ್ದರಾಮಯ್ಯನವರನ್ನು ಸಿಎಂ ಎಂದು ಆಯ್ಕೆ ಮಾಡಲಾಗಿದೆ. ಯಾವುದೇ ಸಂದರ್ಭದಲ್ಲೂ ಬದಲಾವಣೆಯ ಪ್ರಶ್ನೆ ಇಲ್ಲ ಎಂದು ಹೇಳುವ ಮೂಲಕ ಖರ್ಗೆಯವರ ರಂಗಪ್ರವೇಶಕ್ಕೆ ಪರೋಕ್ಷವಾಗಿ ವಿರೋಧ ವ್ಯಕ್ತಪಡಿಸುತ್ತಿದ್ದಾರೆ.**

### ಬುರ್ಖಾ ಗ್ಯಾಂಗ್ ಬಂಧನ, 60 ಲಕ್ಷ ರೂ.

# ಬೆಲೆಯ ಆಭರಣ ವಶಕ್ಕೆ

• ಉದಯವಾಹಿನಿ, ಬೆಂಗಳೂರು

ಬುರ್ಖಾಧರಿಸಿ ಪ್ರಯಾಣಿಕರ ಸೋಗಿನಲ್ಲಿ ಬಸ್ ಹತ್ತಿ ಮಹಿಳೆಯರ ಬ್ಯಾಗ್‌ಗಳಿಂದ ಚಿನ್ನಾಭರಣಗಳನ್ನು ಕಳವು ಮಾಡುತ್ತಿದ್ದ ಮೂವರು ಮಹಿಳೆಯರನ್ನು ಪೀಣ್ಯ ಠಾಣೆ ಪೊಲೀಸರು ಬಂಧಿಸಿ 16 ಲಕ್ಷ ರೂ. ಬೆಲೆಯ 190 ಗ್ರಾಂ ಚಿನ್ನಾಭರಣವನ್ನು ವಶಪಡಿಸಿ ಕೊಂಡಿದ್ದಾರೆ. ಕಲ್ಬುರ್ಗಿ ಜಿಲ್ಲೆಯ ಅನು, ಪ್ರಾರ್ಥನಾ ಮತ್ತು ಪದ ಬಂಧಿತ ಬುರ್ಖಾ ಗ್ಯಾಂಗ್. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಮಾದವಾರದ ನಿವಾಸಿಯೊಬ್ಬರು ಹಾಸನಕ್ಕೆ ಹೋಗಲು 8ನೇ ಮೈಲಿ ಬಸ್ ನಿಲ್ದಾಣದಲ್ಲಿ ಬಸ್ ಹತ್ತುತ್ತಿದ್ದಾಗ ಮೂವರು ಮಹಿಳೆಯರು ಇವರನ್ನು ತಳ್ಳಿಕೊಂಡು ಬಸ್ ಹತ್ತಿದ್ದಾರೆ. ಬಸ್ ಸ್ವಲ್ಪ ಮುಂದೆ ಹೋಗುತ್ತಿದ್ದಂತೆ ಸೀಟ್ ಇಲ್ಲವೆಂದು ಗೊಣಗುತ್ತಾ ಬೇರೆ ಬಸ್‌ಗೆ ಹೋಗುತ್ತೇವೆ ಎಂದು ಹೇಳಿ ಬಸ್ ಇಳಿದು ಆ ಮೂವರು ಮಹಿಳೆಯರು ಹೋಗಿದ್ದಾರೆ. ಈ ಬಸ್ ನೆಲಮಂಗಲದ ಅರಿಸಿನಕುಂಟೆ ಬಳಿ ಹೋಗುತ್ತಿದ್ದಾಗ, ವ್ಯಾನಿಟಿ ಬ್ಯಾಗ್ ಪರಿಶೀಲಿಸಿದಾಗ ಅದರಲ್ಲಿದ್ದ 50 ಗ್ರಾಂ ಆಭರಣ ಇರಲಿಲ್ಲ. ಗಾಬರಿಯಾದ ಮಹಿಳೆ ಪೀಣ್ಯ ಪೊಲೀಸ್ ಠಾಣೆಗೆ ದೂರು ನೀಡಿದ್ದು, ಬಸ್‌ನಲ್ಲಿದ್ದ ಮೂವರು ಮಹಿಳೆಯರ ಮೇಲೆ ಅನುಮಾನ ವ್ಯಕ್ತ ಪಡಿಸಿ ದೂರು ನೀಡಿದ್ದಾರೆ.

ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡ ಪೊಲೀಸರು ಖಚಿತ ಮಾಹಿತಿ ಮೇರೆಗೆ ತುಮಕೂರು ರಸ್ತೆ, 8ನೇ ಮೈಲಿ ಬಸ್ ನಿಲ್ದಾಣದ ಬಳಿ ಮೂವರು ಬುರ್ಖಾದಾರಿ ಮಹಿಳೆಯರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಬಸ್‌ನಲ್ಲಿ ಚಿನ್ನಾಭರಣ ಕಳವು ಮಾಡಿರುವುದಾಗಿ, ಇದೇ ರೀತಿ ಪೀಣ್ಯದಲ್ಲಿ ಮೂರು ಕಳವು ಮಾಡಿರುವುದಾಗಿ ಹೇಳಿದ್ದಾರೆ. ಈ ಮೂವರನ್ನು ಸುದೀರ್ಘವಾಗಿ ವಿಚಾರಣೆ ನಡೆಸಿದಾಗ ಕಳವು ಮಾಡಿದ ಚಿನ್ನಾಭರಣಗಳನ್ನು ಯಶವಂತಪುರದ ರೈಲ್ವೆ ಟ್ರ್ಯಾಕ್ ಬಳಿಯ ಶೆಡ್‌ನಲ್ಲಿ ಇಟ್ಟಿರುವುದಾಗಿ ಹೇಳಿದ್ದು, ಅದರಂತೆ ಶೆಡ್‌ನಿಂದ 190 ಗ್ರಾಂ ಚಿನ್ನಾಭರಣಗಳನ್ನು ವಶಪಡಿಸಿಕೊಳ್ಳುವಲ್ಲಿ ಇನ್ಸ್‌ಪೆಕ್ಟರ್ ಅನೀಲ್‌ಕುಮಾರ್ ಮತ್ತು ಸಿಬ್ಬಂದಿ ತಂಡ ಯಶಸ್ವಿಯಾಗಿದೆ.

## ಗಾಂಜಾ ಮಾರಾಟಗಾರ ಹೆಡೆಮುರಿ ಕಟ್ಟಿದ ಕಾಟನ್‌ಪೇಟೆ ಪೊಲೀಸರು, 42 ಲಕ್ಷ ಮೌಲ್ಯದ ಮಾಲು ವಶ

• ಉದಯವಾಹಿನಿ, ಬೆಂಗಳೂರು

ಗಾಂಜಾ ಕಳ್ಳ ಸಾಗಣೆ ಮಾಡುತ್ತಿದ್ದ 6 ಮಂದಿ ಅಂತರ ರಾಜ್ಯ ಚೋರರನ್ನು ಬಂಧಿಸಿರುವ ಕಾಟನ್‌ಪೇಟೆ ಠಾಣೆ ಪೊಲೀಸರು 42 ಲಕ್ಷ ಮೌಲ್ಯದ 53.5 ಕೆ.ಜಿ ಗಾಂಜಾ, 9ಮೊಬೈಲ್, 10ಸಿಮ್‌ಕಾರ್ಡ್, 1ಲ್ಯಾಪ್ ಟಾಪ್, 1 ಗೂಡ್ಸ್ ಆಟೋವನ್ನು ವಶಪಡಿಸಿಕೊಂಡಿದ್ದಾರೆ. ಬಿಹಾರದ ದೀಪಕ್‌ಕುಮಾರ್(22), ಅಮರನಾಥ್(61), ರಾಜಸ್ಥಾನದ ಶಂಕರ್ ಲಾಲ್(36), ಒಡಿಸ್ಸಾದ ನೂರುದ್ದೀನ್ ದುಲೈ(38), ಜಾರ್ಖಂಡ್ ನಿವಾಸಿಗಳಾದ ಬಸಂತ್‌ಕುಮಾರ್(35), ಅಜಿತ್ ಸಿಂಗ್(43) ಬಂ ತ ಆರೋಪಿಗಳು. ಕಳೆದ ಜು.12 ರಂದು ಠಾಣೆ ಸರಹದ್ದಿನ ಪಶುವೈದ್ಯ ಆಸ್ಪತ್ರೆಯ ಹಿಂಭಾಗದಲ್ಲಿ ಗೂಡ್ಸ್ ಆಟೋವೊಂದರಲ್ಲಿ ಅಕ್ರಮವಾಗಿ ಗಾಂಜಾ ಮಾರಾಟ ಮಾಡುತ್ತಿರುವ ಬಗ್ಗೆ ಕಾರ್ಯಾಚರಣೆ ಕೈಗೊಂಡ ಕಾಟನ್ ಪೇಟೆ ಪೊಲೀಸರು ರಾಜಸ್ಥಾನ ಮತ್ತು ಒಡಿಸ್ಸಾ ಮೂಲದ ಇಬ್ಬರನ್ನು ವಾಹನ ಸಮೇತ ವಶಕ್ಕೆ ಪಡೆದಿದ್ದರು. ಗೂಡ್ಸ್ ಆಟೋವನ್ನು ಕೂಲಂಕುಷವಾಗಿ ಪರಿಶೀಲಿಸಿದಾಗ 53.5 ಕೆ.ಜಿ ಗಾಂಜಾ ಪತ್ತೆಯಾಗಿತ್ತು ನಂತರ ಆರೋಪಿಗಳಿಬ್ಬರನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿ, 14 ದಿನಗಳ ಕಾಲ ಪೊಲೀಸ್ ಅಭಿರಕ್ಷೆಗೆ ಪಡೆದುಕೊಂಡು





ಉದಯವಾಹಿನಿ ಚಿತ್ರ

ವಿಚಾರಣೆಗೊಳಪಡಿಸಿದಾಗ, ಗಾಂಜಾವನ್ನು ಆಂಧ್ರಪ್ರದೇಶದ ಶಾಖಪಟ್ಟಣಂನಿಂದ ಬಸ್ ಮತ್ತು ಕಾರ್ಗೋ ಸೇವೆಗಳ ಮೂಲಕ ಬೆಂಗಳೂರಿಗೆ ತರೆಸಿಕೊಂಡಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ನಂತರ ದೆಹಲಿ, ಪುಣೆ ಮತ್ತು ಹೈದರಾಬಾದ್ ನಗರಗಳಿಗೆ ಇತರೆ ನಾಲ್ವರು ಸಹಚರರ ಜೊತೆ ಸೇರಿಕೊಂಡು, ಸಾಗಾಣೆ ಮತ್ತು ಮಾರಾಟ ಮಾಡುತ್ತಿರುವುದು ತನಿಖೆಯ ವೇಳೆಯಲ್ಲಿ ತಿಳಿದು ಬಂದಿದೆ. ತನಿಖೆಯನ್ನು ಮುಂದುವರೆಸಿ ಜು.17 ರಂದು ಮತ್ತೊಬ್ಬನನ್ನು ವೈಟ್‌ಫೀಲ್ಡ್‌ನಲ್ಲಿ ವಶಕ್ಕೆ ಪಡೆದು ವಿಚಾರಣೆಗೊಳಪಡಿಸಲಾಗಿ ಇನ್ನೂ ಮೂವರು ವ್ಯಕ್ತಿಗಳ ಬಗ್ಗೆ ಮಾತಿಯನ್ನು ನೀಡಿದ್ದ.

ಕಾರ್ಯಾಚರಣೆ ಕೈಗೊಂಡು ಜು.18ರಂದು ಮುಂಬೈನಲ್ಲಿ ಒಬ್ಬನನ್ನು,ನವದೆಹಲಿಯಲ್ಲಿ ಮತ್ತೊಬ್ಬನನ್ನು ವಶಕ್ಕೆ ಪಡೆಯಲಾಯಿತು. ಈ ಪ್ರಕರಣದ ಪ್ರಮುಖ ಆರೋಪಿಯನ್ನು ಜು.26 ರಂದು ಬಿಹಾರದ ಹಾಜಿಪುರದಲ್ಲಿ ವಶಕ್ಕೆ ಪಡೆಯಲಾಯಿತು ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ದೆಹಲಿ ಮೂಲದ ಸಹಚರನು ಈ ಗಾಂಜಾವನ್ನು ಪಡೆದು ಮಾರಾಟ ಮಾಡುತ್ತಿರುವುದಾಗಿ ಗೊತ್ತಾಗಿದೆ.ಮತ್ತು ತನಿಖೆ ಪ್ರಗತಿಯಲ್ಲಿದೆ. ಬೆಂಗಳೂರು ನಗರದ ಪೊಲೀಸರು ದೆಹಲಿ, ಆಂಧ್ರಪ್ರದೇಶ, ಮಹಾರಾಷ್ಟ್ರ, ತೆಲಂಗಾಣ, ಜಾರ್ಖಂಡ್ ಪೊಲೀಸರೊಂದಿಗೆ ಹಾಗೂ ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ ರವರೊಂದಿಗೆ ಮಾಹಿತಿಯನ್ನ ವಿನಿಮಯ ಮಾಡಿಕೊಂಡು, ಈ ಜಾಲವನ್ನು ಸಂಪೂರ್ಣವಾಗಿ ಭೇದಿಸಲು ಕ್ರಮ ಕೈಗೊಳ್ಳುತ್ತಿದೆ. ಬೆಂಗಳೂರು ನಗರದಲ್ಲಿ ಮಾದಕ ವಸ್ತುಗಳ ಅಕ್ರಮ ಸಾಗಾಣೆ, ತಡೆಗಟ್ಟುವ ನಿಟ್ಟಿನಲ್ಲಿ ಮುನ್ನೆಚ್ಚರಿಕೆ ಮತ್ತು ಸಮನ್ವಯತೆಯನ್ನು ಸಾಧಿಸಿರುವುದು ಕಂಡುಬರುತ್ತದೆ. ಪಶ್ಚಿಮ ವಲಯದ ಜಂಟಿ ಪೊಲೀಸ್ ಆಯುಕ್ತರ ವಂಶಿಕೃಷ್ಣ ಅವರ ಉಸ್ತುವಾರಿಯಲ್ಲಿ ಪಶ್ಚಿಮ ವಿಭಾದ ಡಿಸಿಪಿ ಎನ್. ಗಿರೀಶ್ ಅವರ ಮಾರ್ಗದರ್ಶನದಲ್ಲಿ ಎಸಿಪಿ ಕೆ.ಎಂ. ರಮೇಶ್, ಕಾಟನ್‌ಪೇಟೆ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಯರ್‍ರಿಸ್ವಾಮಿ, ಅವರ ತಂಡ ಪ್ರಕರಣವನ್ನು ಭೇದಿಸುವಲ್ಲಿ ಯಶಸ್ವಿಯಾಗಿದ್ದಾರೆ.

**ನಕಲಿ ಜಿಎಸ್‌ಟಿ ಬಿಲ್‌ಗಳ ಮೂಲಕ ರವಾನೆ**

**ಈತನು ತನ್ನ ಸಹಚರರನ್ನು ವಿವಿಧ ರಾಜ್ಯದ ಕಾರ್ಗೋ ಕಂಪನಿಗಳಲ್ಲಿ ನೇಮಿಸಿದ್ದು, ವಿಶಾಖಪಟ್ಟಣಂನ ತನ್ನ ಸಹಚರರಿಂದ ಗಾಂಜಾವನ್ನು ಖರೀದಿಸಿ, ಬಸ್‌ಗಳ ಮುಖಾಂತರ ಬೆಂಗಳೂರಿಗೆ ಸಾಗಿಸುತ್ತಿದ್ದರು. ಮುಂದುವರೆದು ಬೆಂಗಳೂರಿಗೆ ತಲುಪಿದ ಬಸ್‌ನ ಕಾರ್ಗೋ ಸೇವಾ ಕಛೇರಿಯಿಂದ ಇತರೆ ಇಬ್ಬರು ಸಹಚರರು ಪಾರ್ಸೆಲ್‌ಗಳನ್ನು ಸ್ವೀಕರಿಸಿದ ನಂತರ ಬೇರೊಂದು ಕಾರ್ಗೋ, ರೈಲಿನ ಮೂಲಕ ದೆಹಲಿಗೆ ನಕಲಿ ಜಿಎಸ್‌ಟಿ ಬಿಲ್‌ಗಳ ಮೂಲಕ ಕಳುಸುತ್ತಿದ್ದರು.**

## ಚಿಕ್ಕಪ್ಪನ ಮನೆಯಲ್ಲೇ ಕಳವು ಆರೋಪಿತೆ ಸೇರಿ ನಾಲ್ವರ ಸೆರೆ, 65 ಲಕ್ಷ ಮೌಲ್ಯದ ಚಿನ್ನಾಭರಣ ಜಪ್ತಿ

• ಉದಯವಾಹಿನಿ, ಬೆಂಗಳೂರು

ಸ್ನೇಹಿತನೊಂದಿಗೆ ಸೇರಿಕೊಂಡು ಚಿಕ್ಕಪ್ಪನ ಮನೆಯಲ್ಲೇ ಹಣ,ಆಭರಣ ಕಳವು ಮಾಡಿ ಮಾರಾಟ ಮಾಡಿದ್ದ ಪ್ರಮುಖ ಆರೋಪಿತೆ ಸೇರಿದಂತೆ ನಾಲ್ವರನ್ನು ಕೊತ್ತನೂರು ಠಾಣೆ ಪೊಲೀಸರು ಬಂಧಿಸಿ 10 ಲಕ್ಷ ನಗದು ಸೇರಿದಂತೆ 65 ಲಕ್ಷ ರೂ. ಬೆಲೆ ಬಾಳುವ 548 ಗ್ರಾಂ ಚಿನ್ನಾಭರಣ, ಚಿನ್ನದ ಗಟ್ಟಿ ವಶಪಡಿಸಿಕೊಂಡಿದ್ದಾರೆ. ಭೈರತಿ ಗ್ರಾಮದ ರಿಯಲ್ ಎಸ್ಟೇಟ್ ಉದ್ಯಮಿ ಶ್ರೀನಿವಾಸ ರೆಡ್ಡಿ ಮನೆಯ ಕೊಠಡಿಯ ಲಾಕರ್‌ನಲ್ಲಿಟ್ಟಿದ್ದ ಚಿನ್ನಾಭರಣ ಕಳವು ಆಗಿರುವ ಬಗ್ಗೆ ಮನೆಯ ಇಬ್ಬರು ಕೆಲಸಗಾರರ ಮೇಲೆ ಅನುಮಾನ ವ್ಯಕ್ತಪಡಿಸಿ, ಕೊತ್ತನೂರು ಪೊಲೀಸ್ ಠಾಣೆಗೆ ದೂರು ನೀಡಿದ್ದರು.

ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರೆಸಿದ ಪೊಲೀಸರು, ದೂರುದಾರರ ಅಣ್ಣನ ಮಗಳನ್ನು ಠಾಣೆಗೆ ಕರೆಸಿ ವಿಚಾರಣೆಗೆ ಒಳಪಡಿಸಿದಾಗ ಸ್ನೇಹಿತನೊಂದಿಗೆ ಸೇರಿ ಕಳ್ಳತನ ಮಾಡಿರುವುದಾಗಿ ಹೇಳಿದ್ದಾಳೆ. ಕಳವು ಮಾಡಿದ ಕೆಲವು ಚಿನ್ನಾಭರಣಗಳನ್ನು ಮತ್ತಿಬ್ಬರು ಸ್ನೇಹಿತರಿಗೆ ನೀಡಿದ್ದು, ಅವುಗಳನ್ನ ಕರಗಿಸಿ ಚಿನ್ನದ ಗಟ್ಟಿಯನ್ನಾಗಿ ಮಾರ್ಪಡಿಸಿ ಮಾರಾಟ ಮಾಡಿ ಹಣ ಪಡೆಯುತ್ತಿದ್ದುದ್ದಾಗಿ ವಿಚಾರಣೆ ವೇಳೆ ತಿಳಿಸಿದ್ದಾಳೆ. ಚಿನ್ನಾಭರಣಗಳನ್ನು ಸ್ವೀಕರಿಸಿದ್ದ ಮತ್ತಿಬ್ಬರು ಸ್ನೇಹಿತರ ಬಗ್ಗೆಯೂ ಸಹ ಮಾಹಿತಿ ನೀಡಿದ್ದು, ಆತನನ್ನೂ





ಉದಯವಾಹಿನಿ ಚಿತ್ರ

ಕೊತ್ತನೂರಿನ ಮನೆಯಿಂದ ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ. ಚಿನ್ನಾಭರಣಗಳನ್ನು ಸ್ವೀಕರಿಸಿದ್ದ ಮತ್ತಿಬ್ಬರು ಸ್ನೇಹಿತರನ್ನು ಗುಬ್ಬಿ ಸರ್ಕಲ್ ಬಳಿ ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಈ ಪ್ರಕರಣದಲ್ಲಿ ಭಾಗಿಯಾಗಿರುವುದಾಗಿ ಹೇಳಿದ್ದಾರೆ. ನಾಲ್ವರು ಆರೋಪಿಗಳನ್ನು ವಿಚಾರಣೆ ನಡೆಸಿ ಚಿಕ್ಕಪೇಟೆಯ 2 ಜ್ಯುವೆಲರಿ ಅಂಗಡಿಗಳಿಂದ, ಕೊತ್ತನೂರಿನಲ್ಲಿ ವಾಸವಿರುವ ಆರೋಪಿಗಳಿಬ್ಬರ ಮನೆಯಿಂದ ಒಟ್ಟು 548 ಗ್ರಾಂ ಚಿನ್ನಾಭರಣ, ಚಿನ್ನದ ಗಟ್ಟಿ, 10 ಲಕ್ಷ ರೂ. ಹಣವನ್ನು ವಶಪಡಿಸಿಕೊಂಡಿದ್ದು, ಅವುಗಳ ಒಟ್ಟು ಮೌಲ್ಯ 65 ಲಕ್ಷ ರೂ.ಗಳೆಂದು ಅಂದಾಜಿಸಲಾಗಿದೆ.ಉಳಿದ ಚಿನ್ನಾಭರಣಗಳ ಪತ್ತೆಕಾರ್ಯ ಮುಂದುವರೆದಿದ್ದು ತನಿಖೆ ಪ್ರಗತಿಯಲ್ಲಿದೆ. ಈ ಪ್ರಕರಣವನ್ನು ಇನ್ಸ್‌ಪೆಕ್ಟರ್ ಚೇತನ್‌ಕುಮಾರ್, ಸಿಬ್ಬಂದಿ ತಂಡ ಪತ್ತೆ ಮಾಡುವಲ್ಲಿ ಯಶಸ್ವಿಯಾಗಿದೆ.

## ಸುಧೀಂದ್ರನಗರದಲ್ಲಿ ಗುರುರಾಯರ ಆರಾಧನೆ ಆಗಸ್ಟ್ ಒಂದರಿಂದ

• ಉದಯವಾಹಿನಿ, ಬೆಂಗಳೂರು

ಶ್ರೀ ರಾಘವೇಂದ್ರ ಸೇವಾ ಸಮಿತಿಯ ವತಿಯಿಂದ ಈಜುಕೊಳದ ಬಡಾವಣೆಯ ಸುಧೀಂದ್ರನಗರದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಕಲಿಯುಗ ಕಾಮಧೇನು ಶ್ರೀ ರಾಘವೇಂದ್ರ ಗುರುಸಾರ್ವಭೌಮರ 354ನೇ ಆರಾಧನಾ ಮಹೋತ್ಸವವನ್ನು ಆಗಸ್ಟ್ ಒಂದರಿಂದ ಹಮ್ಮಿಕೊಂಡಿದ್ದು ಅವುಗಳ ವಿವರಗಳು ಈ ರೀತಿ ಇವೆ.

**ಸಾಂಸ್ಕೃತಿಕ ಕಾರ್ಯಕ್ರಮಗಳು (ಪ್ರತಿದಿನ ಸಂಜೆ 6-30ಕ್ಕೆ) :**

**ಆಗಸ್ಟ್ 1-** ಹರಿದಾಸ ವಾಣಿ ಡಾ. ರಾಯಚೂರು ಶೇಷಗಿರಿದಾಸ್, ಸಂಗಡಿಗರು.

**ಆಗಸ್ಟ್ 2-**ಹರಿದಾಸ ಮಂಜರಿ ಶ್ರೀ ಅನಂತರಾಜ್ ಮಿಸ್ತ್ರಿ ಮತ್ತು ಸಂಗಡಿಗರು.

**ಆಗಸ್ಟ್ 3-**ಹರಿದಾಸ ವೈಭವ ಡಾ. ಚಂದ್ರಿಕಾ ಮತ್ತು ಸಂಗಡಿಗರು.

**ಆಗಸ್ಟ್4-**ಹರಿನಾಮ ಸಂಕೀರ್ತನೆ ಶ್ರೀ ಪ್ರಸಾದ್ ನವರತ್ನ, ಶ್ರೀ ರಾಜೀವ ಅಗಲಿ, ಸಂಗಡಿಗರು

**ಆಗಸ್ಟ್ 5-** ಹರಿನಾಮ ಸ್ಮರಣೆ ಶ್ರೀ ಮತಿ ವೈಷ್ಣವಿ ಮಧುಸೂದನ್ ಕೊಪ್ಪ, ಸಂಗಡಿಗರು

**ಆಗಸ್ಟ್ 6-** ಹರಿದಾಸ ಝೇಂಕಾರ ಕು. ಮನಸ್ವಿ ಕಶ್ಯಪ್ ಮತ್ತು ಕು. ಅನನ್ಯ ಬೆಳವಾಡಿ ಹಾಗೂ ಸಂಗಡಿಗರು

**ಆಗಸ್ಟ್ 7-** ಪಂಚ ವೇಣು ವಾದನ ಗೋಕುಲ ಧ್ವನಿ ತಂಡದ 'ಕರ್ನಾಟಕ ಕಲಾಶ್ರೀ' ಪ್ರಶಸ್ತಿ ಪುರಸ್ಕೃತ ಶ್ರೀ ಹೆಚ್.ಎನ್. ವೇಣುಗೋಪಾಲ್ ಅವರ ಶಿಷ್ಯರಾದ ದೀಪಕ್ ನಾರಾಯಣನ್, ಶರತ್ ಚಂದ್ರ, ಸುಧನ್ವ ಟಿ ಮಣೂರ್, ಚಿರಾಗ್ ಎಸ್. ರಾವ್, ಪ್ರತೀಕ್ ಆಚಾರ್ಯ ಇವರಿಂದ ಪಂಚ ವೇಣು ವಾದನ. ಅನಿರುದ್ಧ ವಾಸುದೇವ್ (ಮೃದಂಗ), ಪವನ್ ಕೆ.ಆರ್. (ರಿದಂ ಪ್ಯಾಡ್)

**ಆಗಸ್ಟ್ 8-** ಹರಿದಾಸ ನಮನ ಕು|| ಲಕ್ಷ್ಮೀ ರಾಧಾಕೃಷ್ಣ ಮತ್ತು ಸಂಗಡಿಗರು

**ಧಾರ್ಮಿಕ ಉಪನ್ಯಾಸ :**

**ಆಗಸ್ಟ್ 9-**ಡಾ. ಮರುತಾಚಾರ್, **ಆಗಸ್ಟ್ 10-**ಡಾ. ಚಂದ್ರಶೇಖರಾಚಾರ್, **ಆಗಸ್ಟ್ 11-**ಮಾಳಿಗಿ ಆನಂದತೀರ್ಥಾಚಾರ್, **ಆಗಸ್ಟ್ 12-**ಶ್ರೀ ಕಲ್ಯಾ ಶ್ರೀಕಾಂತಾಚಾರ್, **ಆಗಸ್ಟ್ 13-**ಡಾ. ವಿನಾಯಕಾಚಾರ್.

**ಕಾರ್ಯಕ್ರಮ ನಡೆಯುವ ಸ್ಥಳ:** ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 6ನೇ ಅಡ್ಡರಸ್ತೆ, ಈಜುಕೊಳದ ಬಡಾವಣೆ, ಸುಧೀಂದ್ರನಗರ, ಮಲ್ಲೇಶ್ವರಂ, ಬೆಂಗಳೂರು-560003.



ಉದಯವಾಹಿನಿ ಚಿತ್ರ

# ಬಿಜೆಪಿಗರು ಯಾವ ಕಾರಣಕ್ಕೆ ಪ್ರತಿಭಟನೆ ಮಾಡುತ್ತಿದ್ದಾರೆ?

### ರಸಗೊಬ್ಬರದ ಕೊರತೆ : ಬಿಜೆಪಿಯವರೇ ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟಿಸುತ್ತಿದ್ದಾರೆ ಎಂದ ಡಿಕೆಶಿ

• ಉದಯವಾಹಿನಿ, ಬೆಂಗಳೂರು

ರಸಗೊಬ್ಬರದ ಕೊರತೆ ವಿಚಾರದಲ್ಲಿ ಬಿಜೆಪಿಯವರ ಪ್ರತಿಭಟನೆ ಕೇಂದ್ರ ಸರ್ಕಾರದ ಕೃಷಿ ಸಚಿವರು, ರಸಗೊಬ್ಬರಗಳ ಸಚಿವರ ವಿರುದ್ಧವಾಗಿದೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿರುಗೇಟು ನೀಡಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ರಾಜ್ಯದಲ್ಲಿ ಉತ್ತಮ ಮಳೆಯಾಗಿದೆ, ವ್ಯವಸಾಯದ ಭೂಮಿ ವಿಸ್ತರಣೆಯಾಗಿದೆ, ರೈತರಿಗೆ ಒಳ್ಳೆಯದಾಗುತ್ತಿದೆ ಇದು ಸ್ವಾಗತಾರ್ಹ ಎಂದರು. ಬಿಜೆಪಿಗರು ಯಾವ ಕಾರಣಕ್ಕೆ ಪ್ರತಿಭಟನೆ ಮಾಡುತ್ತಿದ್ದಾರೆ?, ರಸಗೊಬ್ಬರ ನಮ ಬಳಿ ಇಲ್ಲ. ಕೇಂದ್ರ ಸರ್ಕಾರ ಕೊಡಬೇಕು ನಾವು ಹಂಚಿಕೆ ಮಾಡಬೇಕು. ಹಂಚಿಕೆಯಲ್ಲಿ ಯಾವುದಾದರೂ ಲೋಪಗಳಾಗಿದ್ದರೆ ಅದರ ಪರಿಶೀಲನೆ ಮಾಡಲಿ. ಯಾವ ಸೊಸೈಟಿಗೆ ಎಷ್ಟು ಗೊಬ್ಬರ ಹೋಗಿದೆ, ಎಷ್ಟು ಹಂಚಿಕೆಯಾಗಿದೆ, ಯಾವ ಜಿಲ್ಲೆಗೆ ಬಂದಿರುವುದೆಷ್ಟು, ಉಳಿದಿರುವುದೆಷ್ಟು?. ಎಲ್ಲವೂ ಕರಾರುವಕ್ಕಾದ ಲೆಕ್ಕಪತ್ರಗಳಿವೆ ಎಂದು ಹೇಳಿದರು. ಈ ಹಿಂದೆ ಗೊಬ್ಬರ ಕೊಡಲಾಗದೆ ಬಿಜೆಪಿ ಸರ್ಕಾರ ರೈತರ ಮೇಲೆ ಗೋಲಿಬಾರ್ ನಡೆಸಿತ್ತು. ನಾವು ಆ ರೀತಿ ಯಾವುದನ್ನೂ ಮಾಡಿಲ್ಲ ಎಂದು ಸ್ಪಷ್ಟಪಡಿಸಿದರು.

ಮೊದಲು ಗ್ರಾಮೀಣ ಭಾಗದ ಶಾಸಕರ ಸಭೆಗಳು ಮುಗಿಯಲಿ ಬೆಂಗಳೂರಿನ ಸಮಸ್ಯೆಗಳು ಭಿನ್ನವಾಗಿವೆ. ಅವುಗಳ ಪರಿಹಾರಕ್ಕೆ ಭಾರೀ ಪ್ರಮಾಣದ ಹಣಕಾಸಿನ ಸೌಲಭ್ಯ ಬೇಕು. ಅದರ ಬಗ್ಗೆ ಸಿಎಂಅವರ ಜೊತೆ ಈಗಾಗಲೇ ಚರ್ಚೆ ಮಾಡಿದ್ದೇನೆ ಎಂದು ಹೇಳಿದರು. ನಾವು ತುಂಬಾ ದೂರ ಸಾಗಬೇಕಿದೆ. ಬಿಬಿಎಂಪಿ ಚುನಾವಣೆ ಬಗ್ಗೆ ನ್ಯಾಯಾಲಯಕ್ಕೆ ಇಂದು ಪ್ರಮಾಣಪತ್ರ ಸಲ್ಲಿಸಬೇಕು. ಗ್ರೇಟರ್ ಬೆಂಗಳೂರು ರಚನೆಯಾಗಿದೆ. ಅದನ್ನು ಮತ್ತಷ್ಟು ವಿಸ್ತರಣೆ ಮಾಡಬೇಕು. ವಿರೋಧಪಕ್ಷದ ಶಾಸಕರ ಜೊತೆ ಚರ್ಚೆ ಮಾಡಿದ್ದೇನೆ. ಅವರ ಅನುಮತಿಯನ್ನೂ ಪಡೆಯಲಾಗಿದೆ. ಸಾರ್ವಜನಿಕವಾಗಿ ವಿರೋಧಪಕ್ಷಗಳು ಆರೋಪ, ಟೀಕೆ ಮಾಡುತ್ತವೆ. ಅದಕ್ಕೆ ತಲೆಕೆಡಿಸಿಕೊಳ್ಳುವುದಿಲ್ಲ ಎಂದರು. ರಾಜ್ಯ, ಬೆಂಗಳೂರಿನ ಹಿತದೃಷ್ಟಿಯಿಂದ ನಾವು ಭೌಗೋಳಿಕವಾಗಿ ವ್ಯಾಪ್ತಿಯನ್ನು ವಿಂಗಡಿಸಿಕೊಂಡಿದ್ದೇವೆ. ಆಡಳಿತಾತಕ, ಹಣಕಾಸು ಮತ್ತು ಭೌಗೋಳಿಕತೆಯ ವಿಚಾರವಾಗಿ ನಾವು ಪರಾಮರ್ಶೆ ಮಾಡಬೇಕಿದೆ ಎಂದು ತಿಳಿಸಿದರು. ಬಿಜೆಪಿಯವರು ಮೊದಲು ಹದಗೆಟ್ಟಿರುವ ಅವರ ಪಕ್ಷವನ್ನು ಸರಿಪಡಿಸಿಕೊಳ್ಳಲಿ. ಅನಂತರ ಕಾಂಗ್ರೆಸ್ ಬಗ್ಗೆ ಮಾತನಾಡಲಿ ಎಂದರು.



**ಮುಖ್ಯಮಂತ್ರಿ ಸಭೆಯ ಬಗ್ಗೆ ಅಸಹನೆ**

**ಸಿಎಂ ಸಿದ್ದರಾಮಯ್ಯನವರು ಶಾಸಕರ ಜೊತೆ ಸಭೆ ನಡೆಸುತ್ತಿರುವುದಕ್ಕೆ ತಮಗೆ ಆಹ್ವಾನ ನೀಡದೇ ಇರುವುದರಿಂದ ಕಷ್ಟವೇನೂ ಆಗಿಲ್ಲ. ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಈ ಹಿಂದೆ ಶಾಸಕರ ಜೊತೆ ಪ್ರತ್ಯೇಕ ಸಭೆ ನಡೆಸಿದಾಗ ಕೆಲವು ದೂರುಗಳು ಕೇಳಿಬಂದಿದ್ದವು. ಅವುಗಳನ್ನು ಬಗೆಹರಿಸುವಂತೆ ಸುರ್ಜೇವಾಲ ಮುಖ್ಯಮಂತ್ರಿಯವರಿಗೆ ಸಲಹೆ ನೀಡಿದ್ದರು. ಹಾಗಾಗಿ ಸಿದ್ದರಾಮಯ್ಯ ಪ್ರತ್ಯೇಕ ಸಭೆ ಮಾಡುತ್ತಿದ್ದಾರೆ ಎಂದರು.**

**ಖರ್ಗೆ ಹೇಳಿಕೆಯಲ್ಲಿ ತಪ್ಪಿಲ್ಲ**

**ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ಮುಖ್ಯಮಂತ್ರಿ ಸ್ಥಾನ ತಪ್ಪಿದ್ದಕ್ಕಾಗಿ ನೀಡಿರುವ ಹೇಳಿಕೆ ತಪ್ಪೇನಿಲ್ಲ. ಅವರೊಬ್ಬ ಹಿರಿಯ ನಾಯಕ. ಪಕ್ಷಕ್ಕಾಗಿ ದುಡಿದಿದ್ದಾರೆ. ತಮ ನೋವು ಹಾಗೂ ಭಾವನೆಗಳನ್ನು ಹೇಳಿಕೊಳ್ಳುವುದರಲ್ಲಿ ಯಾವುದೇ ತಪ್ಪಿಲ್ಲ ಎಂದರು. ಅವರಿಗೆ ಮುಖ್ಯಮಂತ್ರಿಯಾಗುವ ಅವಕಾಶ ಇನ್ನೂ ಇದೆಯೇ ಎಂಬ ಬಗ್ಗೆ ಪ್ರತಿಕ್ರಿಯಿಸಲು ನಿರಾಕರಿಸಿದ ಡಿಕೆಶಿಯವರು ಖರ್ಗೆಯವರ ಹೇಳಿಕೆಯನ್ನು ಆಧರಿಸಿ ಸಚಿವರು, ಶಾಸಕರು ಚರ್ಚೆ ಮಾಡಲಿ. ಆದರೆ ಸಾರ್ವಜನಿಕವಾಗಿ ಮಾತನಾಡಬಾರದು ಎಂದು ಸೂಚನೆ ನೀಡಿದರು.**

# ನನಗೆ ಕನಕಪುರದಷ್ಟೇ ಮಂಡ್ಯವೂ ಮುಖ್ಯ: ಡಿಕೆಶಿ

## ಮದ್ದೂರಿನ ಶಾಸಕ ಉದಯ್ ಅವರ ಬೆನ್ನಿಗೆ ಇಡೀ ಸರ್ಕಾರ ನಿಂತಿದೆ

ಏಳು ಕ್ಷೇತ್ರಗಳು ಮುಖ್ಯ

• ಉದಯವಾಹಿನಿ, ಮಂಡ್ಯ

ನನಗೆ ಕನಕಪುರ ಎಷ್ಟು ಮುಖ್ಯವೋ, ಮಂಡ್ಯದ ಏಳು ಕ್ಷೇತ್ರಗಳು ಅಷ್ಟೇ ಮುಖ್ಯ. ಮದ್ದೂರಿನ ಶಾಸಕ ಉದಯ್ ಅವರ ಬೆನ್ನಿಗೆ ಇಡೀ ಸರ್ಕಾರ ನಿಂತಿದೆ. ಕ್ಷೇತ್ರದ ಜನರ ಋಣ ತೀರಿಸಲು 1146 ಕೋಟಿ ಮೊತ್ತದ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿದ್ದೇವೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು. ಮದ್ದೂರಿನಲ್ಲಿ ನಡೆದ ಮೊತ್ತದ ವಿವಿಧ ಇಲಾಖೆಗಳ ಹಲವು ಯೋಜನೆಗಳ ಕಾಮಗಾರಿ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಮಾತನಾಡಿದರು. ನಾವು ಇಂದು ನಿಮಿಂದ ಜೈಕಾರ ಹಾಕಿಸಿಕೊಳ್ಳಲು ಬಂದಿಲ್ಲ. ಈ ಕ್ಷೇತ್ರದಲ್ಲಿ ನಮ ಅಭ್ಯರ್ಥಿ ಉದಯ್ ಅವರನ್ನು ಗೆಲ್ಲಿಸಿ ಜಿಲ್ಲೆಯ 7 ಸ್ಥಾನಗಳ ಪೈಕಿ 6ರಲ್ಲಿ ಕಾಂಗ್ರೆಸ್ ಅನ್ನು ಬೆಂಬಲಿಸಿದ್ದೀರಿ. ಆ ಮೂಲಕ ರಾಜ್ಯದಲ್ಲಿ 136 ಸಂಖ್ಯಾಬಲದ ಬಲಿಷ್ಠ ಸರ್ಕಾರ ರಚನೆಗೆ ಸಹಕಾರ ನೀಡಿರುವ ನಿಮ ಋಣ ತೀರಿಸಲು ನಾವಿಲ್ಲಿಗೆ ಬಂದಿದ್ದೇವೆ ಎಂದು ತಿಳಿಸಿದರು. ನೀರಾವರಿ ಇಲಾಖೆಯ ಕಚೇರಿಯನ್ನು ನಾನು ಆರಂಭಿಸುತ್ತಿದ್ದೇನೆ. ಮಳವಳ್ಳಿವರೆಗೂ ನೀರು ಹರಿಸಿ, ಮದ್ದೂರಿನ ಕಾಲುವೆಗಳ ಅಭಿವೃದ್ಧಿ ದೃಷ್ಟಿಯಿಂದ ಸುಮಾರು 500 ಕೋಟಿಗೂ ಹೆಚ್ಚು ಮೊತ್ತದ ಹಣವನ್ನು ನೀಡಿದ್ದೇವೆ. ಚೆಲುವರಾಯಸ್ವಾಮಿ ಅವರು ಕೂಡ ಸಾಕ್ಷಿಗುಡ್ಡೆ ಬಿಟ್ಟು ಹೋಗಲು, ರೈತರ ಮಕ್ಕಳಿಗಾಗಿ ಕೃಷಿ ವಿವಿ ತರಲು ಮುಂದಾಗಿದ್ದಾರೆ.

ಗ್ಯಾರಂಟಿ ಯೋಜನೆಗಳಿಗೆ 52 ಸಾವಿರ ಕೋಟಿ, ನಮ ಸರ್ಕಾರ ರೈತರ ಪಂಪ್ ಸೆಟ್ ಗಳಿಗೆ ಉಚಿತ ವಿದ್ಯುತ್ ನೀಡಲು ವರ್ಷಕ್ಕೆ 19 ಸಾವಿರ ಕೋಟಿ, ಸಮಾಜ ಕಲ್ಯಾಣ ಇಲಾಖೆ ಹಾಗೂ ಇತರೆ ಇಲಾಖೆಗಳಿಂದ 25 ಸಾವಿರ ಕೋಟಿಯಷ್ಟು ಹಣವನ್ನು ಜನರಿಗೆ ನೀಡುತ್ತಿದ್ದೇವೆ. 10,900 ಕೋಟಿಯಷ್ಟು ಹಣವನ್ನು ಪಿಂಚಣಿಗಾಗಿ ನೀಡುತ್ತಿದ್ದೇವೆ. ಆ ಮೂಲಕ ಬಜೆಟ್ಟಿನ 1 ಲಕ್ಷ ಕೋಟಿಯಷ್ಟು ಹಣವನ್ನು ಜನರಿಗಾಗಿ ನೀಡುತ್ತಿದ್ದೇವೆ.
-ಡಿ.ಕೆ.ಶಿವಕುಮಾರ್, ಡಿಸಿಎಂ



ಜಿಲ್ಲೆಯ ಏಳೂ ಕ್ಷೇತ್ರಗಳಲ್ಲಿ ವಿವಿಧ ಯೋಜನೆ ಹಮ್ಮಿಕೊಳ್ಳಲಾಗಿದೆ. ಈ ಜಿಲ್ಲೆಯಲ್ಲಿ ಅತಿಹೆಚ್ಚು ಶಾಸಕರು ಗೆದ್ದಾಗ ಕಾಂಗ್ರೆಸ್ ಸರ್ಕಾರ ರಚನೆಯಾಗಿದೆ ಎಂದರು. ನೀವು ಅಧಿಕಾರದಲ್ಲಿದ್ದಾಗ ಇಂತಹ ಯಾವುದಾದರೂ ಒಂದು ಯೋಜನೆಯನ್ನು ಜಾರಿಗೆ ತಂದಿದ್ದೀರಾ ಎಂದು ನೀವೆಲ್ಲರೂ ಬಿಜೆಪಿಯವರನ್ನು ಕೇಳಬೇಕು. ಕಷ್ಟದಲ್ಲಿದ್ದ ಜನರಿಗೆ ಸಹಾಯ ಮಾಡಿದ್ದಾರಾ? ಮಾಡಿಲ್ಲ.

### ಜೆಡಿಎಸ್ ನಾಯಕರು ಸುಮನೆ ಸಮಯ ವ್ಯರ್ಥ ಮಾಡಿಕೊಳ್ಳಬೇಡಿ

ಎಂಎಲ್ ಸಿಗಳಾದ ದಿನೇಶ್ ಗೂಳಿಗೌಡ, ಮಧುಮಾದೇಗೌಡ ಅವರು ಉತ್ತಮ ಕೆಲಸ ಮಾಡುತ್ತಿದ್ದಾರೆ. ಜಿಲ್ಲೆಯ ಜೆಡಿಎಸ್ ನಾಯಕರಿಗೆ ಒಂದು ಮಾತು ಹೇಳಲು ಬಯಸುತ್ತೇನೆ. ನೀವು ನಿಮ ಸಮಯ ವ್ಯರ್ಥ ಮಾಡಿಕೊಳ್ಳಬೇಡಿ. ಈಗೇನಿದ್ದರೂ ಕಾಂಗ್ರೆಸ್ ಕಾಲ. ಶಿವಪುರ ಸೌಧದಲ್ಲಿ ಹೇಗೆ ರಾಷ್ಟ್ರಧ್ವಜ ಹಾರುತ್ತಿದೆಯೋ ಅದೇ ರೀತಿ ರಾಜ್ಯದಲ್ಲಿ ಕಾಂಗ್ರೆಸ್ ಧ್ವಜ ನಿರಂತರವಾಗಿ ಹಾರಾಡಲಿದೆ. ನೀವು ನಿಮ ಬದುಕನ್ನು ಗಮನದಲ್ಲಿಟ್ಟುಕೊಂಡು ಆಲೋಚಿಸಿ ಎಂದರು.

### ಜನರ ಬದುಕಿಗಾಗಿ 1 ಲಕ್ಷ ಕೋಟಿ ಅನುದಾನ

ಮಹಿಳೆಯರು ರಾಜ್ಯದಲ್ಲಿ ಉಚಿತ ಬಸ್ ಪ್ರಯಾಣ ಮಾಡುತ್ತಿದ್ದಾರೆ, ಮನೆಗಳಿಗೆ 200 ಯೂನಿಟ್ ವರೆಗೂ ಉಚಿತ ವಿದ್ಯುತ್ ಬರುತ್ತಿದೆ. ಮಹಿಳೆಯರಿಗೆ ತಿಂಗಳಿಗೆ 2 ಸಾವಿರ ಹಣ, 10 ಕೆ.ಜಿ ಅಕ್ಕಿ, ನಿರುದ್ಯೋಗಿ ಯುವಕರಿಗೆ ನಿರುದ್ಯೋಗ ಭತ್ಯೆ ನೀಡಲಾಗುತ್ತಿದೆ. ಇಡೀ ದೇಶದಲ್ಲಿ ಯಾವುದೇ ಸರ್ಕಾರ ಈ ರೀತಿ ಯೋಜನೆ ನೀಡಿಲ್ಲ ಎಂದು ಸರ್ಕಾರದ ಕಾರ್ಯವನ್ನು ಬಣ್ಣಿಸಿದರು. ಸಿಎಂ ಸಿದ್ದರಾಮಯ್ಯ ಅವರು 4.08 ಲಕ್ಷ ಕೋಟಿ ಮೊತ್ತದ ಬಜೆಟ್ ಮಂಡಿಸಿದ್ದಾರೆ.

ಹೀಗಾಗಿ ಅವರು ನಮ ಬಗ್ಗೆ ಮಾತನಾಡಲು ನೈತಿಕತೆ ಕಳೆದುಕೊಂಡಿದ್ದಾರೆ. ಸಾಧನೆ ಎಂಬುದು ಸುಮನೆ ಬರುವುದಿಲ್ಲ. ಅದು ಕಾಲ ಬುಡದಲ್ಲಿ ಇರುವುದಿಲ್ಲ, ಶ್ರಮದ ಪರ್ವತದ ತುದಿಯಲ್ಲಿ ಸಾಧನೆ ಇರುತ್ತದೆ. ನಮ ಕಾಂಗ್ರೆಸ್ ಸರ್ಕಾರ ಅನೇಕ ಕಾರ್ಯಕ್ರಮದ ಮೂಲಕ ಜನರ ಬದುಕು ಬದಲಿಸುತ್ತಿದೆ ಎಂದು ಹೇಳಿದರು. ಪಕ್ಷದ ಕಚೇರಿಗಾಗಿ ಸ್ವಂತ ಆಸ್ತಿ ಬಿಟ್ಟುಕೊಟ್ಟ ಉದಯ್ ಅವರಿಗೆ ಅಭಿನಂದನೆ ನಾವು ಯೋಗಿ ಎಂದು ಕರೆಸಿಕೊಳ್ಳುವುದಕ್ಕಿಂತ ಉಪಯೋಗಿ ಎಂದು ಕರೆಸಿಕೊಳ್ಳುವುದು ಬಹಳ ಮುಖ್ಯ ಎಂದರು.

**ಮದ್ದೂರಿಗೆ ದೊಡ್ಡ ಇತಿಹಾಸವಿದೆ:** ಮದ್ದೂರಿಗೆ ದೊಡ್ಡ ಇತಿಹಾಸವಿದೆ. ಬ್ರಿಟೀಷರ ಆಳ್ವಿಕೆ ಸಮಯದಲ್ಲಿ ಎಸ್.ಎಂ ಕೃಷ್ಣ ಅವರ ತಂದೆ ಮಲ್ಲಯ್ಯ ಅವರು ಮೈಸೂರು ಆಳ್ವಿಕೆಯಲ್ಲಿ ಜನಪ್ರತಿನಿಧಿಯಾಗಿ ಆಳ್ವಿಕೆ ಮಾಡಿದ್ದರು. ಇದು ದೇಶದ ಸ್ವಾತಂತ್ರ್ಯ ಹೋರಾಟದ ನೆಲ. ಕೆಂಗಲ್ ಹನುಮತಯ್ಯ ಅವರ ಕಾಲದಲ್ಲಿ ಪ್ರಜಾಸೌಧವನ್ನು ಕಟ್ಟಿದ್ದರು. ಕಾಂಗ್ರೆಸ್ ಪಕ್ಷಕ್ಕೆ ಶಕ್ತಿ ತುಂಬಿದ ನೆಲ ಇದು. ಈ ಜಿಲ್ಲೆಯಿಂದ ಅನೇಕ ನಾಯಕರು ಬೆಳೆದು ಬಂದಿದ್ದಾರೆ. ಈ ಭೂಮಿಯಲ್ಲಿ ನಾನು ಎಸ್.ಎಂ ಕೃಷ್ಣ ಅವರನ್ನು ನೆನೆಯುತ್ತೇನೆ ಎಂದರು.

## ಕನಿಷ್ಠ ವೇತನ ಜಾರಿಗೆ ಆಗ್ರಹ: ಗ್ರಾ.ಪಂ. ನೌಕರರ ಪ್ರತಿಭಟನೆ

• ಉದಯವಾಹಿನಿ, ರಾಮನಗರ


ಉದಯವಾಹಿನಿ ಚಿತ್ರ

ಕನಿಷ್ಠ ವೇತನ ಸೇರಿದಂತೆ ತಮ್ಮ ವಿವಿಧ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಆಗ್ರಹಿಸಿ, ಕರ್ನಾಟಕ ರಾಜ್ಯ ಗ್ರಾಮ ಪಂಚಾಯಿತಿ ನೌಕರರ ಸಂಘದ ನೇತೃತ್ವದಲ್ಲಿ ವಿವಿಧ ನೌಕರರು ಜಿಲ್ಲಾಧಿಕಾರಿ ಕಚೇರಿ ಬಳಿ ಸೋಮವಾರ ಪ್ರತಿಭಟನೆ ನಡೆಸಿದರು. ನೌಕರರಿಗೆ ಅವೈಜ್ಞಾನಿಕವಾಗಿ ನೀಡುತ್ತಿದ್ದ ಕನಿಷ್ಠ ವೇತನದ ವಿರುದ್ಧ ಸಂಘವು ಹೈಕೋರ್ಟ್ ಮೆಟ್ಟಿಲೇರಿತ್ತು. ಸುಪ್ರೀಂ ಕೋರ್ಟ್ ಆದೇಶದಂತೆ ನೌಕರರಿಗೆ ಕನಿಷ್ಠ ವೇತನ ನೀಡಬೇಕು ಎಂದು ಹೈಕೋರ್ಟ್ ಕಳೆದ ವರ್ಷ ಇಲಾಖೆಗೆ ಹತ್ತು ದಿನಗಳ ಗಡುವು ನೀಡಿತ್ತು. ಕನಿಷ್ಠ ವೇತನದ ಅಧಿಸೂಚನೆ ರದ್ದು ಮಾಡಿದ್ದ ಸರ್ಕಾರ, 2025ರ ಏ. 11ರಂದು ಕನಿಷ್ಠ ವೇತನ ಅಧಿಸೂಚನೆ ಹೊರಡಿಸಿ ಆಕ್ಷೇಪಣೆ ಸಲ್ಲಿಸಲು ತಿಳಿಸಿದೆ ಎಂದು ಪ್ರತಿಭಟನಕಾರರು ತಿಳಿಸಿದರು.

ಕಸ ವಸೂಲಿಗಾರ, ಗುಮಾಸ್ತ, ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ಈ ಹುದ್ದೆಗಳನ್ನು ಅತಿ ಕುಶಲರಾಗಿ ಪರಿಗಣಿಸಿ ಮೂಲ ವೇತನ 38,021, ವಾಟರ್‌ಮ್ಯಾನ್, ಪಂಪ್ ಆಪರೇಟರ್ ಕಂ ಮೆಕ್ಯಾನಿಕ್ ಹುದ್ದೆಗಾಗಿ ಕುಶಲರಾಗಿ ಪರಿಗಣಿಸಿ ಮೂಲವೇತನ 33,062, ಅಟೆಂಡರ್ – ಜವಾನರನ್ನು ಅರೆ ಕುಶಲರಾಗಿ ಪರಿಗಣಿಸಿ ಮೂಲವೇತನ 28,750 ಹಾಗೂ ಕಸ ಗುಡಿಸುವವರು, ಸ್ವಚ್ಛತಾಗಾರರನ್ನು ಅಕುಶಲರಾಗಿ ಪರಿಗಣಿಸಿ ಮೂಲ ವೇತನ 25 ಸಾವಿರ ನಿಗದಿಪಡಿಸಬೇಕು ಎಂದು ಆಗ್ರಹಿಸಿದರು.

ಕನಿಷ್ಠ ವೇತನವನ್ನು ಸರ್ಕಾರ 2025ರ ಏಪ್ರಿಲ್ 1ರಿಂದ ಅನ್ವಯವಾಗುವಂತೆ ಜಾರಿಗೊಳಿಸಬೇಕು. ಪಂಚಾಯಿತಿಗಳಲ್ಲಿ ದುಡಿಯುವ ಸಿಬ್ಬಂದಿಗೆ ಸೇವಾ ಹಿರಿತನದ ಮಾನ್ಯತೆ ನೀಡಿ, ವೇತನದಲ್ಲಿ ಶೇ 2ರಷ್ಟು ಹೆಚ್ಚಳ ಮಾಡಬೇಕು. ಪ್ರತಿ ವರ್ಷ ಅದನ್ನು ಪರಿಗಣಿಸಿ ಹೆಚ್ಚುವರಿ ಭತ್ಯೆ ನೀಡಬೇಕು ಎಂದು ಒತ್ತಾಯಿಸಿದರು.


## ಕೆಐಎಡಿಬಿ ಅಧಿಕಾರಿಗಳನ್ನು ಊರೊಳಗೆ ಬಿಡದ ರೈತರು

• ಉದಯವಾಹಿನಿ, ಶಿಡ್ಲಘಟ್ಟ

ಕೈಗಾರಿಕೆ ವಲಯ ಸ್ಥಾಪನೆಗಾಗಿ ತಾಲ್ಲೂಕಿನ ಜಂಗಮ ಕೋಟೆ ಹೋಬಳಿಯ 13 ಹಳ್ಳಿಗಳ 2,823 ಎಕರೆ ಭೂಸ್ವಾಧೀನಕ್ಕೆ ಸರ್ಕಾರ ಅಧಿಸೂಚನೆ ಹೊರಡಿಸಿದ ನಂತರ ಜಮೀನು ಪರಿಶೀಲನೆಗೆ ತೆರಳಿದ್ದ ಅಧಿಕಾರಿಗಳ ತಂಡವನ್ನು ಅಡ್ಡಗಟ್ಟಿದ ರೈತರು ಗ್ರಾಮದೊಳಗೆ ಪ್ರವೇಶಿಸಲು ಬಿಡದೆ ಘೇರಾವ್ ಹಾಕಿದ್ದಾರೆ.

ಪೊಲೀಸ್ ಭದ್ರತೆಯಲ್ಲಿ ಜಂಗಮಕೋಟೆ ಹೋಬಳಿಗೆ ಜಮೀನು ಪರಿಶೀಲನೆಗೆ ತೆರಳಿದ್ದ ಕೆಐಎಡಿಬಿ ವಿಶೇಷ ಭೂಸ್ವಾಧೀನ ಅಧಿಕಾರಿ ಹರಿಶಿಲ್ಪಾ ನೇತೃತ್ವದ ಅಧಿಕಾರಿಗಳ ತಂಡ ಕೆಲವು ಕಡೆಗಳಲ್ಲಿ ಗ್ರಾಮಸ್ಥರು, ರೈತರ ಆಕ್ರೋಶದ ಬಿಸಿ ಎದುರಿಸಬೇಕಾಯಿತು. ಯಣ್ಣಂಗೂರು ಗ್ರಾಮಕ್ಕೆ ಹೋದ ಅಧಿಕಾರಿಗಳ ತಂಡವನ್ನು ಊರ ಪ್ರವೇಶ ದ್ವಾರದಲ್ಲಿಯೇ ತಡೆದ ರೈತರು ರಸ್ತೆಗೆ ಅಡ್ಡಲಾಗಿ ಕುಳಿತರು.

ಗ್ರಾಮದೊಳಗೆ ಬಿಡುವುದಿಲ್ಲ. ಮರಳಿ ಹೋಗಿ ಎಂದು ಅಧಿಕಾರಿಗಳು, ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ಪೊಲೀಸರ ಮನವೊಲಿಕೆಗೂ ರೈತರು ಪಟ್ಟು ಸಡಿಲಿಸಲಿಲ್ಲ. ಇದಕ್ಕೆ ಪ್ರತಿಯಾಗಿ ಮತ್ತೊಂದು ರೈತರ ತಂಡ ಭೂಮಿ ಕೊಡಲು ನಾವು ಸಿದ್ಧ. ಅಧಿಕಾರಿಗಳು ಬಂದು ಸ್ಥಳ ಪರಿಶೀಲಿಸಲಿ. ನಮ್ಮದೇನೂ ಅಭ್ಯಂತರ ಇಲ್ಲ ಎಂದು ರಸ್ತೆಗಿಳಿದರು. ಪರಿಸ್ಥಿತಿಯ ಗಂಭೀರತೆ ಅರಿತ ಪೊಲೀಸರು,


ಉದಯವಾಹಿನಿ ಚಿತ್ರ

> ರೈತರ ಜಮೀನುಗಳಲ್ಲಿ ಏನೆಲ್ಲಾ ಬೆಳೆದಿದ್ದಾರೆ. ಭೂಮಿ ಫಲವತ್ತಾದ ಹಾಗೂ ನೀರಾವರಿ ಭೂಮಿ ಹೌದೋ ಅಲ್ಲವೋ ಎನ್ನುವ ಮಾಹಿತಿಗಾಗಿ ಮಾತ್ರ ಬಂದಿದ್ದೇವೆ. ಬಲವಂತವಾಗಿ ಜಮೀನು ಸ್ವಾಧೀನಪಡಿಸಿಕೊಳ್ಳುವುದಿಲ್ಲ. ರೈತರು ಆತಂಕಕ್ಕೆ ಒಳಗಾಗಬಾರದು.
> –ಹರಿಶಿಲ್ಪಾ, ವಿಶೇಷ ಭೂಸ್ವಾಧೀನಾಧಿಕಾರಿ ಕೆಐಎಡಿಬಿ

ಅಧಿಕಾರಿಗಳನ್ನು ಜಮೀನುಗಳಿಗೆ ಕರೆದೊಯ್ದರು.

ಈ ವಿಷಯ ತಿಳಿದು ಜಮೀನುಗಳತ್ತ ಓಡಿದ ಗ್ರಾಮದ ರೈತ ಮಹಿಳೆಯರು ನಮ್ಮೂರ ಒಳಗೆ ನೀವು ಬರಬೇಡಿ. ಜಮೀನಿನ ಒಳಗೆ ಕಾಲಿಡಬೇಡಿ ಎಂದು ಅಡ್ಡಿಪಡಿಸಿದರು. ಮಹಿಳಾ ಪೊಲೀಸರು ಅವರನ್ನು ಚದುರಿಸಿದರು.

## ಅಕ್ರಮ ಆರೋಪ: ನ್ಯಾಯಬೆಲೆ ಅಂಗಡಿಗಳಿಗೆ ಬೀಗ

• ಉದಯವಾಹಿನಿ, ತುಮಕೂರು

ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ವಿತರಣೆ ಸಮರ್ಪಕವಾಗಿ ಆಗುತ್ತಿಲ್ಲ. ತೂಕದಲ್ಲಿ ಮೋಸ, ಪಡಿತರ ನೀಡಲು ಹಣ ಪಡೆಯಲಾಗುತ್ತಿದೆ ಎಂಬ ಆರೋಪಗಳು ವ್ಯಾಪಕವಾಗಿವೆ. ಇದರ ಮಧ್ಯೆ ಲೋಪ ಕಂಡು ಬಂದ, ನಿಯಮ ಮೀರಿದ 36 ಅಂಗಡಿಗಳ ಪರವಾನಗಿ ಅಮಾನತಿನಲ್ಲಿಟ್ಟಿದ್ದು, 6 ಅಂಗಡಿಗಳ ಪರವಾನಗಿ ರದ್ದು ಮಾಡಲಾಗಿದೆ. ಜಿಲ್ಲೆಯಾದ್ಯಂತ ಒಟ್ಟು 1,124 ನ್ಯಾಯಬೆಲೆ ಅಂಗಡಿಗಳಿವೆ. 2021ರಿಂದ 2025ರ ಜುಲೈ 15ರ ವರೆಗೆ 6 ಅಂಗಡಿಗಳ ಪರವಾನಗಿ ರದ್ದು ಮಾಡಲಾಗಿದೆ.

ಇದೇ ಅವಧಿಯಲ್ಲಿ 36 ಅಂಗಡಿಗಳ ಪರವಾನಗಿ ಅಮಾನತು ಮಾಡಲಾಗಿದೆ. ದೂರು ಬಂದ ನಂತರವಷ್ಟೇ ಅಧಿಕಾರಿಗಳು ಕಾರ್ಯ ಪ್ರವೃತ್ತರಾಗುತ್ತಿದ್ದಾರೆ. ಅವರೇ ಸ್ವತಃ ಭೇಟಿ ನೀಡಿ ಪರಿಶೀಲನೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕ್ರಮಕೈಗೊಳ್ಳುತ್ತಿಲ್ಲ ಎಂಬುವುದು ಸಾರ್ವಜನಿಕರ ಆರೋಪ. ಪಡಿತರ ವಿತರಣೆ ಸಮಯದಲ್ಲಿ ಸಾರ್ವಜನಿಕರಿಂದ 1 ಸಹ ತೆಗೆದುಕೊಳ್ಳುವಂತಿಲ್ಲ.


ಉದಯವಾಹಿನಿ ಚಿತ್ರ

ಆದರೆ, ವಿವಿಧ ಕಡೆಗಳಲ್ಲಿ 10, 20 ವಸೂಲಿ ಮಾಡುತ್ತಿರುವುದು ಸಾಮಾನ್ಯ ಎಂಬಂತಾಗಿದೆ. ತಿಂಗಳು ಪೂರ್ತಿ ಅಂಗಡಿ ತೆರೆದಿರಬೇಕು. ಬಹುತೇಕ ಅಂಗಡಿಗಳು ತಿಂಗಳಿಗೆ 2ರಿಂದ 3 ದಿನ ಮಾತ್ರ ಬಾಗಿಲು ತೆರೆಯಲಾಗುತ್ತದೆ. ನಿಗದಿತ ದಿನದಂದು ಪಡಿತರ ಪಡೆಯದಿದ್ದರೆ ಮುಂದಿನ ತಿಂಗಳು ತನಕ ಕಾಯಬೇಕಾದ ಪರಿಸ್ಥಿತಿ ಇದೆ. ಗ್ರಾಮೀಣ ಭಾಗದಲ್ಲಿ ಇದರ ಬಗ್ಗೆ ಯಾರೂ ಪ್ರಶ್ನಿಸಿದ ಕಾರಣಕ್ಕೆ ಅನಾದಿ ಕಾಲದಿಂದಲೂ ಹೀಗೆ ನಡೆದುಕೊಂಡು ಬಂದಿದೆ.

ಆಹಾರ ಧಾನ್ಯ ದಾಸ್ತಾನಿನಲ್ಲಿ ವ್ಯತ್ಯಾಸ ಕಂಡು ಬಂದ, ಸರ್ಕಾರ ನಿಗದಿ ಪಡಿಸಿದ ಪ್ರಮಾಣದಷ್ಟು ಪಡಿತರ ನೀಡದೆ ಪಡಿತರ ಚೀಟಿದಾರರಿಗೆ ವಂಚಿಸಿದವರ ವಿರುದ್ಧವೂ ಕ್ರಮಕೈಗೊಳ್ಳಲಾಗಿದೆ. ನಿಗದಿತ ವೇಳೆಯಲ್ಲಿ ಬಾಗಿಲು ತೆಗೆದು ವಹಿವಾಟು ನಡೆಸದೆ ಇರುವುದು, ಪಡಿತರ ಚೀಟಿದಾರರೊಂದಿಗೆ ಸೌಜನ್ಯಯುತವಾಗಿ ನಡೆದುಕೊಳ್ಳದ, ಸರಿಯಾದ ಸಮಯಕ್ಕೆ ಪಡಿತರ ನೀಡದೆ ವಿಳಂಬ ತೋರಿದ ಅಂಗಡಿಗಳ ಪರವಾನಗಿ ರದ್ದು ಮಾಡಲಾಗಿದೆ. 2024ರಲ್ಲಿ 16 ಅಂಗಡಿಗಳ ಪರವಾನಗಿ ಅಮಾನತಿನಲ್ಲಿ ಇಡಲಾಗಿದೆ. ಕಳೆದ ಕೆಲ ವರ್ಷಗಳಲ್ಲಿ ಇದೇ ಮೊದಲ ಬಾರಿಗೆ ಕ್ರಮ ಎದುರಿಸಿದ ಅಂಗಡಿಗಳ ಸಂಖ್ಯೆ ಎರಡಂಕಿ ದಾಟಿದೆ. ಇದರ ಜತೆಗೆ 2 ಅಂಗಡಿಗಳ ಪರವಾನಗಿ ಶಾಶ್ವತವಾಗಿ ರದ್ದುಗೊಳಿಸಲಾಗಿದೆ.

ತಿಂಗಳು ಪ್ರಾರಂಭದ ಮೂರು ದಿನದಲ್ಲಿ ಪಡಿತರ ತೆಗೆದುಕೊಳ್ಳಬೇಕು. ಇಲ್ಲದಿದ್ದರೆ ಆ ತಿಂಗಳ ಆಹಾರ ಧಾನ್ಯ ಸಿಗುವುದಿಲ್ಲ, ಮತ್ತೆ ಮುಂದಿನ ಸರದಿ ಬರುವ ತನಕ ಕಾಯಬೇಕು. ಅಧಿಕಾರಿಗಳು ಕೇವಲ ನಗರಕ್ಕೆ ಸೀಮಿತವಾಗಿದ್ದಾರೆ. ಗ್ರಾಮೀಣ ಭಾಗದ ಜನರ ಕಷ್ಟ ಕೇಳಲು ಅವರು ಸಿದ್ದರಿಲ್ಲ ಎಂದು ಅಂಚಿಹಳ್ಳಿಯ ನವೀನ್‌ಕುಮಾರ್ ಪ್ರತಿಕ್ರಿಯಿಸಿದರು.

## ಮೊಗರಹಳ್ಳಿಯ 300 ಮನೆಗಳಿಗೆ ತಿಂಗಳಲ್ಲಿ ಖಾತೆ

• ಉದಯವಾಹಿನಿ, ಶ್ರೀರಂಗಪಟ್ಟಣ

ತಾಲ್ಲೂಕಿನ ಬೆಳಗೊಳ ಹೋಬಳಿಯ ಮೊಗರಹಳ್ಳಿಯಲ್ಲಿ, ಸರ್ಕಾರಿ ಬೀಳು ಜಾಗದಲ್ಲಿ ಕಟ್ಟಿಕೊಂಡಿರುವ 300 ಮನೆಗಳಿಗೆ ಒಂದು ತಿಂಗಳ ಒಳಗಾಗಿ ಇ– ಖಾತೆ ಮಾಡಿಕೊಡುವಂತೆ ಶಾಸಕ ರಮೇಶ ಬಂಡಿಸಿದ್ದೇಗೌಡ ಅಧಿಕಾರಿಗಳಿಗೆ ಸೂಚಿಸಿದರು. ಹೊಸಹಳ್ಳಿ ಗ್ರಾ.ಪಂ ಕಚೇರಿಯಲ್ಲಿ ಅಧ್ಯಕ್ಷರು, ಸದಸ್ಯರು ಹಾಗೂ ಅಭಿವೃದ್ಧಿ ಅಧಿಕಾರಿಗಳ ಜೊತೆಗೆ ಚರ್ಚಿಸಿದ ಅವರು, ವಿಳಂಬ ಮಾಡಿದೆ ಮೊಗರಹಳ್ಳಿಯಲ್ಲಿರುವ ಮನೆಗಳಿಗೆ ಇ– ಖಾತೆ ಮಾಡಿಕೊಡಬೇಕು. ಖಾತೆ ಮಾಡಿಕೊಟ್ಟ ಬಗ್ಗೆ ಅನುಪಾಲನಾ ವರದಿ ಸಲ್ಲಿಸಬೇಕು ಎಂದರು.

ಕೃಷಿ, ಕಟ್ಟಡ ಮತ್ತು ವಿವಿಧ ಕೂಲಿ ಕೆಲಸ ಮಾಡುವ 300 ಕುಟುಂಬಗಳು ಕಳೆದ 40 ವರ್ಷಗಳಿಂದ ಮೊಗರಹಳ್ಳಿಯಲ್ಲಿ ಬೀಳು ಬಿದ್ದಿದ್ದ ಜಾಗದಲ್ಲಿ ಮನೆ ಕಟ್ಟಿಕೊಂಡು ವಾಸ ಮಾಡುತ್ತಿದ್ದಾರೆ. ಆದರೆ ಈ ಮನೆಗಳಿಗೆ ಅಧಿಕೃತ ಖಾತೆ ಇಲ್ಲದೆ ತೊಂದರೆ ಅನುಭವಿಸುತ್ತಿದ್ದರು. ಮೂರೂವರೆ ಎಕರೆ ಸರ್ಕಾರಿ ಬೀಳು ಜಾಗದಲ್ಲಿ ಮನೆ ಕಟ್ಟಿಕೊಂಡಿದ್ದು, ಅಧಿಕೃತ ದಾಖಲೆ ಇಲ್ಲದೆ ಬವಣೆ ಪಡುತ್ತಿದ್ದಾರೆ.



ಉದಯವಾಹಿನಿ ಚಿತ್ರ

ಮನೆಗಳನ್ನು ನಿರ್ಮಿಸಿಕೊಂಡು ಕಾಯಂ ಆಗಿ ವಾಸಿಸುತ್ತಿರುವವರನ್ನು ಆಯಾ ಮನೆಗಳಿಗೆ ಶಾಶ್ವತ ಹಕ್ಕುದಾರರನ್ನಾಗಿ ಮಾಡಬೇಕು ಎಂದು ತಿಳಿಸಿದರು. ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಶಶಿಕಲಾ ಮಾತನಾಡಿ, ಬೆಳಗೊಳ ಹೋಬಳಿ ಮೊಗರಹಳ್ಳಿಯ ಸ.ನಂ 27 ಪೈಕಿ 1ರಲ್ಲಿ 1.23 ಎಕರೆ, ಸ.ನಂ 27 ಪೈಕಿ 2ರಲ್ಲಿ 1.23 ಎಕರೆ, ಸ.ನಂ 92ರಲ್ಲಿ 27 ಗುಂಟೆ ಸರ್ಕಾರಿ ಬೀಳು ಜಮೀನು ಇದ್ದು, ಸದರಿ ಜಾಗದಲ್ಲಿ 300 ಮಂದಿ ಮನೆ ಕಟ್ಟಿಕೊಂಡಿದ್ದಾರೆ. ಕಳೆದ 30 ವರ್ಷಗಳಿಂದ ಮನೆ ಕಟ್ಟಿಕೊಂಡಿದ್ದರೂ ಯಾವ ಮನೆಗೂ ಹಕ್ಕುಪತ್ರ ಇರಲಿಲ್ಲ. ಅಷ್ಟೂ ಮನೆಗಳಿಗೆ ಅನುಭವ ಮತ್ತು ಚಕ್ಕುಬಂಧಿ ಪ್ರಕಾರ ಇ–ಸ್ವತ್ತು ಮಾಡಿ ಕೊಡಲಾಗುವುದು. ಇನ್ನು ಒಂದು ತಿಂಗಳಲ್ಲಿ ಈ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು ಎಂದು ಹೇಳಿದರು.

## ನಾಲ್ವಡಿ ಕೃಷ್ಣರಾಜ ಒಡೆಯರ್ ಕುರಿತ ಹೇಳಿಕೆ ಯತೀಂದ ಕ್ಷಮೆಯಾಚಿಸಲಿ: ವಿವೇಕಾನಂದ

• ಉದಯವಾಹಿನಿ, ಮೈಸೂರು

ನಾಲ್ವಡಿ ಅವರ ಕುರಿತು ಡಾ.ಯತೀಂದ್ರ ಸಿದ್ದರಾಮಯ್ಯ ನೀಡಿದ ಹೇಳಿಕೆ ಖಂಡಿಸಿ ಜೆಡಿಎಸ್ ನಗರ ಸಮಿತಿ ಸದಸ್ಯರು ಗಾಂಧಿ ವೃತ್ತದಲ್ಲಿ ಪ್ರತಿಭಟಿಸಿದರು. ವಿಧಾನಪರಿಷತ್ ಸದಸ್ಯ ವಿವೇಕಾನಂದ ಮಾತನಾಡಿ, ಮಹಾರಾಜ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ರೀತಿ ಯಾರೂ ಕೆಲಸ ಮಾಡಲು ಸಾಧ್ಯವಿಲ್ಲ. ಅವರು ಧಾರ್ಮಿಕ, ರಾಜಕೀಯ, ನೀರಾವರಿ, ಶಿಕ್ಷಣ ವ್ಯವಸ್ಥೆಯಲ್ಲಿ ಆಮೂಲಾಗ್ರ ಬದಲಾವಣೆ ತಂದಿದ್ದಾರೆ. ಕನ್ನಂಬಾಡಿ ಕಟ್ಟೆ ನಿರ್ಮಿಸಿ ಕೋಟ್ಯಂತರ ಜನರಿಗೆ ನೀರು ಒದಗಿಸಿದ್ದಾರೆ. ಸಿದ್ದರಾಮಯ್ಯ ಅವರು ಈ ರೀತಿಯ ಕೆಲಸ ಮಾಡಿದ್ದಾರೆಯೇ ಎಂದು ಪ್ರಶ್ನಿಸಿದರು. ನಾಲ್ವಡಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಆರಾಧಿಸುವವರಿದ್ದಾರೆ. ಯತೀಂದ್ರ ಸಿದ್ದರಾಮಯ್ಯ ಹೇಳಿಕೆಯಿಂದ ಅವರ ಭಾವನೆಗೆ ಧಕ್ಕೆಯಾಗಿದೆ. ಸಿದ್ದರಾಮಯ್ಯ ಹಿಂಬಾಗಿಲಿನಿಂದ ರಾಜಕಾರಣ ಮಾಡಿ ಕಾಂಗ್ರೆಸ್ ಸೇರಿದವರು, ಅವರಿಗೆ ಸ್ವಂತ ಶಕ್ತಿಯಿದ್ದರೆ ಅಹಿಂದ ಕಟ್ಟಿ ಹತ್ತು ಸ್ಥಾನ ಗೆಲ್ಲಲಿ, ಅವರು ಗೆದ್ದರೆ ನಾನು ರಾಜೀನಾಮೆ ನೀಡುತ್ತೇನೆ. ಅವರು ಹೇಳಿಕೆಗಳನ್ನು ನೀಡುವ ಬದಲು ಬಡವರ ಪರವಾಗಿ ಕೆಲಸ ಮಾಡಲಿ. ಮಹಾರಾಜ, ಮಹಾರಾಣಿ ಕಾಲೇಜಿನಲ್ಲಿ ನೀರು ಸೋರುತ್ತಿದ್ದು


ಉದಯವಾಹಿನಿ ಚಿತ್ರ


ಅದನ್ನು ದುರಸ್ತಿಗೊಳಿಸಲಿ ಎಂದು ಹೇಳಿದರು. ಜೆಡಿಎಸ್ ನಗರಾಧ್ಯಕ್ಷ ಕೆ.ಟಿ.ಚಲುವೇಗೌಡ ಮಾತನಾಡಿ, ಯತೀಂದ್ರ ಅವರು ಮೈಸೂರಿನ ಇತಿಹಾಸ ಅರಿಯದೆ ಮಾತನಾಡಿದ್ದಾರೆ. ನಾಲ್ವಡಿ ಅವರು ಮಡದಿಯ ಚಿನ್ನಾಭರಣ ಅಡವಿಟ್ಟು ಅಭಿವೃದ್ಧಿ ಕೆಲಸ ಮಾಡಿದ್ದರು.

ಆದರೆ ಸಿದ್ದರಾಮಯ್ಯ ಮುಡಾದಲ್ಲಿ ಅಧಿಕಾರಿಗಳ ಪ್ರಭಾವ ಬಳಸಿ ಪತ್ನಿಯ ಹೆಸರಿಗೆ ದುರ್ಮಾರ್ಗದಲ್ಲಿ ಸೈಟ್ ಪಡೆದು ತಲೆತಗ್ಗಿಸುವ ಕೆಲಸ ಮಾಡಿದ್ದಾರೆ. ಅವರನ್ನು ನಾಲ್ವಡಿ ವ್ಯಕ್ತಿತ್ವದೊಂದಿಗೆ ಹೋಲಿಸಿರುವುದರಿಂದ ಅನೇಕರ ಮನಸ್ಸಿಗೆ ನೋವಾಗಿದೆ. ಸಿದ್ದರಾಮಯ್ಯ, ಯತೀಂದ್ರ ಸಿದ್ದರಾಮಯ್ಯ ಕ್ಷಮೆಯಾಚಿಸಬೇಕು. ಇಲ್ಲದಿದ್ದರೆ ವಿಧಾನ ಪರಿಷತ್ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

## 18 ಕೋಟಿ ವೆಚ್ಚದ ಕಾಮಗಾರಿಗೆ ಶಾಸಕ ಕೊತ್ತೂರು ಚಾಲನೆ

• ಉದಯವಾಹಿನಿ, ಕೋಲಾರ

ತಾಲ್ಲೂಕಿನ ವೇಮಗಲ್ ಹೋಬಳಿಯ ವ್ಯಾಪ್ತಿಯಲ್ಲಿ ಸುಮಾರು 18 ಕೋಟಿ ವೆಚ್ಚದಲ್ಲಿ ಕಾಮಗಾರಿಗಳಿಗೆ ಶಾಸಕ ಕೊತ್ತೂರು ಜಿ.ಮಂಜುನಾಥ್ ಭೂಮಿಪೂಜೆ ನೆರವೇರಿಸಿದರು. ಪಟ್ಟಣದ ಮಡಿವಾಳ ಗೇಟ್‌ನಿಂದ ಸುಳದೇನಹಳ್ಳಿ ಮೂಲಕ ಹಾದುಹೋಗುವ ಕೊರಟಿ ಮಲ್ಲಂಡಹಳ್ಳಿ ಹೊಸಕೋಟೆ ಗಡಿವರೆಗೆ ಸುಮಾರು 3 ಕೋಟಿ ವೆಚ್ಚದಲ್ಲಿ ಡಾಂಬರ್ ರಸ್ತೆ, ಕ್ಯಾಲನೂರು ಕ್ರಾಸ್ ಜಂಕ್ಷನ್ ಅಭಿವೃದ್ಧಿ ಕಾಮಗಾರಿಗೆ 1.4 ಕೋಟಿ, ಕುರುಗಲ್ ಗ್ರಾಮದ ಮುಖ್ಯ ರಸ್ತೆಗೆ 10 ಲಕ್ಷ ವೆಚ್ಚದಲ್ಲಿ ಸಿಸಿ ರಸ್ತೆ ನಿರ್ಮಾಣ, ಕುರುಗಲ್ ಗ್ರಾಮದ ಕಾನೆ ಕಡೆಗೆ ಹೋಗುವ ರಸ್ತೆಗೆ 5 ಲಕ್ಷ ವೆಚ್ಚದಲ್ಲಿ ಸಿಸಿ ರಸ್ತೆ ನಿರ್ಮಾಣ, ಹೊಲೆರಹಳ್ಳಿ ದಿನ್ನೂರು–ಪೇರ್ಜೆನಹಳ್ಳಿ ಕ್ರಾಸ್ ವರೆಗೆ ಸುಮಾರು 1.5 ಕೋಟಿ ವೆಚ್ಚದಲ್ಲಿ ಡಾಂಬರ್ ರಸ್ತೆ ನಿರ್ಮಾಣ ಇದರಲ್ಲಿ ಸೇರಿದೆ. ಅಲ್ಲದೇ, ಪುರಹಳ್ಳಿಯಿಂದದ ತೋಕಲಘಟ್ಟ ಗ್ರಾಮದ ವರೆಗೆ 75 ಲಕ್ಷ ವೆಚ್ಚದಲ್ಲಿ ಡಾಂಬರ್ ರಸ್ತೆ ನಿರ್ಮಾಣ, ವೇಮಗಲ್‌ನಿಂದ ಸೀತಿವರೆಗೆ ಸುಮಾರು 8 ಕೋಟಿ ರೂ ವೆಚ್ಚದಲ್ಲಿ ಡಬಲ್ ರಸ್ತೆ ನಿರ್ಮಾಣ, ಚೌಡದೇನಹಳ್ಳಿ ಕಲ್ವಮಂಜಲಿ ವೇಮಗಲ್ ವರೆಗೆ 2.5 ಕೋಟಿ ವೆಚ್ಚದಲ್ಲಿ ಡಾಂಬರ್


ಉದಯವಾಹಿನಿ ಚಿತ್ರ

ರಸ್ತೆ ನಿರ್ಮಾಣ ಕಾಮಗಾರಿ ಇದರಲ್ಲಿವೆ. ವೇಮಗಲ್ –ಕುರುಗಲ್ ಪಟ್ಟಣ ಪಂಚಾಯಿತಿ ನಿಧಿಯಿಂದ ಎರಡು ಆಟೋ ಮತ್ತು ಪಿಟ್ ತೆಗೆಯುವ ಮೆಷಿನ್ ಗೆ ಪೌರಕಾರ್ಮಿಕರ ಕೈಯಲ್ಲಿ ಪೂಜೆ ಮಾಡಿಸಿ ಗೌರವಿಸಿದರು.

ಬಳಿಕ ಮಾತನಾಡಿದ ಶಾಸಕರು, ಕಾಂಗ್ರೆಸ್ ಸರ್ಕಾರ ಸದಾ ಅಭಿವೃದ್ಧಿ ಪರವಾಗಿದೆ. ದೇಶಕ್ಕೆ ಸ್ವಾತಂತ್ರ್ಯ ಬಂದಾಗಿನಿಂದಲೂ ಹಳ್ಳಿಯಿಂದ ರಾಷ್ಟ್ರದ ಅಭಿವೃದ್ಧಿಗೆ ಬದ್ಧವಾಗಿರುವ ಏಕೈಕ ಪಕ್ಷ ನಮ್ಮದು. ಸುಸಜ್ಜಿತ ಭಾರತಕ್ಕೆ ಅಡಿಪಾಯ ಹಾಕಿದ್ದ ಕಾಂಗ್ರೆಸ್ ಸರ್ಕಾರ, ಗ್ರಾಮೀಣ ಭಾಗದ ಜನತೆ ಸುಗಮವಾಗಿ ಸಂಚರಿಸಲು ಅನುಕೂಲವಾಗಲು ರಸ್ತೆಗಳ ಅಭಿವೃದ್ಧಿ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡಲಾಗಿದೆ ಎಂದರು.

ಪಟ್ಟಣ ಪಂಚಾಯತಿ ವ್ಯಾಪ್ತಿಗೆ 60 ಕೋಟಿ

> ನಾನು ಕೊಟ್ಟ ಮಾತಿನಂತೆ ಕೆಲಸ ಮಾಡಿ ತೋರಿಸುವ ವ್ಯಕ್ತಿ. ಎಲ್ಲಾ ಕಾಮಗಾರಿಗಳನ್ನು ನನ್ನ ಅವಧಿಯಲ್ಲಿ ಪರಿಶೀಲಿಸಿ ಪಟ್ಟಿಯಲ್ಲಿ ಸೇರಿಸಿ ಟೆಂಡರ್ ಮುಖಾಂತರ ಕಾರ್ಯರೂಪಕ್ಕೆ ತಂದಿದ್ದೇನೆ
> –ಕೊತ್ತೂರು ಮಂಜುನಾಥ್, ಶಾಸಕ

ಕೆಲಸಗಳು ಬಾಕಿ ಇವೆ. ಅವೆಲ್ಲವೂ ಟೆಂಡರ್ ಪ್ರಕ್ರಿಯೆಯಲ್ಲಿವೆ. ಚುನಾವಣೆ ಮುಗಿದ ನಂತರ ಹಂತ ಹಂತವಾಗಿ ಕಾರ್ಯರೂಪಕ್ಕೆ ತರುತ್ತೇವೆ ಎಂದು ಹೇಳಿದರು. ವೇಮಗಲ್ –ಕುರುಗಲ್ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ 10 ಎಕರೆ ಜಾಗದಲ್ಲಿ ಕಸ ವಿಲೇವಾರಿ ಘಟಕ ಹಾಗೂ ಎಸ್‌ಟಿಪಿ ಪ್ಲಾಂಟ್ ಅಭಿವೃದ್ಧಿ ಪಡಿಸಲಾಗುವುದು. ಪಟ್ಟಣ ಪಂಚಾಯಿತಿ ಅಭಿವೃದ್ಧಿಗೆ ಒತ್ತು ನೀಡಿದ್ದು, ಪಟ್ಟಣ ಪಂಚಾಯಿತಿ ಯೋಜನಾ ಪ್ರಾಧಿಕಾರಕ್ಕೆ ಉತ್ತಮ ಕಟ್ಟಡ ನಿರ್ಮಿಸಲು ಯೋಜನೆ ರೂಪಿಸಿ, ಸರ್ಕಾರಕ್ಕೆ ಕಳುಹಿಸಲಾಗಿದೆ ಎಂದರು.

ವಿಧಾನ ಪರಿಷತ್ ಸದಸ್ಯ ಎಂ.ಎಲ್.ಅನಿಲ್ ಕುಮಾರ್, ಮಾಜಿ ಸಭಾಪತಿ ವಿ.ಆರ್.ಸುದರ್ಶನ್ ಮಾತನಾಡಿದರು.

## ಅರ್ಧಂಬರ್ಧ ಒಳಚರಂಡಿ ವ್ಯವಸ್ಥೆಯಿಂದ ನರಕಯಾತನೆ

### ಎಸ್‌ಟಿಪಿ ಘಟಕದ ಜತೆಗೆ ಒಳಚರಂಡಿ ಸಮಸ್ಯೆ ನಿವಾರಣೆಗೆ ಸಾಕಷ್ಟು ಹಣದ ಅಗತ್ಯ

• ಉದಯವಾಹಿನಿ, ಚಿಕ್ಕಬಳ್ಳಾಪುರ:

ಜಿಲ್ಲಾ ಕೇಂದ್ರದಲ್ಲೇ ಇನ್ನೂ ಪೂರ್ಣ ಪ್ರಮಾಣದಲ್ಲಿ ಒಳಚರಂಡಿ ವ್ಯವಸ್ಥೆಯಾಗಿಲ್ಲ, ಇನ್ನೂ ಸಾಕಷ್ಟು ಕಡೆ ಒಳಚರಂಡಿ ಸಂಪರ್ಕ ಕೊಡಬೇಕಿದೆ, ಕೆಲವೆಡೆ ಒಳಚರಂಡಿ ಸಂಪರ್ಕ ನೀಡಿಲ್ಲ. ಹೊಸ ಪ್ರದೇಶಗಳಲ್ಲೂ ಸಂಪರ್ಕ ಕೊಟ್ಟಿಲ್ಲ. ಹೀಗಾಗಿ ಒಳಚರಂಡಿ ಅವ್ಯವಸ್ಥೆಯ ಆಗರವಾಗಿ ಕೂತಿದೆ. ಸದ್ಯ ಈಗ ಒಳಚರಂಡಿ ಕಾಮಗಾರಿಗೆ ಎಂದು 30 ಕೋಟಿ ರೂ. ಬಿಡುಗಡೆಯಾಗಿದ್ದರೂ ಪೂರ್ಣ ಪ್ರಮಾಣದಲ್ಲಿ ಒಳಚರಂಡಿ ಮಾಡಲು ಸಾಧ್ಯವಿಲ್ಲ. 30 ಕೋಟಿ ರೂ.ನಲ್ಲಿ ಎಸ್‌ಟಿಪಿ ಘಟಕದ ಜತೆಜ್ಞಿ ಒಳಚರಂಡಿ ವ್ಯವಸ್ಥೆಯ ದುರಸ್ತಿ ಹಾಗೂ ಮಿಸ್ಸಿಂಗ್ ಲೈನ್ ಕೊಡಲು ಸಾಕಾಗಲ್ಲ. ಹೀಗಾಗಿ ಪೂರ್ಣ ಪ್ರಮಾಣದಲ್ಲಿಒಳಚರಂಡಿ ಸಂಪರ್ಕ ಕೊಡಬೇಕಾದರೆ ಸಾಕಷ್ಟು ಅನುದಾನದ ಅವಶ್ಯಕತೆ ಇದೆ.

**ಪ್ರತಿನಿತ್ಯ ಸಮಸ್ಯೆ:** ಪ್ರತಿನಿತ್ಯ ನಗರದ ಒಂದಿಲ್ಲೊಂದು ಕಡೆ ಒಳಚರಂಡಿ ಸಮಸ್ಯೆ ಕಾಡುತ್ತಲೇ ಇರುತ್ತದೆ. ಅದರಲ್ಲೂ ಬ್ಲಾಕ್ ಆಗಿ ಹೊರಗಡೆ ನೀರು ಬರುವುದು ನಡೆಯುತ್ತಲೇ ಇರುತ್ತದೆ. ನಗರ ಸಭೆಯಲ್ಲಿರುವ 3 ವಾಹನಗಳ ಮೂಲಕ ಸಕ್ಕಿಂಗ್, ಹೂಳು(ಸಿಲ್ಟ್) ತೆಗೆಯುವ ಕೆಲಸ ನಡೆಯುತ್ತಿದೆ. ಒಂದು ವೇಳೆ ತಕ್ಷಣಕ್ಕೆ ಸಮಸ್ಯೆ ಬಗೆಹರಿಸದಿದ್ದರೆ ಆ ಇಡೀ ಏರಿಯಾ ಒಳಚರಂಡಿ ಕಲ್ಮಶದಿಂದ ಗಬ್ಬೆದ್ದು ಹೋಗುತ್ತದೆ.


ಉದಯವಾಹಿನಿ ಚಿತ್ರ

ಸಮಸ್ಯೆ ಉಲ್ಬಣ ನಿಶ್ಚಿತ

**ನೇರ ಸಾಮಾನ್ಯ ಚರಂಡಿಗೆ:** ಇನ್ನು ಕೆಲವು ಕಡೆ ಒಳಚರಂಡಿ ಗುಂಡಿಗಳಲ್ಲಿ ಹರಿದು ಬರುವ ನೀರು ತಡೆಯಲು ಸಾಧ್ಯವಾಗದ ಕಾರಣ, ನೇರವಾಗಿ ಸಾಮಾನ್ಯ ಚರಂಡಿಗಳಿಗೆ ಸಂಪರ್ಕ ಕಲ್ಪಿಸುವ ಕೆಲಸಗಳು ನಡೆಯುತ್ತಿವೆ. ನೇರವಾಗಿ ಒಳಚರಂಡಿ ನೀರನ್ನು ಸಾಮಾನ್ಯ ಚರಂಡಿಗಳಲ್ಲಿ ಹರಿಸುವ ಕೆಲಸ ಮಾಡಲಾಗುತ್ತಿದೆ. ಇದರಿಂದ ಚರಂಡಿಗಳು ಗಬ್ಬೆದ್ದು ನಾರುತ್ತಿದ್ದು, ಮನೆಯಿಂದ ಹೊರಬಂದರೆ ಚರಂಡಿಗಳ ಸಮಸ್ಯೆ ಸಾಕ್ಷಾತ್ ದರ್ಶನವಾಗುತ್ತಿದೆ. ಇದಿಷ್ಟೇ ಅಲ್ಲ, ಹೊಸ ಪ್ರದೇಶಗಳಿಗೂ ಒಳಚರಂಡಿ ಸಂಪರ್ಕ ಕಲ್ಪಿಸಬೇಕಿದೆ. ಸದ್ಯಕ್ಕೆ ಒಳಚರಂಡಿ ನಿರ್ಮಾಣಕ್ಕೆಂದೇ 30 ಕೋಟಿ ರೂ. ಅನುದಾನ ಬಿಡುಗಡೆಯಾಗಿದೆ. ಎಸ್‌ಟಿಪಿ ಸಿದ್ಧಪಡಿಸುವ ಜತೆಗೆ ಒಳಚರಂಡಿ ಸಮಸ್ಯೆ ನಿವಾರಣೆಗೆ ಆದಷ್ಟು ಬೇಗ ಕ್ರಮ ಕೈಗೊಳ್ಳಬೇಕು, ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಸಮಸ್ಯೆ ಉಲ್ಬಣವಾಗುವುದು ನಿಶ್ಚಿತ.

### ಕೇವಲ ಸಕ್ಕಿಂಗ್‌ಗೆ ಆಕ್ಷೇಪ

ಒಳಚರಂಡಿ ಗುಂಡಿಗಳಲ್ಲಿ ಸಮಸ್ಯೆಯಾದಾಗ ಅದರಲ್ಲಿ ಸಂಗ್ರಹಣೆಯಾಗಿರುವ ಅಷ್ಟು ಹೂಳು ತೆಗೆದರೆ ಕೆಲವು ತಿಂಗಳ ಕಾಲ ಸಮಸ್ಯೆ ಇರಲ್ಲ. ಆದರೆ ಗುಂಡಿಗಳು ಬ್ಲಾಕ್ ಆದ ತಕ್ಷಣ ಕೇವಲ ಸಕ್ಕಿಂಗ್ ಮಾಡಿ ಹೋಗುವುದರಿಂದ ಸದ್ಯಕ್ಕೆ ಸಮಸ್ಯೆ ಪರಿಹಾರವಾಗುತ್ತಿದ್ದು, ಕೆಲವೇ ದಿನಗಳಲ್ಲಿ ಮತ್ತದೇ ಸಮಸ್ಯೆ ಎದುರಾಗುತ್ತಿದೆ. ಈ ಬಗ್ಗೆ ಹಲವು ಬಾರಿ ದೂರು ನೀಡಿದರೂ ಕ್ರಮ ಕೈಗೊಳ್ಳುತ್ತಿಲ್ಲ ಎಂಬುದು ನಗರಸಭೆ ಸದಸ್ಯರ ದೂರು. ನಗರದ ಪ್ರಮುಖ ಪ್ರದೇಶಗಳಲ್ಲೇ ಒಳಚರಂಡಿ ಮಿಸ್ಸಿಂಗ್ ಲೈನ್ಸ್ ಇವೆ. ಇವೇ ಈಗ ಸಮಸ್ಯೆಗೆ ಮೂಲ ಕಾರಣವಾಗಿದೆ.

### ರಸ್ತೆಗಳ ಮೇಲೆ ಚರಂಡಿ ನೀರು

ನಗರದ ಪ್ರಮುಖ ಪ್ರದೇಶಗಳಲ್ಲೂ ಕೆಲವು ಕಡೆ ಒಳಚರಂಡಿ ಸಂಪರ್ಕವಿಲ್ಲ. ಹೀಗಾಗಿ ಅನಿವಾರ್ಯವಾಗಿ ನಿವಾಸಿಗಳು ಸಾಮಾನ್ಯ ಚರಂಡಿಯನ್ನೇ ಬಳಸುವ ಪರಿಸ್ಥಿತಿ ಇದೆ. ಇನ್ನು ಕೆಲವೆಡೆ ಸಂಪರ್ಕ ಬಿಟ್ಟು ಹೋಗಿರುವುದರಿಂದ ಸರಿಯಾಗಿ ಚರಂಡಿ ನೀರು ಹರಿಯಲ್ಲ. ಹೀಗಾಗಿ ಒಳಚರಂಡಿ ನೀರು ಹೊರ ಹರಿಯುವುದು ಸರ್ವೆ ಸಾಮಾನ್ಯ ಎಂಬಂತಾಗಿದೆ. ಇದು ನಗರ ನಿವಾಸಿಗಳಿಗೆ ನರಕಯಾತನೆಯಾಗಿ ಮಾರ್ಪಟ್ಟಿದೆ.

## ಮಿನಿ ನ್ಯೂಸ್

### ಮುತ್ತತ್ತಿ ಪ್ರವಾಸಿ ತಾಣ ಪ್ರವಾಸಿಗರಿಗೆ ಪ್ರವೇಶ ನಿಷೇಧ

• ಉದಯವಾಹಿನಿ, ಹಲಗೂರು

ಪ್ರಸಿದ್ಧ ಪ್ರವಾಸಿ ತಾಣ ಮುತ್ತತ್ತಿಗೆ ಬರುವ ಪ್ರವಾಸಿಗರಿಗೆ ಪ್ರವೇಶ ನಿಷೇಧಿಸಿ ಮಳವಳ್ಳಿ ತಹಶೀಲ್ದಾರ್ ಎಸ್.ವಿ. ಲೋಕೇಶ್ ಆದೇಶ ಹೊರಡಿಸಿದ್ದಾರೆ. ಸಮೀಪದ ಮುತ್ತತ್ತಿ ಗ್ರಾಮವು ಪುರಾಣ ಪ್ರಸಿದ್ಧ ಯಾತ್ರಾಸ್ಥಳ ಹಾಗೂ ಪ್ರೇಕ್ಷಣೀಯ ಸ್ಥಳವಾಗಿದೆ. ದೇವಾಲಯಕ್ಕೆ ಭೇಟಿ ನೀಡುವ ಭಕ್ತರು ಕಾವೇರಿ ನದಿಯಲ್ಲಿ ಈಜಲು ಇಳಿಯುತ್ತಿದ್ದರು. ಇತ್ತೀಚಿನ ದಿನಗಳಲ್ಲಿ ಕಾವೇರಿ ನದಿ ಪಾತ್ರದಲ್ಲಿ ಹೆಚ್ಚು ಮಳೆಯಾಗುತ್ತಿದ್ದು, ನದಿ ಪಾತ್ರದಲ್ಲಿ ಪ್ರವಾಹದ ಭೀತಿ ಎದುರಾಗಿದೆ.

ಕೃಷ್ಣರಾಜಸಾಗರ ಜಲಾಶಯದಿಂದ ಹೆಚ್ಚುವರಿ ನೀರು ಬಿಡುಗಡೆ ಮಾಡಿದ್ದು, ಯಾವುದೇ ಅಹಿತಕರ ಘಟನೆ ಸಂಭವಿಸಿದಂತೆ ತಡೆಯಲು, ವನ್ಯಜೀವಿ ಸಂರಕ್ಷಣೆ ಹಿತದೃಷ್ಟಿಯಿಂದ ಮುಂಜಾಗ್ರತಾ ಕ್ರಮವಾಗಿ ನಿಷೇಧಾಜ್ಞೆ ಜಾರಿ ಮಾಡುವಂತೆ ಹಲಗೂರು ಪಿಎಸ್ಐ ಲೋಕೇಶ ಮನವಿ ಮಾಡಿದ್ದರು. ಇದನ್ನು ಪರಿಗಣಿಸಿ ಜು.28ರಂದು ಸಂಜೆ ಆರು ಗಂಟೆಯಿಂದ ಮುಂದಿನ ಆದೇಶದವರೆಗೆ ಪ್ರವಾಸಿ ತಾಣ ಮುತ್ತತ್ತಿ ಪ್ರದೇಶಕ್ಕೆ ಸಾರ್ವಜನಿಕರ ಪ್ರವೇಶವನ್ನು ಸಂಪೂರ್ಣ ನಿಷೇಧಿಸಿ, ನಿಷೇಧಾಜ್ಞೆ ಹೊರಡಿಸಲಾಗಿದೆ ಎಂದು ತಹಶೀಲ್ದಾರ್ ಎಸ್.ವಿ.ಲೋಕೇಶ್ ತಿಳಿಸಿದಾರೆ.

### 35 ಕೋಟಿ ವೆಚ್ಚದ ಶ್ರಮಿಕ ವಸತಿ ಶಾಲೆ ಮಂಜೂರು: ಚಲುವರಾಯಸ್ವಾಮಿ

• ಉದಯವಾಹಿನಿ, ನಾಗಮಂಗಲ

ತಾಲ್ಲೂಕಿಗೆ 35.75 ಕೋಟಿ ವೆಚ್ಚದ ನೂತನ ಶ್ರಮಿಕ ವಸತಿ ಶಾಲೆ ಮಂಜೂರಾಗಿದ್ದು, ವರ್ಷದೊಳಗೆ ಕಾಮಗಾರಿ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಹೇಳಿದ್ದಾರೆ. ತಾಲ್ಲೂಕಿನ ಬೀರೇಶ್ವರಪುರ ಗ್ರಾಮದಲ್ಲಿ ಕಟ್ಟಡ ನಿರ್ಮಾಣವಾಗಲಿದ್ದು, 35.75 ಕೋಟಿಗಳನ್ನು ಮಂಜೂರು ಮಾಡಲಾಗಿದೆ. ಇದರಲ್ಲಿ 31 ಕೋಟಿ ವೆಚ್ಚದಲ್ಲಿ ಕಟ್ಟಡ, 1 ಕೋಟಿ ವೆಚ್ಚದಲ್ಲಿ ಕಾಂಪೌಂಡ್ ನಿರ್ಮಾಣ, 3 ಕೋಟಿ ವೆಚ್ಚದಲ್ಲಿ ಪೀಠೋಪಕರಣ, 75 ಲಕ್ಷ ವೆಚ್ಚದಲ್ಲಿ ಲ್ಯಾಬ್ ಉಪಕರಣಗಳ ಪೂರೈಕೆ ವ್ಯವಸ್ಥೆ ಮಾಡಲಾಗುವುದು ಎಂದಿದ್ದಾರೆ. ಕಟ್ಟಡ ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹ ನೀಡಲು ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ರಾಜ್ಯಾದ್ಯಂತ 31 ಜಿಲ್ಲೆಗಳಲ್ಲಿ 1125.25 ಕೋಟಿ ವೆಚ್ಚದಲ್ಲಿ ವಸತಿ ಶಾಲೆಗಳು ಪ್ರಾರಂಭವಾಗಲಿವೆ. 6ನೇ ತರಗತಿಯಿಂದ 12ನೇ ತರಗತಿವರೆಗೆ ವಸತಿ ಶಾಲೆ ನಿರ್ಮಿಸಲು ರಾಜ್ಯ ಸರ್ಕಾರ ಈಗಾಗಲೇ ಆಡಳಿತಾತ್ಮಕ ಅನುಮೋದನೆ ನೀಡಿದೆ ಎಂದು ತಿಳಿಸಿದ್ದಾರೆ.

### 10 ಸಾವಿರ ಗಿಡ ಪೋಷಣೆ ಗುರಿ

• ಉದಯವಾಹಿನಿ, ಮಳವಳ್ಳಿ

ವಿದ್ಯಾರ್ಥಿಗಳು ಬಾಲ್ಯದಿಂದಲೇ ಪರಿಸರ ಸಂರಕ್ಷಣೆಯ ಬಗ್ಗೆ ಕಾಳಜಿ ಬೆಳೆಸಿಕೊಳ್ಳಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರಾದ ಎಂ. ಮಹೇಂದ್ರ ಕರೆ ನೀಡಿದರು. ಪಟ್ಟಣದ ಹೊರವಲಯದ ಮಾರೇಹಳ್ಳಿ ಬಳಿಯ ಆದರ್ಶ ವಿದ್ಯಾಲಯದ ಆವರಣದಲ್ಲಿ ಕಾನೂನು ಸೇವಾ ಸಮಿತಿ ಹಾಗೂ ಭಾರತ್ ವಿಕಾಸ್ ಪರಿಷತ್ ಆಯೋಜಿಸಿದ ಗಿಡ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಪ್ರಸ್ತುತ ವರ್ಷ ವಿವಿಧ ಸರ್ಕಾರಿ ಇಲಾಖೆಗಳು ಹಾಗೂ ಸಂಘ–ಸಂಸ್ಥೆಗಳ ಸಹಕಾರದೊಂದಿಗೆ 10 ಸಾವಿರ ಗಿಡ ನೆಟ್ಟು ಪೋಷಣೆ ಮಾಡುವ ಉದ್ದೇಶ ಹೊಂದಲಾಗಿದೆ. ವಿದ್ಯಾರ್ಥಿಗಳು ನೆಟ್ಟ ಗಿಡಗಳ ಪೋಷಣೆ ಮಾಡಲು ಮುಂದಾಗಿ ಪರಿಸರ ಕಾಳಜಿ ರೂಢಿಸಿಕೊಳ್ಳಬೇಕು ಎಂದರು.

ನ್ಯಾಯಾಧೀಶ ಎಂ.ಮಹೇಂದ್ರ ಅವರು ಶಾಲೆಯ ಕೊಠಡಿ, ಅಡುಗೆ ಮನೆ, ಶೌಚಾಲಯವನ್ನು ಪರಿಶೀಲಿಸಿ ಅಶುಚಿತ್ವನ್ನು ಕಂಡು ಸ್ಥಳದಲ್ಲಿಯೇ ಪ್ರಾಂಶುಪಾಲರು, ಸಿಬ್ಬಂದಿಗಳನ್ನು ತರಾಟೆಗೆ ತೆಗೆದುಕೊಂಡು ಇಂಥ ಕೊಠಡಿಯೊಳಗೆ ಮಕ್ಕಳು ಹೇಗೇ ಪಾಠ ಕಲಿಯಲು ಸಾಧ್ಯ. ನಿಮ್ಮ ಮಕ್ಕಳು ಕಲಿಯುವ ಶಾಲೆಯು ಇದೇ ರೀತಿ ಇದೆಯೇ? ಎಂದು ಪ್ರಶ್ನಿಸಿದರು. ಮುಂದಿನ ದಿನಗಳಲ್ಲಿ ವ್ಯವಸ್ಥೆ ಸರಿಪಡಿಸುವಂತೆ ಸೂಚಿಸಿ ಇಲ್ಲದಿದ್ದರೆ ಕ್ರಮ ಕೈಗೊಳ್ಳುವ ಎಚ್ಚರಿಕೆ ನೀಡಿದರು.

### ಯಾರಿಗೂ ತೊಂದರೆಯಾಗದಂತೆ ಕಾಳಜಿ ವಹಿಸಿ: ಶಾಸಕ ಎ.ಎಸ್.ಪೊನ್ನಣ್ಣ

• ಉದಯವಾಹಿನಿ, ಮಡಿಕೇರಿ

ಯಾರಿಗೂ ಸಹ ತೊಂದರೆಯಾಗದಂತೆ ಕಾಳಜಿ ವಹಿಸಿ ಎಂದು ಸಿಎಂ ಅವರ ಕಾನೂನು ಸಲಹೆಗಾರ, ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಶಾಸಕ ಎ.ಎಸ್.ಪೊನ್ನಣ್ಣ ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು. ಸಂಪಾಜೆ, ಚೆಂಬು, ಪೆರಾಜೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಅರಣ್ಯಕ್ಕೆ ಸಂಬಂಧಿಸಿದ ಹಲವು ವಿಚಾರಗಳ ಕುರಿತು ಅರಣ್ಯ ಅಧಿಕಾರಿಗಳು, ಸಾರ್ವಜನಿಕರ ಜೊತೆ ಚೆಂಬು ಗ್ರಾಮ ಪಂಚಾಯಿತಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಅವರು ಮಾತನಾಡಿದರು. ಅರಣ್ಯಕ್ಕೆ ಸಂಬಂಧಿಸಿದಂತೆ ಹಲವು ಸಮಸ್ಯೆ ಪರಿಹರಿಸಲು ಅಧಿಕಾರಿಗಳು ಮುಂದಾಗಬೇಕು. ಆ ನಿಟ್ಟಿನಲ್ಲಿ ತಳಮಟ್ಟದಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳು ಜನಸ್ನೇಹಿಯಾಗಿ ಕರ್ತವ್ಯ ನಿರ್ವಹಿಸಬೇಕು ಎಂದು ಹೇಳಿದರು. ಸರ್ಕಾರ ಶಕ್ತಿ, ಗೃಹಜ್ಯೋತಿ, ಗೃಹಭಾಗ್ಯ, ಯುವನಿಧಿ, ಅನ್ನಭಾಗ್ಯ ಹೀಗೆ ಹಲವು ಯೋಜನೆಗಳನ್ನು ಜಾರಿಗೊಳಿಸಿದೆ. ಬಡವರು ಸಹ ಉತ್ತಮ ಬದುಕು ನಡೆಸುವಂತಾಗಲು ಹಲವು ಸಮಾಜಪರ ಕಾರ್ಯಕ್ರಮಗಳನ್ನು ನೀಡಿದೆ. ಅವುಗಳನ್ನು ಸ್ಮರಿಸಬೇಕು ಎಂದರು. ಕಾಡಾನೆ, ಮಾನವ ಸಂಘರ್ಷ ನಿಯಂತ್ರಣಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು. ದಬ್ಬಡ್ಕದಲ್ಲಿ ಕೆಲವು ಕುಟುಂಬಗಳು ಇನ್ನೂ ವಿದ್ಯುತ್ ಸಂಪರ್ಕ ಕಲ್ಪಿಸದೆ ಇರುವ ಕುರಿತು ಗಮನಹರಿಸುವಂತೆ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು. ಇದೇ ಸಂದರ್ಭದಲ್ಲಿ ಸಾರ್ವಜನಿಕರ ಅಹವಾಲು, ಕುಂದುಕೊರತೆ ಆಲಿಸಿದರು.

### ಬಿರುಸು ಕಳೆದುಕೊಂಡ ಮುಂಗಾರು

• ಉದಯವಾಹಿನಿ, ಸೋಮವಾರಪೇಟೆ

ಮೂರು ದಿನಗಳಿಂದ ಬಿಡದೆ ಸುರಿದ ಮುಂಗಾರು ಮಳೆ ಕಡಿಮೆಯಾದರೂ, ಮಳೆಯಿಂದ ಸಾಕಷ್ಟು ಹಾನಿ ಸಂಭವಿಸಿದೆ. ಕುಡಿಯುವ ನೀರು ಸೇರಿದಂತೆ ಗ್ರಾಮೀಣ ಭಾಗಗಳಲ್ಲಿ ವಿದ್ಯುತ್ ಸಮಸ್ಯೆ ತೀವ್ರವಾಗಿದೆ. ಹಲವೆಡೆ ಭತ್ತದ ಗದ್ದೆಯಲ್ಲಿ ನೀರು ನಿಂತಿದ್ದರಿಂದ ಸಸಿ ಮಡಿಗಳಿಗೆ ಹಾನಿಯಾಗಿದೆ. ಶಾಂತಳ್ಳಿ ಭಾಗದಲ್ಲಿ ಬಿಡದೆ ಸುರಿದ ಮಳೆಯಿಂದಾಗಿ ಹಲವಾರು ಮರಳು ರಸ್ತೆಗೆ ಅಡ್ಡ ಬಿದ್ದಿದ್ದರಿಂದ ಸಂಚಾರಕ್ಕೆ ಸಮಸ್ಯೆ ಯಾಗಿತ್ತು. ಅರಣ್ಯ, ಅಗ್ನಿಶಾಮಕ ಹಾಗೂ ಸೆಸ್ಕ್ ಇಲಾಖೆಯ ಸಿಬ್ಬಂದಿ ಹಗಲಿರುಳು ಕೆಲಸ ಮಾಡಿ ಸಮಸ್ಯೆ ಪರಿಹರಿಸಿದರು. ಗ್ರಾಮೀಣ ಭಾಗಗಳಲ್ಲಿ ವಿದ್ಯುತ್ ಮಾರ್ಗದ ಮೇಲೆ ಮರ ಬಿದ್ದು, ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಿದೆ. ಒಂದು ವಾರದಿಂದ ಜನರು ಪರದಾಡುತ್ತಿದ್ದಾರೆ.

# ಅಂತರಾಳದಿಂದ.. EDITORIAL

## ಸಫಾಯಿ ಕರ್ಮಚಾರಿಗಳ ಶೋಷಣೆ ಹೀನಾಯ ಪದ್ಧತಿ ಕೊನೆಗೊಳ್ಳಲಿ

ಒಳಚರಂಡಿಗಳು ಹಾಗೂ ಶೌಚದ ಗುಂಡಿಗಳನ್ನು ಸ್ವಚ್ಛಗೊಳಿಸಲು ಅನುಸರಿಸುತ್ತಿರುವ ವಿಧಾನಗಳ ಬಗ್ಗೆ ಈಚೆಗೆ ನಡೆದಿರುವ ದೇಶವ್ಯಾಪಿ ಸಾಮಾಜಿಕ ಲೆಕ್ಕ ಪರಿಶೋಧನೆಯೊಂದು, ನಾಚಿಕೆಗೇಡಿನ ಹಾಗೂ ಅಮಾನವೀಯ ಕಾರ್ಯಾಚರಣೆ ಪದ್ಧತಿಗಳು ಇಂದಿಗೂ ಅಸ್ತಿತ್ವದಲ್ಲಿ ಇರುವುದನ್ನು ಬಹಿರಂಗಪಡಿಸಿದೆ. ಕಾನೂನು ನಿಷೇಧದ ನಡುವೆಯೂ ಒಳಚರಂಡಿ ಹಾಗೂ ಶೌಚಗುಂಡಿಗಳನ್ನು ಕೈಯಿಂದಲೇ ಸ್ವಚ್ಛಗೊಳಿಸುವ ಪದ್ಧತಿ ಮುಂದುವರಿದಿದೆ. ಕೇಂದ್ರದ ಸಾಮಾಜಿಕ ನ್ಯಾಯ ಸಚಿವಾಲಯವು 2023ರ ಸೆಪ್ಟೆಂಬರ್‌ನಲ್ಲಿ ಈ ಅಧ್ಯಯನ ನಡೆಸಿದೆ. ಒಳಚರಂಡಿಗಳನ್ನು ಸ್ವಚ್ಛಗೊಳಿಸುವ ಸಂದರ್ಭದಲ್ಲಿ ಪ್ರಾಣ ಕಳೆದುಕೊಂಡಿರುವ ಶೇ.90ಕ್ಕೂ ಹೆಚ್ಚು ಕಾರ್ಮಿಕರ ಬಳಿ ಸುರಕ್ಷತಾ ಉಪಕರಣಗಳು ಇರಲಿಲ್ಲ ಎನ್ನುವುದು ಅಧ್ಯಯನದಿಂದ ತಿಳಿದುಬಂದಿದೆ. ಸುರಕ್ಷತಾ ಪರಿಕರಗಳನ್ನು ಬಳಸುತ್ತಿದ್ದರು ಎನ್ನಲಾದವರು ಕೂಡ ಕೈಗವಸು, ಗಮ್‌ಬೂಟುಗಳನ್ನಷ್ಟೇ ಧರಿಸುತ್ತಿದ್ದರು.




2022ರಿಂದ 2023ರ ನಡುವೆ ಎಂಟು ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳಿಂದ ವರದಿಯಾದ ಒಟ್ಟು 54 ಸಾವಿನ ಪ್ರಕರಣಗಳನ್ನು ಈ ಲೆಕ್ಕಪರಿಶೋಧನೆಯು ತನಿಖೆಗೆ ಒಳಪಡಿಸಿದೆ. ಈ ಅವಧಿಯಲ್ಲಿ, ಅಸುರಕ್ಷಿತ ಸ್ವಚ್ಛತಾ ಕಾರ್ಯವನ್ನು ನಿರ್ವಹಿಸುವಾಗ ಒಟ್ಟು 150 ಮಂದಿ ಜೀವ ಕಳೆದುಕೊಂಡಿದ್ದಾರೆ. ಒಳಚರಂಡಿ, ಶೌಚಗುಂಡಿಗಳನ್ನು ಮನುಷ್ಯರೇ ಸ್ವಚ್ಛಗೊಳಿಸುವ ಕೆಲಸದ ಎಲ್ಲಾ ಆಯಾಮಗಳ ಬಗ್ಗೆ ಸಾಮಾಜಿಕ ಲೆಕ್ಕಪರಿಶೋಧನೆಯು ಪರಿಶೀಲನೆ ನಡೆಸಿದೆ. ಈ ಕಾರ್ಯಕ್ಕೆ ಹೇಗೆ ನೇಮಕ ಮಾಡಿಕೊಳ್ಳಲಾಗುತ್ತದೆ, ಸ್ವಚ್ಛತಾ ಸಮಯದಲ್ಲಿ ಯಾವ ಸುರಕ್ಷತಾ ಕ್ರಮಗಳನ್ನು ಪಾಲಿಸಲಾಗುತ್ತದೆ, ಕಾನೂನಿನ ಅರಿವು ಎಷ್ಟರಮಟ್ಟಿಗೆ ಇದೆ ಎನ್ನುವ ಸಂಗತಿಗಳ ಕುರಿತು ಪರಿಶೀಲನೆ ನಡೆಸಲಾಗಿದ್ದು, ಅಧ್ಯಯನದ ಮೂಲಕ ಕಂಡುಕೊಂಡ ಮಾಹಿತಿಯನ್ನು ಸಂಸತ್ತಿಗೆ ತಿಳಿಸಲಾಗಿದೆ. ಜೀವ ಕಳೆದುಕೊಂಡಿರುವ 54 ಸಫಾಯಿ ಕರ್ಮಚಾರಿಗಳಲ್ಲಿ 49 ಮಂದಿ ಯಾವುದೇ ಸುರಕ್ಷತಾ ಪರಿಕರ ಗಳನ್ನು ಧರಿಸಿರಲಿಲ್ಲ. 27 ಪ್ರಕರಣಗಳಲ್ಲಿ, ಸಫಾಯಿ ಕರ್ಮಚಾರಿಗಳಿಂದ ಯಾವುದೇ ಬಗೆಯಲ್ಲಿ ಸಮ್ಮತಿ ಪಡೆದುಕೊಂಡಿರಲಿಲ್ಲ, ಕೆಲಸದಲ್ಲಿ ಇರುವ ಅಪಾಯಗಳ ಬಗ್ಗೆ ಅವರಿಗೆ ಯಾವುದೇ ರೀತಿಯಲ್ಲಿ ಮಾಹಿತಿ ನೀಡಿರಲಿಲ್ಲ. ಒಳಚರಂಡಿಗಳನ್ನು ಹಾಗೂ ಶೌಚಗುಂಡಿಗಳನ್ನು ಕೈಗಳನ್ನು ಬಳಸಿ ಸ್ವಚ್ಛಗೊಳಿಸುವ ಪದ್ಧತಿಯನ್ನು ನಿಷೇಧಿಸುವ, ಆ ಕಾರ್ಯದಲ್ಲಿ ತೊಡಗಿದವರಿಗೆ ಪುನರ್ವಸತಿ ಕಲ್ಪಿಸುವ ಕಾಯ್ದೆಯ ಬಗ್ಗೆ ಈ ಅಧ್ಯಯನ ನಡೆದಿದೆ. ಇಂತಹ ಕೆಲಸಗಳನ್ನು ನಿಷೇಧಿಸಿ ಸುಪ್ರೀಂ ಕೋರ್ಟ್ ತೀರ್ಪುಗಳನ್ನು ಹೊರಡಿಸಿದೆ 'ಸ್ವಚ್ಛ ಭಾರತ' ಅಭಿಯಾನದ ಅಡಿಯಲ್ಲಿ ಹಲವು ಆದೇಶಗಳನ್ನು, ಸಲಹೆಗಳನ್ನು ನೀಡಲಾಗಿದೆ.

> **ಮನುಷ್ಯರು ಕೈಗಳನ್ನು ಬಳಸಿ ಹೊಲಸನ್ನು ಸ್ವಚ್ಛಗೊಳಿಸುವುದನ್ನು ದೇಶದಲ್ಲಿ ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಯಂತ್ರಗಳನ್ನು ಬಳಸಿ ಈ ಕೆಲಸ ಮಾಡಲು ಸಾಧ್ಯವಿಲ್ಲದಿದ್ದರೆ, ನಿರ್ದಿಷ್ಟ ಸಂದರ್ಭಗಳಲ್ಲಿ ಮಾತ್ರ ಕೈಗಳನ್ನು ಬಳಸಿ ಸ್ವಚ್ಛಗೊಳಿಸಲು ಅವಕಾಶ ಇದೆ. ಕೈಗಳನ್ನು ಬಳಸಿ ಸ್ವಚ್ಛಗೊಳಿಸುವ ಕಾರ್ಯ ಹೇಗೆ ನಡೆಯಬೇಕು ಎಂಬ ಬಗ್ಗೆ ನಿರ್ದಿಷ್ಟವಾದ ಸೂಚನೆಗಳೂ ಇವೆ.**

ಈ ಸೂಚನೆಗಳನ್ನು ಉಲ್ಲಂಘಿಸಿ, ಯಂತ್ರಗಳಿಂದ ಸಾಧ್ಯವಿರುವಲ್ಲಿ ಮನುಷ್ಯರನ್ನು ಬಳಸಿ ಸ್ವಚ್ಛಗೊಳಿಸುವುದು ಅಮಾನವೀಯ ಹಾಗೂ ಮಾನವಹಕ್ಕುಗಳ ಉಲ್ಲಂಘನೆ. ಶೌಚಗುಂಡಿಗಳನ್ನು ಕೈಯಿಂದ ಸ್ವಚ್ಛಗೊಳಿಸುವುದು ಅತ್ಯಂತ ಹೀನಾಯವಾದ ಹಾಗೂ ಮನುಷ್ಯನ ಘನತೆಯನ್ನು ಕುಗ್ಗಿಸುವ ವೃತ್ತಿಯಾಗಿದೆ. ಬಡತನ, ಜಾತಿ, ಅನಕ್ಷರತೆ, ಹಿಂದುಳಿದಿರುವಿಕೆ ಮತ್ತು ದಬ್ಬಾಳಿಕೆಯು ಹೇಗೆ ಅಪಾಯಕಾರಿ ಬಗೆಯಲ್ಲಿ ಒಗ್ಗೂಡುತ್ತವೆ ಎನ್ನುವುದನ್ನು ಇದು ತೋರಿಸುತ್ತದೆ.

ಮನುಷ್ಯರನ್ನು ಈ ಬಗೆಯಲ್ಲಿ ಹೀನಾಯವಾಗಿ ನಡೆಸಿಕೊಳ್ಳುವ ಪದ್ಧತಿಯು ನಗರಗಳಲ್ಲಿ, ಪಟ್ಟಣಗಳಲ್ಲಿ ಹಾಗೂ ಹಳ್ಳಿಗಳಲ್ಲಿ ಶತಮಾನಗಳಿಂದಲೂ ಜಾರಿಯಲ್ಲಿದೆ. ಇದನ್ನು ಕೊನೆಗೊಳಿಸುವುದಕ್ಕೆ ಕಾನೂನಿನಿಂದಲೂ ಸಾಧ್ಯವಾಗಿಲ್ಲ. ಯಂತ್ರಗಳನ್ನು ಬಳಸಿ ಶುಚಿಗೊಳಿಸುವುದು ದುಬಾರಿ ಎಂಬ ನೆಪ ಹೇಳಿ, ನಗರಗಳಲ್ಲಿ ಆ ಕೆಲಸವನ್ನು ಸಫಾಯಿ ಕರ್ಮಚಾರಿಗಳಿಂದ ಮಾಡಿಸಲಾಗುತ್ತಿದೆ. ಸ್ವಚ್ಛತೆಯ ಕೆಲಸದಲ್ಲಿ ತೊಡಗಿದ್ದಾಗ ಮೃತಪಟ್ಟವರಿಗೆ ಪರಿಹಾರ ಮೊತ್ತವನ್ನೂ ಸಮರ್ಪಕವಾಗಿ ನೀಡಲಾಗುತ್ತಿಲ್ಲ ಎಂಬ ಆರೋಪಗಳಿವೆ. ಹಲವು ಕಡೆಗಳಲ್ಲಿ ಸಫಾಯಿ ಕರ್ಮಚಾರಿಗಳಿಗೆ ಪುನರ್ವಸತಿ ಕಲ್ಪಿಸುವ ಯೋಜನೆಗಳು ಪ್ರಗತಿ ಸಾಧಿಸಿಲ್ಲ. ಯಂತ್ರಗಳನ್ನು ಬಳಸಿ ಸ್ವಚ್ಛಗೊಳಿಸುವ ವ್ಯವಸ್ಥೆ ರೂಪಿಸುವ ರಾಷ್ಟ್ರೀಯ ಯೋಜನೆಯು ಅಲ್ಪ ಪ್ರಗತಿಯನ್ನಷ್ಟೇ ಸಾಧಿಸಿದೆ. ಒಳಚರಂಡಿ ಹಾಗೂ ಶೌಚಗುಂಡಿಗಳ ಸ್ವಚ್ಛತಾ ಕಾರ್ಯದಲ್ಲಿ ತೊಡಗಿರುವ ಸಫಾಯಿ ಕರ್ಮಚಾರಿಗಳ ಬಗ್ಗೆ ಸಮೀಕ್ಷೆ ನಡೆಸಿ, ಅದರ ವರದಿಯನ್ನು ಬಹಿರಂಗಪಡಿಸುವ ಮೂಲಕ ಕೇಂದ್ರ ಸರ್ಕಾರ ಒಳ್ಳೆಯ ಕೆಲಸ ಮಾಡಿದೆ. ಆ ವರದಿಯನ್ನು ಆಧರಿಸಿ ಕೆಲವು ಕ್ರಮಗಳನ್ನು ಕೈಗೊಳ್ಳಬೇಕು ಹಾಗೂ ಕೈಯಿಂದ ಗಲೀಜು ಬಳಿಯುವ ಅಮಾನವೀಯ ಪದ್ಧತಿಯು ಸಂಪೂರ್ಣವಾಗಿ ಇಲವಾಗುವಂತೆ ಮಾಡುವ ಇಚ್ಛಾಶಕ್ತಿಯನ್ನು ಕೇಂದ್ರ ಸರ್ಕಾರ ಪ್ರದರ್ಶಿಸಬೇಕಾಗಿದೆ.

# ರಾಮಾಯಣ



## ಶ್ರೀರಾಮನಿಗೆ ಜಾಬಾಲಿಯು ಹೇಳಿದ ಚಾರ್ವಾಕ ನೀತಿ

• ಹಿಂದಿನ ಸಂಚಿಕೆಯಿಂದ 106ನೆಯ ಅಧ್ಯಾಯ

ಯಾವ ಪುರುಷನು ಯಾರಿಗೆ ಬಂಧು? ಧರ್ಮಾಚರಣೆಯನ್ನು ಮಾಡುವ ಮನುಷ್ಯನು ಐದುವ ಲೋಕವಾವುದು? ಲೋಕದಲ್ಲಿ ಮನುಷ್ಯನು ಒಂದು ದಿಕ್ಕಿನಲ್ಲಿ ಪ್ರಯಾಣವನ್ನು ನಿಲ್ಲಿಸಿ ಮಾರನೆಯ ದಿನ ಸೂರ್ಯೋದಯಕಾಲದಲ್ಲಿ ಆಸೇ ಸ ಳವನ್ನು ಬಿಟ್ಟು ತನ್ನ ದಾರಿಗೊಂಡು ಹೋಗುವಂತೆ ತಾಯಿ ತಂದೆ ಹಣಕಾಸೆಂಬವು ಇದ್ದಷ್ಟು ದಿನಗಳಿದ್ದು ಲಯವಾಗಿ ಹೋಗುವುವು ಅಯೋಧ್ಯ ಪಟ್ಟಣವು ದಶರಥರಾಯನ ಸ್ವಾ ನವೆಂಬುದು ಮಾತು ಮಾತೆ ಶ್ರವಲ್ಲದೆ ಈಗ ಆ ರಾಯನು ಆ ಪಟ್ಟಣದಲ್ಲಿದ್ದಾನೆಯೆ? ನೀನಿ ರಾಜ್ಯಾಧಿಪತ್ಯವನ್ನು ಬಿಟ್ಟು ವನದಲ್ಲಿ ಕಾಯಕ್ಲೇಶವನ್ನು ಮಾಡಿಕೊಂಡಿರುವುದಕ್ಕೆ ಕಾರಣವೇನು ? ದುರ್ಘಟವಾದ ಮಾರ್ಗಗಳೂ ಹಳ್ಳತಿಟ್ಟುಗಳೂ ಉಳ್ಳದ್ದಾಗಿ ಎಲ್ಲಿ ನೋಡಿದರೂ ಮುಳ್ಳುಗಳಿಂದ ಪರಿಪೂರ್ಣವಾದ ಈ ವನದಲ್ಲಿ ಸಂಚರಿಸುವುದನ್ನು ಬಿಟ್ಟು ಐಶ್ವರ್ಯಪರಿಪೂರ್ಣವಾದ ಅಯೋಧಾ, ಪಟ್ಟಣದಲ್ಲಿ ಪಟ್ಟಾಭಿಷೇಕವನ್ನು ಮಾಡಿಕೊಂಡು ರಾಜ್ಯ ಪರಿಪಾಲನವನ್ನು ಮಾಡು, ದಿಕ್ಕಾರೂ ಇಲ್ಲದಿರುವ ಅಯೋಧ್ಯಾ ಪಟ್ಟಣವು ನಿನ್ನನ್ನು ಎದುರುನೋಡುತ್ತಿದೆ ! ಎಲೈ ಶ್ರೀರಾಮ ಮಹಾತ್ಮನಾದ ನೀನು ರಾಜ್ಯಭೋಗವನ್ನನುಭವಿಸಿಕೊಂಡು ದೇವೇಂದ್ರನು ಅಮರಾವತಿ ಪಟ್ಟಣದಲ್ಲಿರುವಂತೆ ಅಯೋಧಾ ಪಟ್ಟಣದಲ್ಲಿ ಸುಖವಾಗಿರು. ನಿನಗೆ ದಶರಥರಾಯನೇನಾಗಬೇಕು ? ದಶರಥರಾಯನಿಗೆ ನೀನೇನಾಗಬೇಕು? ದಶರಥರಾಯನು ಬೇರೊಬ್ಬನಾದನು. ಆದ್ದರಿಂದ ನಾನು ಹೇಳುವ ಮಾತನ್ನು ಕೇಳು. ಲೋಕದಲ್ಲಿ ತಂದೆಯು ನಿಮಿತ್ತಕಾರಣ ಮಾತ್ರನಲ್ಲದೆ ಸಾಕ್ಷಾತ್ಕಾರಣನಲ್ಲ, ಸ್ತ್ರೀಯ ಶೋಣಿತವೂ ಪುರುಷನ ಶುಕ್ಲವೂ ಕೂಡುವುದೇ ಮನುಷ್ಯನಿಗೆ ಸಾಕ್ಷಾತ್ಕಾರಣವು, ದಶರಥರಾಯನು ತಾನು ಹೋಗಬೇಕಾದ ದಾರಿಗೆ ಹೋದನು. ನೀನು ವ್ಯರ್ಥವಾಗಿ ವ್ಯಥೆಪಡುತ್ತಿದ್ದೀಯೆ. ವನದಲ್ಲಿ ಧರ್ಮಾರ್ಥಕಾಮಗಳನ್ನು ಸಂಪಾದಿಸಬೇಕೆಂದು ಬಹುಮಂದಿ ಪ್ರತ್ಯಕ್ಷಸುಖವನ್ನು ತೊರೆದು ಕಾಯಕ್ಲೇಶಗಳನ್ನು ಮಾಡಿಕೊಂಡು ಕಡೆಗೆ ನಾಶವಾಗಿ ಹೋಗುವರು. ಅವರನ್ನು ನೆನೆದು ನನಗೆ ಮನೋವ್ಯಥೆಯಾಗುತ್ತಿದೆ. ಮನುಷ್ಯರು ತಮ್ಮ ಪಿತೃಗಳಿಗೆ ಪೈತೃಕವನ್ನು ಮಾಡಬೇಕೆಂದು ಪ್ರಯಾಸಪಡುತ್ತಿರುವರು. ಅದರಿಂದ ಅನ್ನಕ್ಕೆ ಹಾನಿಯಾಗುವುದಲ್ಲದೆ ಇನ್ನೇನಿದೆ ? ಸತ್ತವನು ಊಟಮಾಡುವನೆ ? ಇನ್ನೊಬ್ಬನು ಭೋಜನ ಮಾಡಿದರೆ ಪರಲೋಕದಲ್ಲಿರುವವನಿಗೆ ಸೇರುವುದಾದರೆ, ಪಥಿಕನಿಗೆ ಮನೆಯಲ್ಲಿ ಶ್ರಾದ್ಧ ಮಾಡಿದರೆ ನಾಕು, ಅವನಿಗೆ ಅದರಿಂದಲೇ ಪರಸ್ಥಳದಲ್ಲಿ ತೃಪ್ತಿಯಾಗಲಿ, ಲೋಕದಲ್ಲಿ ವಿದ್ವಾಂಸರಾದವರು ಯುಕ್ತಿಗಳಿಂದ ಶಾಸ್ತ್ರಗಳನ್ನು ಕಲ್ಪಿಸಿ ದಾನಮಹಿಮೆಯನ್ನು ಬೋಧಿಸಿ ದಾನಮಾಡಬೇಕೆಂದೂ ಯಾಗಮಾಡಬೇಕೆಂದೂ ತಪಸ್ಸು ಮಾಡಬೇಕೆಂದೂ ಬೋಧಿಸಿದ್ದಾರೆ. ಆ ದಾನಗಳಿಂದ ಅವರು ಹೇಳುವ ಸ್ವರ್ಗಾದಿಲೋಕಗಳು ಆಗಲಾರವು. ಅಂಥ ಭ್ರಮೆಯನ್ನು ಬಿಡು. ಪ್ರತ್ಯಕ್ಷವಾಗಿ ಕಂಡದ್ದನ್ನೇ ಪ್ರಮಾಣವೆಂದು ತಿಳಿ. ದೃಷ್ಟಿಗೋಚರವಲ್ಲದ ವಸ್ತುಗಳೆಲ್ಲವೂ ಅಸತ್ಯವೆಂದೇ ತಿಳಿ. ಸಮಸ್ತಜನರೂ ಪ್ರತ್ಯಕ್ಷವಾಗಿ ಕಾಣಿಸುವ ಮಾರ್ಗವನ್ನೇ ಅನುಸರಿಸಬೇಕು. ಆದ್ದರಿಂದ ಭರತನು ಹೇಳಿದಂತೆ ರಾಜ್ಯ ಪರಿಪಾಲನಮಾಡಿಕೊಂಡು ಸುಖವಾಗಿರು ಎಂದು ಚಾರ್ವಾಕ, ಮತವನ್ನು ಬೋಧಿಸಿದನು.

### ಜಾಬಾಲಿಯ ಮೇಲೆ ಶ್ರೀರಾಮನ ಕೋಪ

ಹೀಗೆ ನುಡಿದ ಜಾಬಾಲಿಮುನೀಶ್ವರನ ಮಾತನ್ನು ಕೇಳಿ ಶ್ರೀರಾಮನು ಮನಸ್ಸಿನಲ್ಲಿ ಸ್ವಲ್ಪವಾದರೂ ಧೈರ್ಯಗುಂದದೆ ಆತನನ್ನು ಕುರಿತು ಈ ರೀತಿಯಲ್ಲಿ ಉತ್ತರಕೊಟ್ಟನು: ಎಲೈ ಜಾಬಾಲಿಮುನೀಶ್ವರನೆ. ನೀನು ನನಗೆ ಹಿತವಾಗಿ ಹೇಳಿದೆಯಲ್ಲದೆ ಮತ್ತೊಂದಲ್ಲ. ಹಾಗಾದರೂ ಆ ಕೃತ್ಯವನ್ನು ಉಚಿತವಾದ ಕಾರ್ಯವೆಂದು ಅಹಿತವನ್ನು ಹೇಳಿದೆ.

ಮುಂದುವರಿಯುವುದು...

# ವಿವಿಧ ಬಗೆಯ ತುಳಸಿ ಗಿಡಗಳು..!



ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

ವಿಶೇಷ ತುಳಸಿಯ ವಿವಿಧ ಬಗೆಗೆಗಳು, ಅವುಗಳ ವಿಶೇಷತೆಯ ಬಗ್ಗೆ ಮುಂದೆ ಲೇಖನದಲ್ಲಿ ತಿಳಿಯೋಣ. ಕರ್ನಾಟಕದಲ್ಲಿ ಸಾಮಾನ್ಯವಾಗಿ ಎರಡು-ಮೂರು ಬಗೆಯ ತುಳಸಿ ಗಿಡಗಳಿವೆ. ಅವುಗಳಲ್ಲಿ ಕೃಷ್ಣ ತುಳಸಿ, ಬಿಳಿ ತುಳಸಿ, ಕಪ್ಪು ತುಳಸಿಯನ್ನು ಹೆಚ್ಚಾಗಿ ಕಾಣಬಹುದು. ಭಾರತದ ಇತರ ಕಡೆ ಇನ್ನೂ ಅನೇಕ ಜಾತಿಯ ತುಳಸಿ ಗಿಡಗಳಿವೆ. ಇಲ್ಲಿ ನಾವು ವಿಶ್ವದಲ್ಲಿ ಕಾಣ ಸಿಗುವ ತುಳಸಿ ಗಿಡಗಳಲ್ಲಿ, ಕೆಲವು ಬಗೆಯ ತುಳಸಿ ಗಿಡಗಳ ಬಗ್ಗೆ ಮಾಹಿತಿಯನ್ನು ನೀಡುತ್ತಿದ್ದೇನೆ ನೋಡಿ.

**ಕೃಷ್ಣ ತುಳಸಿ:** ಕೃಷ್ಣ ತುಳಸಿ ಹೆಚ್ಚಿನ ಮನೆಗಳಲ್ಲಿ ಕಂಡು ಬರುತ್ತದೆ. ಇದರ ರಸ ಬಳಸಿ ಕೆಮ್ಮಿಗೆ ಮನೆ ಮದ್ದು ಮಾಡಬಹುದು. ಇದರಲ್ಲಿ ಅನೇಕ ಔಷಧೀಯ ಗುಣಗಳಿವೆ.

**ಬಿಳಿ ತುಳಸಿ:** ಈ ತುಳಸಿಯನ್ನು ಪೂಜೆ ಮಾಡುವಾಗ, ದೇವರ ಮೂರ್ತಿಗೆ ಅಲಂಕಾರ ಮಾಡಲು ಹೆಚ್ಚಾಗಿ ಬಳಸಲಾಗುವುದು.

**ಸಿಹಿ ತುಳಸಿ:** ಈ ತುಳಸಿ ಗಾಢವಾದ ಸುವಾಸನೆಯನ್ನು ಹೊಂದಿರುತ್ತದೆ, ನೋಡಲು ತುಂಬಾ ಫ್ರೆಶ್ ಆಗಿರುತ್ತದೆ.

**ಲೆಟ್ಯೂಸೆ ತುಳಸಿ:** ಇದರ ಎಲೆ ಅಗಲವಾಗಿರುತ್ತದೆ, ಗಿಡ್ಡವಾಗಿ ಅಗಲವಾಗಿ ಬೆಳೆಯುತ್ತದೆ, ಸಿಹಿ ತುಳಸಿಯಷ್ಟು ಅಲ್ಲದಿದ್ದರೂ ಸುಹಾಸನೆಯನ್ನು ಹೊಂದಿರುತ್ತದೆ.


**ಮಾಮೂತ್ ತುಳಸಿ:** ಇಟಲಿ ಮೂಲದ ತುಳಸಿ ಗಿಡವಾಗಿದೆ. ಇದು 18 ಇಂಚಿನಷ್ಟು ಎತ್ತರವಾಗಿ ಬೆಳೆಯುತ್ತದೆ. ಇದನ್ನು ಸಲಾಡ್ ನಲ್ಲಿ ಬಳಸುತ್ತಾರೆ.

**ಜಿನೋವೆಸೆ ತುಳಸಿ:** ಈ ತುಳಸಿ ಗಿಡ ಸಾಮಾನ್ಯವಾಗಿ ಯೋರೋಪ್ ದೇಶದಲ್ಲಿ ಕಂಡು ಬರುತ್ತದೆ.

**ನಫಾರ್ ತುಳಸಿ:** ಇದು ಜಿನೋವೆಸೆ ತುಳಸಿಯಲ್ಲಿ ಮತ್ತೊಂದು ಬಗೆಯ ತುಳಸಿಯಾಗಿದೆ.

**ಸ್ಪೈಸಿ ಗ್ಲೋಬ್ ತುಳಸಿ:** ಇದು ಪೊದೆ ಪೊದೆಯಾಗಿ ಬೆಳೆಯುತ್ತದೆ. ಇದನ್ನು ಹೂ ಕುಂಡದಲ್ಲಿ, ಹೂ ತೋಟದಲ್ಲಿ ಬೆಳೆದರೆ ನೋಡಲು ಆಕರ್ಷಕವಾಗಿ ಕಾಣುತ್ತದೆ. ಇದು ಗ್ರೀಕ್ ನಲ್ಲಿ ಹೆಚ್ಚಾಗಿ ಕಂಡು ಬರುತ್ತದೆ.

**ಫಿನೋ ವರ್ಡೆ:** ಈ ತುಳಸಿ ಗಿಡ ಚಿಕ್ಕದಾಗಿದ್ದು ಅದರ ಎಲೆ ಕೂಡ ತುಂವಾ ಚಿಕ್ಕದಾಗಿರುತ್ತದೆ. ಇದು ಹೆಚ್ಚು ಸುವಾಸನೆಯನ್ನು ಹೊಂದಿರುವುದಿಲ್ಲ.



**ಗ್ರೀಕ್ ಯಾವನಿ ತುಳಸಿ:** ಇದು ಕೂಡ ಗ್ರೀಕ್ ನಲ್ಲಿ ಕಾಣಸಿಗುವ ಮತ್ತೊಂದು ಬಗೆಯ ತುಳಸಿಯಾಗಿದೆ.

**ಬಾಕ್ಸ್ ವುಡ್:** ಈ ಗಿಡವನ್ನು ತುಂಬಾ ಬಿಸಿಲಿರುವ ಕಡೆ ನೆಡಬೇಕು. ಈ ಗಿಡ ಹೂ ತೋಟದಲ್ಲಿದ್ದರೆ ತುಂಬಾ ಆಕರ್ಷಕವಾಗಿ ಕಾಣುತ್ತದೆ.

**ಪರ್ಪಲ್ ರಫಲ್ಸ್ ತುಳಸಿ:** ಇದು ಕಡು ನೇರಳೆ ಬಣ್ಣದ ತುಳಸಿ ಗಿಡವಾಗಿದೆ. ಆದ್ದರಿಂದ ಈ ತುಳಸಿ ಗಿಡ ನೋಡಲು ಮನಮೋಹಕವಾಗಿದೆ.

**ಮ್ಯಾಜಿಕಲ್ ಮಿಷಲ್:** ಇದು ಕೂಡ ತುಂಬಾ ಅಪರೂಪದ ತುಳಸಿ ಗಿಡವಾಗಿದೆ. ಇದರ ಗುಣ ಕಪ್ಪು ತುಳಸಿಗೆ ಸಮವಾಗಿದೆ.

**ಡಾರ್ಕ್ ಓಪಲ್ ಬೇಸಿಲ್:** ಇದು ಕಡು ನೇರಳೆ ಬಣ್ಣದಲ್ಲಿದ್ದು ತುಂಬಾ ಆಕರ್ಷಕವಾಗಿ ಬೆಳೆಯುತ್ತದೆ.


# ಶುರವಾಗಿದೆ ಡೆಂಗ್ಯೂ ಹಾವಳಿ



ಮಳೆಗಾಲದಲ್ಲಿ ಸೊಳ್ಳೆಗಳ ಕಾಟ ಹೆಚ್ಚಾಗೋದು ಸಾಮಾನ್ಯ. ಆದರೆ ಈ ಸೊಳ್ಳೆಗಳಿಂದಾಗಿ ಡೆಂಗ್ಯೂ ಹಾವಳಿ ಕೂಡಾ ಹೆಚ್ಚಾಗುತ್ತದೆ. ಈಗಾಗಲೇ ಸಾವಿರಾರು ಡೆಂಗ್ಯೂ ಪ್ರಕರಣಗಳು ಬೆಳಕಿಗೆ ಬಂದಿದೆ. ಸೊಳ್ಳೆಗಳಿಂದ ತಪ್ಪಿಸಿಕೊಳ್ಳಲು ಮುನ್ನೆಚ್ಚರಿಕೆಯ ಕ್ರಮಗಳನ್ನು ತೆಗೆದುಕೊಳ್ಳುವುದು ಅತ್ಯಗತ್ಯ. ಜ್ವರವನ್ನು ನಿರ್ಲಕ್ಷಿಸುವ ತಪ್ಪು ಮಾಡೋದು ಪ್ರಾಣಕ್ಕೆ ಅಪಾಯವನ್ನುಂಟು ಮಾಡಬಹುದು.

**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಪ್ರಕಾರ:** ಮಳೆಗಾಲ ತೀವ್ರಗೊಳ್ಳುತ್ತಿದ್ದಂತೆ ಬೆಂಗಳೂರಿನಲ್ಲಿ ಡೆಂಗ್ಯೂ ಪ್ರಕರಣಗಳು ತೀವ್ರವಾಗಿ ಏರಿಕೆಯಾಗುತ್ತಿವೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ಪ್ರಕಾರ, ನಗರದಲ್ಲಿ ಕಳೆದ ವಾರದಲ್ಲಿ 69 ಪ್ರಕರಣಗಳು, ಜುಲೈನಲ್ಲಿ ಮಾತ್ರ 442 ಪ್ರಕರಣಗಳು ದಾಖಲಾಗಿವೆ. ವರ್ಷದ ಆರಂಭದಿಂದಲೂ ನಗರದಲ್ಲಿ 1,685 ಡೆಂಗ್ಯೂ ಪ್ರಕರಣಗಳು ವರದಿಯಾಗಿವೆ. ಹೆಚ್ಚಿನ ಅಪಾಯದ ಪ್ರದೇಶಗಳಲ್ಲಿ ಲಾರ್ವಾಗಳನ್ನು ನಿಯಂತ್ರಿಸಲು ರಾಸಾಯನಿಕಗಳನ್ನು ಬಳಸುವುದು, ನಿಯಮಿತವಾಗಿ ಫಾಗಿಂಗ್ ಮಾಡುವುದು ಮತ್ತು ಕೀಟನಾಶಕ ಸಿಂಪಡಣೆ ಮಾಡುವಂತೆ ಅವರು ಕರೆ ನೀಡಲಾಗಿದೆ.

## ಜ್ವರ ತೀವ್ರವಾದರೆ ರಕ್ತಸ್ರಾವವೂ ಆಗುತ್ತೆ ಎಚ್ಚರ



**ಮಾನ್ಸೂನ್ ಮತ್ತು ಡೆಂಗ್ಯೂ ಅಪಾಯ:** ಮೇ ಮತ್ತು ಆಗಸ್ಟ್ ನಡುವೆ ಭಾರೀ ಮಳೆಯಿಂದಾಗಿ ಡೆಂಗ್ಯೂ ಪ್ರಕರಣಗಳು ಸಾಮಾನ್ಯವಾಗಿ ಹೆಚ್ಚಾಗುತ್ತವೆ. ಇದು ನೀರಿನ ನಿಶ್ಚಲತೆಗೆ ಕಾರಣವಾಗಿದೆ.

ಹೂವಿನ ಕುಂಡಗಳು, ಕೂಲರ್‌ಗಳು, ತ್ಯಜಿಸಿದ ಟೈರ್‌ಗಳು ಮತ್ತು ನಿರ್ಮಾಣ ಸ್ಥಳಗಳಲ್ಲಿ ಹೆಚ್ಚಾಗಿ ಕಂಡುಬರುವ ನಿಂತ ನೀರಿನ ಕೊಳಗಳು ಡೆಂಗ್ಯೂ ಹರಡಲು ಕಾರಣವಾದ ಈಡಿಸ್ ಈಜಿಪ್ಟಿ ಸೊಳ್ಳೆಯ ಸಂತಾನೋತ್ಪತ್ತಿ ಸ್ಥಳಗಳಾಗಿ ಕಾರ್ಯನಿರ್ವಹಿಸುತ್ತವೆ.

**ಡೆಂಗ್ಯೂ ಜ್ವರದ ಲಕ್ಷಣಗಳು**

- ಹಠಾತ್ ಅಧಿಕ ಜ್ವರ
- ತೀವ್ರ ತಲೆನೋವು ಮತ್ತು ಕಣ್ಣುಗಳ ಹಿಂದೆ ನೋವು
- ವಾಕರಿಕೆ ಮತ್ತು ವಾಂತಿ
- ಕೀಲುನೋವು ಮತ್ತು ಸ್ನಾಯು ನೋವು
- ಚರ್ಮದಲ್ಲಿ ದದ್ದುಗಳು ಕಾಣಿಸಿಕೊಳ್ಳುವುದು

**ತೀವ್ರವಾದ ಡೆಂಗ್ಯೂ ಪ್ರಕರಣಗಳಲ್ಲಿ:** ಡೆಂಗ್ಯೂ ಹೆಮರಾಜಿಕ್ ಜ್ವರ ಎಂದೂ ಕರೆಯಲ್ಪಡುವ ತೀವ್ರವಾದ ಡೆಂಗ್ಯೂ ರಕ್ತಸ್ರಾವ, ಉಸಿರಾಟದ ತೊಂದರೆ, ಅಂಗಾಂಗ ಹಾನಿಯಂತಹ ಅಪಾಯಕಾರಿ ತೊಡಕುಗಳಿಗೆ ಕಾರಣವಾಗಬಹುದು. ಎಚ್ಚರಿಕೆ ಲಕ್ಷಣಗಳಲ್ಲಿ ನಿರಂತರ ಹೊಟ್ಟೆ ನೋವು, ರಕ್ತ ವಾಂತಿ, ವಸಡುಗಳಲ್ಲಿ ರಕ್ತಸ್ರಾವ, ತೀವ್ರ ಆಯಾಸ ಕೂಡಾ ಸೇರಿವೆ. ಈ ತೀವ್ರ ಲಕ್ಷಣಗಳಲ್ಲಿ ಯಾವುದಾದರೂ ಒಂದು ಕಾಣಿಸಿಕೊಂಡರೂ ಆರೋಗ್ಯ ತಜ್ಞರು ತಕ್ಷಣ ವೈದ್ಯಕೀಯ ಚಿಕಿತ್ಸೆಗೆ ಸಲಹೆ ನೀಡುತ್ತಾರೆ.



**ಸೌಮ್ಯ ಡೆಂಗ್ಯೂ ವಿಗೆ ಚಿಕಿತ್ಸೆ ನೀಡೋದು ಹೇಗೆ?**

**ವಿಶ್ರಾಂತಿ:** ದೇಹವು ಚೇತರಿಸಿಕೊಳ್ಳಲು ಸಾಕಷ್ಟು ವಿಶ್ರಾಂತಿ ಅತ್ಯಗತ್ಯ..?

**ದೇಹವನ್ನು ಹೈಡ್ರೀಕರಿಸಿಡಿ:** ನಿರ್ಜಲೀಕರಣವನ್ನು ತಡೆಗಟ್ಟಲು ಸಾಕಷ್ಟು ದ್ರವಗಳನ್ನು ಕುಡಿಯುವುದು ಬಹಳ ಮುಖ್ಯ.

**ನೋವು ಮತ್ತು ಜ್ವರ ನಿವಾರಣೆ:** ಜ್ವರ ಮತ್ತು ದೇಹದ ನೋವನ್ನು ಕಡಿಮೆ ಮಾಡಲು ಮಾತ್ರೆಯನ್ನು ತಗೆದುಕೊಳ್ಳಿ. ?

**ಮಾನಿಟರಿಂಗ್:** ಯಾವುದೇ ಹದಗೆಡುತ್ತಿರುವ ಲಕ್ಷಣಗಳಿಗಾಗಿ ನಿಕಟವಾಗಿ ಮೇಲ್ವಿಚಾರಣೆ ಮಾಡಿ ಮತ್ತು ಅಗತ್ಯವಿದ್ದರೆ ವೈದ್ಯಕೀಯ ಚಿಕಿತ್ಸೆಯನ್ನು ಪಡೆಯಿರಿ.

**ಡೆಂಗ್ಯೂ ಜ್ವರದಿಂದ ಸುರಕ್ಷಿತವಾಗಿರುವುದು ಹೇಗೆ?**

- ಮನೆಗಳು ಮತ್ತು ಕಚೇರಿಗಳ ಸುತ್ತಲೂ ನೀರು ನಿಲ್ಲದಂತೆ ನೋಡಿಕೊಳ್ಳಿ.
- ನೀರಿನ ಪಾತ್ರೆಗಳನ್ನು ಮುಚ್ಚಿಡಿ.
- ಹೂವಿನ ಕುಂಡಗಳಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳಿ.
- ಸೊಳ್ಳೆ ನಿವಾರಕಗಳು ಮತ್ತು ಸೊಳ್ಳೆ ಪರದೆಗಳನ್ನು ಬಳಸಿ.
- ಉದ್ದ ತೋಳಿನ ಬಟ್ಟೆಗಳನ್ನು ಧರಿಸಿ.

**ತೀವ್ರ ಡೆಂಗ್ಯೂ ವಿಗೆ ಚಿಕಿತ್ಸೆ ನೀಡೋದು ಹೇಗೆ?**

**ಆಸ್ಪತ್ರೆಗೆ ದಾಖಲು:** ತೀವ್ರತರವಾದ ಪ್ರಕರಣಗಳಲ್ಲಿ ನಿಕಟ ಮೇಲ್ವಿಚಾರಣೆ ಮತ್ತು ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲು ಮಾಡಬೇಕಾಗುತ್ತದೆ.

**ಇಂಟ್ರಾವೀನಸ್ ದ್ರವಗಳು:** ವಾಂತಿ, ಅತಿಸಾರದಿಂದಾಗಿ ಕಳೆದುಹೋದ ದ್ರವಗಳನ್ನು ಬದಲಾಯಿಸಲು, ಸರಿಯಾದ ಜಲಸಂಚಯನವನ್ನು ಕಾಪಾಡಿಕೊಳ್ಳಲು ಇಂಟ್ರಾವೀನಸ್ ದ್ರವಗಳನ್ನು ನೀಡಲಾಗುತ್ತದೆ. ಎಲೆಕ್ಟ್ರೋಲೈಟ್ ಅಸಮತೋಲನವನ್ನು ಸರಿಪಡಿಸಲು ಎಲೆಕ್ಟ್ರೋಲೈಟ್ ದ್ರಾವಣ ನೀಡಲಾಗುತ್ತದೆ.

**ರಕ್ತ ವರ್ಗಾವಣೆ:** ಕೆಲವು ಸಂದರ್ಭಗಳಲ್ಲಿ, ತೀವ್ರ ರಕ್ತಸ್ರಾವವಾದರೆ ರಕ್ತ ವರ್ಗಾವಣೆ ಅಗತ್ಯವಾಗಬಹುದು.

# ಮಹಿಳೆಯರಲ್ಲಿ ಕ್ಯಾಲ್ಸಿಯಂ ಕೊರತೆ ಹೆಚ್ಚಾಗಿ ಕಾಡೋದು ಯಾಕೆ

ಕ್ಯಾಲ್ಸಿಯಂ ನಮ್ಮ ದೇಹದಕ್ಕೆ ಬೇಕಾಗಿರುವ ಅಗತ್ಯ ಪೋಷಕಾಂಶಗಳಲ್ಲಿ ಒಂದಾಗಿದೆ. ಕ್ಯಾಲ್ಸಿಯಂ ಮೂಳೆಗಳಿಗೆ ಬಹಳ ಮುಖ್ಯ. ದೇಹದಲ್ಲಿ ಕ್ಯಾಲ್ಸಿಯಂ ಕೊರತೆಯಾದರೆ ನಿಮಗೆ ಆಗಾಗ್ಗೆ ದಣಿವು, ಸ್ನಾಯು ಸೆಳೆತ ಅಥವಾ ಮೂಳೆಗಳು ದುರ್ಬಲವಾಗಲಾರಂಭಿಸುತ್ತದೆ. ಗರ್ಭಧಾರಣೆ, ಋತುಚಕ್ರ, ಹಾಲುಣಿಸುವಿಕೆ ಮತ್ತು ಋತುಬಂಧದಂತಹ ದೈಹಿಕ ಬದಲಾವಣೆಗಳಿಂದಾಗಿ ದೇಹದ ಕ್ಯಾಲ್ಸಿಯಂ ಅವಶ್ಯಕತೆ ಹೆಚ್ಚಿರುವುದರಿಂದ ಮಹಿಳೆಯರಲ್ಲಿ ಕ್ಯಾಲ್ಸಿಯಂ ಕೊರತೆ ವಿಶೇಷವಾಗಿ ಕಂಡುಬರುತ್ತದೆ ಎಂದು ಡಾ. ಶಾಲಿನಿ ಸಿಂಗ್ ಹೇಳುತ್ತಾರೆ. ಕ್ಯಾಲ್ಸಿಯಂ ಕೊರತೆಯನ್ನು ಸಮಯಕ್ಕೆ ಪೂರೈಸದಿದ್ದರೆ, ಅದು ಗಂಭೀರ ಮೂಳೆ ಸಮಸ್ಯೆಗಳನ್ನು ಉಂಟುಮಾಡಬಹುದು.

**ಮಹಿಳೆಯರಲ್ಲಿ ಕ್ಯಾಲ್ಸಿಯಂ ಕೊರತೆಗೆ ಕಾರಣಗಳು**

**ಹಾರ್ಮೋನುಗಳ ಬದಲಾವಣೆಗಳು:** ಮುಟ್ಟಿನ ಸಮಯದಲ್ಲಿ, ಗರ್ಭಧಾರಣೆ ಮತ್ತು ಋತುಬಂಧದ ಸಮಯದಲ್ಲಿ, ಈಸ್ಟ್ರೋಜೆನ್ ಮಟ್ಟಗಳು ಕಡಿಮೆಯಾಗುತ್ತವೆ, ಇದು ಮೂಳೆಗಳಿಂದ ಕ್ಯಾಲ್ಸಿಯಂ ಬಿಡುಗಡೆಯಾಗಲು ಕಾರಣವಾಗುತ್ತದೆ.?

**ಅನಿಯಮಿತ ಆಹಾರ:** ಹೆಚ್ಚಿನ ಮಹಿಳೆಯರು ತೂಕ ಇಳಿಸುವ ಅಥವಾ ಆಹಾರ ಪದ್ಧತಿಯಲ್ಲಿ ಹಾಲು, ಚೀಸ್, ಮೊಸರಿನಂತಹ ಕ್ಯಾಲ್ಸಿಯಂ ಭರಿತ ಆಹಾರಗಳನ್ನು ಸೇವಿಸುವುದಿಲ್ಲ.




**ಸೂರ್ಯನ ಬೆಳಕಿನ ಕೊರತೆ:** ವಿಟಮಿನ್ ಡಿ ಕೊರತೆಯು ಕ್ಯಾಲ್ಸಿಯಂ ಹೀರಿಕೊಳ್ಳುವಿಕೆಯನ್ನು ತಡೆಯುತ್ತದೆ.

**ದೈಹಿಕ ಚಟುವಟಿಕೆಯ ಕೊರತೆ:** ವ್ಯಾಯಾಮದ ಕೊರತೆಯಿಂದಾಗಿ ಮೂಳೆಗಳು ದುರ್ಬಲಗೊಳ್ಳಲು ಪ್ರಾರಂಭಿಸುತ್ತವೆ.

**ಕ್ಯಾಲ್ಸಿಯಂ ಭರಿತ ಆಹಾರವನ್ನು ಸೇವಿಸಿ:** ನೀವು ಕ್ಯಾಲ್ಸಿಯಂ ಕೊರತೆಯನ್ನು ನಿವಾರಿಸಬೇಕಾದರೆ ನಿಮ್ಮ ದೈನಂದಿನ ಆಹಾರದಲ್ಲಿ ಹಾಲು, ಮೊಸರು, ಪನೀರ್, ಮಜ್ಜಿಗೆ, ತೋಫು, ಎಳ್ಳು, ಸೋಯಾಬೀನ್, ಹಸಿರು ಎಲೆ ತರಕಾರಿಗಳು ಇತ್ಯಾದಿಗಳನ್ನು ಸೇರಿಸಿ. ಬಾದಾಮಿ, ಅಂಜೂರ, ತೆಂಗಿನಕಾಯಿ, ಚಿಯಾ ಬೀಜಗಳು ಸಹ ಕ್ಯಾಲ್ಸಿಯಂನ ಉತ್ತಮ ಮೂಲಗಳಾಗಿವೆ.

**ವಿಟಮಿನ್ ಡಿ ತೆಗೆದುಕೊಳ್ಳಲು ಮರೆಯಬೇಡಿ:** ವಿಟಮಿನ್ ಡಿ ದೇಹದಲ್ಲಿ ಕ್ಯಾಲ್ಸಿಯಂ ಕೊರತೆಯನ್ನು ನಿವಾರಿಸುತ್ತದೆ. ಬೆಳಿಗ್ಗೆ 15 ನಿಮಿಷಗಳ ಕಾಲ ಸೂರ್ಯನ ಬಿಸಲಿಗೆ ನಿಲ್ಲಿ. ಅಗತ್ಯವಿದ್ದರೆ, ವೈದ್ಯರನ್ನು ಸಂಪರ್ಕಿಸಿದ ನಂತರ ಪೂರಕಗಳನ್ನು ತೆಗೆದುಕೊಳ್ಳಿ.

**ನಿಯಮಿತ ವ್ಯಾಯಾಮ ಮಾಡಿ:** ನಿಯಮಿತ ನಡಿಗೆ, ಯೋಗ, ಸ್ಟ್ರೆಚಿಂಗ್ ಮತ್ತು ಲಘು ತೂಕ ಎತ್ತುವ ವ್ಯಾಯಾಮಗಳು ಬಲವಾದ ಮೂಳೆಗಳನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ.

**ಕೆಫೀನ್ ಮತ್ತು ತಂಪು ಪಾನೀಯಗಳಿಂದ ದೂರವಿರಿ:** ತುಂಬಾ ಚಹಾ, ಕಾಫಿ, ಸೋಡಾ ದೇಹದಿಂದ ಕ್ಯಾಲ್ಸಿಯಂ ಅನ್ನು ತೆಗೆದುಹಾಕುವ ಕೆಲಸ ಮಾಡುತ್ತದೆ. ಹಾಗಾಗಿ ಕೆಫೀನ್ ಭರಿತ ಪಾನೀಯಗಳನ್ನು ಕಡಿಮೆ ಮಾಡಿ.

**ಪೂರಕಗಳನ್ನು ಅವಲಂಬಿಸಿ:** ಆಹಾರವು ಅಗತ್ಯವನ್ನು ಪೂರೈಸದಿದ್ದರೆ, ವೈದ್ಯರ ಸಲಹೆಯ ಮೇರೆಗೆ ಕ್ಯಾಲ್ಸಿಯಂ ಮತ್ತು ವಿಟಮಿನ್ ಡಿ ಪೂರಕಗಳನ್ನು ತೆಗೆದುಕೊಳ್ಳಿ.

**ಸ್ನಾಯುಗಳಿಗೆ ಹಲ್ಲುಗಳಿಗೂ ಕ್ಯಾಲ್ಸಿಯಂ ಮುಖ್ಯ:** ಮಹಿಳೆಯರಿಗೆ ಮೂಳೆಗಳನ್ನು ಬಲಪಡಿಸಲು ಮಾತ್ರವಲ್ಲದೆ ಸ್ನಾಯುಗಳು, ಹಲ್ಲುಗಳು, ಹಾರ್ಮೋನ್ ಸಮತೋಲನ, ನರಗಳ ಕಾರ್ಯಕ್ಕೂ ಕ್ಯಾಲ್ಸಿಯಂ ಮುಖ್ಯವಾಗಿದೆ. ಕ್ಯಾಲ್ಸಿಯಂ ಕೊರತೆಯನ್ನು ನಿವಾರಿಸಬೇಕಾದರೆ ಇಂದಿನಿಂದಲೇ ನಿಮ್ಮ ಆಹಾರ, ಜೀವನಶೈಲಿಯಲ್ಲಿ ಬದಲಾವಣೆಗಳನ್ನು ಮಾಡಿ, ಆರೋಗ್ಯಕರವಾಗಿ ಶಕ್ತಿಯುತವಾಗಿರಿಸಿ.




# ಉದ್ದಕ್ಕಿರುವ ಜನರಲ್ಲಿ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳುವ ಸಾಧ್ಯತೆ ಹೆಚ್ಚಂತೆ

ಪುರುಷನಾಗಿರಲಿ, ಮಹಿಳೆಯಾಗಿರಲಿ, ಎಲ್ಲರೂ ಎತ್ತರವಾಗಿರಲು ಬಯಸುತ್ತಾರೆ. ಆದರೆ ಸರಾಸರಿ ಎತ್ತರವನ್ನು ಇಷ್ಟಪಡುವ ಜನರಿದ್ದಾರೆ. ಎತ್ತರ ಎನ್ನುವುದು ಜೆನೆಟಿಕ್ಸ್, ಹಾರ್ಮೋನುಗಳು, ಜೀವನಶೈಲಿಯನ್ನು ಅವಲಂಬಿಸಿರುತ್ತದೆ. ಇತ್ತೀಚೆಗೆ, ಒಂದು ಅಧ್ಯಯನವನ್ನು ನಡೆಸಲಾಗಿದ್ದು, ಎತ್ತರದ ಜನರು 100ಕ್ಕೂ ಹೆಚ್ಚು ಕಾಯಿಲೆಗಳಿಗೆ ಗುರಿಯಾಗುವ ಅಪಾಯದಲ್ಲಿದ್ದಾರೆ ಎಂದು ತಿಳಿಸಲಾಗಿದೆ. ಎತ್ತರವಾಗಿರುವುದು ನಿಧಾನ ಹೃದಯ ಬಡಿತ, ಉಬ್ಬಿರುವ ರಕ್ತನಾಳಗಳಿಗೆ ಸಂಬಂಧಿಸಿದ ಕಾಯಿಲೆಗಳು ನರ ಹಾನಿ, ಹೊಟ್ಟೆಯ ಹುಣ್ಣುಗಳ ಅಪಾಯವನ್ನು ಹೆಚ್ಚಿಸುತ್ತದೆ ಎಂದು ಸಂಶೋಧಕರು ಕಂಡುಕೊಂಡಿದ್ದಾರೆ.

> **ಸಂಶೋಧನೆಯ ಪ್ರಕಾರ, 5.9 ಅಡಿಗಿಂತ ಹೆಚ್ಚು ಎತ್ತರವಿರುವ ಪುರುಷರು ಮತ್ತು 5.3 ಅಡಿಗಿಂತ ಹೆಚ್ಚು ಎತ್ತರವಿರುವ ಮಹಿಳೆಯರು, ಬಹಳ ಬೇಗನೇ ಕಾಯಿಲೆಗಳಿಗೆ ತುತ್ತಾಗುವ ಸಾಧ್ಯತೆ ಹೆಚ್ಚು ಎಂದು ಸಂಶೋಧಕರು ತಮ್ಮ ವರದಿಯಲ್ಲಿ ತಿಳಿಸಿದ್ದಾರೆ.**

**2.5 ಲಕ್ಷ ಜನರ ಮೇಲೆ ಅಧ್ಯಯನ ನಡೆಸಲಾಗಿದೆ:** ಈ ಸಂಶೋಧನೆಯಲ್ಲಿ 2.5 ಲಕ್ಷ ಪುರುಷರು ಮತ್ತು ಮಹಿಳೆ ಯರನ್ನು ಸೇರಿಸಿಕೊಳ್ಳಲಾಗಿತ್ತು. ಸಂಶೋಧಕರ ಪ್ರಕಾರ, 5 ಅಡಿ 9 ಇಂಚು ಅಥವಾ ಅದಕ್ಕಿಂತ ಹೆಚ್ಚಿನ ಎತ್ತರವಿರುವ ಪುರುಷರು ಮತ್ತು ಮಹಿಳೆಯರಲ್ಲಿ ಈ ಅಪಾಯ ಕಂಡುಬಂದಿದೆ. ಈ ಜನರಿಗೆ ಚರ್ಮ-ಮೂಳೆ ಸೋಂಕು, ರಕ್ತ ಹೆಪ್ಪುಗಟ್ಟುವಿಕೆ, ಶಿಲೀಂಧ್ರ ಸೋಂಕಿನ ಅಪಾಯವೂ ಹೆಚ್ಚಿತ್ತು. ಹೆಚ್ಚಿನ ತೂಕವನ್ನು ಎತ್ತುವುದರಿಂದ ಮೂಳೆಗಳು, ಸ್ನಾಯುಗಳು ಮತ್ತು ಕಾಲುಗಳ ಮೇಲೆ ಹೆಚ್ಚಿನ ಒತ್ತಡ ಉಂಟಾಗುತ್ತದೆ ಎಂದು ಸಂಶೋಧಕರು ಹೇಳುತ್ತಾರೆ, ಇದು ಎತ್ತರದ ಜನರಲ್ಲಿ ಪರಿಧಮ ನಿಯ ಹೃದಯ ಕಾಯಿಲೆ, ಅಧಿಕ ರಕ್ತದೊತ್ತಡ, ಅಧಿಕ ಕೊಲೆಸ್ಟ್ರಾಲ್ ಸೇರಿದಂತೆ ಹಲವು ಕಾಯಿಲೆಗಳ ಅಪಾಯವನ್ನು ಹೆಚ್ಚಿಸುತ್ತದೆ. ಈ ಅಪಾಯವು 5 ಅಡಿ 9 ಇಂಚು, ಅದಕ್ಕಿಂತ ಹೆಚ್ಚಿನ ಎತ್ತರವಿರುವ ಪುರುಷರು, 5 ಅಡಿ 3 ಇಂಚು, ಅದಕ್ಕಿಂತ ಹೆಚ್ಚಿನ ಎತ್ತರವಿರುವ ಮಹಿಳೆಯರಲ್ಲಿರುತ್ತದೆ.



**ಮೂಳೆ-ಹೊಟ್ಟೆ ಸೋಂಕು ಕೂಡ ಸಂಭವಿಸಬಹುದು:** ರಾಕಿ ಮೌಂಟೇನ್ ಪ್ರಾದೇಶಿಕ ವಿಎ ವೈದ್ಯಕೀಯ ಕೇಂದ್ರದ ವಿಜ್ಞಾನಿಗಳು ಎತ್ತರದ ಜನರು ಏಕೆ ಹೆಚ್ಚಿನ ಕಾಯಿಲೆಗಳಿಂದ ಬಳಲುತ್ತಿದ್ದಾರೆ ಎಂಬುದರ ಕುರಿತು ಹೆಚ್ಚಿನ ಮಾಹಿತಿಯನ್ನು ನೀಡಲಿಲ್ಲ...ಆದರೆ ಕೆಲವು ತಜ್ಞರು ದೇಹವನ್ನು ಆರೋಗ್ಯವಾಗಿಡಲು ಸರಿಯಾದ ರಕ್ತ ಪಂಪ್ ಮಾಡುವುದು ಬಹಳ ಮುಖ್ಯ ಎಂದು ಹೇಳುತ್ತಾರೆ. ಈಗ, ಅಂತಹ ಪರಿಸ್ಥಿತಿಯಲ್ಲಿ, ಎತ್ತರದ ಜನರ ದೇಹವು ರಕ್ತವನ್ನು ಹೆಚ್ಚು ದೂರಕ್ಕೆ ಪಂಪ್ ಮಾಡುತ್ತದೆ.



**ಸಂಶೋಧಕರ ಪ್ರಕಾರ:** ಸಂಶೋಧಕರು ತಮ್ಮ ಸಂಶೋಧನೆಗಳನ್ನು PLOS ಜೆನೆಟಿಕ್ಸ್‌ನಲ್ಲಿ ಪ್ರಕಟಿಸಿದ್ದಾರೆ ಮತ್ತು ಎತ್ತರದ ಜನರಿಗೆಅನಿಯಮಿತ ಹೃದಯ ಬಡಿತ ಮತ್ತು ಉಬ್ಬಿರುವ ರಕ್ತನಾಳಗಳಿಗೆ ಸಂಬಂಧಿಸಿದ ಕಾಯಿಲೆಗಳು ಬರುವ ಅಪಾಯ ಹೆಚ್ಚು ಎಂದು ವರದಿ ಮಾಡಿದ್ದಾರೆ. ಈ ಕಾಯಿಲೆಗಳಲ್ಲಿ ಬಾಹ್ಯ ನರರೋಗವೂ ಸೇರಿದೆ. ಇದು ಕೈ ಮತ್ತು ಪಾದಗ ಳಂತಹ ದೇಹದ ಭಾಗಗಳ ನರಗಳು ಹಾನಿಗೊಳಗಾದ ಸ್ಥಿತಿಯಾಗಿದೆ.

### ಎತ್ತರವಿರುವ ಜನರಿಗೆ ಕ್ಯಾನ್ಸರ್ ಬರುವ ಅಪಾಯ ಹೆಚ್ಚಂತೆ!

**ವಿಶ್ವ ಕ್ಯಾನ್ಸರ್ ಸಂಶೋಧನಾ ನಿಧಿಯ ಪ್ರಕಾರ, ಎತ್ತರ ಮತ್ತು ಕ್ಯಾನ್ಸರ್ ಬರುವ ಅಪಾಯದ ನಡುವೆ ಬಲವಾದ ಸಂಬಂಧವಿದೆ. ಸಾಮಾನ್ಯ ಎತ್ತರದ ವ್ಯಕ್ತಿಗೆ ಹೋಲಿಸಿದರೆ ವ್ಯಕ್ತಿಯ ಎತ್ತರವು ಕೊಲೊನ್, ಗರ್ಭಕೋಶ (ಎಂಡೊಮೆಟ್ರಿಯಮ್), ಅಂಡಾಶಯ, ಪ್ರಾಸ್ಟೇಟ್, ಮೂತ್ರಪಿಂಡ ಮತ್ತು ಸ್ತನ ಕ್ಯಾನ್ಸರ್ ಬರುವ ಅಪಾಯವನ್ನು ಹೆಚ್ಚಿಸುತ್ತದೆ ಎಂದು ಸಂಶೋಧನೆ ಹೇಳುತ್ತದೆ. ಯುಕೆ ಮಿಲಿಯನ್ ಮಹಿಳಾ ಅಧ್ಯಯನದಲ್ಲಿ, ವಿಜ್ಞಾನಿಗಳು 17 ಕ್ಯಾನ್ಸರ್‌ಗಳಲ್ಲಿ 15 ಅನ್ನು ಪರೀಕ್ಷಿಸಿದರು. ಎತ್ತರವಿರುವ ಜನರಿಗೆ ಕ್ಯಾನ್ಸರ್ ಬರುವ ಅಪಾಯ ಹೆಚ್ಚು ಎಂದು ಕಂಡುಬಂದಿದೆ.**

**ಈ ಸಮಸ್ಯೆಗಳು ಕೂಡ ಕಾಣಿಸಿಕೊಳ್ಳಬಹುದು:** ಈ ಕಾಯಿಲೆ ಇರುವ ಜನರು ದೇಹದ ಯಾವುದೇ ಭಾಗದಲ್ಲಿ ಮರ ಗಟ್ಟುವಿಕೆ, ಜುಮ್ಮೆನಿಸುವಿಕೆ ಮತ್ತು ನೋವನ್ನು ಅನುಭವಿಸಬಹುದು. ಸಾಮಾನ್ಯವಾಗಿ, ಎತ್ತರದ ಜನರಿಗೆ ಹೆಚ್ಚಿನ ಕಾಯಿಲೆಗಳು ಇರಬಹುದು. ಎತ್ತರವು ಮೂಳೆ-ಹೊಟ್ಟೆ ಸೋಂಕು, ಹೊಟ್ಟೆಯ ಹುಣ್ಣುಗಳ ಅಪಾಯವನ್ನು ಹೆಚ್ಚಿಸುತ್ತದೆ ಎಂದು ವಿಜ್ಞಾನಿಗಳು ಕಂಡುಕೊಂಡಿದ್ದಾರೆ.

**ವ್ಯಕ್ತಿಯ ಎತ್ತರ ನಿರ್ಧಾರವಾಗುವುದು:** ಒಬ್ಬ ವ್ಯಕ್ತಿಯ ಎತ್ತರವನ್ನು ವಿವಿಧ ಅಂಶಗಳಿಂದ ನಿರ್ಧರಿಸಲಾಗುತ್ತದೆ, ಅದರಲ್ಲಿ ಜೆನೆಟಿಕ್ಸ್ ಅಂಶಗಳು ಅವರನ್ನು ಎತ್ತರ ಅಥವಾ ಕುಳ್ಳ ಎಂದು ಹೇಳುತ್ತವೆ. ಆದರೆ ಜೀವನಶೈಲಿಯೂ ಸಹ ಬಹಳ ಮುಖ್ಯ. ಯಾರೊಬ್ಬರ ಆಹಾರ ಮತ್ತು ಜೀವನಶೈಲಿ ಉತ್ತಮವಾಗಿದ್ದರೆ ಅವರು ಅಂತಹ ಕಾಯಿಲೆಗಳಿಗೆ ತುತ್ತಾಗುವ ಸಾಧ್ಯತೆ ಕಡಿಮೆ.

**ಈ ಕೆಲವೊಂದು ಕಾಯಿಲೆಗಳಿಂದಲೂ ಕೂಡ ಹೀಗಾಗುತ್ತವೆ:** ರಕ್ತ ಹೆಪ್ಪುಗಟ್ಟುವಿಕೆ, ಮೂಳೆಗಳ ಸೋಂಕು, ನರಗಳಲ್ಲಿ ಹಾನಿ ಕಾಣಿಸಿಕೊಂಡರೆ ತಲೆತಿರುಗುವಿಕೆ, ಮೆದುಳಿನ ನರ ಹಾನಿ, ಊತ ಮತ್ತು ಉರಿಯೂತ, ಪಾದದ ಹುಣ್ಣುಗಳು, ಚರ್ಮದ ಹುಣ್ಣುಗಳು, ಕಾಲ್ಬೆರಳಿನ ಆಕಾರದ ವಿರೂಪ, ವೆರಿಕೋಸ್ ರಕ್ತನಾಳಗಳಲ್ಲಿನ ಸಮಸ್ಯೆಗಳು, ಕಾಲು ನೋವು, ಉಗುರುಗಳಲ್ಲಿ ಶಿಲೀಂಧ್ರ ಸೋಂಕು.

# ರಟ್ಟೆಹಳ್ಳಿ ಪ.ಪಂ ಚುನಾವಣೆ ನೀತಿ ಸಂಹಿತೆ ಜಾರಿ: ವೆಚ್ಚ:1 ಲಕ್ಷಕ್ಕೆ ಮಿತಿ

• ಉದಯವಾಹಿನಿ ಹಾವೇರಿ

ಜಿಲ್ಲೆಯ ರಟ್ಟಿಹಳ್ಳಿ ಪಟ್ಟಣ ಪಂಚಾಯಿತಿ ಚುನಾವಣೆ ದಿನಾಂಕ ಘೋಷಣೆಯಾಗಿದ್ದು, ಜುಲೈ 29ರಿಂದ ಆಗಸ್ಟ್ 20ರವರೆಗೆ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರಲಿದೆ. ಈ ಅವಧಿಯಲ್ಲಿ ಯಾರಾದರೂ ನೀತಿ ಸಂಹಿತೆ ಉಲ್ಲಂಘಿಸಿದರೆ, ಅವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದರು.

'ಚುನಾವಣಾ ನೀತಿ ಸಂಹಿತೆಯನ್ನು ಎಲ್ಲರೂ ಕಟ್ಟುನಿಟ್ಟಾಗಿ ಪಾಲಿಸಬೇಕು. ಚುನಾವಣೆ ಸುಗಮ ರೀತಿಯಲ್ಲಿ ನಡೆಸಲು ಸಹಕಾರ ನೀಡಬೇಕು' ಎಂದರು. ರಟ್ಟಿಹಳ್ಳಿ ಪ. ಪಂಚಾಯಿತಿ ವ್ಯಾಪ್ತಿಯಲ್ಲಿ 5,869 ಪುರುಷರು, 5,842 ಮಹಿಳೆಯರು ಹಾಗೂ ಇತರೆ ಒಬ್ಬರು ಸೇರಿ 11,712 ಮತದಾರರಿದ್ದಾರೆ. ಈ ಚುನಾವಣೆಯಲ್ಲಿ ಇವಿಎಂ



ಉದಯವಾಹಿನಿ ಚಿತ್ರ

ಮತಯಂತ್ರಗಳನ್ನು ಬಳಸಲಾಗುತ್ತಿದೆ. ಮತಯಂತ್ರಗಳನ್ನು ಪ್ರಥಮ ಹಂತದ ತಪಾಸಣೆ ನಡೆಸಿ ತಹಶೀಲ್ದಾರ್ ಸುಪರ್ದಿಗೆ ಕಳುಹಿಸಲಾಗುವುದು. ಈ ಚುನಾವಣೆಯಲ್ಲಿ ವಿ.ವಿ.ಪ್ಯಾಟ್ ಇರುವುದಿಲ್ಲ, ಕಂಟ್ರೋಲ್ ಯೂನಿಟ್ ಮತ್ತು ಬ್ಯಾಲೆಟ್ ಯೂನಿಟ್ ಮಾತ್ರ ಬಳಸಲಾಗುವುದು' ಎಂದರು. ಪ್ರಥಮ ಹಂತದ ತಪಾಸಣೆ ನಡೆಸಿ ತಹಶೀಲ್ದಾರ್ ಸುಪರ್ದಿಗೆ ಕಳುಹಿಸಲಾಗುವುದು. ಈ ಚುನಾವಣೆಯಲ್ಲಿ ವಿ.ವಿ.ಪ್ಯಾಟ್ ಇರುವುದಿಲ್ಲ. ಕಂಟ್ರೋಲ್ ಯೂನಿಟ್ ಮತ್ತು ಬ್ಯಾಲೆಟ್ ಯೂನಿಟ್ ಮಾತ್ರ ಬಳಸಲಾಗುವುದು' ಎಂದರು.

ಜುಲೈ 29ರಂದು ಚುನಾವಣಾ ಅಧಿಸೂಚನೆ ಹೊರಡಿಸಲಾಗುವುದು. ನಂತರ, ಆಗಸ್ಟ್ 5ರವರೆಗೆ ನಾಮಪತ್ರ ಸಲ್ಲಿಸಲು ಅವಕಾಶವಿದೆ. ಚುನಾವಣೆಗೆ ಸ್ಪರ್ಧಿಸುವ ಸಾಮಾನ್ಯ ಅಭ್ಯರ್ಥಿಯು 1 ಸಾವಿರ ಹಾಗೂ ಹಿಂದುಳಿದ ವರ್ಗ, ಪರಿಶಿಷ್ಟ ಸಮುದಾಯ, ಮಹಿಳಾ ಅಭ್ಯರ್ಥಿಯು 500 ಮೊತ್ತದ ಠೇವಣಿ ಸಲ್ಲಿಸಬೇಕು ಎಂದರು. ಚುನಾವಣೆಗೆ ಸ್ಪರ್ಧಿಸುವ ಅಭ್ಯರ್ಥಿಗಳು ಗರಿಷ್ಠ 1 ಲಕ್ಷ ವೆಚ್ಚಕ್ಕೆ ಅವಕಾಶವಿದೆ. ರಟ್ಟಿಹಳ್ಳಿ ಕೃಷಿ ಇಲಾಖೆ ಕಟ್ಟಡದಲ್ಲಿ ಚುನಾವಣಾ ಕಚೇರಿ ಆರಂಭಿಸಲಾಗಿದ್ದು, ಅಭ್ಯರ್ಥಿಗಳು ಕಚೇರಿಯಲ್ಲಿ ನಾಮಪತ್ರ ಸಲ್ಲಿಸಬಹುದು ಎಂದು ಹೇಳಿದರು.

**ನೀತಿ ಸಂಹಿತೆ ಉಲ್ಲಂಘಿಸಿದರೆ ಕ್ರಮ**

**ಮಸ್ಟರಿಂಗ್-ಡಿಮಸ್ಟರಿಂಗ್, ಮತ ಎಣಿಕೆ:** ರಟ್ಟಿಹಳ್ಳಿಯ ತರಳಬಾಳು ಆಂಗ್ಲ ಮಾಧ್ಯಮ ಪ್ರಾಥಮಿಕ ಮತ್ತು ಪ್ರೌಢಶಾಲೆಯಲ್ಲಿ ಮಸ್ಟರಿಂಗ್, ಡಿ-ಮಸ್ಟರಿಂಗ್ ಹಾಗೂ ಮತ ಎಣಿಕೆ ಕಾರ್ಯ ಜರುಗಲಿದೆ ಎಂದರು.

## ವಡಗೇರಾದಲ್ಲಿ ಸಂಭ್ರಮದ ನಾಗರ ಪಂಚಮಿ ಹಬ್ಬ ಆಚರಣೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ವಡಗೇರಾ

ನಾಗರ ಪಂಚಮಿ ಹಬ್ಬವನ್ನು ಮಹಿಳೆಯರು ಮಕ್ಕಳು ಸೇರಿದಂತೆ ಅತ್ಯಂತ ಸಡಗರ ಸಂಭ್ರಮದಿಂದ ಯಾದಗಿರಿ ನಗರದೆಲ್ಲೆಡೆ ನಾಗಮೂರ್ತಿಗೆ ಹಾಲೆರೆದು ಪೂಜೆ ಸಲ್ಲಿಸಿ ನಮ್ಮ ನಾಡು ಸುಭಿಕ್ಷವಾಗಿರಲಿ ಮಳೆ ಬೆಳೆ ಉತ್ತಮವಾಗಲಿ ಎಂದು ವಡಗೇರಾ ಪಟ್ಟಣದ ಕಂಬರಾಯ ದೇವಸ್ಥಾನದ ಆವರಣದಲ್ಲಿರುವ ನಾಗಮೂರ್ತಿಗೆ ಮುತ್ತೈದೆ ಮಹಿಳೆಯರು ಮಕ್ಕಳು ನನ್ನ ಪಾಲು ನನ್ನ ಮನೆಯವರ ಪಾಲು ನನ್ನ ಅಪ್ಪನ ಪಾಲು ನನ್ನ ತಮ್ಮನ ಪಾಲು ನನ್ನ ಅಣ್ಣನ ಪಾಲು ಎಂದು ಹಾಲೇರದು ನಾಗದೇವರಲ್ಲಿ ಪ್ರಾರ್ಥಿಸಿದರು. ನೂತನವಾಗಿ ಮದುವೆಯಾಗಿ ಗಂಡನ ಮನೆಗೆ ಹೋದ ಸಹೋದರಿಯರನ್ನು ಸಹೋದರರು ಹೋಗಿ ತವರಿಗೆ ಕರೆದುಕೊಂಡು ಬರುವ ಸಂಪ್ರದಾಯ ವಿಶೇಷವಾದದ್ದು ಮನೆಯಲ್ಲಿ ವಿವಿಧ ಬಗೆಯ ಸಿಹಿ ತಿನಿಸುಗಳಾದ ತಂಬಿಟ್ಟು, ಶೇಂಗಾ ಹುಂಡಿ, ಹೆಸರು ಹುಂಡಿ, ಕರ್ಜಿಕಾಯಿ, ಚಿಗಳಿ, ಕೊಬ್ಬರಿ ಬೆಲ್ಲದ ಹುಂಡಿ, ಕಡಲೆ, ಉರಿದ ಅರಳು ಹಾಲನ್ನು ನಾಗದೇವತೆಗೆ ನೈವಿದ್ಯ ರೂಪದಲ್ಲಿ ಅರ್ಪಿಸಿ ತವರು ಮನೆ ಮತ್ತು ಗಂಡನ ಮನೆಯವರು ಬಂಧುಗಳು ಸುಖ ಶಾಂತಿ ಸಮೃದ್ಧಿಯಿಂದ ಇರಲಿ ಎಂದು ಮಹಿಳೇಯರು ಹಾರೈಸಿದರು. ಯುವತಿಯರು ಮನೆಯ ಮುಂದೆ ಬಣ್ಣ ಬಣ್ಣದ ರಂಗೋಲಿಗಳನ್ನು ಹಾಕಿ ಜೋಕಾಲಿ ಆಟ ಹಾಡಿದರೆ ಚಿಕ್ಕ ಮಕ್ಕಳು ಕೊಬ್ಬರಿ ಆಟ ಆಡಿ ನಾಗರ ಪಂಚಮಿ ಹಬ್ಬವನ್ನು ಅತ್ಯಂತ ಸಂಭ್ರಮ ಸಡಗರದಿಂದ ಆಚರಿಸಿ ಸಂಭ್ರಮಿಸದರು.

## ಹುಚ್ಚುನಾಯಿ ರೋಗ ನಿರೋಧಕ ಲಸಿಕಾ ಕಾರ್ಯಕ್ರಮ

• ಉದಯವಾಹಿನಿ ವಿಜಯಪುರ

ವಿಜಯಪುರ ಉತ್ತರ ರೋಟರ ಸಂಸ್ಥೆ ಹಾಗೂ ಶ್ರೀ ರಕ್ಷಾ ಮುದ್ದು ನಾಯಿಗಳ ಚಿಕಿತ್ಸಾ ಕೇಂದ್ರ ಇವರ ಸಹಯೋಗದಲ್ಲಿ ನಾಯಿಗಳಿಗೆ ಮಾರಕವಾದ ಹುಚ್ಚು ನಾಯಿ ರೋಗ ನಿರೋಧಕ ಲಸಿಕಾ ಕಾರ್ಯಕ್ರಮವನ್ನು ವಿಜಯಪುರದ ರಾಘವೇಂದ್ರ ಕಾಲೋನಿಯಲ್ಲಿರುವ ಶ್ರೀರಕ್ಷಾ ಮುದ್ದು ಪ್ರಾಣಿಗಳ ಚಿಕಿತ್ಸಾ ಹಾಗೂ ಸಲಹಾ ಕೇಂದ್ರದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು. ಬೆಳಿಗ್ಗೆ 9.30ರಿಂದ ಸಂಜೆ 5.30ರವರೆಗೆ ಮುದ್ದು ನಾಯಿಗಳಿಗೆ ಉಚಿತವಾಗಿ ಹುಚ್ಚುನಾಯಿ ರೋಗ ನಿರೋಧಕ ಲಸಿಕೆ ಹಾಕುವ ಕಾರ್ಯಕ್ರಮ ನಡೆಯಿತು. ಸುಮಾರು 70ಕ್ಕೂ ಹೆಚ್ಚು ಸಾಕಿದ ಹಾಗೂ ಹಿಡಿದುಕೊಂಡು ಬಂದ ಬೀದಿ ನಾಯಿಗಳಿಗೆ ಲಸಿಕೆ ಹಾಕಿ ಮಾರಕ ರೋಗ ದಿಂದ ನಾಯಿಗಳನ್ನು ರಕ್ಷಿಸಿಕೊಳ್ಳುವ ಕುರಿತು ಹಿರಿಯ ಪಶುವೈದ್ಯ ಹಾಗೂ ರೋಟರಿಯ ಹಿಂದಿನ ಗವರ್ನರ್ ಆದ ಡಾ. ಪ್ರಾಣೇಶ ಜಹಗೀರದಾರ ಮಾಹಿತಿ ನೀಡಿದರು.

## ಮಾದಕವಸ್ತು ಮಾರಾಟ: ಮೂವರ ಬಂಧನ

• ಉದಯವಾಹಿನಿ, ಬೆಳಗಾವಿ

ಇಲ್ಲಿನ ಸಮರ್ಥ ನಗರದ ಏಳನೇ ಕ್ರಾಸ್ ಹತ್ತಿರ ಸಾರ್ವಜನಿಕ ಸ್ಥಳದಲ್ಲಿ ಮಾದಕವಸ್ತು ಮಾರಾಟ ಮಾಡುತ್ತಿದ್ದ ಮೂವರು ಆರೋಪಿಗಳನ್ನು ಮಾರ್ಕೆಟ್ ಠಾಣೆ ಪೊಲೀಸರು ಬಂಧಿಸಿದ್ದಾರೆ. ಸಮರ್ಥ ನಗರದ ಅನಿಕೇತ ರಾಮಾ ಲೋಹಾರ(27), ತಾಲ್ಲೂಕಿನ ಮಚ್ಚೆಯ ಅಲ್ತಮಶ್ ಅಯೂಬ್‌ಖಾನ್ ಪಠಾಣ (25), ಸದ್ದಾಮ್ ಹುಸೇನ್ ಸರ್ದಾರ್ ಪಠಾಣ (24) ಬಂಧಿತರು. ಅವರಿಂದ 48,400 ಮೌಲ್ಯದ 60.36 ಗ್ರಾಂ ಹೆರಾಯಿನ್, 1 ಲಕ್ಷ ಮೌಲ್ಯದ ಆಟೋರಿಕ್ಷಾ ವಶಕ್ಕೆ ಪಡೆಯಲಾಗಿದೆ.

## ಫಿಜಿಯೋಥೆರಪಿಸ್ಟ್ ಹುದ್ದೆಗೆ ಅರ್ಜಿ

• ಉದಯವಾಹಿನಿ, ಕುಷ್ಟಗಿ

ಇಲ್ಲಿಯ ಕ್ಷೇತ್ರ ಶಿಕ್ಷಣಾಧಿಕಾರಿ ಹಾಗೂ ಸಮಗ್ರ ಶಿಕ್ಷಣ ಅಭಿಯಾನದ ಪದನಿಮಿತ್ತ ಯೋಜನಾಧಿಕಾರಿಗಳ ಕಚೇರಿಯಿಂದ ಅಂಗವಿಕಲ ಮಕ್ಕಳಿಗೆ ಚಿಕಿತ್ಸೆ ನೀಡಲು ಫಿಜಿಯೋಥೆರಪಿಸ್ಟ್ ಹುದ್ದೆಗೆ ತಾತ್ಕಾಲಿಕವಾಗಿ ನೇಮಕಾತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಸಬಹುವಿಧ ನ್ಯೂನತೆ, ಸೆರೆಬ್ರಲ್ ಪಾಲ್ಸಿ, ಹಾಗೂ ಇತರೆ ನ್ಯೂನತೆವುಳ್ಳ ಮಕ್ಕಳಿಗೆ ಫಿಜಿಯೋಥೆರಪಿ ಚಿಕಿತ್ಸೆ ನೀಡಬೇಕಿದ್ದು ಗೌರವಧನದ ಆಧಾರದ ಮೇಲೆ ತಾತ್ಕಾಲಿಕ ನೇಮಕಾತಿ ನಡೆಯಲಿದೆ.

ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಆಗಸ್ಟ್ 5ರೊಳಗೆ ಅರ್ಜಿ ಸಲ್ಲಿಸಬಹುದು. ಅರ್ಹರು ಕ್ಷೇತ್ರ ಸಮನ್ವಯಾಧಿಕಾರಿಗಳು, ಬಿ.ಆರ್.ಸಿ. ಕೇಂದ್ರ ಗಾಂಧಿನಗರ, ಕುಷ್ಟಗಿ, ಕೊಪ್ಪಳ ಜಿಲ್ಲೆ, ಈ ವಿಳಾಸಕ್ಕೆ ಅರ್ಜಿ ಸಲ್ಲಿಸಲು ತಿಳಿಸಿದ್ದಾರೆ.

## ಕುಮಾರಸ್ವಾಮಿ ಪಾದಗಟ್ಟೆಯ ಗುಡ್ಡ ಕುಸಿತ: ಆತಂಕಗೊಂಡ ಜನ

• ಉದಯವಾಹಿನಿ ಸಂಡೂರು

ತಾಲ್ಲೂಕಿನ ಕುಮಾರಸ್ವಾಮಿ ದೇವಸ್ಥಾನದ ಬಳಿಯ ಕುಮಾರಸ್ವಾಮಿ ಪಾದಗಟ್ಟೆ ಗುಡಿಯ ಮುಂದಿನ ಗುಡ್ಡವು ಈಚೆಗೆ ಕುಸಿದಿದ್ದರಿಂದ ಜನರು ಹೆಚ್ಚಿನ ಆತಂಕಕ್ಕೆ ಒಳಗಾಗಿದ್ದಾರೆ. ಸ್ವಾಮಿಯ ಪಾದಗಟ್ಟೆಯ ಗುಡಿಯ ಸ್ಥಳವು ಗಣಿಗಾರಿಕೆಯ ಸ್ಥಳದಿಂದ 400 ಮೀಟರ್ ಅಂತರದ, ಕೂಗಳತೆ ದೂರದಲ್ಲಿರುವುದರಿಂದ ಗಣಿಗಾರಿಕೆಯ ಬ್ಲಾಸ್ಟ್‌ನಿಂದ ನಡುಗಿ ಕುಸಿದಿರಬಹುದು ಅಥವಾ ಈಚೆಗೆ ಸುರಿದ ನಿರಂತರ ಮಳೆಗೆ ಕುಸಿದಿರಬಹುದು ಎಂದು ಜನರು ಶಂಕಿಸಿದ್ದಾರೆ. ಜನ ಸಂಗ್ರಾಮ ಪರಿಷತ್ ರಾಜ್ಯ ಅಧ್ಯಕ್ಷ ಟಿ.ಎಂ.ಶಿವಕುಮಾರ್ ಮಾತನಾಡಿ, ಸಂಡೂರಿನ ಆರಾಧ್ಯ ದೈವ ಕುಮಾರಸ್ವಾಮಿ ದೇವಸ್ಥಾನದ ಬಳಿಯಲ್ಲಿನ ಸ್ವಾಮಿಯ ಪಾದಗಟ್ಟೆ ಗುಡಿಯ ಮುಂದಿನ ಗುಡ್ಡವು ನಿರಂತರ ಗಣಿಕಾರಿಕೆಯ ಬ್ಲಾಸ್ಟ್ ನಿಂದ ಭೂಮಿ ಕಂಪಿಸಿ ಕುಸಿದಿರಬಹುದು. ಈ ಭಾಗದಲ್ಲಿ ಈಚೆಗೆ ನಿರಂತರವಾಗಿ ಮಳೆ ಸುರಿಯುತ್ತೀರುವುದರಿಂದ ತಂಪು ಹೆಚ್ಚಾಗಿ ಭೂಮಿ ಕುಸಿದಿರಬಹುದು. ಸಂಬಂಧಪಟ್ಟ ಇಲಾಖೆಯವರು ಗಣಿಕಾರಿಯ ಬಗ್ಗೆ ಸೂಕ್ತ ಕ್ರಮವಹಿಸಿ ಪಾದಗಟ್ಟೆಯ ಗುಡಿಯನ್ನು ಸಂರಕ್ಷಣೆ ಮಾಡಲು ಮುಂದಾಗಬೇಕು. ಎಂದು ಒತ್ತಾಯಿಸಿದ್ದಾರೆ.


ಉದಯವಾಹಿನಿ ಚಿತ್ರ

## • ಯಡ್ರಾಮಿ, ಜೇವರ್ಗಿ ತಾಲ್ಲೂಕಿನಲ್ಲಿ ಉತ್ತಮ ಮಳೆ, ರೈತರೆಲ್ಲರೂ ಬಿತ್ತನೆಗೆ ಮುಂದು: ಡಾ.ಅಜಯ್ ಸಿಂಗ್

# ರಸಗೊಬ್ಬರ ಕೃತಕ ಅಭಾವಕ್ಕೆ ಕಾರಣರಾದವರ ವಿರುದ್ಧ ಕ್ರಮ ಕೈಗೊಳ್ಳಿ

• ಉದಯವಾಹಿನಿ ಕಲಬುರಗಿ

ಜೇವರ್ಗಿ ಪಟ್ಟಣದಲ್ಲಿ ಎಲ್ಲಾ ವಾರ್ಡ್‌ಗಳು, ಜನ ನಿಬಿಡ ಬಸ್ ನಿಲ್ದಾಣ, ಮುಖ್ಯರಸ್ತೆ, ಮಹಾಲಕ್ಷ್ಮೀ ಮಂದಿರ ಸುತ್ತಲಿನ ಪ್ರದೇಶ, ಬಸ್ ನಿಲ್ದಾಣದ ಸುತ್ತಮುತ್ತಲಿನ ಸ್ಥಳಗಳಲ್ಲಿ ನೈರ್ಮಲ್ಯ ಸದಾಕಾಲ ಇರುವಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಿ, ಬಿತ್ತನೆ ಬೀಜ ರಸಗೊಬ್ಬರ ಕೊರತೆ ಕಾಡದಂತೆ ಹಾಗೂ ಕೃತಕ ಅಭಾವ ಹುಟ್ಟು ಹಾಕುವವರನ್ನ ಗುರಿತಿಸಿ ಅಗತ್ಯ ಕಾನೂನು ಕ್ರಮ ಕೈಗೊಳ್ಳುವಂತೆ ಶಾಸಕರಾದ ಡಾ.ಅಜಯ್ ಸಿಂಗ್ ಅವರು ಇಲ್ಲಿನ ಪುರಸಭೆ ಹಾಗೂ ಕೃಷಿ ಅಧಿಕಾರಿಗಳಿಗೆ ತಾಕೀತು ಮಾಡಿದ


ಉದಯವಾಹಿನಿ ಚಿತ್ರ

ಪ್ರಸಂಗ ಇಂದಿಲ್ಲಿ ನಡೆದ ತಾಲೂಕು ಅಭಿವೃದ್ಧಿ ಸಭೆಯಲ್ಲಿ ನಡೆಯಿತು.

ಈಚೆಗೆ ಜೇವರ್ಗಿಯ ಕೆಲ ಪ್ರದೇಶಗಳಲ್ಲಿ ನೈರ್ಮಲ್ಯವಿಲ್ಲವೆಂಬ ವಿಡಿಯೋಗಳು ಕೆಲವು ವೈರಲ್ ಆಗಿ ಸುದ್ದಿಯಾಗಿದ್ದವು.

ಇದೇ ಪ್ರಸಂಗದ ಹಿನ್ನೆಲೆಯಲ್ಲಿ ಸಾಸಕರು ಪುರಸಭೆಯ ನೈರ್ಮಲ್ಯ ಕಾಪಾಡುವ ಕೆಲಸ ಕಾರ್ಯಗಳು ಇನ್ನಷ್ಟು ಚುರುಕಾಗಬೇಕು, ಕಾರ್ಮಿಕರನ್ನು ಸರಿಯಾಗಿ ಕೆಲಸಕ್ಕೆ ಪಡೆದು ಅವರಿಗೆ ಸಂಬಂಳ ಪಾವತಿಸಿ ಕೆಲಸ ಮಾಡಿಸುವಂತೆ ಸಭೆಯಲ್ಲಿ ಪುರಸಭೆ ಮುಖ್ಯಾಧಿಕಾರಿಗಳು ಹಾಗೂ ತಾಲ್ಲೂಕು ದಂಡಾಧಿಕಾರಿಗಳಿಗೆ ಶಾಸಕರು ಸೂಚನೆ ನೀಡಿದರು.

ರಸ್ತೆ ಡಿವೈಡರ್ ಮೇಲೆಲ್ಲಾ ಹೊಲಸು, ಕೊಚ್ಚೆ ಕಾಣುತ್ತಿರೋದರಿಂದ ಜನತೆ ಓಡಾಡಲು ತೊಂದರೆಯಾಗುತ್ತಿದೆ. ಹೀಗೆ ಕೊಚ್ಚೆ ಹಾಕುವವರ ವಿರುದ್ಧ ಕ್ರಮಗಳನ್ನು ಕೈಗೊಳ್ಳುವಂತೆಯೂ ಶಾಸಕರು ಖಡಕ್ ಸೂಚನೆ ರವಾನಿಸಿದ್ದಾರೆ.

**ದುಬಾರಿ ಬೆಲೆಗೆ ಮಾರಾಟ ಮಾಡುತ್ತಿರುವ ಆರೋಪ**

ಇಂದಿನ ಸಭೆಯಲ್ಲಿ ಜೇವರ್ಗಿ ಪಟ್ಟಣ ಹಾಗೂ ಜೇವರ್ಗಿ ಮತ್ತು ಯಡ್ರಾಮಿ ತಾಲೂಕಿಗೆ ಸಂಬಂಧಪಟ್ಟಂತಹ 52 ವಿಷಯಗಳ ಬಗ್ಗೆ ಕಾರ್ಯಸೂಚಿ ಸಿದ್ಧಗೊಂಡಿತ್ತು. ಸೂಚಿಯಂತೆಯ ಈ ಸುದೀರ್ಘ ಸಭೆಯಲ್ಲಿ ಎಲ್ಲವನ್ನು ಚರ್ಚಿಸಲಾಯಿತು. ಬೀಜ, ರಸಗೊಬ್ಬರ ನಿಗದಿತ ಬೆಲೆಗೇ ಮಾರಾಟವಾಗುವಂತೆ ನೋಡಿಕೊಳ್ಳಿ, ಕೆಲವರು ದುಬಾರಿ ಬೆಲೆಗೆ ಮಾರಾಟ ಮಾಡುತ್ತಿರುವ ಆರೋಪಗಳಿದ್ದು ತಕ್ಷಣ ಅಗ್ರೋ ಮಳಿಗೆಗಳನ್ನು ತಪಾಸಣೆ ಮಾಡಿ ರೈತರಿಗೆ ಮೋಸವಾಗದಂತೆ ಕ್ರಮಗಳಿಗೆ ಶಾಸಕರು ಸೂಚಿಸಿದರು.

**ಭೀಮಾ ನದಿಗೆ ಪ್ರವಾಹ ಆತಂಕ- 40 ಹಳ್ಳಿಮೇಲೆ ನಿಗಾಕ್ಕೆ ಸೂಚನೆ:** ಮಹಾರಾಷ್ಟ್ರದ ಉಜನಿ ಜಲಾಶದಿಂದ ಮತ್ತೆ 70 ಸಾವಿರ ಕ್ಯೂಸೆಕ್ ನೀರು ಹರಿಬಿಟ್ಟಿದ್ದಾರೆ. ಇದರಿಂದಾಗಿ ಜೇವರ್ಗಿ ತಾಲ್ಲೂಕಿನಲ್ಲಿ ನದಿ ದಡದಲ್ಲಿ ಬರುವ 40 ಗ್ರಾಮಗಳಲ್ಲಿ ಸಮಸ್ಯೆ ಕಾಡುವ ಆತಂಕವಿದೆ. ತಹಶೀಲ್ದಾರರು ಹಾಗೂ ಕಂದಾಯ ಇಲಾಖೆ, ಕೃಷಿ ಇಲಾಖೆ, ಪಸು ಸಂಗೋಪನೆ ಇಲಾಖೆಯವರೆಲ್ಲರೂ ಸೇರಿಕೊಂಡು ತಂಡ ರಚಿಸಿ ನೆರೆ ಆತಂಕದ ಮೇಲೆ ನಿಗಾ ಇಡಬೇಕು. ಜನರು, ಜಾನುವಾರು ರಕ್ಷಣೆಗೆ ಮುಂದಾಗಬೇಕು ಎಂದು ಶಾಸಕರು ಸೂಚಿಸಿದ್ದಾರೆ.

ಸಭೆಯಲ್ಲಿ ಪಿಡಬ್ಲೂಡಿ, ಪಶು ಸಂಗೋಪನೆ, ಆರೋಗ್ಯ, ಶಿಕ್ಷಣ ಹೀಗೆ ಎಲ್ಲಾ ಇಲಾಖೆಗಳ ಯೋಜನೆಗಳ ಅನುಷ್ಠಾನ, ಬಾಕಿ ಕಾಮಗಾರಿಗಳ ವಿಚಾರವಾಗಿ ಪ್ರಶ್ನೆ ಕೇಳಿ ಮಾಹಿತಿ ಪಡೆದು ಬೇಗ ಯೋಜನೆಗಳ ಅನುಷ್ಠಾನಕ್ಕೆ ಶಾಸಕ ಡಾ. ಅಜಯ್ ಸಿಂಗ್ ಸೂಚಿಸಿದರು. ಜೇವರ್ಗಿ ತಹಶೀಲ್ದಾರ್ ಮಲ್ಲಣ್ಣ ಯಲಗೋಡ್ , ಯಡ್ರಾಮಿ ತಹಶೀಲ್ದಾರ್, ಪುರಸಭೆ ಮುಖ್ಯಾಧಿಕಾರಿಗಳು ಸೇರಿದಂತೆ ಎಲ್ಲಾ ಇಲಾಖೆಯ ತಾಲೂಕು ಅಧಿಕಾರಿಗಳು ಸಭೆಯಲ್ಲಿದ್ದರು.

### ಸೀಸಿ ರಸ್ತೆ ಕಾಮಗಾರಿಗೆ ಮರಲು ವ್ಯವಸ್ಥೆ

**ತಾಲ್ಲೂಕಿನ ಹಳ್ಳಿಗಾಡಲ್ಲಿ ಕೈಗೊಳ್ಳುವ ಸಿಸಿ ರಸ್ತೆ ಕಾಮಗಾರಿಗೆ ಅಗತ್ಯ ಮರಲು ದೊರಕಿಸುವ ಬಗ್ಗೆ ಪೊಲೀಸ್, ತಹಶೀಲ್ದಾರ್ ಸಭೆ ನಡೆಸಲಾಗಿದ್ದು ಕಾಮಗಾರಿಗೆ ಮರಳು ಒಪೂರೈಸುವ ಸೂಚನೆ ನೀಡಲಾಗಿದೆ. ಮುಂಬರುವ 1 ತಿಂಗಳಲ್ಲಿ 61 ರಸ್ತೆ ಕಾಮಗಾರಿಗಳನ್ನು ಮಾಡಿ ಮುಗಿಸಬೇಕು ಎಂದು ಅಧಿಕಾರಗಳಿಗೆ ತಾಕೀತು ಡಾ. ಅಜಯ್ ಸಿಂಗ್ ತಾಕೀತು ಮಾಡಿದರು.**

### ಸೋರುವ ಶಾಲೆಗಳಿದ್ದರೆ ತಕ್ಷಣ ವರದಿ ಮಾಡಿ

**ಜೇವರ್ಗಿ ಹಾಗೂ ಯಡ್ರಾಮಿಯಲ್ಲಿ ಸೋರುವ ಶಾಲೆಗಲು, ಕೋಣೆಗಳು ಕಂಡು ಬಂದಲ್ಲಿ ತಕ್ಷಣ ಶಿಕ್ಷಕರು, ಮುಖ್ಯ ಗುರುಗಳು ಅಲ್ಲಿರುವ ಅಧಿಕಾರಿಗಳಿಗೆ ಗಮನಕ್ಕೆ ತರಬೇಕು. ಯಾವುದೇ ಕಾರಣಕ್ಕೂ ಮಕ್ಕಳ ಸುರಕ್ಷತೆ ಮುಖ್ಯವೇ ಹೊರತು ಎಲ್ಲರೂ ಈ ವಿಚಾರದಲ್ಲಿ ಜವಾಬ್ದಾರಿಯಿಂದ ನಡೆಯುವಂತೆ ಶಾಸಕ ಡಾ. ಅಜಯ್ ಸಿಂಗ್ ಸೂಚಿಸಿದರು. ಕೋಣೆಗಳು ತುಂಬಾ, ಸಿಥಿಲ ಹಂತ ತಲುಪಿದ್ದಲ್ಲಿ ಅಂತಹ ಕಡೆ ಮಕ್ಕಳಿಗೆ ಕುಳ್ಳಿರಿಸಿ ಪಾಠ ಮಾಡೋದನ್ನು ಬಿಟ್ಟು ಸೂಕ್ತ, ಸುರಕ್ಷಿತ ಸ್ಥಳ ಹುಡುಕಬೇಕು. ಇದಕ್ಕೆ ಹಿರಿಯ ಅಧಿಕಾರಿಗಳು, ತಾಲ್ಲೂಕಿನ ಅಧಿಕಾರಿಗಳ ನೆರವು ನೀಡಬೇಕು ಎಂದರು.**

### ರಸಗೊಬ್ಬರ, ಬೀಜ ಕೃತಕ ಅಭಾವ ವಿರುದ್ಧ ಕ್ರಮ

**ಯಡ್ರಾಮಿ ಹಾಗೂ ಜೇವರ್ಗಿ ತಾಲ್ಲೂಕಿನಲ್ಲಿ ಉತ್ತಮ ಮಳೆಯಾಗಿದೆ. ರೈತರೆಲ್ಲರೂ ಬಿತ್ತನೆಗೆ ಮುಂದಾಗಿದ್ದಾರೆ. ಅನೇಕರು ಅದಾಗಲೇ ಬಿತ್ತಿದ್ದಾರೆ. ಇದೀಗ ರಸಗೊಬ್ಬರ, ಬಿತ್ತನೆ ಬೀಜದ ಕೊರತೆ ಕಾಡಲೇಬಾರದು. ರಸಗೊಬ್ಬರ, ಬೀಜ ಕೃತಕ ಅಭಾವ ಸೃಷ್ಟಿಸುತ್ತಿರುವ ದೂರುಗಳಿ ಅಧಿಕಾರಿಗಳು ತಕ್ಷಣ ಕ್ರಮಕ್ಕೆ ಮುಂದಾಗುವಂತೆ ಹಾಗೂ ಇಂತಹ ಮೋಸದ ಆಟಗಳ ಮೇಲೆ ನಿಗಾ ವಹಿಸುವಂತೆ ಡಾ. ಅಜಯ್ ಸಿಂಗ್ ಸಭೆಯಲ್ಲಿ ಕೃಷಿ ಇಲಾಖೆ, ಕಂದಾಯ ಇಲಾಖೆಗೆ ಸೂಚಿಸಿದರು.**

## ವಿವಿಧ ಗ್ರಾ.ಪಂ ಗಳಿಗೆ ಜಿ.ಪಂ ಸಿಇಒ ಭೇಟಿ, ಪರಿಶೀಲನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಚಿತ್ರದುರ್ಗ

ಜಲ ಜೀವನ್ ಮಿಷನ್ ಯೋಜನೆಯಡಿಯಲ್ಲಿ ಕಾರ್ಯಾತ್ಮಕ ಗೃಹ ನಳ ಸಂಪರ್ಕದ ಕಾಮಗಾರಿಗಳನ್ನು ತ್ವರಿತವಾ ಪೂರ್ಣಗೊಳಿಸಿ ಗ್ರಾಮಸ್ಥರಿಗೆ ಶುದ್ಧ ಕುಡಿಯುವ ನೀರು ಸರಬರಾಜು ಮಾಡಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಎಸ್.ಆಕಾಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು. ಹೊಸದುರ್ಗ ತಾಲ್ಲೂಕಿನ ವಿವಿಧ ಗ್ರಾಮ ಪಂಚಾಯಿತಿಗಳಿಗೆ ಸೋಮವಾರ ಜಲಜೀವನ್ ಮಿಷನ್ ಯೋಜನೆಯ ಅನುಷ್ಠಾನದ ಕುರಿತು 15 ದಿನಗಳ ಕ್ಷೇತ್ರ ಭೇಟಿ ಪರಿಶೀಲನಾ ಆಂದೋಲನದ ಅಂಗವಾಗಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಶಾಲೆ ಮತ್ತು ಅಂಗನವಾಡಿಗಳಿಗೆ ಕಡ್ಡಾಯವಾಗಿ ಕಾರ್ಯಾತ್ಮಕ ನಳ ಸಂಪರ್ಕ ಕಲ್ಪಿಸಬೇಕು.

ಗ್ರಾಮಗಳಲ್ಲಿ ಚರಂಡಿಗಳನ್ನು ಸ್ವಚ್ಛತೆಯಿಂದ ಕಾಪಾಡಿಕೊಳ್ಳಲು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು. ಸಹೊಸದುರ್ಗ ತಾಲ್ಲೂಕಿನ ದೇವಿಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ದೇವಿಗೆರೆ, ಗುತ್ತಿಕಟ್ಟೆ, ಬಿಸನಹಳ್ಳಿ ಲಂಬಾಣಿಹಟ್ಟಿ, ಹೆಬ್ಬಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೇರೂರು, ಮಧುರೆ ಗ್ರಾಮ ಪಂಚಾಯಿತಿಯ ಮಧುರೆ, ಚಿನ್ನಾಪುರ ಮತ್ತು ಕೆಲ್ಲೋಡು ಗ್ರಾಮ ಪಂಚಾಯಿತಿಯ ಮೆಟ್ಟಿನಹೊಳೆ ಗ್ರಾಮಕ್ಕೆ ಭೇಟಿ ನೀಡಿ, ಜೆಜೆಎಂ ಯೋಜನೆಯಡಿ ಅಳವಡಿಸಿರುವ ಗೃಹ ನಳ ಸಂಪರ್ಕದ ಗುಣಮಟ್ಟ, ಮೀಟರ್ ಅಳವಡಿಕೆ, ಕುಡಿಯುವ ನೀರಿನ ಪೂರೈಕೆ, ರಸ್ತೆ ಪುನಶ್ಚೇತನ ಹಾಗೂ ಎಫ್‌ಟಿಕೆ-ನೀರಿನ ಗುಣಮಟ್ಟ ಸೇರಿದಂತೆ ಇತರೆ ವರದಿಗಳನ್ನು ಪರಿಶೀಲಿಸಿದರು.

**ತ್ವರಿತವಾಗಿ ಜೆಜೆಎಂ ಕಾಮಗಾರಿ ಪೂರ್ಣಗೊಳಿಸಿ**

## ಭೂ ಪರಿಹಾರ ನೀಡಲು ಜು. 31ರಂದು ಸಭೆ

• ಉದಯವಾಹಿನಿ ಇಂಡಿ

ವಿಜಯಪುರದಿಂದ ರಾಷ್ಟ್ರೀಯ ಹೆದ್ದಾರಿ 548ಬಿ ರಸ್ತೆಯು ಇಂಡಿ ಮಾರ್ಗವಾಗಿ ನಾಗಠಾಣ, ಅಥರ್ಗಾ, ತಡವಲಗಾ, ರೂಗಿ, ಇಂಡಿ, ಇಂಗಳಗಿ, ನೇಹರು ನಗರ, ಹಿರೇಬೇವನೂರ, ಅಗರಖೇಡ, ಚಿಕ್ಕಮಣ್ಣೂರ ಗ್ರಾಮಗಳ ಮೂಲಕ ಹಾದು ಹೊಗಿದೆ. ಈ ರಸ್ತೆಯಲ್ಲಿ ಭೂಮಿ ಕಳೆದುಕೊಂಡ ರೈತರಿಗೆ ಆಗ್ರಹಿಸಿ ಸಭೆ ಕರೆಯಲಾಗಿದೆ.

ಸಭೆ ಜು.31 ಗುರುವಾರರಂದು ಬೆಳಿಗ್ಗೆ 9:30 ಗಂಟೆಗೆ ಇಂಡಿ ಪಟ್ಟಣದ ಪ್ರವಾಸಿ ಮಂದಿರದ ಆವರಣದಲ್ಲಿ ಕರೆಯಲಾಗಿದೆ. ಪ್ರತಿಯೊಬ್ಬ ರೈತರು ಈ ಸಭೆಗೆ ಆಗಮಿಸಬೇಕು ಎಂದು ಮುಖಂಡರಾದ ಬಿ.ಕೆ.ಗೊಟ್ಯಾಳ(ಅಥರ್ಗಾ) ಹಾಗೂ ಅಪ್ಪಾಸಾಹೇಬ ತಾಂಬೆ (ಇಂಡಿ) ಜಂಟಿಯಾಗಿ ತಿಳಿಸಿದ್ದಾರೆ. ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ ಕಂದಾಯ ಉಪವಿಭಾಗಾಧಿಕಾರಿಗಳ ಮೂಲಕ ನೊಟೀಸ ನೀಡಿ ಸುಮಾರು 8-9 ತಿಂಗಳು ಕಾಲ ಗತಿಸುತ್ತಾ ಬಂದಿದ್ದು ಇಲ್ಲಿಯವರೆಗೆ ಒಂದು ಪೈಸೆ ಕೂಡಾ ಭೂಪರಿಹಾರದ ಹಣ ನೀಡಿಲ್ಲ. ಅಲ್ಲದೆ ರೈತರಿಗೆ ಭೂಪರಿಹಾರ ನೀಡದೆ ರಸ್ತೆಗೆ ಸಂಬಂದಿಸಿದ ಯಾವುದೇ ಕಾಮಗಾರಿ ಕೈಗೊಳ್ಳುವಂತಿಲ್ಲ ಎಂದು ಸುಪ್ರಿಮ ಕೊರ್ಟ ಆದೇಶ ಇದೆ. ಹೀಗಿದ್ದರು ಗುತ್ತಿಗೆದಾರರು ಹಾಗೂ ಅಧಿಕಾರಿಗಳು ರಾಷ್ಟೀಯ ಹೆದ್ದಾರಿ 548 ಬಿ ರಸ್ತೆಯ ಕಾಮಗಾರಿ ಕೈಗೊಳ್ಳುತ್ತಿರುವುದು ಸರಿಯಾದ ಕ್ರಮವಲ್ಲ.





ಆದರು ಸಹ ರಸ್ತೆ ಕಾಮಗಾರಿಗೆ ಬಹುತೇಕ ಯಾವ ರೈತರು ಅಡೆ ತಡೆ ಮಾಡಿಲ್ಲ ಎಂದರು. ಆದರೆ ಇದನ್ನು ದುರುಪಯೋಗ ಪಡಿಸಿಕೊಂಡ ಗುತ್ತಿಗೆದಾರರು ಹಾಗೂ ಅಧಿಕಾರಿಗಳು ಕ್ಯಾರೆ ಎನ್ನುತ್ತಿಲ್ಲ. ಇದನ್ನು ಹಾಗೆ ಬಿಟ್ಟರೆ ಮುಂದಿನ ದಿನಮಾನಗಳಲ್ಲಿ ರೈತರಿಗೆ ಯಾರು ಹೇಳೊರು ಕೇಳೊರು ಇಲ್ಲದ ಸ್ಥಿತಿ ಬರುತ್ತದೆ. ಆದ್ದರಿಂದ ಹೆಚ್ಚಿನ ಪ್ರಮಾಣದಲ್ಲಿ ರೈತರು ಸ್ವಇಚ್ಛೆಯಿಂದ ಈ ಸಭೆಗೆ ಆಗಮಿಸಿ ತಮ್ಮ ಸಲಹೆ ಸೂಚನೆ ನೀಡಬೇಕು ಎಂದು ತಿಳಿಸಿದ್ದಾರೆ. ರೈತ ಮುಖಂಡರಾದ ಬಸಪ್ಪ ಅರ್ಜುಣಗಿ, ವಿಜಯಕುಮಾರ ಉಡಚಾಣ, ನರಸಿಂಗ ಪವಾರ, ಮಳಗೂ ಬೇವನೂರ, ಮಂಜು ದೇವರ, ಎಸ್.ಬಿ.ಪಾಟೀಲ(ಮೈದರಗಿ) ಆರ್.ಎಲ್.ಚಾಬುಕಸವಾರ, ಜಕ್ಕಪ್ಪ ಪೂಜಾರಿ, ಲಕ್ಷ್ಮಣ ಹಂದ್ರಾಳ ಮತ್ತಿತರಿದ್ದರು.

## ಒಳಮೀಸಲಾತಿ ಜಾರಿ ವಿಳಂಬ: ಆ.1ರಂದು ಬೃಹತ್ ಅರೆಬೆತ್ತಲೆ ಪ್ರತಿಭಟನೆ

• ಉದಯವಾಹಿನಿ, ಚಿಂಚೋಳಿ

ಮಾದಿಗಾ ಸಮಾಜಕ್ಕೆ ಒಳಮೀಸಲಾತಿ ನೀಡಲು ರಾಜ್ಯ ಕಾಂಗ್ರೆಸ್ ಸರ್ಕಾರವು ವಿಳಂಬನೀತಿ ಖಂಡಿಸಿ ಹಾಗೂ ಶೀಘ್ರದಲ್ಲೇ ಒಳಮೀಸಲಾತಿ ಜಾರಿ ಮಾಡುವಂತೆ ಆಗ್ರಹಿಸಿ ಆ.01ರಂದು ಕಲಬುರ್ಗಿ ಜಿಲ್ಲಾಧಿಕಾರಿ ಕಛೇರಿ ಎದುರು ಮಾದಿಗಾ ಸಮಾಜದಿಂದ ಅರೆಬೆತ್ತಲೆ ಮತ್ತು ಕೇಶಮುಂಡವ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಸಮಾಜ ಮುಖಂಡ ಜಗನ್ನಾಥ ಕಟ್ಟಿ ಹಾಗೂ ಆಕಾಶ ಕೊಳ್ಳೂರ ಹೇಳಿದರು.

ಪಟ್ಟಣದಲ್ಲಿ ಮಾದಿಗಾ ಸಮಾಜದಿಂದ ಕರೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗಾಗಲೇ ಕಳೆದ ವರ್ಷ ಆಗಷ್ಟ್ ತಿಂಗಳಲ್ಲಿ ಸುಪ್ರೀಂಕೋರ್ಟ್ ಆಯಾ ರಾಜ್ಯಗಳಿಗೆ ಒಳಮೀಸಲಾತಿ ಜಾರಿಗೆ ಮಾಡುವ ಹಕ್ಕು ನೀಡಿದೆ ಆದರೆ ತೆಲಂಗಾಣ, ಆಂದ್ರಪ್ರದೇಶ, ಛತ್ತಿಸಗಡ್ ಸೇರಿದಂತೆ ವಿವಿಧ ರಾಜ್ಯಗಳಲ್ಲಿ ರಾಜ್ಯ ಸರ್ಕಾರಗಳು ಒಳಮೀಸಲಾತಿ ನೀಡಲಾಗಿದೆ ಆದರೆ ಕರ್ನಾಟಕ ರಾಜ್ಯದಲ್ಲಿ ರಾಜ್ಯ ಸರ್ಕಾರ ಒಳಮೀಸಲಾತಿ ನೀಡುವಲ್ಲಿ ವಿಳಂಬ ನೀತಿ ಅನುಸರಿಸುತ್ತಿದ್ದು ಅತ್ಯಂತ ಖಂಡನೀಯವಾಗಿದೆ. ನ್ಯಾ. ನಾಗಮೋಹನ್ ದಾಸ ವರದಿ, ಕಾಂತುರಾಜು ವರದಿ ಸೇರಿದಂತೆ ಅನೇಕ ವರದಿಗಳ ದತ್ತಾಂಶ ಸರ್ಕಾರ


ಉದಯವಾಹಿನಿ ಚಿತ್ರ

ಬಳಿವಿದೆ ಆದರೆ ಮಾದಿಗಾ ಸಮಾಜಕ್ಕೆ ಒಳಮೀಸಲಾತಿ ನೀಡುವಲ್ಲಿ ಸರ್ಕಾರ ಹಿಂದೇಟ್ಟು ಹಾಕುತ್ತಿರುವುದು ನೋವಿನ ಸಂಗತಿಯಾಗಿದೆ, ಮಾದಿಗಾ ಸಮಾಜದವರು ಕಳೆದ 35ವರ್ಷಗಳಿಂದ ಸತತವಾಗಿ ಒಳಮೀಸಲಾತಿಗಾಗಿ ಹೋರಾಟ ಮಾಡುತ್ತಾ ಬಂದಿರುತ್ತಾರೆ ಇದರಲ್ಲಿ ಅನೇಕ ಹೋರಾಟಗಾರರು ಪ್ರಾಣವನ್ನೇ ಬಲಿಕೊಟ್ಟಿದ್ದಾರೆ.

ಸಂಬಂಧಪಟ್ಟ ಅಧಿಕಾರಿಗಳು ಶಾಸಕರು ಸಂಸದರು ಸಚಿವರು ಮುಖ್ಯಮಂತ್ರಿಗಳು ಸೇರಿ ಕಾಂಗ್ರೆಸ್ ಬಿಜೆಪಿ ಜೆಡಿಎಸ್ ಎಲ್ಲಾ ಪಕ್ಷದವರಿಗೂ ಮನವಿಗಳ ಮಹಾಪೂರವೇ ಕೊಟ್ಟಿದ್ದೇವೆ ಆದರೆ ಯಾವುದೇ ಸರ್ಕಾರಗಳು ಆಡಳಿತಕ್ಕೆ ಬಂದರೂ ಮಾದಿಗಾ ಸಮಾಜಕ್ಕೆ ನ್ಯಾಯಯುತ ಒಳಮೀಸಲಾತಿ ಜಾರಿಗೆ ಮಾಡುವಲ್ಲಿ ವಿಫಲರಾಗಿದ್ದಾರೆ. ಸುರೇಶ ಶೇರಿಕಾರ, ಪ್ರದೀಪ್ ಮೇತ್ರಿ, ನಾಗಾರ್ಜುನ ಕಟ್ಟಿ, ಮಚೆಂದ್ರ ಸೇರಿಕಾರ, ಜಗನ್ನಾಥ ಚಿಮ್ಮನಚೋಡ, ರೇವಣಸಿದ್ಧ ಚಿಮ್ಮನಚೋಡ, ರಾಜಶೇಖರ ದಂಡಿನ, ನಾಗು ಕಿವನೂರು, ಸೋಮಶೇಖರ ಗಡಿನಿಂಗದಳ್ಳಿ, ರವಿ ಗುಪ್ತ, ರಮೇಶ ನೋತಿಹೊಲ, ರಾಘವೇಂದ್ರ ಶೇರಿಕರ, ಹಣಮಂತ ಬೀರನಳ್ಳಿ, ವಿಶಾಲ್ ಸುಗಂಧಿ, ಪ್ರೇಮ್ ಗೌನಳ್ಳಿ, ಅನಿಲ್ ಕ್ರಾಂತಿ, ಮೋಹನ್ ಐನಾಪುರ ಇದ್ದರು.

**ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರದ ಮುಂಚೆ ಐದು ಗ್ಯಾರಂಟಿ ಜೊತೆ ಆರನೇ ಗ್ಯಾರಂಟಿ ಒಳಮೀಸಲಾತಿ ಜಾರಿಗೆ ಮಾಡುತ್ತೇನೆಂದು ಹೇಳಿದ ಸಿದ್ದರಾಮಯ್ಯನವರು ನುಡಿದಂತೆ ನಡೆಯಬೇಕು ಆರನೇ ಗ್ಯಾರಂಟಿ ಒಳಮೀಸಲಾತಿ ಜಾರಿಗೆ ಮಾಡಬೇಕು ಎಂದು ಒತ್ತಾಯಿಸಿದರು. ಕಲಬುರ್ಗಿಯಲ್ಲಿ ಒಳಮೀಸಲಾತಿ ಜಾರಿಗಾಗಿ ಹಮ್ಮಿಕೊಂಡ ಬೃಹತ್ ಪ್ರತಿಭಟನೆಯಲ್ಲಿ ಚಿಂಚೋಳಿಯಿಂದ 500ರಿಂದ 1000ಜನರು ಹೋಗುತ್ತಿದ್ದೇವೆ ಸಮಾಜದ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಪ್ರತಿಭಟನೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕು. -ಜಗನ್ನಾಥ ಕಟ್ಟಿ, -ಆಕಾಶ ಕೊಳ್ಳೂರ, ಸಮಾಜ ಮುಖಂಡರು**

## ಬಸವ ಪುಣ್ಯಸ್ಮರಣೋತ್ಸವ: ಮಕ್ಕಳಿಗೆ ಹಾಲು ವಿತರಣೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಬಸವನಬಾಗೇವಾಡಿ

ಮಕ್ಕಳೇ ದೇವರು ಎಂದು ತಿಳಿಸಿದ ವಿಶ್ವಗುರು ಬಸವೇಶ್ವರರ ಪುಣ್ಯಸ್ಮರಣೋತ್ಸವವನ್ನು ಮಕ್ಕಳಿಗೆ ಹಾಲು ನೀಡಿದರೆ ಬಸವ ಪಂಚಮಿಗೆ ಆಚರಣೆಗೆ ಸಾರ್ಥಕತೆ ಬರುತ್ತದೆ ಎಂದು ಅಥಣಿ ಮೋಟಗಿ ಪ್ರಭು ಚನ್ನಬಸವ ಸ್ವಾಮೀಜಿ ಹೇಳಿದರು.

ಪಟ್ಟಣದಲ್ಲಿ ಮಂಗಳವಾರ ಜಾತ್ರಾ ಉತ್ಸವ ಸಮಿತಿ ಹಾಗೂ ಶ್ರೀ ಬಸವೇಶ್ವರ ಸೇವಾ ಸಮಿತಿ ಸಹಯೋಗದಲ್ಲಿ ಬಸವ ಪುಣ್ಯಸ್ಮರಣೋತ್ಸವ ಹಾಗೂ ಬಸವ ಪಂಚಮಿ ಹಿನ್ನಲೆಯಲ್ಲಿ ಮಕ್ಕಳಿಗೆ ಹಾಲು ಕುಡಿಸುವ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪೌಷ್ಟಿಕ ಹಾಲನ್ನು ನಾರಿಯರು ಕಲ್ಲು ನಾಗರಕ್ಕೆ ವ್ಯರ್ಥ ಮಾಡದೇ ಮಕ್ಕಳಿಗೆ ಕುಡಿಸಬೇಕು. ಮಕ್ಕಳೆಲ್ಲಾ ಶರಣು ಶರಣಾರ್ಥಿ ಬಸವ ಬಸವ ಎಂದು ಆನಂದಿಸಿ ಎಂದರು. ರಾಷ್ಟೀಯ ಬಸವ ಸೈನ್ಯದ ಸಂಸ್ಥಾಪಕ ಅಧ್ಯಕ್ಷ ಶಂಕರಗೌಡ. ಶಿ ಬಿರಾದಾರ ಮಾತನಾಡಿದರು.

**ಹಾಲು ಚಲ್ಲದೇ ಮಕ್ಕಳಿಗೆ ಹಾಲು ಕುಡಿಸಿ, ಕಳೆದ ಹಲವು ವರ್ಷಗಳಿಂದ ಬಸವ ಸೈನ್ಯದ ವತಿಯಿಂದ ಬಸವ ಪಂಚಮಿ ಆಚರಿಸುವುದರ ಮೂಲಕ ರೋಗಿಗಳಿಗೆ ಹಾಲು ಕುಡಿಸುತ್ತಾ ಬರುತ್ತಿರುವುದು ಶ್ಲಾಘನೀಯವಾದುದು.**
**-ಸಿದ್ದಲಿಂಗ ಸ್ವಾಮೀಜಿ**

# ರಾಜ್ಯದಲ್ಲಿ ರಸಗೊಬ್ಬರ ಕೊರತೆ ನೀಗಿಸಲು ಅಗತ್ಯ ಕ್ರಮ: ಕೃಷಿ ಇಲಾಖೆ

## ರಾಜ್ಯದ ಕೃಷಿ ಸಚಿವರು ಕೇಂದ್ರ ಸರ್ಕಾರದ ರಸಗೊಬ್ಬರ ಖಾತೆ ಸಚಿವರಿಗೆ ಅಗತ್ಯವಿರುವ ಡಿಎಪಿ ರಸಗೊಬ್ಬರದ ಪೂರೈಕೆಗೆ ಪತ್ರ

• ಉದಯವಾಹಿನಿ ಮಂಗಳೂರು

ಕೇಂದ್ರ ಸರ್ಕಾರದಿಂದ ಕಳೆದ ಮೂರು ವರ್ಷಗಳಲ್ಲಿ ಆರಂಭಿಕ ಶುಲ್ಕನ್ನು ಪರಿಗಣಿಸದೇ ಯೂರಿಯಾ ಸೇರಿದಂತೆ ಎಲ್ಲಾ ರಸಗೊಬ್ಬರಗಳನ್ನು ಬೇಡಿಕೆಗೆ ಅನುಗುಣವಾಗಿ ಹಂಚಿಕೆ, ಸಸರಬರಾಜು ಮಾಡಲಾಗಿರುತ್ತದೆ. ಇದರಿಂದಾಗಿ ರಾಜ್ಯದಲ್ಲಿ ಯಾವುದೇ ರೀತಿಯ ರಸಗೊಬ್ಬರದ ಕೊರತೆ ಕಂಡು ಬಂದಿರುವುದಿಲ್ಲ ಎಂದು ಕೃಷಿ ಇಲಾಖೆ ಪ್ರಕಟಣೆ ತಿಳಿಸಿದೆ.

**ರಸಗೊಬ್ಬರ ಕೊರತೆಗೆ ಮೂಲ ಕಾರಣ:** ಪ್ರಸಕ್ತ ಸಾಲಿನಲ್ಲಿ ಮಾತ್ರ ಆರಂಭಿಕ ಶುಲ್ಕ ಪರಿಗಣಿಸಿ, ಕೇಂದ್ರ ಸರ್ಕಾರದಿಂದ ರಸಗೊಬ್ಬರ ಹಂಚಿಕೆ ಮತ್ತು ಸರಬರಾಜು ಪ್ರಕ್ರಿಯೆ ಜರುಗಿಸಲಾಗುತ್ತಿದೆ. ಇದರಿಂದಾಗಿ ರಾಜ್ಯದಲ್ಲಿ ಯೂರಿಯಾ ರಸಗೊಬ್ಬರದ ಪ್ರಾರಂಬಿಕ ದಾಸ್ತಾನನ್ನು ಪರಿಗಣಿಸಿ, ಯೂರಿಯಾ ರಸಗೊಬ್ಬರದ ಕಡಿಮೆ ಹಂಚಿಕೆ ಮಾಡಿರುವುದು ಕೊರತೆಗೆ ಮೂಲ ಕಾರಣವಾಗಿದೆ. ರಾಜ್ಯದ ಬೆಳೆ ಪದ್ಧತಿಯನ್ನು ಆಧರಿಸಿ ಮುಂಗಾರು ಹಂಗಾಮಿಗೆ ಮುಂಚಿತವಾಗಿ ಕೇಂದ್ರ ಸರ್ಕಾರಕ್ಕೆ 12.95 ಲಕ್ಷ ಮೆ.ಟನ್ ಯೂರಿಯಾ ರಸಗೊಬ್ಬರ ಬೇಡಿಕೆಯನ್ನು ಸಲ್ಲಿಸಲಾಗಿತ್ತು. ಆದರೆ, ಕೇಂದ್ರ ಸರ್ಕಾರದಿಂದ 11.17 ಲಕ್ಷ ಮೆ.ಟನ್ ಹಂಚಿಕೆ ನಿಗದಿಪಡಿಸಲಾಗಿರುತ್ತದೆ. ಏಪ್ರಿಲ್ ಮಾಹೆಯಿಂದ ಜುಲೈ ಮಾಹೆಯವರೆಗೆ 3.02ಲಕ್ಷ ಮೆ.ಟನ್ ಡಿ.ಎ.ಪಿ ರಸಗೊಬ್ಬರದ ಬೇಡಿಕೆ ಇದ್ದು ಕೇಂದ್ರ ಸರ್ಕಾರದಿಂದ ಇಲ್ಲಿಯವರೆಗೆ 2.21 ಲಕ್ಷ ಮೆ.


ಉದಯವಾಹಿನಿ ಚಿತ್ರ

ಟನ್ ಸರಬರಾಜಾಗಿದ್ದು, ಇನ್ನೂ 81,000 ಮೆ.ಟನ್ ಸರಬರಾಜು ಬಾಕಿ ಇರುತ್ತದೆ. ರಾಜ್ಯದಲ್ಲಿ ಡಿ.ಎ.ಪಿ. ಕೊರತೆ ಕಂಡು ಬಂದಾಗ ಕೃಷಿ ಸಚಿವರ ನಿರ್ದೇಶನದಂತೆ ಪರ್ಯಾಯ ರಸಗೊಬ್ಬರಗಳ ಬಳಕೆ ಕುರಿತು ರೈತರಲ್ಲಿ ಅರಿವು ಮೂಡಿಸಿ, ಪ್ರಸ್ತುತ, ಡಿ.ಎ.ಪಿ. ರಸಗೊಬ್ಬರದ ಕೊರತೆಯನ್ನು ನೀಗಿಸಲಾಗಿದೆ. ಏಪ್ರಿಲ್ ಮಾಹೆಯಿಂದ ಜುಲೈ ಮಾಹೆಯವರೆಗೆ 6.80ಲಕ್ಷ ಮೆ.ಟನ್ ಯೂರಿಯಾ ರಸಗೊಬ್ಬರದ ಬೇಡಿಕೆ ಇದ್ದು ಕೇಂದ್ರ ಸರ್ಕಾರದಿಂದ ಇಲ್ಲಿಯವರೆಗೆ 5.35 ಲಕ್ಷ ಮೆ.ಟನ್ ಸರಬರಾಜಾಗಿದ್ದು, ಇನ್ನೂ 1.45 ಲಕ್ಷ ಮೆ.ಟನ್ ಸರಬರಾಜು ಬಾಕಿ ಇರುತ್ತದೆ. ಕೇಂದ್ರ ಸರ್ಕಾರದಿಂದ ಇಲ್ಲಿಯವರೆಗೆ ಸರಬರಾಜು ಮಾಡಿರುವ ರಸಗೊಬ್ಬರವನ್ನು ಸಮರ್ಪಕವಾಗಿ ಎಲ್ಲಾ ಜಿಲ್ಲೆಗಳಿಗೆ ಹಂಚಿಕೆ ಮಾಡಿ ರೈತರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ನಿಭಾಯಿಸಲಾಗಿರುತ್ತದೆ.

**ಬಳಕೆ ಕುರಿತು ರೈತರಲ್ಲಿ ಅರಿವು**

**ಅವಧಿಗಿಂತ ಮುಂಚಿತವಾಗಿ ನಾಟಿ**

**ಧಾರವಾಡ ಮತ್ತು ಗದಗ ಜಿಲ್ಲೆಗಳಲ್ಲಿ ಅಂದಾಜು 13,000 ಹೆಕ್ಟೇರ್ ಪ್ರದೇಶದಲ್ಲಿ ಮರುಬಿತ್ತನೆ ಕೈಗೊಳ್ಳಲಾಗಿರುತ್ತದೆ.**

**ತುಂಗಭದ್ರಾ, ಕಾವೇರಿ ಇತ್ಯಾದಿ ಪ್ರಮುಖ ಜಲಾಶಯಗಳಿಂದ ಅವಧಿಗಿಂತ ಮುಂಚಿತವಾಗಿ ಅಚ್ಚುಕಟ್ಟು ಪ್ರದೇಶಗಳಿಗೆ ನೀರನ್ನು ಬಿಟ್ಟಿರುವುದರಿಂದ ಮುಂಚಿತವಾಗಿ ನಾಟಿ ಕೈಗೊಳ್ಳಲಾಗಿರುವುದು ಯೂರಿಯಾ ಮತ್ತು ರಸಗೊಬ್ಬರ ಬೇಡಿಕೆ ಪ್ರಮುಖ ಕಾರಣವಾಗಿದೆ.**

**ರಾಜ್ಯದಿಂದ ರಸಗೊಬ್ಬರ ಪೂರೈಕೆಗೆ ಆರು ಬಾರಿ ಮನವಿ:** ಕೇಂದ್ರ ರಸಗೊಬ್ಬರ ಇಲಾಖೆಯ ಅಧಿಕಾರಿಗಳಿಗೆ ಕೃಷಿ ಇಲಾಖೆ ವತಿಯಿಂದ ಏಪ್ರಿಲ್ ಮಾಹೆಯಿಂದ ಇಲ್ಲಿಯವರೆಗೆ ಆರು ಬಾರಿ ಪತ್ರಗಳನ್ನು ಬರೆದು ಹಂಚಿಕೆಗೆ ಅನುಗುಣವಾಗಿ ಅವಶ್ಯವಿರುವ ಡಿ.ಎ.ಪಿ ಮತ್ತು ಯೂರಿಯಾ ರಸಗೊಬ್ಬರಗಳ ಪೂರೈಕೆ ಮಾಡಲು ಮನವಿ ಮಾಡಲಾಗಿರುತ್ತದೆ. ರಾಜ್ಯದ ಕೃಷಿ ಸಚಿವರು ಕೇಂದ್ರ ಸರ್ಕಾರದ ರಸಗೊಬ್ಬರ ಖಾತೆ ಸಚಿವರಿಗೆ ಅಗತ್ಯವಿರುವ ಡಿ.ಎ.ಪಿ. ರಸಗೊಬ್ಬರದ ಪೂರೈಕೆಗೆ ಪತ್ರ ಮುಖೇನ ಮನವಿ ಸಲ್ಲಿಸಿದ್ದಾರೆ.

ಅಲ್ಲದೇ, ಕೃಷಿ ಸಚಿವರೇ ಖುದ್ದಾಗಿ, ಕೇಂದ್ರ ಸರ್ಕಾರದ ಕೃಷಿ ಮತ್ತುರೈತರ ಕಲ್ಯಾಣ ಸಚಿವರನ್ನು ಇದೇ ಜುಲೈ 7 ರಂದು ಭೇಟಿ ಮಾಡಿ ಕೇಂದ್ರ ಸರ್ಕಾರದಿಂದ ಸಕಾಲದಲ್ಲಿ ಅಗತ್ಯವಿರುವ ರಸಗೊಬ್ಬರಗಳ ಪೂರೈಕೆ ಮಾಡಲು ಮನವಿ ಮಾಡಿರುತ್ತಾರೆ.

ರಾಜ್ಯದಲ್ಲಿ ಡಿ.ಎ.ಪಿ ಮತ್ತು ಯೂರಿಯಾ ರಸಗೊಬ್ಬರದ ಕಡಿಮೆ ಪೂರೈಕೆಯನ್ನು ಮನಗಂಡು, ಮುಖ್ಯಮಂತ್ರಿಗಳು ಕೇಂದ್ರ ಸರ್ಕಾರದ ರಸಗೊಬ್ಬರ ಖಾತೆ ಸಚಿವರಿಗೆ, ರಾಜ್ಯಕ್ಕೆ ಅಗತ್ಯವಿರುವ ರಸಗೊಬ್ಬರ ಪೂರೈಕೆಗೆ ಜುಲೈ 17 ಮತ್ತು 25ರಂದು ಪತ್ರ ಮುಖೇನ ಮನವಿ ಸಲ್ಲಿಸಿರುತ್ತಾರೆ. ಸಪ್ರಸ್ತುತ ಕೇಂದ್ರ ಸರ್ಕಾರದಿಂದ ಹಂಚಿಕೆ ಗನುಗುಣವಾಗಿ ಯೂರಿಯಾ ರಸಗೊಬ್ಬರವನ್ನು ಸರಬರಾಜು ಮಾಡದಿರುವುದರಿಂದ ರಾಜ್ಯದಲ್ಲಿ ಅಲ್ಲಲ್ಲಿ ಯೂರಿಯಾ ರಸಗೊಬ್ಬರದ ಕೊರತೆ ಕಂಡು ಬಂದಿರುತ್ತದೆ. ರೈತರು ವಿವಿಧ ಜಿಲ್ಲೆಗಳಲ್ಲಿ ಪೂರೈಕೆ ಬಗ್ಗೆ ಅಹವಾಲುಗಳನ್ನು ಸಲ್ಲಿಸಿರುತ್ತಾರೆ.

### ನ್ಯಾನೋ ರಸಗೊಬ್ಬರ ಬಳಕೆಗೆ ಅರಿವು

**ಯೂರಿಯಾ ರಸಗೊಬ್ಬರಕ್ಕೆ ಪರ್ಯಾಯವಾಗಿ ಪರಿಸರ ಸ್ನೇಹಿಯಾಗಿರುವ ನ್ಯಾನೋ ರಸಗೊಬ್ಬರ ಬಳಕೆಗೆ ಇಲಾಖೆಯಿಂದ ವ್ಯಾಪಕ ಪ್ರಚಾರ ನೀಡಿ ಅರಿವು ಮೂಡಿಸಲಾಗುತ್ತಿದೆ. ಬೆಳೆ, ಮಣ್ಣು, ಮಾನವ, ಜಾನುವಾರು ಮತ್ತು ಪರಿಸರದ ಆರೋಗ್ಯದ ದೃಷ್ಟಿಯಿಂದ ಯೂರಿಯಾ ಬಳಕೆಯನ್ನು ಕಡಿತಗೊಳಿಸಲು ರೈತರಲ್ಲಿ ಮನವಿ ಮಾಡಲಾಗಿದೆ.**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 12:00 ರಿಂದ 01:30 |
| ಗುಳಿಕ ಕಾಲ | ಬೆಳಿಗ್ಗೆ | 10:30 ರಿಂದ 12:00 |
| ಯಮಗಂಡ ಕಾಲ | ಮಧ್ಯಾಹ್ನ | 07:30 ರಿಂದ 09:00 |

**ಮೇಷ** ನೀವು ಮಾಡುವ ಕೆಲವು ದೈಹಿಕ ಬದಲಾವಣೆಗಳು ಖಂಡಿತವಾಗಿಯೂ ನಿಮ್ಮ ನೋಟವನ್ನು ವರ್ಧಿಸುತ್ತವೆ. ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ.

**ವೃಷಭ** ಸ್ವಲ್ಪ ವ್ಯಾಯಾಮದೊಂದಿಗೆ ನಿಮ್ಮ ದಿನವನ್ನು ಪ್ರಾರಂಭಿಸಿ, ನಿಮ್ಮ ಬಗ್ಗೆ ನೀವೇ ಒಳ್ಳೆಯ ಅಭಿಪ್ರಾಯ ಇಟ್ಟುಕೊಳ್ಳುವುದು ಮುಖ್ಯ, ಇದನ್ನು ದಿನವೂ ಮಾಡುವುದನ್ನು ರೂಢಿ ಮಾಡಿಕೊಳ್ಳಿ.

**ಮಿಥುನ** ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ. ನೀವು ಇತರರ ಮಾತುಗಳನ್ನು ನಂಬಿ ಇಂದು ಹೂಡಿಕೆ ಮಾಡಿದಲ್ಲಿ ಇಂದು ಆರ್ಥಿಕ ನಷ್ಟದ ಸಾಧ್ಯತೆಯಿದೆ. ನಿಮ್ಮ ಮನೆಯಲ್ಲಿ ಸ್ವಲ್ಪ ಸ್ವಚ್ಛತಾ ಕಾರ್ಯವನ್ನು ತಕ್ಷಣ ಕೈಗೊಳ್ಳಬೇಕು.

**ಕರ್ಕಾಟಕ** ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ ಮತ್ತು ಆನಂದವನ್ನು ಹಂಚಿಕೊಳ್ಳಿ. ನೀವು ಪ್ರಯಾಣ ಮಾಡುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ವಿಶೇಷ ಗಮನ ಹರಿಸಿ.

**ಸಿಂಹ** ನಿಮ್ಮ ಜೊತೆಗಿರುವ ಯಾರಾದರೂ ನಿಮ್ಮ ಇತ್ತೀಚಿನ ಕ್ರಮಗಳಿಂದ ಕಿರಿಕಿರಿಗಳ್ಳಬಹುದು. ಇಂದು ನೀವು ನಿಮ್ಮ ಜೀವನದಲ್ಲಿ ನಿಜವಾದ ಪ್ರೀತಿಯ ಅನುಪಸ್ಥಿತಿಯನ್ನು ಅನುಭವಿಸುತ್ತೀರಿ.

**ಕನ್ಯಾ** ಕುತ್ತಿಗೆ / ಬೆನ್ನಿನಲ್ಲಿ ನಿರಂತರ ನೋವಿನಿಂದ ಬಳಲುವ ಸಾಧ್ಯತೆಯಿದೆ. ವಿಶೇಷವಾಗಿ ಇದರ ಜೊತೆ ಸಾಮಾನ್ಯ ದೌರ್ಬಲ್ಯವಿದ್ದಾಗ ಇದನ್ನು ನಿರ್ಲಕ್ಷಿಸದಿರಿ. ಇಂದು ವಿಶ್ರಾಂತಿ ಬಹಳ ಪ್ರಮುಖವಾಗಿರುತ್ತದೆ.

**ತುಲಾ** ಪ್ರಭಾವಿ ಜನರ ಬೆಂಬಲ ನಿಮ್ಮ ನೈತಿಕ ಸ್ಥೈರ್ಯವನ್ನು ಹೆಚ್ಚಿಸುತ್ತದೆ. ನೀವು ಉಳಿಸಿರುವ ಹಣ ಇಂದು ನಿಮ್ಮ ಕೆಲಸಕ್ಕೆ ಬರಬಹುದು. ಇದರೊಂದಿಗೆ ಇದರ ಹೋಗುವ ದುಃಖವು ನಿಮಗೆ ಆಗುತ್ತದೆ.

**ವೃಶ್ಚಿಕ** ಪ್ರೀತಿಯ ವ್ಯವಹಾರಗಳಲ್ಲಿ ಬಲವಂತ ಮಾಡುವುದನ್ನು ತಪ್ಪಿಸಿ. ಕೆಲಸದ ಪ್ರದೇಶದಲ್ಲಿ ಉತ್ತಮವಾಗಿ ಅನುಭವಿಸುವ ದಿನಗಳಲ್ಲಿ ಒಂದು ದಿನ ಇದು. ಇಂದು ನಿಮ್ಮ ಸಹೋದ್ಯೋಗಿಗಳು ನಿಮ್ಮ ಕೆಲಸವನ್ನು ಪ್ರಶಂಸಿಸುತ್ತಾರೆ.

**ಧನಸ್ಸು** ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಸಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ.

**ಮಕರ** ನಿಮ್ಮ ಸಂಗಾತಿಯ ಕುಟುಂಬದ ಸದಸ್ಯರ ಅಡ್ಡಿಯ ಕಾರಣದಿಂದ ನಿಮ್ಮ ದಿನ ಸ್ವಲ್ಪ ಏರುಪೇರಾಗಬಹುದು. ವೆಬ್ ಡಿಸೈನರ್‌ಗಳು ಒಳ್ಳೆಯ ದಿನ. ನೀವು ಮಿಂಚುವ ಸಾಧ್ಯತೆಗಳಿರುವುದರಿಂದ ಗಮನವನ್ನು ಕೇಂದ್ರೀಕರಿಸಿ.

**ಕುಂಭ** ಆರೋಗ್ಯ ಪರಿಪೂರ್ಣವಾಗಿರುತ್ತದೆ. ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು ಮತ್ತು ಆ ಸಲಹೆಗೆ ಜೀವನದಲ್ಲಿ ಸ್ಥಾನವನ್ನು ಸಹ ನೀಡಬಹುದು.

**ಮೀನ** ಇದ್ದಕ್ಕಿದ್ದಂತೆ ನಿಮಗೆ ಹಣದ ಅಗತ್ಯವಿರುತ್ತದೆ. ನಿಮಗೆ ಸಾಕಷ್ಟು ಹಣವಿರುವುದಿಲ್ಲ. ದಿನದ ಉತ್ತರಾರ್ಧದಲ್ಲಿ ಅತ್ಯಾಕರ್ಷಕ ಮತ್ತು ಮನರಂಜನೆಯ ಏನನ್ನಾದರೂ ಹೊಂದಿಸಿ.

# ರಫ್ತು ಗುಣಮಟ್ಟದ ಒಣದ್ರಾಕ್ಷಿ ಉತ್ಪಾದನೆಗೆ ಮಾರ್ಗಸೂಚಿ

## • ಅಫಘಾನಿಸ್ತಾನದ ತಳಿ ಆಮದಿಗೆ ಚಿಂತನೆ: ಸಚಿವ ಶಿವಾನಂದ ಪಾಟೀಲ

• ಉದಯವಾಹಿನಿ ವಿಜಯಪುರ

ರಾಸಾಯನಿಕ ಬಳಕೆಗೆ ಬದಲಾಗಿ ವಿಷಮುಕ್ತವಾಗಿ ಹಾಗೂ ಯುರೋಪಿಯನ್ ರಾಷ್ಟ್ರಗಳಿಗೆ ಸಾಗಿಸಲು ರಫ್ತು ಗುಣಮಟ್ಟದ ಒಣ ದ್ರಾಕ್ಷಿ ಬೆಳೆಯಲು ಮಾರ್ಗಸೂಚಿ ರೂಪಿಸುವ ಅಗತ್ಯವಿದೆ. ಜೊತೆಗೆ ಅಧಿಕ ಇಳುವರಿ, ವಿಶಿಷ್ಟ ಸ್ವಾದ ಹೊಂದಿರುವ ಅಫಘಾನಿಸ್ತಾನ ರಾಷ್ಟ್ರದ 5-6 ದ್ರಾಕ್ಷಿ ತಳಿಗಳನ್ನು ಪರಿಚಯಿಸಲು ಯೋಜಿಸುವ ಕುರಿತು ಕೃಷಿ ಮಾರುಕಟ್ಟೆ, ಜವಳಿ, ಸಕ್ಕರೆ ಹಾಗೂ ಕಬ್ಬು ಅಭಿವೃದ್ಧಿ ಸಚಿವ ಶಿವಾನಂದ ಪಾಟೀಲ ನೇತೃತ್ವದಲ್ಲಿ ನಡೆದ ದಕ್ಷಿಣ ಭಾರತದ ದ್ರಾಕ್ಷಿ ಬೆಳೆಗಾರರ ಸಭೆಯಲ್ಲಿ ನಿರ್ಧರಿಸಲಾಯಿತು.

ನಗರದಲ್ಲಿರುವ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್‌ನಲ್ಲಿ ಸಚಿವ ಶಿವಾನಂದ ಪಾಟೀಲ ಅವರನ್ನು ಭೇಟಿ ಮಾಡಿದ ಕರ್ನಾಟಕ, ಮಹಾರಾಷ್ಟ್ರ, ತಮಿಳುನಾಡು, ಆಂಧ್ರಪ್ರದೇಶ ದ್ರಾಕ್ಷಿ ಬೆಳೆಗಾರರ ಸಂಘದ ಪ್ರತಿನಿಧಿಗಳು ಒಣದ್ರಾಕ್ಷಿ ಸುದೀರ್ಘ ಚರ್ಚೆ ನಡೆಸಿದರು. ಸಭೆಯಲ್ಲಿ ಪಾಲ್ಗೊಂಡಿದ್ದ ರಾಷ್ಟ್ರೀಯ ದ್ರಾಕ್ಷಿ ಬೆಳೆಗಾರರ ಮಹಾಮಂಡಳದ ಅಧ್ಯಕ್ಷ ಸೋಪನ್ ಕಾಂಚನ್ ನೇತೃತ್ವದಲ್ಲಿ ಸಚಿವ ಶಿವಾನಂದ ಪಾಟೀಲ ಅವರನ್ನು ಭೇಟಿಯಾದ ದ್ರಾಕ್ಷಿ ಬೆಳೆಗಾರರು, ದಕ್ಷಿಣ ಭಾರತದ ಕರ್ನಾಟಕ, ಮಹಾರಾಷ್ಟ್ರ, ತಮಿಳುನಾಡು, ಆಂಧ್ರಪ್ರದೇಶ ರಾಜ್ಯಗಳು ದ್ರಾಕ್ಷಿ ಉತ್ಪಾದನೆಯ ಕಣಜ ಎನಿಸಿದೆ. ಆದರೆ ಇಲ್ಲಿ ಉತ್ಪಾದನೆಯಾಗುವ ಒಣದ್ರಾಕ್ಷಿಗೆ ವೈಜ್ಞಾನಿಕ ಮಿತಿ ಮಿತಿಯನ್ನು ಮೀರಿ ರಾಸಾಯನಿಕ ಬಳಕೆ ಮಾಡಲಾಗುತ್ತಿದೆ, ಅಧಿಕ ಉತ್ಪಾದನೆ ಮಾಡಿದರೂ ಗುಣಮಟ್ಟ ಕಾಯ್ದುಕೊಳ್ಳುವಲ್ಲಿ ವಿಫಲವಾಗುತ್ತಿದ್ದೇವೆ ಎಂಬ ಗಂಭೀರ ವಿಷಯದ ಕುರಿತು ದ್ರಾಕ್ಷಿ ಬೆಳೆಗಾರರು ಮುಕ್ತಮನಸ್ಸಿನಿಂದ ಚರ್ಚೆ ನಡೆಸಿದರು.

ರಫ್ತು ಗುಣಮಟ್ಟದ ಒಣದ್ರಾಕ್ಷಿ ಉತ್ಪಾದನೆ ವಿಷಮುಕ್ತ ದ್ರಾಕ್ಷಿ ಬೆಳೆಯುವುದಕ್ಕಾಗಿ ನಿರ್ದಿಷ್ಟವಾಗಿ ಮಾರ್ಗಸೂಚಿ ರೂಪಿಸಬೇಕಿದೆ.

ಮಹಾರಾಷ್ಟ್ರ ಸರ್ಕಾರದ ನೀತಿಗಳು ದ್ರಾಕ್ಷಿ ಬೆಳೆಗಾರರಿಗೆ ಪ್ರೋತ್ಸಾಹದಾಯಕ ಆಗಿಲ್ಲ. ಕರ್ನಾಟಕದಲ್ಲಿ ಇಲ್ಲಿನ ಸರ್ಕಾರದ ನೀತಿಗಳು ದ್ರಾಕ್ಷಿ ಬೆಳೆಗಾರರಿಗೆ ಪ್ರೇರಣಾದಾಯಕವಾಗಿವೆ. ಹೀಗಾಗಿ ಎರಡೂ ರಾಜ್ಯಗಳ ದ್ರಾಕ್ಷಿ ಬೆಳೆಗಾರರ ಶ್ರೇಯಕ್ಕಾಗಿ ವಿಜಯಪುರ ಭಾಗದಲ್ಲಿ ಪ್ರಯೋಗಾಲಯ ಸ್ಥಾಪಿಸಬೇಕು. ರಾಷ್ಟ್ರೀಯ ಸಂಶೋಧನಾ ಕೇಂದ್ರದ ಮಾರ್ಗದರ್ಶನದಲ್ಲಿ ಮಾರ್ಗಸೂಚಿ ರೂಪಿಸಬೇಕು.

ಕೃಷಿ ವಿಷಯದಲ್ಲಿ ಪರಿಣಿತಿ ಹೊಂದಿರುವ ನಿವೃತ್ತ ಐಎಎಸ್ ಅಧಿಕಾರಿಯನ್ನು ಸಮನ್ವಯಕ್ಕಾಗಿ ನೇಮಿಸಿಕೊಂಡು, ದ್ರಾಕ್ಷಿ ಬೆಳೆಗಾರರಿಗೆ ಆದಾಯ ಹೆಚ್ಚಿಸುವ ಕುರಿತು ಯೋಜನೆ ರೂಪಿಸಬೇಕು ಎಂದು ಐಐಎಚ್‌ಆರ್ ರೈತ ಪ್ರತಿನಿಧಿ ಡಾ. ಎಸ್.ಡಿ.ಶಿಖಾಮಣಿ, ದ್ರಾಕ್ಷಿ ಬೆಳೆಗಾರರ ಸಂಘಟನೆ ಉಪಾಧ್ಯಕ್ಷ ಅನಿಲ ಮೆಹರೆ ಇತರರು ಸಲಹೆ ನೀಡಿದರು.


ಉದಯವಾಹಿನಿ ಚಿತ್ರ

**ದ್ರಾಕ್ಷಿ ಬೆಳೆಯಲು ಮಾರ್ಗಸೂಚಿ ಅಗತ್ಯ**

> **ಪ್ರಸಕ್ತ ಸಂದರ್ಭದಲ್ಲಿ ಆಫ್ರಿಕನ್ ರಾಷ್ಟ್ರಗಳಲ್ಲಿ ದ್ರಾಕ್ಷಿ ಬೆಳೆಯಲಾಗುತ್ತಿದ್ದರೂ ತಾಂತ್ರಿಕತೆ ಇಲ್ಲದ ಕಾರಣ ಅಂತರಾಷ್ಟ್ರೀಯ ಮಾರುಕಟ್ಟೆಯಲ್ಲಿ ಅವರು ಪೈಪೋಟಿ ನೀಡಲು ಸಾಧ್ಯವಾಗುತ್ತಿಲ್ಲ. ಇದರ ಲಾಭ ಪಡೆಯಲು ಭಾರತೀಯ ದ್ರಾಕ್ಷಿ ಬೆಳೆಗಾರರಿಗೆ ಸುವರ್ಣಾವಕಾಶವಿದ್ದು, ಈ ನಿಟ್ಟಿನಲ್ಲಿ ಗಂಭೀರ ಚಿಂತನೆ ನಡೆಸಿ, ಸದೃಢ ಹೆಜ್ಜೆ ಇರಿಸಬೇಕಿದೆ** -ಎ.ಎಸ್.ಬಿರಾದಾರ, ಒಣದ್ರಾಕ್ಷಿ ಉದ್ಯಮಿ

> **ಪ್ರಸಕ್ತ ಸಂದರ್ಭದಲ್ಲಿ ಜಾಗತಿಕ ಮಟ್ಟದಲ್ಲಿ ಆರೋಗ್ಯ ಪೂರಕ ಆಹಾರದ ಕುರಿತು ಹೆಚ್ಚು ಕಾಳಜಿ ಹೆಚ್ಚುತ್ತಿದೆ. ಕೃತಕ ಸಕ್ಕರೆ ಅಂಶ ಸೇರಿಸುವ ರಾಸಾಯನಿಕ ಹೊಂದಿರುವ ಒಣದ್ರಾಕ್ಷಿ ಅಂತರಾಷ್ಟ್ರೀಯ ಮಾರುಕಟ್ಟೆಯಲ್ಲಿ ಸ್ವೀಕೃತವಾಗುತ್ತಿಲ್ಲ. ಹೀಗಾಗಿ ವಿಷಮುಕ್ತವಾಗಿ ಸಾವಯವದಲ್ಲಿ ನೈಸರ್ಗಿಕ ಸಕ್ಕರೆ ಅಂಶ ಇರುವಂತೆ ಬೆಳೆಯುವ ಕುರಿತು ದ್ರಾಕ್ಷಿ ಬೆಳೆಗಾರರಲ್ಲಿ ಜಾಗೃತಿ ಮೂಡಿಸಬೇಕಿದೆ.** -ಮಾರುತಿ ಚವ್ಹಾಣ, ದ್ರಾಕ್ಷಿ ಬೆಳೆಗಾರರ ಸಂಘಟನೆ ಉಪಾಧ್ಯಕ್ಷ

### ಸೂಕ್ತ ಅರಿವು ಮೂಡಿಸಬೇಕು

**ರೈತರಿಗೆ ರಫ್ತು ಗುಣಮಟ್ಟದ ಒಣದ್ರಾಕ್ಷಿ ಉತ್ಪಾದನೆ ಮಾಡುವ ಕುರಿತು ಪ್ರಸಕ್ತ ವರ್ಷದಿಂದಲೇ ಸೂಕ್ತ ಅರಿವು ಮೂಡಿಸಬೇಕು. ಮಾರುಕಟ್ಟೆ ಅವಕಾಶಗಳು, ವಿಷಮುಕ್ತ ಉತ್ಪಾದನೆಗೆ ಪ್ರೋತ್ಸಾಹಿಸಲು ರಿಯಾಯ್ತಿ, ಸರ್ಕಾರದ ತೋಟಗಾರಿಕೆ ಇಲಾಖೆ ಮೂಲಕ ಸಾವಯವ ಒಣದ್ರಾಕ್ಷಿ ಉತ್ಪಾದಕ ರೈತರ ನೋಂದಣಿಯಂಥ ಕೆಲಸಗಳು ನಡೆಸಬೇಕು. ಕೃಷಿ ಮಾರುಕಟ್ಟೆಯಲ್ಲಿ ಒಣದ್ರಾಕ್ಷಿಗೆ ಹೆಚ್ಚು ಪ್ರೋತ್ಸಾಹ ನೀಡಬೇಕು ಎಂದು ಕರ್ನಾಟಕ ರಾಜ್ಯದ ದ್ರಾಕ್ಷಿ ಬೆಳೆಗಾರರ ಸಂಘದ ಬಿ.ಎಂ. ಕೋಕರೆ ಸಚಿವರಿಗೆ ಮನವಿ ಮಾಡಿದರು.**

# ಮಹಿಳಾ ಕಾಂಗ್ರೆಸ್ ಸಮಾವೇಶ ಯಶಸ್ವಿಗೆ ಪಲ್ಲವಿ ನಾಡಗೌಡ ಕರೆ

• ಉದಯವಾಹಿನಿ ಮುದ್ದೇಬಿಹಾಳ

ಬುಧುವಾರ ಪಟ್ಟಣದ ಟಾಪ್ ಇನ್ ಟೌನ್ ಹಾಲ್ ನಲ್ಲಿ ಮಹಿಳಾ ಕಾಂಗ್ರೆಸ್ ಸಮಾವೇಶ ನಡೆಯಲಿದ್ದು ಸಮಾವೇಶಕ್ಕೆ ಕೆ ಪಿ ಸಿಸಿ ಮಹಿಳಾ ಘಟಕದ ಅಧ್ಯಕ್ಷೆ ಶ್ರೀಮತಿ ಸೌಮ್ಯ ರೆಡ್ಡಿ ಆಗಮಿಸಲಿದ್ದಾರೆ ಸಮಾವೇಶ ಯಶಸ್ವಿಗೆ ಮತಕ್ಷೇತ್ರದ ಎಲ್ಲಾ ಮಹಿಳಾ ಕಾಂಗ್ರೆಸ್ ಪದಾಧಿಕಾರಿಗಳು ಸಮಾವೇಶದಲ್ಲಿ ಭಾಗವಹಿಸಬೇಕೆಂದು ಕೆಪಿಸಿಸಿ ರಾಜ್ಯ ಪ್ರದಾನ ಕಾರ್ಯದರ್ಶಿ ದೇವಿಕಾ ಸುಬ್ಬರಾವ ಫೌಂಡೇಶನ್ ಅಧ್ಯಕ್ಷೆ ಶ್ರೀಮತಿ ಪಲ್ಲವಿ ನಾಡಗೌಡ ಕರೆ ನೀಡಿದರು ಮಂಗಳವಾರ ಕಾಂಗ್ರೆಸ್ ಕಚೇರಿಯಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು ಸಮಾವೇಶದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಗೊಂಡ ಸೇರ್ಪಡೆಗೊಳ್ಳುವ ನೂತನ ಪದಾಧಿಕಾರಿಗಳ ಪದಗ್ರಹಣ ನಡೆಯಲಿದೆ ಕಾಂಗ್ರೆಸ್ ಮಹಿಳಾ ಸಬಲಿಕರಣ ಸಂಘಟನೆಯೇ ಮುಖ್ಯ ಉದ್ದೇಶ ಸಮಾವೇಶದಾಗಿದೆ ಮಹಿಳಾ ಸಂಘಟನೆಯ ಕುರಿತು ಮುಕ್ತವಾಗಿ ಮಾತನಾಡಲು ಮಹಿಳೆಯರಿಗೆ ಅವಕಾಶ ಮಾಡಿಕೊಡಲಾಗುತ್ತದೆ ಎಂದರು.

# ಕಾಮಗಾರಿಗಳಿಗೆ ಭೂಮಿ ಪೂಜೆ

• ಉದಯವಾಹಿನಿ ನವಲಗುಂದ

ನನ್ನ ವಿಧಾನಸಭಾ ಕ್ಷೇತ್ರದಲ್ಲಿ ಯಾವುದೇ ಕಾರಣಕ್ಕೂ ಅಭಿವೃದ್ಧಿ ಕೆಲಸಗಳು ಕುಂಠಿತವಾಗಬಾರದು ಎನ್ನುವುದು ನನ್ನ ಮುಖ್ಯ ಉದ್ದೇಶ ಹಾಗಾಗಿ ಕ್ಷೇತ್ರದ ಅಭಿವೃದ್ಧಿಗೆ ಹಗಲಿರುಳು ಶ್ರಮಿಸುತ್ತಿದ್ದೇನೆ ಎಂದು ಶಾಸಕ ಎನ್ ಎಚ್ ಕೋನರಡ್ಡಿ ಹೇಳಿದರು. ಅವರು ತಾಲ್ಲೂಕಿನ ಅಳಗವಾಡಿ ಗ್ರಾಮದಲ್ಲಿಯ ಅಲ್ಪಸಂಖ್ಯಾತರ ಇಲಾಖೆಯಿಂದ ಮಸೀದಿ ಕಟ್ಟಡ ನಿರ್ಮಾಣ ಕಾಮಗಾರಿ, ಜಿ.ಹೆಚ್.ಪಿ.ಎಸ್ ಮಾಡೆಲ್ ಸೆಂಟ್ರಲ್ ಶಾಲೆಯ ಕಟ್ಟಡ ದುರಸ್ಥಿ ಕಾಮಗಾರಿ, ಪರಿಶಿಷ್ಟ ಜಾತಿಯ ಓಣಿಯಲ್ಲಿ ಸಿಸಿ ರಸ್ತೆ ಹಾಗೂ ಸಿಸಿ ಗಟಾರ ನಿರ್ಮಾಣ ಕಾಮಗಾರಿ, ಇನ್ನು ಶಾಸಕರ ಪ್ರದೇಶಾಭಿವೃದ್ಧಿ ನಿಧಿ ಯೋಜನೆಯಡಿ ನಡುವಿನಮನಿ ಪ್ರೌಢಶಾಲೆಯಲ್ಲಿ ಅಭಿವೃದ್ಧಿ ಕಾಮಗಾರಿ ಹಾಗೂ ಉಡಚಮ್ಮನ ದೇವಸ್ಥಾನದ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ಚಾಲನೆ ನೀಡಿ ಮಾತನಾಡಿದರು.

# ಕ್ಷೇತ್ರದ ಅಭಿವೃದ್ಧಿಗೆ 2 ವರ್ಷದಲ್ಲಿ 500 ಕೋಟಿ ರೂ.

• ಉದಯವಾಹಿನಿ ಮುದ್ದೇಬಿಹಾಳ

ಮುದ್ದೇಬಿಹಾಳ ಮತಕ್ಷೇತ್ರದ ಅಭಿವೃದ್ಧಿಗೆ ಹಲವು ಇಲಾಖೆವಾರು ಬಂದಂತಹ ಒಟ್ಟು ಅನುದಾನ ಅಂದಾಜು 400 ರಿಂದ 500 ಕೋಟಿ ರೂ ಇದು ಗ್ಯಾರಂಟಿ ಯೋಜನೆ ಹೊರತಾಗಿ ಮತಕ್ಷೇತ್ರದ ಅಭಿವೃದ್ಧಿಗೆ ತಂದಿದ್ದೇನೆ ಎಂದು ಕೆ ಎಸ್ ಡಿ ನಿಗಮದ ಅಧ್ಯಕ್ಷ ಶಾಸಕ ಅಪ್ಪಾಜಿ ನಾಡಗೌಡ ಹೇಳಿದರು.

ಮಂಗಳವಾರ ಹುಡ್ಕೊ ಬಡಾವಣೆಯ ತಮ್ಮ ಗೃಹ ಕಚೇರಿಯಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು ನಾಡಗೌಡರು ಅಭಿವೃದ್ಧಿ ಮಾಡಿಲ್ಲ ಅಂತಾರೆ ಇದು ಅಭಿವೃದ್ಧಿ ಅಲ್ವಾ? ಅಭಿವೃದ್ಧಿ ಮಾಡಿದ್ದನ್ನು ಟಂ ಟಂ ಮಾಡಬೇಕಾ? ಎಂದು ಮಾಜಿ ಶಾಸಕ ನಡಹಳ್ಳಿ ಅವರಿಗೆ ಟಾಂಗ್ ನೀಡಿದ ನಾಡಗೌಡರು ತಮ್ಮ ಅವಧಿಯಲ್ಲಿ ರೈತರ ಸಂಶೋಧನೆ ಕೇಂದ್ರ ಅನುಮೋದನೆ ನೀಡಿದ್ದರು ಅನುಷ್ಠಾನಕ್ಕೆ ತರಲಿಲ್ಲ ಮತ್ತೆ ಇವರು ರೈತರು ಮಗ ಅಂತ ಹೇಳುತ್ತಾರೆ ಎಂದರು.

ಮುದ್ದೇಬಿಹಾಳ ಮತಕ್ಷೇತ್ರದ ಅಭಿವೃದ್ಧಿಗೆ ಸರಕಾರದಿಂದ ಅನುದಾನ ಬಂದಿದೆ ಆದರೆ ವಿರೋಧ ಪಕ್ಷ ಜನರಿಗೆ ಸುಳ್ಳು ಹೇಳುವ ಮೂಲಕ ಗೊಂದಲ ಸೃಷ್ಟಿ ಮಾಡುತ್ತಿದೆ 2 ವರ್ಷದಲ್ಲಿ ನಾನು ತಂದಷ್ಟು ಅನುದಾನ ಹಿಂದಿನ ಶಾಸಕ ನಡಹಳ್ಳಿ ಅವರು ತಂದಿದ್ದರಾ ಉತ್ತರಿಸಬೇಕು ಎಂದರು.


ಉದಯವಾಹಿನಿ ಚಿತ್ರ

> **ಪ್ರತಿ ನಿತ್ಯ ನಾಡಗೌಡರು ಏನು ಮಾಡಿಲ್ಲ ಟೀಕೆ ಮಾಡುವುದು ಸರಿಯಲ್ಲ ಅವರ ಅವಧಿಯಲ್ಲಿ ಅವರು ಮಾಡಿದ ಒಳ್ಳೆಯ ಕಾರ್ಯದ ಕುರಿತು ಟೀಕೆ ನಾ ಮಾಡುವುದಿಲ್ಲ ಅವರ ಒಳ್ಳೆಯ ಕಾರ್ಯ ಸೀಮಿತವಾಗಿದ್ದವು ಸರ್ವಾಂಗೀಣ ಕಲ್ಪನೆ ಅವರಲ್ಲಿ ಆಗಲಿ ಅವರ ಪಕ್ಷಕ್ಕೆ ಇರಲಿಲ್ಲ ಆದರೆ ಕಾಂಗ್ರೆಸ್ ಸರ್ವಾಂಗೀಣ ಅಭಿವೃದ್ಧಿ ಮಾಡುತ್ತಿದೆ.** - ಸಿ.ಎಸ್ ನಾಡಗೌಡ



> **ಬೂದಿಹಾಳ ಪೀರಾಪೂರ ಏತನೀರಾವರಿ ಬಗ್ಗೆ ಮಾತನಾಡುವ ನೈತಿಕತೆ ನಡಹಳ್ಳಿ ಅವರಿಗೆ ಇಲ್ಲ 30 ವರ್ಷದ ಹಿಂದೆ ಹಗರಟಗಿಯ ನೀಲಕಂಠಗೌಡರು ಚಳವಳಿ ಆರಂಭಿಸಿದ್ದರು ,ನಾಗರಬೆಟ್ಟ ಏತನೀರಾವರಿ ವೇಳೆ ಕಾಂಗ್ರೆಸ್ ಸರಕಾರದ ಅವಧಿಯಲ್ಲಿ ಎಂ.ಬಿ ಪಾಟೀಲ್‌ರು ಸಚಿವರಿದ್ದರು ಶಾಸಕರಾಗಿ ನಾನು ನಾಡಗೌಡರಿದ್ದರು ಈ ಕುರಿತು ಬೆಳಗಾವಿ ಸಶೇನ್‌ನಲ್ಲಿ ಸವಿಸ್ತಾರವಾಗಿ ಮಾತನಾಡಿದ್ದು ನಾನು ನೀವು ಮಾತನಾಡಿದ್ದಿರ ಇಲ್ಲಂತ ಹೇಳ್ತಿಲ್ಲ ಆಗ ನೀವು ಕಾಂಗ್ರೆಸ್‌ನಲ್ಲಿ ಇದ್ದರಿ ಎಂಬುದನ್ನು ಮರೆಯಬಾರದು ಬೂದಿಹಾಳ ಪೀರಾಪೂರ ಏತನೀರಾವರಿ ಮಾಡಿದ್ದು ಕಾಂಗ್ರೆಸ್ ಪಕ್ಷ ಅಂತ ಹೇಳಿ** -ಅಪ್ಪಾಜಿ ನಾಡಗೌಡ

# ವಿದ್ಯಾರ್ಥಿಗಳಲ್ಲಿ ಪರಿಸರ ಪ್ರಜ್ಞೆ ಅತ್ಯವಶ್ಯಕ

• ಉದಯವಾಹಿನಿ ಬಾದಾಮಿ

ವಿದ್ಯಾರ್ಥಿಗಳಲ್ಲಿ ಪರಿಸರ ಪ್ರಜ್ಞೆ ಅತ್ಯವಶ್ಯಕವಾಗಿದ್ದು, ಬಾದಾಮಿ ನಗರದ ಸರಕಾರಿ ಕಾಲೇಜಿನ ವಿದ್ಯಾರ್ಥಿಗಳಿಂದ ಸಸಿಗಳ ದತ್ತು ಸ್ವೀಕಾರ ಕಾರ್ಯಕ್ರಮವು ಕರ್ನಾಟಕದಲ್ಲಿಯೇ ಮೊದಲ ಪ್ರಯೋಗವಾಗಿದ್ದು, ಇತರರಿಗೆ ಮಾದರಿಯಾಗಿದೆ ಶಾಸಕ ಭೀಮಸೇನ ಚಿಮ್ಮನಕಟ್ಟಿ ಹೇಳಿದರು.

ಅವರು ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹಳೆಯ ವಿದ್ಯಾರ್ಥಿಗಳ ಸಂಘ ಹಾಗೂ ತಾಲ್ಲೂಕು ಅರಣ್ಯ ಇಲಾಖೆ ಇವರ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಹಸುರು ಹೊನ್ನು- 2025 ವಿದ್ಯಾರ್ಥಿಗಳಿಂದ ಸಸಿಗಳ ದತ್ತು ಸ್ವೀಕಾರ ಕಾರ್ಯಕ್ರಮವನ್ನು ಸಸಿಗಳ ವಿತರಣೆ ಮಾಡುವ ಮೂಲಕ ಉದ್ಘಾಟಿಸಿ ಮಾತನಾಡಿದರು. ವಲಯ ಅರಣ್ಯಾಧಿಕಾರಿ ಸಿದ್ದು ಪೂಜಾರ ಮಾತನಾಡಿ ಪರಿಸರದ ಜಾಗೃತಿ ಪಂಚವಟಿ ಪರಿಕಲ್ಪನೆಯನ್ನು ವಿವರಿಸಿದರು. ಪಂಚವಟಿ ಅಂದರೆ ಪತ್ರಿ, ಅತ್ತಿ, ಬನ್ನಿ, ಅರಳೆ ಮತ್ತು ಬೇವು ಸಸ್ಯಗಳನ್ನು ಒಂದೇ ಜಾಗದಲ್ಲಿ ಶಾಸ್ತ್ರಬದ್ಧವಾಗಿ ನೆಟ್ಟು ಅವುಗಳನ್ನು ಬೆಳೆಸುವುದಾಗಿದೆ ಎಂದರು.

# ಸಾಮಾಜಿಕ ಬೆಳವಣಿಗೆಗೆ ಪತ್ರಕರ್ತರು, ಶಿಕ್ಷಕರು ಪ್ರಾಮುಖ್ಯತೆ ಮುಖ್ಯ: ಬಿ ಎಂ ಹನೀಫ್

• ಉದಯವಾಹಿನಿ ಸಿಂಧನೂರು

ಪತ್ರಕರ್ತರು ಶಿಕ್ಷಕರು ಇಬ್ಬರೂ ದಾರಿ ತಪ್ಪಿದರೆ ಸಮಾಜ ಒಳ್ಳೆ ಬೆಳವಣಿಗೆ ಹೊಂದುವುದಕ್ಕೆ ಸಾಧ್ಯವಿಲ್ಲ .ಆದ್ದರಿಂದ ಇವರಿಬ್ಬರ ಪ್ರಾಮುಕ್ಯತೆ ಸಮಾಜದಲ್ಲಿ ಬಹುಳ ಮುಖ್ಯವಾದದ್ದು ಎಂದು ತ್ರಿವರ್ಣ ನ್ಯೂಸ್ ಸಂಪಾದಕರು ಬಿ.ಎಂ. ಹನೀಫ್ ಅವರು ಹೇಳಿದರು. ಲಿಂಗಸುಗೂರು ತಾಲ್ಲೂಕಿನ ಶ್ರೀ ವಿಜಯ ಮಾಂತೇಶ್ವರ ದೇವಸ್ಥಾನದಲ್ಲಿ ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಜಿಲ್ಲಾ ಘಟಕ ಹಾಗೂ ವಾರ್ತಾ ಮತ್ತು ಸಾರ್ವಜನಿಕರ ಸಂಪರ್ಕ ಇಲಾಖೆ ವತಿಯಿಂದ ಆಯೋಜಿಸಿದ್ದ. ಜಿಲ್ಲಾ ಮಟ್ಟದ ಪತ್ರಿಕಾ ದಿನಾಚರಣೆ ಹಾಗೂ ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭ ಕಾರ್ಯಕ್ರಮಕ್ಕೆ ವಿಶೇಷ ಭಾಷಣಕಾರರಾಗಿ ಉಪನ್ಯಾಸವನ್ನು ನೀಡಿದರು. ಪತ್ರಿಕೋದ್ಯಮ ಅಧಿಕಾರಿಗಳು ಹಾಗೂ ಜನರು ಮಧ್ಯ ಒಂದು ಸೇತುವೆದ್ದಂತೆ ಈ ವಿಭಾಗಗಳು ಮುಚ್ಚಿಸುವುದಕ್ಕೆ ಹೊರಟರೆ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆ ಆಗುವುದರಲ್ಲಿ ಯಾವುದೇ ಸಂಶಯವಿಲ್ಲ, ಈಗಾಗಿ ನಾವು ಸಾಮಾಜಿಕ ನ್ಯಾಯ ಸಮಿತಿಗಾಗಿ ಪತ್ರಿಕೋದ್ಯಮ ವಿಭಾಗದಲ್ಲಿ ವಿದ್ಯಾಲಯಗಳಲ್ಲಿ ಬಂದ್ ಮಾಡಿದಂತೆ ಸರ್ಕಾರಗಳು ಮುಂದಾಗಬೇಕು ಎಂದರು. ಈ ಸಂ. ಜಿಲ್ಲಾ ಮಟ್ಟದ ಪತ್ರಿಕಾ ದಿನಾಚರಣೆ ಅಂಗವಾಗಿ ಪ್ರಶಸ್ತಿಗೆ ಆಯ್ಕೆಯಾದ ಕಾರ್ಯನಿರತ ಪತ್ರಕರ್ತರಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು ಈ ಸಂದರ್ಭದಲ್ಲಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಆರ್ ಗುರುನಾಥ್ ಅವರು ಅಧ್ಯಕ್ಷತೆ ವಹಿಸಿದ್ದರು.



ಉದಯವಾಹಿನಿ ಚಿತ್ರ

> **ದೇಶದ ಇತಿಹಾಸದಲ್ಲಿ ಪತ್ರಕರ್ತರಿಗೆ ಅಮೂಲ್ಯವಾದ ಕೊಡುಗೆಯನ್ನು ನೀಡಿದ್ದಾರೆ ಎಂದರೆ ತಪ್ಪಾಗಲಾರದು. ಏಕೆಂದರೆ ಪತ್ರಕರ್ತರು ನಿಸ್ವಾರ್ಥವಾಗಿ ಮತ್ತು ಪ್ರಾಮಾಣಿಕವಾಗಿ ಸಾಮಾಜಿಕ ನ್ಯಾಯ ಪರವಾಗಿ ಸಾಮಾಜ ಮುಖಿವಾಗಿ ಕೆಲಸದ ಕಾರ್ಯ ನಿರ್ವಹಿಸುತ್ತಾರೆ.** - ಎನ್ ಎಸ್ ಬೋಸರಾಜ್ , ಸಣ್ಣ ನೀರಾವರಿ ಸಚಿವ

> **ಸರ್ಕಾರ ಹಾಗೂ ಜನಪ್ರತಿನಿಧಿಗಳು ತಪ್ಪುಗಳನ್ನು ತಿದ್ದುವ ಸ್ವಾತಂತ್ರ್ಯ ಪತ್ರಕರ್ತರಗಿದೆ ಇವತ್ತು ನಾವು ಪತ್ರಿಕೋದ್ಯಮ ಮಾರಕವಾಗಿದೆ. ಪತ್ರಕರ್ತರ ಜೀವನಕ್ಕೆ ಭದ್ರತೆ ಇಲ್ಲ. ಯಾವುದೇ ಸಂಬಳ ಇಲ್ದೆ ಕೆಲಸ ಮಾಡುತ್ತಿದ್ದಾರೆ. ಪತ್ರಕರ್ತರ ವೃತ್ತಿಯಲ್ಲಿ ಭದ್ರತೆ ಇಲ್ಲ. ಇವರುಗಳು ಜೀವನ ಶೈಲಿಯಲ್ಲಿ ಬದಲಾವಣೆ ತರುವುದರ ಬಗ್ಗೆ ಸರ್ಕಾರ ಗಮನ ಹರಸಲಿದೆ. ಇವತ್ತಿನ ಡಿಜಿಟಲ್ ಮೀಡಿಯಾಗಳಿಂದ ಪತ್ರಿಕೆ ಓದುಗರ ಸಂಖ್ಯೆ ಕಡಿಮೆಯಾಗುತ್ತಿದೆ ಕ್ಷಣ ಕ್ಷಣಕ್ಕೂ ಪ್ರಿಂಟ್ ಮೀಡಿಯಾಗಳು ಸುದ್ದಿ ಸಂಗ್ರಹ ಮಾಡುವ ಜವಾಬ್ದಾರಿಗಳಿವೆ. ಸೋಶಿಯಲ್ ಮೀಡಿಯಾಗಳು ಹೆಚ್ಚಾಗಿವೆ ಮಕ್ಕಳ ಯುವಕರು ವೃದ್ದರು ಕೈಯಲ್ಲಿ ಮೊಬೈಲ್ ಹೆಚ್ಚಾಗಿದ್ದು ಆಂತರಿಕವಾಗಿದೆ.** -ಶರಣ ಪ್ರಕಾಶ್ ಪಾಟೀಲ್, ಜಿಲ್ಲಾ ಉಸ್ತುವಾರಿ ಸಚಿವ

# ಖಾಯಂ ಜನತಾ ನ್ಯಾಯಾಲಯದಲ್ಲಿ ಪ್ರಕರಣಗಳ ತ್ವರಿತ ವಿಲೇವಾರಿ

• ಉದಯವಾಹಿನಿ ಮಂಗಳೂರು

ಮಂಗಳೂರಿನಲ್ಲಿ ಕಾರ್ಯಾಚರಿಸುತ್ತಿರುವ ಖಾಯಂ ಜನತಾ ನ್ಯಾಯಾಲಯದಲ್ಲಿ ವಿವಿಧ ಪ್ರಕರಣಗಳನ್ನು ಅತ್ಯಂತ ಸರಳ ಮತ್ತು ಸುಲಲಿತವಾಗಿ ಇತ್ಯರ್ಥ ಪಡಿಸಲಾಗುತ್ತದೆ ಎಂದು ಜನತಾ ನ್ಯಾಯಾಲಯದ ಅಧ್ಯಕ್ಷ ಹಾಗೂ ನ್ಯಾಯಾಧೀಶ ಜೈಶಂಕರ್ ಅವರು ತಿಳಿಸಿದರು. ಅವರು ಜನತಾ ನ್ಯಾಯಾಲಯ ಕಚೇರಿಯಲ್ಲಿ ವಿವಿಧ ಇಲಾಖೆ ಮತ್ತು ಸಂಸ್ಥೆಗಳ ಸಭೆ ನಡೆಸಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಖಾಯಂ ಜನತಾ ನ್ಯಾಯಾಲಯದಲ್ಲಿ ನ್ಯಾಯಾಧೀಶರು ಮತ್ತು ಇಬ್ಬರು ಸದಸ್ಯರಿದ್ದಾರೆ. ಸಾರ್ವಜನಿಕ ಸೇವೆಗಳಿಗೆ ಸಂಬಂಧಿಸಿದ ಪ್ರಕರಣಗಳನ್ನು ಇಲ್ಲಿ ಇತ್ಯರ್ಥಪಡಿಸಲಾಗುತ್ತಿದೆ. ಪ್ರಕರಣ ದಾಖಲು ಪ್ರಕ್ರಿಯೆ ಅತ್ಯಂತ ಸರಳವಾಗಿದ್ದು ಅತಿ ಕಡಿಮೆ ಅವಧಿಯಲ್ಲಿ ಪ್ರಕರಣವನ್ನು ಇತ್ಯರ್ಥ ಪಡಿಸಲಾಗುತ್ತಿದೆ ಎಂದು ಅವರ ತಿಳಿಸಿದರು.

ಖಾಯಂ ಜನತಾ ನ್ಯಾಯಾಲಯವು ಪರ್ಯಾಯ ಪರಿಹಾರ ವ್ಯವಸ್ಥೆಯಾಗಿ ಕಾರ್ಯನಿರ್ವಹಿಸುತ್ತಿದೆ. ಇಲ್ಲಿ ಪೂರ್ಣ ಪ್ರಮಾಣದ ನ್ಯಾಯಾಧೀಶರೇ ಸೇವೆಯಲ್ಲಿರುತ್ತಾರೆ. ಸರಳ ದಾಖಲೆ ಪ್ರಕ್ರಿಯೆ ಮತ್ತು ಅಗತ್ಯವಿದ್ದರೆ ಮಾತ್ರ ಸಾಕ್ಷಿ ವಿಚಾರಣೆ ನಡೆಯಲಿದೆ. ಯಾವುದೇ ನ್ಯಾಯಾಲಯ ಶುಲ್ಕ ಇರುವುದಿಲ್ಲ ಎಂದು ಅವರು ತಿಳಿಸಿದರು. ಸಾರಿಗೆ ಸೇವೆ, ಅಂಚೆ, ವಿದ್ಯುತ್, ಬ್ಯಾಂಕಿಂಗ್ ಮತ್ತು ಹಣಕಾಸು ಸಂಸ್ಥೆ, ಶಿಕ್ಷಣ ಸಂಸ್ಥೆ, ರಿಯಲ್ ಎಸ್ಟೇಟ್, ವಿಮೆ, ವೈದ್ಯಕೀಯ ನಿರ್ಲಕ್ಷ್ಯತೆ ಮತ್ತಿತರ ಪ್ರಕರಣಗಳನ್ನು ಇಲ್ಲಿ ಕೈಗೆತ್ತಿಕೊಳ್ಳಲಾಗುವುದು ಎಂದು ಅವರು ತಿಳಿಸಿದರು. ಖಾಯಂ ಜನತಾ ನ್ಯಾಯಾಲಯವು ದ. ಕನ್ನಡ ಜಿಲ್ಲಾ ನ್ಯಾಯಾಲಯ ಸಂಕೀರ್ಣದ 6 ನೇ ಮಹಡಿಯಲ್ಲಿ ಕಾರ್ಯಾಚರಿಸುತ್ತಿದೆ. ಮಂಗಳೂರು, ಉಡುಪಿ, ಶಿವಮೊಗ್ಗ ಮತ್ತು ಚಿಕ್ಕಮಗಳೂರು ವ್ಯಾಪ್ತಿಯನ್ನು ಹೊಂದಿದೆ ಎಂದು ಅವರು ತಿಳಿಸಿದರು. ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ, ನ್ಯಾಯಾಧೀಶೆ ಜೈಬುನ್ನೀಸಾ, ಖಾಯಂ ಜನತಾ ನ್ಯಾಯಾಲಯದ ಸದಸ್ಯರಾದ ಫಜಲ್ ರಹೀಮ್, ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

> **ಬ್ಯಾಂಕ್ ಮತ್ತು ಹಣಕಾಸು ಸಂಸ್ಥೆಗಳ ವಿವಿಧ ಸಾಲ ಸಂಬಂಧಿತ ವ್ಯಾಜ್ಯಗಳನ್ನು ಇಲ್ಲಿ ಪರಿಹರಿಸಿಕೊಳ್ಳಬಹುದಾಗಿದೆ. ಇಲ್ಲಿನ ಆದೇಶವು ಅಂತಿಮವಾಗಿದ್ದು ಮೇಲ್ಮನವಿಗೆ ಅವಕಾಶವಿಲ್ಲ. ರೂ.1 ಕೋಟಿವರೆಗಿನ ಮೊತ್ತದ ಪ್ರಕರಣಗಳನ್ನು ಇಲ್ಲಿ ಇತ್ಯರ್ಥಗೊಳಿಸಲಾಗುತ್ತದೆ. ಅತಿ ಸಣ್ಣ ಮೊತ್ತದ ಪ್ರಕರಣಗಳನ್ನು ಕೂಡಾ ಇಲ್ಲಿ ದಾಖಲಿಸಬಹುದು** -ಜೈಶಂಕರ್, ನ್ಯಾಯಾಧೀಶ

# ಡಾ. ಬೆಳ್ಳಿಯವರ ಕೃಷಿ ಸೇವೆ ವರ್ಣನಾತೀತ: ಸ್ವಾಮೀಜಿ

• ಉದಯವಾಹಿನಿ ಇಂಡಿ

ಇಂಡಿ ಕೃಷಿ ವಿಶ್ವವಿದ್ಯಾಲಯದಲ್ಲಿ ಮತ್ತು ಕೃಷಿ ಇಲಾಖೆಯಲ್ಲಿ ರೈತರ ಏಳಿಗೆಗೆ ಪೂರಕವಾಗಿ ಕೆಲಸ ಮಾಡಿದ ಸರಕಾರಿ ಕೃಷಿ ಅಧಿಕಾರಿ ಡಾ.ಆರ್.ಬಿ.ಬೆಳ್ಳಿಯವರ ಸೇವೆ ವರ್ಣತಾತೀತ ಎಂದು ಬೀದರದ ಸಿದ್ದರಾಮೇಶ್ವರ ಸ್ವಾಮೀಜಿ ಹೇಳಿದರು.

ಪಟ್ಟಣದ ಕೃಷಿ ವಿಜ್ಞಾನ ಕೇಂದ್ರದಲ್ಲಿ ನಿವೃತ್ತಗೊಂಡ ಡಾ. ಬೆಳ್ಳಿಯವರಿಗೆ ಸನ್ಮಾನ ಸಮಾರಂಭ ಮತ್ತು ಕುರಿ ಮತ್ತು ಆಡು ತರಬೇತಿ ಕಾರ್ಯಕ್ರಮದಲ್ಲಿ.ಡಾ. ಬೆಳ್ಳಿಯವರ ಸನ್ಮಾನ ಕುರಿತು ಮಾತನಾಡಿದರು. ಕೃಷಿ ಉಪ ನಿರ್ದೇಶಕ ಚಂದ್ರಕಾಂತ ಪವಾರ ಮಾತನಾಡಿ ಬೆಳ್ಳಿಯವರದು ರೈತರೊಂದಿಗೆ ಒಳ್ಳೆಯ ಒಡನಾಟ, ರೈತರಿಗೆ ಮಾಹಿತಿ ನೀಡಿ ಬೆಳೆ ಬೆಳೆಸುವಲ್ಲಿ ಹೆಚ್ಚಿನ ಉತ್ಪಾದನೆ ಮಾಡಿಸುವಲ್ಲಿ ಬೆಳ್ಳಿ ಕಾರ್ಯ ಶ್ಲಾಘನೀಯ. ಬೆಳ್ಳಿಯವರು ತಮ್ಮ ಮನೆಯಲ್ಲಿ ಹೆಚ್ಚು ರೈತರು ಬಂದರೆ ಅದಕ್ಕೆಂದೆ ಒಂದು ಸಭಾ ಭವನ ನಿರ್ಮಿಸಿ ಅಲ್ಲಿ ಉಳಿದುಕೊಳ್ಳಲು ವ್ಯವಸ್ಥೆ ಮಾಡಿರುವದು ಅವರು ರೈತರ ಕಾಳಜಿ ತೋರಿಸುತ್ತದೆ ಎಂದರು. ಸನ್ಮಾನಿತ ಡಾ. ಆರ್.ಬಿ.ಬೆಳ್ಳಿ, ಕೃಷಿ ವಿವಿ ವಿದ್ಯಾರ್ಥಿ ಮಲ್ಲಿಕಾರ್ಜುನ, ಶ್ರೀಶೈಲ ಆಳೂರ, ಚಂದ್ರಶೇಖರ ಪಾಸೋಡಿ, ಎಸ್.ಟಿ.ಪಾಟೀಲ, ಮುತ್ತುಗೌಡ ಪಾಟೀಲ, ಕೃಷಿ ವಿಜ್ಞಾನ ಕೇಂದ್ರದ ಡಾ. ಪ್ರೇಮಚಂದ್ರ, ಡಾ. ಪ್ರಸಾದ, ಡಾ. ಬೆಳ್ಳಿಯವರ ಕೃಷಿ ಕ್ಷೇತ್ರದಲ್ಲಿ ರೈತರಿಗೆ ಮಾಡಿದ ಸಹಾಯ ಕುರಿತು ಮಾತನಾಡಿದರು. ವೇದಿಕೆಯ ಮೇಲೆ ಕೃಷಿ ವಿಜ್ಞಾನ ಕೇಂದ್ರದ ಮುಖ್ಯ ಡಾ. ಶಿವಶಂಕರ ಮೂರ್ತಿ, ಕೃಷಿ ವಿವಿ ಪ್ರಾಧ್ಯಾಪಕ ಡಾ. ಶ್ರೀನಿವಾಸ, ಸಂಕಪ್ಪ ಹತ್ತರಕಿ ಡಾ. ವೀಣಾ ಚಂದಾವರಿ, ಮಂಜುಳಾ, ಡಾ. ಪ್ರಕಾಶ, ಮಜೀದ ಮತ್ತಿತರಿದ್ದರು. ಇದೇ ವೇಳೆ ರೈತರಿಗೆ ಕುರಿ ಮತ್ತು ಆಡು ಸಾಗಾಣಿಕೆ ತರಬೇತಿ ನೀಡಲಾಯಿತು. ಇದೇ ವೇಳೆ ಶ್ರೀಗಳು, ಕೃಷಿ ಇಲಾಖೆಯಿಂದ ಚಂದ್ರಕಾಂತ ಪವಾರ, ಪಟ್ಟಣದ ಧನಶೆಟ್ಟಿ ಅಗ್ರೋ ಕೇಂದ್ರದಿಂದ, ಕೃಷಿ ವಿದ್ಯಾರ್ಥಿಗಳಿಂದ, ನೂರಾರು ಪ್ರಗತಿಪರ ರೈತರು ಬೆಳ್ಳಿಯವರಿಗೆ ಸನ್ಮಾನಿಸಿದರು.


ಉದಯವಾಹಿನಿ ಚಿತ್ರ

# ದೊಡ್ಡಿಗನಹಾಳ್ ಗ್ರಾಮದಲ್ಲಿ ಉಚಿತ ಆರೋಗ್ಯ ತಪಾಸಣೆ ಮತ್ತು ಯೋಗ ತರಬೇತಿ ಶಿಬಿರ

## ಯೋಗ ಕಲಿತು ಔಷಧ ಮುಕ್ತ ಜೀವನ ನಡೆಸುವಂತೆ ಸಮುದಾಯ ಆರೋಗ್ಯಾಧಿಕಾರಿ ಪುನೀತ್ ಸಲಹೆ

• ಉದಯವಾಹಿನಿ ಚಿತ್ರದುರ್ಗ

ಸಾಂಕ್ರಾಮಿಕವಲ್ಲದ ರೋಗಗಳನ್ನು ತಡೆಗಟ್ಟುವುದು ಮತ್ತು ಅವುಗಳನ್ನು ನಿಯಂತ್ರಿಸುವ ಉದ್ದೇಶದಿಂದ ಆರೋಗ್ಯ ಇಲಾಖೆ ವತಿಯಿಂದ ಪ್ರತಿ ಮಂಗಳವಾರ ಹಮ್ಮಿಕೊಳ್ಳಲಾಗುತ್ತಿರುವ ಆರೋಗ್ಯ ಶಿಬಿರಗಳಲ್ಲಿ ಈಗ ಯೋಗ ತರಬೇತಿ ಜಾರಿಗೆತಂದಿದ್ದು ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಯೋಗ ತರಬೇತಿ ಪಡೆದು ಗ್ರಾಮವನ್ನು ಔಷಧ ಮುಕ್ತ ಮತ್ತು ರೋಗ ಮುಕ್ತಗೊಳಿಸಬೇಕಿದೆ. ಇದಕ್ಕಾಗಿ ಆರೋಗ್ಯ ಇಲಾಖೆಯೊಂದಿಗೆ ಗ್ರಾಮಸ್ಥರ ಸಹಕಾರ ಅಗತ್ಯವಾಗಿದೆ ಎಂದು ಡಿ.ಮದಕರಿಪುರ ಆಯುಷ್ಮಾನ್ ಆರೋಗ್ಯ ಮಂದಿರದ ಸಮುದಾಯ ಆರೋಗ್ಯಾಧಿಕಾರಿ ಪುನೀತ್ ಡಿ.ಟಿ. ಅಭಿಪ್ರಾಯ ಪಟ್ಟಿದ್ದಾರೆ.

ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಚಿತ್ರದುರ್ಗ,ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರ ಹಿರೇಗುಂಟನೂರು ಸಹಯೋಗದೊಂದಿಗೆ ಚಿತ್ರದುರ್ಗ ತಾಲ್ಲೂಕಿನ ಡಿ.ಮದಕರಿಪುರ ಆಯುಷ್ಮಾನ್ ಆರೋಗ್ಯ ಮಂದಿರ ವತಿಯಿಂದ ದೊಡ್ಡಿಗನಹಾಳ್ ಹೊಸಹಟ್ಟಿ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ ಆರೋಗ್ಯ ಶಿಬಿರದಲ್ಲಿ ಗ್ರಾಮಸ್ಥರಿಗಾಗಿ ನೀಡಲಾದ ಯೋಗ ತರಬೇತಿಯನ್ನು ಉದ್ದೇಶಿಸಿ ಅವರುವ ಮಾತನಾಡಿದರು.

ಜನರು ಮಧುಮೇಹ, ಅಧಿಕ ರಕ್ತದೊತ್ತಡ, ಹೃದಯ ಸಂಬಂಧಿ ರೋಗಗಳು, ಕ್ಯಾನ್ಸರ್ ಮತ್ತು ದೀರ್ಘಕಾಲದ ಶ್ವಾಸಕೋಶದ ಕಾಯಿಲೆಗಳಂತಹ ಸಾಂಕ್ರಾಮಿಕವಲ್ಲದ ರೋಗಗಳ ಬಗ್ಗೆ ನೀಡಲಾಗುವ ಯೋಗಾಸನ ಕ್ರಿಯೆಗಳು, ಪ್ರಾಣಾಯಾಮಗಳ ತರಬೇತಿ ಸರಿಯಾದ ರೀತಿಯಲ್ಲಿ ಕಲಿತು ಅದನ್ನು ಪ್ರತಿದಿನದ ಜೀವನದಲ್ಲಿ ಅಳವಡಿಸಿಕೊಂಡು ರೋಗಮುಕ್ತರಾಗಿ ಜೀವನ ನಡೆಸಬೇಕೆಂದು ಗ್ರಾಮಸ್ಥರಿಗೆ ಸಲಹೆ ನೀಡಿದರು. ಇಂದಿನ ಆರೋಗ್ಯ ಶಿಬಿರದಲ್ಲಿ ಯೋಗ ತರಬೇತಿಯ ಜೊತೆಗೆ ಗ್ರಾಮಸ್ಥರಿಗೆ ಮಧುಮೇಹ, ಅಧಿಕರಕ್ತದೊತ್ತಡ ತಪಾಸಣೆ, ಕಫ ಪರೀಕ್ಷೆಗಳನ್ನು ಮಾಡಿ ಸೂಕ್ತ ಔಷಧಿಗಳನ್ನು ನೀಡಲಾಯಿತು. ಕಾರ್ಯಕ್ರಮದಲ್ಲಿ ದೊಡ್ಡಿಗನಹಾಳ್ ಗ್ರಾಮದ ಆಶಾಕಾರ್ಯಕರ್ತೆ ಶ್ರೀಮತಿ ಕರಿಬಸಮ್ಮ, ಅಂಗನವಾಡಿ ಕಾರ್ಯಕರ್ತೆ ಶ್ರೀಮತಿ ಮೀನಮ್ಮ ಹಾಗೂ ಗ್ರಾಮದ ಮುಖಂಡರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

> **ಜನರು ತಮ್ಮ ಆರೋಗ್ಯದ ಬಗ್ಗೆ ತಿಳಿದುಕೊಳ್ಳಲು ಮತ್ತು ಗ್ರಾಮಸ್ಥರ ರೋಗದ ಅಪಾಯಕಾರಿ ಅಂಶಗಳನ್ನು ಗುರುತಿಸಲು ಈ ಎನ್ ಸಿ ಡಿ ಆರೋಗ್ಯ ಶಿಬಿರದಲ್ಲಿ ಪರೀಕ್ಷೆಗಳನ್ನು ಮಾಡಲಾಗುತ್ತದೆ ಮತ್ತು ಜನರು ತಮ್ಮ ಆರೋಗ್ಯದ ಬಗ್ಗೆ ಜವಾಬ್ದಾರಿಯನ್ನು ತೆಗೆದುಕೊಳ್ಳುವಂತೆ ಮಾಡಲಾಗುತ್ತದೆ. ಪ್ರತಿಯೊಂದು ಕಾಯಿಲೆಗಳಿಗೆ ಔಷಧ ಸೇವಿಸುವುದೇ ಪರಿಹಾರವಲ್ಲ ಉತ್ತಮ ಪೌಷ್ಟಿಕ ಆಹಾರ, ಯೋಗ ವ್ಯಾಯಾಮಗಳಿಂದಲೇ ಸಾಕಷ್ಟು ರೋಗಗಳನ್ನು ಪರಿಹರಿಸಿಕೊಳ್ಳಬಹುದು.** -ಶ್ರೀಮತಿ ವೀರಮ್ಮ ಎಸ್.ಎಂ. ಆರೋಗ್ಯ ಸುಶ್ರುಷ್ಣಾಧಿಕಾರಿ

**ಔಷಧ ಸೇವಿಸುವುದೇ ಪರಿಹಾರವಲ್ಲ**

> **ಶಿಬಿರದಲ್ಲಿ ಯೋಗ ಚಿಕಿತ್ಸಕ ರವಿ ಕೆ.ಅಂಬೇಕರ್ ಗ್ರಾಮಸ್ಥರಿಗೆ ಯೋಗ ತರಬೇತಿ ನೀಡುತ್ತಾ ಮಾತನಾಡಿ ಗ್ರಾಮೀಣ ಪ್ರದೇಶದ ಜನರು ದೈಹಿಕ ಶ್ರಮದಾಯಕ ಕೆಲಸಗಳಲ್ಲಿ ಹೆಚ್ಚು ತೊಡಗಿರುತ್ತಾರೆ. ಇದರಿಂದ ದೇಹದ ನೋವು, ಆಯಾಸ ಸಾಮಾನ್ಯ. ಯೋಗವು ದೇಹದ ನಮ್ಯತೆ, ಸ್ನಾಯುಗಳ ಶಕ್ತಿ ಮತ್ತು ಸಹಿಷ್ಣುತೆಯನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ. ಇದು ಬೆನ್ನುನೋವು, ಕೀಲು ನೋವು, ಮತ್ತು ಇತರ ದೈಹಿಕ ಸಮಸ್ಯೆಗಳನ್ನು ಕಡಿಮೆ ಮಾಡುತ್ತದೆ. ಯೋಗವು ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸಲು, ರಕ್ತದೊತ್ತಡವನ್ನು ನಿಯಂತ್ರಿಸಲು ಮತ್ತು ಮಧುಮೇಹದಂತಹ ಕಾಯಿಲೆಗಳನ್ನು ನಿರ್ವಹಿಸಲು ಸಹಾಯ ಮಾಡುತ್ತದೆ. ಇದಕ್ಕಾಗಿ ಗ್ರಾಮದ ಪ್ರತಿಯೊಬ್ಬರೂ ಯೋಗವನ್ನು ಕಲಿತರೆ ನಿಮ್ಮ ವ್ಯವಸಾಯದ ಜೀವನವನ್ನು ಇನ್ನೂ ಹೆಚ್ಚಿನ ಉತ್ಸಾಹದಿಂದ ಸಾಗಿಸಬಹುದಾಗಿದೆ.** -ರವಿ ಕೆ.ಅಂಬೇಕರ್ , ಯೋಗ ಚಿಕಿತ್ಸಕ

• ಗುಪ್ತಚರ ಮಾಹಿತಿ ಬಂದ ಹಿನ್ನೆಲೆಯಲ್ಲಿ ಭಯೋತ್ಪಾದಕರ ವಿರುದ್ಧದ ಮಿಲಿಟರಿ ಕಾರ್ಯಾಚರಣೆ

# ಆಪರೇಷನ್ ಮಹಾದೇವ್: ಅಡಗಿರುವ ಉಗ್ರರಿಗಾಗಿ ಶೋಧ



**ಶ್ರೀನಗರ:** ಕಣಿವೆ ರಾಜ್ಯ ಜಮ್ಮು-ಕಾಶ್ಮೀರದ ಶ್ರೀನಗರ ಬಳಿಯ ದಚಿಗಾಮ್‌ನ ದಟ್ಟ ಕಾಡುಗಳಲ್ಲಿ ಇನ್ನೂ ಹೆಚ್ಚಿನ ಭಯೋತ್ಪಾದಕರು ಇರುವ ಬಗ್ಗೆ ಗುಪ್ತಚರ ಮಾಹಿತಿ ಬಂದ ಹಿನ್ನೆಲೆಯಲ್ಲಿ ಭಯೋತ್ಪಾದಕರ ವಿರುದ್ಧದ ಮಿಲಿಟರಿ ಕಾರ್ಯಾಚರಣೆ ಆಪರೇಷನ್ ಮಹಾದೇವ್ ಮತ್ತು ಶೋಧ ಕಾರ್ಯವನ್ನು ಎರಡನೇ ದಿನವೂ ಭದ್ರತಾ ಪಡೆಗಳು ಮತ್ತಷ್ಟು ತೀವ್ರಗೊಳಿಸಿವೆ.

ಮುಂಜಾನೆ, ಭದ್ರತಾ ಪಡೆಗಳು ಈ ಪ್ರದೇಶದಲ್ಲಿ ನಡೆದ ಎನ್‌ಕೌಂಟರ್‌ನಲ್ಲಿ ಮೂವರು ಭಯೋತ್ಪಾದಕರನ್ನು ಹೊಡೆದು ಹಾಕಿದ್ದರು. ಹತ್ಯೆಗೀಡಾದವರು ಪಾಕಿಸ್ತಾನ ಬೆಂಬಲಿತ ಭಯೋತ್ಪಾದಕ ಗುಂಪಿನ ದಿ ರೆಸಿಸ್ಟೆನ್ಸ್ ಫ್ರಂಟ್‌ನ ಸದಸ್ಯರಾಗಿರಬಹುದು ಎಂದು ಶಂಕಿಸಲಾಗಿದೆ.

ಆದಾಗ್ಯೂ, ಅವರ ಗುರುತುಗಳನ್ನು ಇನ್ನೂ ಅಧಿಕೃತವಾಗಿ ದೃಢಪಡಿಸಲಾಗಿಲ್ಲ. ಹತ್ಯೆಗೀಡಾದ ಭಯೋತ್ಪಾದಕರನ್ನು ಗುರುತಿಸಲು ಬಯೋಮೆಟ್ರಿಕ್, ಮುಖ ಗುರುತಿಸುವಿಕೆ ಬಳಸಲಾಗುತ್ತದೆ. ಗುರುತುಗಳನ್ನು ಪರಿಶೀಲಿಸುವ ಪ್ರಕ್ರಿಯೆ ಮುಂದುವರೆದಿದೆ ಎಂದು ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್‌ಐಎ) ತಿಳಿಸಿದೆ.

ಜಮು ಮತ್ತು ಕಾಶ್ಮೀರ ಪೊಲೀಸರು, ಎನ್‌ಐಎ ಮತ್ತು ಮಿಲಿಟರಿ ಗುಪ್ತಚರ ವಿಭಾಗವು ಶಂಕಿತರೊಂದಿಗೆ ಶವಗಳ ಗುರುತಿಸುವಿಕೆಯನ್ನು ಪತ್ತೆ ಮಾಡಲು ಬಯೋಮೆಟ್ರಿಕ್ ಡೇಟಾ ಮತ್ತು ಮುಖ ಗುರುತಿಸುವಿಕೆ ದಾಖಲೆಗಳನ್ನು ವಿಶ್ಲೇಷಿಸುತ್ತಿದೆ. ಇತರ ಗುಪ್ತಚರ ಸಂಸ್ಥೆಗಳು ಸಹ ಈ ಪ್ರಕ್ರಿಯೆಯಲ್ಲಿ ಸಹಾಯ ಮಾಡುತ್ತಿವೆ. ಭಯೋತ್ಪಾದಕರ ಮೊಬೈಲ್ ಫೋನ್‌ಗಳು ಮತ್ತು ಇತರ ವಸ್ತುಗಳನ್ನು ವಿವರವಾದ ಪರೀಕ್ಷೆಗಾಗಿ ವಿಧಿವಿಜ್ಞಾನ ಪ್ರಯೋಗಾಲಯಗಳಿಗೆ ಕಳುಹಿಸಲಾಗಿದೆ.

**ಅರಣ್ಯ ಪ್ರದೇಶದಲ್ಲಿ ಹೆಚ್ಚಿನ ಶಂಕಿತರು**

ಎಲ್ಲಾ ವಿವರಗಳನ್ನು ಪರಿಶೀಲಿಸಿದ ನಂತರ ಭಾರತೀಯ ಸೇನೆ, ಜಮು ಮತ್ತು ಕಾಶ್ಮೀರ ಪೊಲೀಸರು ಮತ್ತು ಸಿಆರ್‌ಪಿಎಫ್ ಜಂಟಿ ಪತ್ರಿಕಾಗೋಷ್ಠಿ ನಡೆಸುವ ನಿರೀಕ್ಷೆಯಿದೆ. ಅರಣ್ಯ ಪ್ರದೇಶದಲ್ಲಿ ಇನ್ನೂ ಇಬ್ಬರು ಅಥವಾ ಹೆಚ್ಚಿನ ಶಂಕಿತರು ಅಡಗಿಕೊಂಡಿರಬಹುದು ಎಂದು ಭದ್ರತಾ ಪಡೆಗಳು ನಂಬಿವೆ. ಶೋಧ ಕಾರ್ಯಾಚರಣೆ ಸಕ್ರಿಯ ವಾಗಿದ್ದು, ಎಲ್ಲಾ ಸಂಸ್ಥೆಗಳು ಕಟ್ಟೆಚ್ಚರ ವಹಿಸಿವೆ.

26 ಅಮಾಯಕರ ಸಾವಿಗೆ ಕಾರಣವಾದ ಪಹಲ್ಗಾಮ್ ದಾಳಿಗೆ ಪ್ರತೀಕಾರವಾಗಿ ಭಾರತೀಯ ಸಶಸ್ತ್ರ ಪಡೆಗಳು ಪಾಕಿಸ್ತಾನ ಮತ್ತು ಪಿಓಕೆಯಲ್ಲಿನ ಭಯೋತ್ಪಾದಕ ಗುಂಪುಗಳ ವಿರುದ್ಧ ಬೃಹತ್ ಕಾರ್ಯಾಚರಣೆಯನ್ನು ಪ್ರಾರಂಭಿಸಿದ್ದವು.

ಆಪರೇಷನ್ ಸಿಂಧೂರ್ ಅಡಿಯಲ್ಲಿ ಭಾರತವು ತೀವ್ರವಾದ ಮತ್ತು ನಿಖರವಾದ ದಾಳಿಗಳನ್ನು ನಡೆಸಿ, 9 ಭಯೋತ್ಪಾದಕ ಶಿಬಿರಗಳನ್ನು ನಾಶಪಡಿಸಿತ್ತು. ಇದಕ್ಕೆ ಪ್ರತಿಯಾಗಿ ಭಾರತವು ಪಾಕಿಸ್ತಾನದ ಪ್ರಮುಖ ಮಿಲಿಟರಿ ಸ್ಥಾಪನೆಗಳನ್ನು ಗುರಿಯಾಗಿ ಸಿಕೊಂಡು ಕ್ಷಿಪಣಿ ಮತ್ತು ಡ್ರೋನ್ ದಾಳಿಗಳನ್ನು ನಡೆಸಿತು. ನಾಲ್ಕು ದಿನಗಳ ಕಾಲ ನಡೆದ ಗಡಿಯಾಚೆಗಿನ ತೀವ್ರ ಡ್ರೋನ್ ಮತ್ತು ಕ್ಷಿಪಣಿ ವಿನಿಮಯದ ನಂತರ, ಎರಡೂ ದೇಶಗಳು ಮೇ 10 ರಂದು ಉದ್ವಿಗ್ನತೆಯನ್ನು ಕಡಿಮೆ ಮಾಡಲು ಮತ್ತು ಯುದ್ಧವನ್ನು ಕೊನೆಗೊಳಿಸಲು ಒಪ್ಪಿಕೊಂಡಿದ್ದವು.


**ಸೇನಾ ನೆಲೆಗಳ ಮೇಲೆ ದಾಳಿ**

ಈ ಸ್ಥಳಗಳು ಜೈಶ್-ಎ-ಮೊಹಮದ್ (ಜೆಇಎಂ) ಮತ್ತು ಲಷ್ಕರ್-ಎ-ತೊಯ್ಬಾ (ಎಲ್‌ಇಟಿ) ಪ್ರಮುಖ ಕಮಾಂಡ್ ಕೇಂದ್ರಗಳಾಗಿದ್ದು, ಪುಲ್ವಾಮಾ (2019) ಮತ್ತು ಮುಂಬೈ (2008) ನಂತಹ ಪ್ರಮುಖ ದಾಳಿಗಳಿಗೆ ಕಾರಣವಾಗಿವೆ. ದಾಳಿಯಲ್ಲಿ 100 ಕ್ಕೂ ಹೆಚ್ಚು ಭಯೋತ್ಪಾದಕರು ಸಾವನ್ನಪ್ಪಿದರು. ಪ್ರತೀಕಾರವಾಗಿ, ಪಾಕಿಸ್ತಾನವು ಮುಂದಿನ ಮೂರು ದಿನಗಳಲ್ಲಿ ಮೇ 8, 9 ಮತ್ತು 10 ರಂದು ಭಾರತೀಯ ಸೇನಾ ನೆಲೆಗಳ ಮೇಲೆ ದಾಳಿ ಮಾಡಲು ಪ್ರಯತ್ನಿಸಿತು.

**ಮಾಸ್ಟರ್ ಮೈಂಡ್ ಹತ್ಯೆ**

ಅಧಿಕಾರಿಗಳ ಪ್ರಕಾರ, ಕೊಲ್ಲಲ್ಪಟ್ಟ ಮೂವರು ಭಯೋತ್ಪಾದಕರಲ್ಲಿ ಒಬ್ಬನಾದ ಸುಲೈಮಾನ್ ಶಾ ಏಪ್ರಿಲ್ 22 ರ ಪಹಲ್ಗಾಮ್ ದಾಳಿಯ ಮಾಸ್ಟರ್ ಮೈಂಡ್ ಎಂದು ನಂಬಲಾಗಿದೆ. ಇತರ ಇಬ್ಬರು ಭಯೋತ್ಪಾದಕರನ್ನು ಜಿಬ್ರಾನ್ ಮತ್ತು ಹಮ್ಜಾ ಅಫ್ಘಾನಿ ಎಂದು ಗುರುತಿಸಲಾಗಿದೆ.

## ಬೋಯಿಂಗ್ 787-8 ಡ್ರೀಮ್ ಲೈನರ್ ವಿಮಾನದಲ್ಲಿ ತಾಂತ್ರಿಕ ದೋಷ



**ವಾಷಿಂಗ್ಟನ್ ಡಿಸಿ:** ಬೋಯಿಂಗ್ 787– 8 ಡ್ರೀಮ್ ಲೈನರ್ ವಿಮಾನ ಮತ್ತೆ ಸುದ್ದಿಯಲ್ಲಿದೆ. ಕಳೆದ ತಿಂಗಳಷ್ಟೇ ಗುಜರಾತ್‌ನ ಅಹಮದಾಬಾದ್‌ನಲ್ಲಿ ಬೋಯಿಂಗ್ ವಿಮಾನ ಪತನಗೊಂಡಿತ್ತು. ವಿಮಾನದೊಳಗಿದ್ದ 241 ಪ್ರಯಾಣಿಕರು ಮೃತಪಟ್ಟಿದ್ದರು. ಅದಾದ ಬಳಿಕ ವಿಮಾನ ಯಾನ ಸಂಸ್ಥೆ ಬೋಯಿಂಗ್ ನಾ ಸುರಕ್ಷತೆ ಕ್ರಮಗಳ ಬಗ್ಗೆ ಪ್ರಶ್ನೆಗಳು ಎದ್ದಿದ್ದವು. ಇಷ್ಟೆಲ್ಲಾ ಚರ್ಚೆಗಳು ಮಾಸುವ ಮುನ್ನವೇ ಅಮೆರಿಕದಲ್ಲಿ ಬೋಯಿಂಗ್ 787 – 8 ಡ್ರೀಮ್ ಲೈನರ್ ವಿಮಾನ ತಾಂತ್ರಿಕ ದೋಷಕ್ಕೆ ತುತ್ತಾಗಿದೆ. ಮೇ ಡೇ ಘೋಷಿಸಿದ ಪೈಲಟ್ ಯಶಸ್ವಿಯಾಗಿ ತುರ್ತು ಭೂಸ್ಪರ್ಶ ಮಾಡಿದ್ದಾರೆ.

ವಾಷಿಂಗ್ಟನ್‌ನಲ್ಲಿ ಡಲ್ಲೆಸ್‌ನಿಂದ ಹೊರಟು 5,000 ಅಡಿ ಎತ್ತರದಲ್ಲಿರುವಾಗ ವಿಮಾನದಲ್ಲಿ ಈ ತುರ್ತು ಪರಿಸ್ಥಿತಿ ಉಂಟಾಯಿತು. ಇಂಧನ ತುಂಬಿದ್ದ ಕಾರಣ ವಿಮಾನವು ಎರಡು ಗಂಟೆ ಮೂವತ್ತೆಂಟು ನಿಮಿಷಗಳ ಕಾಲ ಆಕಾಶದಲ್ಲಿ ಹಾರಾಡಬೇಕಾಯಿತು. ಅಂತಿಮವಾಗಿ ಏರ್ ಟ್ರಾಫಿಕ್ ಕಂಟ್ರೋಲರ್‌ಗಳೊಂದಿಗೆ ಯಶಸ್ವಿಯಾಗಿ ವಿಮಾನ ಲ್ಯಾಂಡಿಂಗ್ ಮಾಡಲಾಯಿತು ಎನ್ನಲಾಗಿದೆ. ಯುಎ 108 ವಿಮಾನದಲ್ಲಿ ಪ್ರಯಾಣಿಕರು ಮ್ಯೂನಿಚ್‌ಗೆ ತೆರಳಲು ಸಿದ್ಧರಾಗಿದ್ದರು. ವಿಮಾನವು ರನ್‌ವೇಯಲ್ಲಿ ವೇಗವಾಗಿ ಚಲಿಸುತ್ತಿದ್ದಾಗ ತಾಂತ್ರಿಕ ದೋಷದಿಂದ ಎಡಭಾಗದ ಎಂಜಿನ್ ಸಂಪೂರ್ಣವಾಗಿ ಸ್ಥಗಿತಗೊಂಡಿತು. ಪೈಲಟ್ ತಕ್ಷಣವೇ ಕಂಟ್ರೋಲ್ ರೂಂಗೆ ಈ ಬಗ್ಗೆ ವಿಷಯ ಮುಟ್ಟಿಸಿದ್ದರು. ಮೇ –ಡೇ ಸಂದೇಶ ಕರೆಸಿದ ನಂತರ ಸುರಕ್ಷಿತವಾಗಿ ಲ್ಯಾಂಡ್ ಮಾಡಲಾಗಿದೆ.

- ಬೋಯಿಂಗ್ 787-8 ಡ್ರೀಮ್‌ಲೈನರ್ ವಿಮಾನದಲ್ಲಿ ತಾಂತ್ರಿಕ ದೋಷ
- ಟೇಕಾಫ್ ಆದ ಕೆಲವೇ ಗಂಟೆಗಳಲ್ಲಿ ಮೇಡೇ ಘೋಷಣೆ ತುರ್ತು ಭೂ ಸ್ಪರ್ಶ
- ವಾಷಿಂಗ್ಟನ್ ಡಲ್ಲೆಸ್ ವಿಮಾನ ನಿಲ್ದಾಣದಿಂದ ವಿಮಾನ ಟೇಕಾಫ್ ಆಗಿತ್ತು

**ಅಹಮದಾಬಾದ್ ವಿಮಾನಪತನ:** ಜೂನ್ 12ರಂದು ಗುಜರಾತ್‌ನ ಅಹಮದಾಬಾದ್‌ನಲ್ಲಿ ಸಂಭವಿಸಿದ ಏರ್ ಇಂಡಿಯಾ ವಿಮಾನ ದುರಂತದಿಂದಾಗಿ ಇನ್ನೂರ ನಲವತ್ತೆರಡು ಜನರು ಮೃತಪಟ್ಟಿದ್ದರು. ವಿಮಾನವು ಬಿಜೆ ಮೆಡಿಕಲ್ ಕಾಲೇಜಿನ ಮೇಲೆ ಬಿದ್ದ ಕಾರಣ ವಿದ್ಯಾರ್ಥಿಗಳು ಸಹ ಮೃತಪಟ್ಟಿದ್ದರು. ಸದ್ಯ ವಿಮಾನ ಪತನಕ್ಕೆ ಪ್ರಾಥಮಿಕ ತನಿಖಾ ವರದಿಯನ್ನು 'ವಿಮಾನ ಅಪಘಾತ ತನಿಖಾ ಸಂಸ್ಥೆ ಬಹಿರಂಗಪಡಿಸಿತ್ತು.

ವಿಮಾನ ಟೇಕಾಫ್ ಆದ ಕೆಲವೇ ಸೆಕೆಂಡ್‌ಗಳಲ್ಲಿ ಎರಡೂ ಎಂಜಿನ್‌ಗಳಿಗೆ ಇಂಧನ ಪೂರೈಕೆ ಮಾಡುವ ಸ್ವಿಚ್‌ಗಳು ಆಫ್ ಆಗಿದ್ದೇ ವಿಮಾನ ಪತನಕ್ಕೆ ಕಾರಣ ಎಂದು ತನಿಖಾ ಸಂಸ್ಥೆ ಹೇಳಿತ್ತು. ಆ ಮೂಲಕ ಪರೋಕ್ಷವಾಗಿ ಪೈಲಟ್ ಅಥವಾ ಮಾನವ ದೋಷದ ಎಂದು ಹೇಳಲಾಗಿತ್ತು. ಅಲ್ಲದೆ, ಪೈಲಟ್‌ಗಳ ನಡುವೆ ಸ್ವಿಚ್ ವಿಚಾರವಾಗಿ ನಡೆದ ಸಂಭಾಷಣೆಯನ್ನೂ 15 ಪುಟಗಳ ವರದಿಯಲ್ಲಿ ತಿಳಿಸಿತ್ತು. ಆದರೆ ಇದಕ್ಕೆ ಭಾರತೀಯ ಪೈಲಟ್‌ಗಳ ಸಂಘ ಆಕ್ಷೇಪ ವ್ಯಕ್ತಪಡಿಸಿ, ತನಿಖಾ ವರದಿಯನ್ನು ತಿರಸ್ಕರಿಸಿದ್ದವು. ತರಾತುರಿಯಲ್ಲಿ ನಡೆಸಿದ ತನಿಖೆ ಇದಾಗಿದ್ದು, ಪೈಲಟ್‌ಗಳ ಬಗ್ಗೆ ಪಕ್ಷಪಾತದಿಂದ ಕೂಡಿದೆ ಎಂದು ಆರೋಪಿಸಿದೆ.

## ಅಮರನಾಥ ಯಾತ್ರೆಗೆ ತೆರಳಿದ 27ನೇ ತಂಡ




**ಜಮ್ಮು:** ದಕ್ಷಿಣ ಕಾಶ್ಮೀರ ಹಿಮಾಲಯದಲ್ಲಿರುವ 3,880 ಮೀಟರ್ ಎತ್ತರದ ಅಮರನಾಥ ಗುಹಾ ದೇವಾಲಯದ ಅವಳಿ ಮೂಲ ಶಿಬಿರಗಳಿಗೆ 1490 ಯಾತ್ರಿಕರ 27 ನೇ ತಂಡ ಜಮ್ಮುವಿನಿಂದ ಬಿಗಿ ಭದ್ರತಾ ವ್ಯವಸ್ಥೆಗಳ ನಡುವೆ ಹೊರಟಿತು. ಜುಲೈ 3 ರಂದು ಕಣಿವೆಯಿಂದ 38 ದಿನಗಳ ತೀರ್ಥಯಾತ್ರೆ ಪ್ರಾರಂಭವಾದಾಗಿನಿಂದ 3.86 ಲಕ್ಷಕ್ಕೂ ಹೆಚ್ಚು ಯಾತ್ರಿಕರು ಗುಹಾ ದೇವಾಲಯದಲ್ಲಿರುವ ಶಿವನ ಹಿಮ ಲಿಂಗಕ್ಕೆ ಪೂಜೆ ಸಲ್ಲಿಸಿದ್ದಾರೆ.

1,262 ಪುರುಷರು, 186 ಮಹಿಳೆಯರು, 42 ಸಾಧುಗಳು ಮತ್ತು ಸಾಧ್ವಿಗಳು ಸೇರಿದಂತೆ 27 ನೇ ತಂಡವು ಭಗವತಿ ನಗರ ಮೂಲ ಶಿಬಿರದಿಂದ 61 ವಾಹನಗಳಲ್ಲಿ ಕಾಶ್ಮೀರದ ಅವಳಿ ಮೂಲ ಶಿಬಿರಗಳಿಗೆ 61 ವಾಹನಗಳಲ್ಲಿ ಸಿಆರ್‌ಪಿಎಫ್ ಮತ್ತು ಪೊಲೀಸ್ ಸಿಬ್ಬಂದಿಯ ಬೆಂಗಾವಲಿನೊಂದಿಗೆ ಬೆಳಗಿನ ಜಾವ 3:25 ರಿಂದ 3.57 ರ ನಡುವೆ ಹೊರಟಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. 16 ವಾಹನಗಳಲ್ಲಿ 327 ಯಾತ್ರಿಕರನ್ನು ಹೊತ್ತ ಮೊದಲ ಯಾತ್ರಿಕರ ಬೆಂಗಾವಲು 14 ಕಿಮೀ ಬಾಲ್ಟಾಲ್ ಮಾರ್ಗಕ್ಕೆ, ನಂತರ 45 ವಾಹನಗಳಲ್ಲಿ 1,163 ಯಾತ್ರಿಕರ ಎರಡನೇ ಬೆಂಗಾವಲು ಯಾತ್ರೆಯನ್ನು ಕೈಗೊಂಡಿದ್ದು, ಅನಂತ್‌ನಾಗ್ ಜಿಲ್ಲೆಯ 48 ಕಿಮೀ ಸಾಂಪ್ರದಾಯಿಕ ಪಹಲ್ಗಾಮ್ ಮಾರ್ಗದ ಮೂಲಕ ಯಾತ್ರೆ ಕೈಗೊಳ್ಳುತ್ತಿದ್ದಾರೆ ಎಂದು ಅವರು ಹೇಳಿದರು.

ಇದರೊಂದಿಗೆ, ಜುಲೈ 2 ರಂದು ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಮೊದಲ ಬ್ಯಾಚ್‌ಗೆ ಚಾಲನೆ ನೀಡಿದ ನಂತರ ಒಟ್ಟು 14,27,85 ಯಾತ್ರಿಕರು ಜಮ್ಮು ಮೂಲ ಶಿಬಿರದಿಂದ ಕಣಿವೆಗೆ ತೆರಳಿದ್ದಾರೆ. ಕಳೆದ ವರ್ಷ, ನೈಸರ್ಗಿಕವಾಗಿ ರೂಪುಗೊಂಡ ಹಿಮ ಲಿಂಗವನ್ನು ಹೊಂದಿರುವ ಗುಹಾ ದೇವಾಲಯದಲ್ಲಿ 5.10 ಲಕ್ಷಕ್ಕೂ ಹೆಚ್ಚು ಯಾತ್ರಿಕರು ಪೂಜೆ ಸಲ್ಲಿಸಿದ್ದಾರೆ.

## ರಾಷ್ಟ್ರಪತಿ ಅಧಿಕಾರ ಕುರಿತ ವಿಚಾರಣೆಗೆ ಸುಪ್ರೀಂ ಸಮ್ಮತಿ



**ನವದೆಹಲಿ:** ವಿಧಾನಸಭೆ ಅಂಗೀಕರಿಸಿದ ಮಸೂದೆಗಳನ್ನು ನಿರ್ವಹಿಸಲು ನ್ಯಾಯಲಯ ಸಮಯ ಮಿತಿಯನ್ನು ವಿಧಿಸಬಹುದೇ ಎಂಬ ಬಗ್ಗೆ ಸಾಂವಿಧಾನಿಕ ಸಮಸ್ಯೆಗಳನ್ನು ಪ್ರಸ್ತಾಪಿಸಿದ್ದ ರಾಷ್ಟ್ರಪತಿಗಳ ಉಲ್ಲೇಖವನ್ನು ವಿಚಾರಣೆ ಮಾಡಲು ಸುಪ್ರೀಂ ಕೋರ್ಟ್ ಸಮ್ಮತಿಸಿದೆ. ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ನೇತೃತ್ವದ ಐದು ನ್ಯಾಯಾಧೀಶರ ಪೀಠವು ಆ. 12 ರೊಳಗೆ ಕೇಂದ್ರ ಮತ್ತು ರಾಜ್ಯಗಳು ತಮ್ಮ ಲಿಖಿತ ಸಲ್ಲಿಕೆಗಳನ್ನು ಸಲ್ಲಿಸುವಂತೆ ಕೇಳಿದೆ. ಹಾಗೂ ಆಗಸ್ಟ್ 19 ರಿಂದ ವಿಚಾರಣೆಯನ್ನು ಪ್ರಾರಂಭಿಸಲು ತೀರ್ಮಾನಿಸಿದೆ.

ಪಕ್ಷಗಳು ಸಮಯ ಮಿತಿಯನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಕೇಳಿಕೊಂಡ ನ್ಯಾಯಮೂರ್ತಿಗಳಾದ ಸೂರ್ಯಕಾಂತ್, ವಿಕ್ರಮ್ ನಾಥ್, ಪಿ.ಎಸ್. ನರಸಿಂಹ ಮತ್ತು ಎ.ಎಸ್. ಚಂದೂರ್ಕರ್ ಅವರನ್ನೂ ಒಳಗೊಂಡ ಪೀಠವು, ಆಗಸ್ಟ್ 19ರಂದು ರಾಷ್ಟ್ರಪತಿಗಳ ಉಲ್ಲೇಖದ ನಿರ್ವಹಣೆಯನ್ನು ಪ್ರಶ್ನಿಸಿ ಕೇರಳ ಮತ್ತು ತಮಿಳುನಾಡಿನಂತಹ ರಾಜ್ಯಗಳು ಸಲ್ಲಿಸಿದ ಪ್ರಾಥಮಿಕ ಆಕ್ಷೇಪಣೆಗಳನ್ನು ಮೊದಲು ಆಲಿಸುವುದಾಗಿ ಹೇಳಿದೆ.

ರಾಷ್ಟ್ರಪತಿಗಳ ಉಲ್ಲೇಖವನ್ನು ಬೆಂಬಲಿಸುವ ಕೇಂದ್ರ ಮತ್ತು ರಾಜ್ಯಗಳ ಅರ್ಜಿಗಳನ್ನು ಆಗಸ್ಟ್ 19, 20, 21 ಮತ್ತು 26 ರಂದು ವಿಚಾರಣೆ ನಡೆಸಲಾಗುವುದು ಎಂದು ಸುಪ್ರೀಂ ಕೋರ್ಟ್ ಹೇಳಿದೆ, ಆದರೆ ಅದನ್ನು ವಿರೋಧಿಸುವ ಅರ್ಜಿಗಳನ್ನು ಆಗಸ್ಟ್ 28 ಮತ್ತು ಸೆಪ್ಟೆಂಬರ್ 2, 3 ಮತ್ತು 9 ರಂದು ವಿಚಾರಣೆ ನಡೆಸಲಾಗುವುದು.

ಯಾವುದೇ ರೀತಿಯ ಮರುಪ್ರತ್ಯಾರೋಪ ಸಲ್ಲಿಕೆಗಳಿದ್ದರೆ, ಅವುಗಳನ್ನು ಸೆಪ್ಟೆಂಬರ್ 10 ರಂದು ವಿಚಾರಣೆ ನಡೆಸಲಾಗುವುದು ಎಂದು ಪೀಠ ಹೇಳಿದೆ. ಜುಲೈ 22 ರಂದು, ರಾಷ್ಟ್ರಪತಿಗಳ ಉಲ್ಲೇಖದಲ್ಲಿ ಎತ್ತಲಾದ ಸಮಸ್ಯೆಗಳು ಇಡೀ ದೇಶದ ಮೇಲೆ ಪರಿಣಾಮ ಬೀರುತ್ತವೆ ಎಂದು ಸುಪ್ರೀಂ ಕೋರ್ಟ್ ಗಮನಿಸಿದೆ.

## ಚೀನಾ ರಾಜಧಾನಿ ಬೀಜಿಂಗ್‌ನಲ್ಲಿ ಭೀಕರ ಪ್ರವಾಹ: 30 ಜನ ಸಾವು



**ಬೀಜಿಂಗ್:** ಚೀನಾದ ರಾಜಧಾನಿ ಬೀಜಿಂಗ್‌ನಲ್ಲಿ ಭಾರೀ ಮಳೆಯಿಂದಾಗಿ ಕನಿಷ್ಠ 30 ಜನರು ಸಾವನ್ನಪ್ಪಿದ್ದಾರೆ ಎಂದು ಅಲ್ಲಿನ ಅಧಿಕಾರಿಗಳು ಹೇಳಿದ್ದಾರೆ. ಉತ್ತರ ಚೀನಾದಾದ್ಯಂತ ತೀವ್ರ ಬಿರುಗಾಳಿ, ಪ್ರವಾಹ ಮತ್ತು ಭೂಕುಸಿತಗಳನ್ನು ಸಂಭವಿಸಿದ್ದು, ತೀವ್ರ ಹಾನಿ ಉಂಟು ಮಾಡಿದೆ ಎಂದು ಮಂಗಳವಾರ ಹೇಳಿದ್ದಾರೆ.

ಮಧ್ಯ ರಾತ್ರಿಯ ವೇಳೆ ಈಶಾನ್ಯ ಬೀಜಿಂಗ್‌ನ ಪರ್ವತ ಪ್ರದೇಶವಾದ ಮಿಯುನ್‌ನಲ್ಲಿ 21 ಇಂಚುಗಳಿಗಿಂತ ಹೆಚ್ಚು ಮಳೆಯಾಗಿದ್ದು, 28 ಜನರು ಅಸುನೀಗಿದ್ದಾರೆ ಎಂದು ಚೀನಾ ಮಾಧ್ಯಮ ಸಿಸಿಟಿವಿಯನ್ನು ಉಲ್ಲೇಖಿಸಿ ನ್ಯೂಯಾರ್ಕ್ ಟೈಮ್ಸ್ ವರದಿ ಮಾಡಿದೆ. ನಗರದಲ್ಲಿ ಸರಾಸರಿ 6 ಇಂಚಿಗೂ ಹೆಚ್ಚು ಮಳೆಯಾಗಿದೆ ಎಂದು ಅದು ಹೇಳಿದೆ.


ನಿರಂತರ ಭಾರೀ ಮಳೆಯಿಂದಾಗಿ ಪ್ರವಾಹ ಸೃಷ್ಟಿಯಾಗಿದ್ದು, 80,000ಕ್ಕೂ ಹೆಚ್ಚು ಬೀಜಿಂಗ್ ನಿವಾಸಿಗಳನ್ನು ಸ್ಥಳಾಂತರಿಸಲಾಗಿದೆ ಎಂದು ಸಿಸಿಟಿವಿ ಹೇಳಿದೆ. ಹಲವಾರು ರಸ್ತೆಗಳಿಗೂ ಮಳೆಯಿಂದ ಹಾನಿಯಾಗಿದ್ದು, ಅಲ್ಲಲ್ಲಿ ವಿದ್ಯುತ್ ಕೂಡ ಕಡಿತಗೊಂಡಿವೆ. ರಾತ್ರಿ, ಬೀಜಿಂಗ್ ಆಡಳಿತ ಅತ್ಯಧಿಕ ಪ್ರವಾಹ ಎಚ್ಚರಿಕೆಯನ್ನು ನೀಡಿದ್ದಲ್ಲದೆ ಅನಿವಾರ್ಯ ಅಲ್ಲದಿದ್ದರೆ ಮನೆಯೊಳಗೇ ಇರುವಂತೆ ಸಲಹೆ ನೀಡಿದೆ.

ಶಾಲೆಗಳಿಗೆ ರಜೆ ಘೋಷಿಸಲಾಗಿದ್ದು, ನಿರ್ಮಾಣ ಚಟುವಟಿಕೆಗಳನ್ನು ಸ್ಥಗಿತಗೊಳಿಸಲು ಅಧಿಕಾರಿಗಳು ಆದೇಶ ನೀಡಿದ್ದಾರೆ. ಪ್ರವಾಹ ತಡೆಗಟ್ಟುವಿಕೆ ಮತ್ತು ರಕ್ಷಣಾ ಕಾರ್ಯಾಚರಣೆಗಳಿಗೆ ಆದ್ಯತೆ ನೀಡುವಂತೆ ಅಧಿಕಾರಿಗಳಿಗೆ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಸೂಚನೆ ನೀಡಿದ್ದಾರೆ. ಜುಲೈನಿಂದ ಆಗಸ್ಟ್‌ವರೆಗೆ ಭಾರಿ ಮಳೆ ನಿರೀಕ್ಷಿಸಲಾಗಿದ್ದು, ಪ್ರವಾಹ ತಡೆಗಟ್ಟಲು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ. ಇತ್ತೀಚಿನ ದಿನಗಳಲ್ಲಿ ಉತ್ತರ ಮತ್ತು ಪೂರ್ವ ಚೀನಾದಾದ್ಯಂತ ಭಾರೀ ಮಳೆಯಾಗುತ್ತಿದ್ದು, ದೊಡ್ಡ ಪ್ರಮಾಣದಲ್ಲಿ ಸಾವು ನೋವುಗಳು ಮತ್ತು ಆಸ್ತಿ ಹಾನಿ ನಡೆದಿದೆ. ಶಾಂಕ್ಸಿ ಪ್ರಾಂತ್ಯ ಸೇರಿದಂತೆ ಉತ್ತರ ಚೀನಾದ ಇತರ ಪ್ರದೇಶಗಳಲ್ಲಿ ಮಳೆ ಸಂಬಂಧಿತ ಸಾವುಗಳು ವರದಿಯಾಗಿವೆ.

ಶಾಂಡೊಂಗ್ ಪ್ರಾಂತ್ಯದ ಜಿನಾನ್‌ನಲ್ಲಿ, ಐದು ಗಂಟೆಗಳ ಅಂತರದಲ್ಲಿ ಅರ್ಧ ವರ್ಷದ ಮಳೆಯೇ ಸುರಿದಿತ್ತು. ಈ ಅಬ್ಬರದಲ್ಲಿ ಇಬ್ಬರು ಸಾವನ್ನಪ್ಪಿದ್ದರು.

- ಚೀನಾದ ರಾಜಧಾನಿ ಬೀಜಿಂಗ್‌ನಲ್ಲಿ ಭಾರೀ ಮಳೆಯಿಂದಾಗಿ ಕನಿಷ್ಠ 30 ಜನರು ಸಾವು, 80,000ಕ್ಕೂ ಹೆಚ್ಚು ನಿವಾಸಿಗಳ ಸ್ಥಳಾಂತರ
- ಮಧ್ಯ ಬೀಜಿಂಗ್‌ನ ಮಿಯುನ್ ಪ್ರದೇಶದಲ್ಲಿ 21 ಇಂಚುಗಳಿಗಿಂತ ಹೆಚ್ಚು ಮಳೆ, ಪ್ರವಾಹ ಎಚ್ಚರಿಕೆಯನ್ನು ಘೋಷಿಸಿದ ಸರ್ಕಾರ
- 2023ರಲ್ಲಿ ಬೀಜಿಂಗ್‌ನಲ್ಲಿ 140 ವರ್ಷಗಳಲ್ಲಿ ಅತಿ ಹೆಚ್ಚಿನ ಮಳೆ ದಾಖಲು, ಇತ್ತೀಚಿನ ವರ್ಷಗಳಲ್ಲಿ ಮಳೆಯ ಪ್ರಮಾಣ ತೀವ್ರ ಏರಿಕೆ

## ಬಹುಮಹಡಿ ಕಟ್ಟಡದಲ್ಲಿ ಗುಂಡಿನ ದಾಳಿ, ಪೊಲೀಸ್ ಅಧಿಕಾರಿ ಸೇರಿ ನಾಲ್ವರು ಸಾವು



**ನ್ಯೂಯಾರ್ಕ್:** ಅಮೆರಿಕದ ನ್ಯೂಯಾರ್ಕ್ ನಗರದ ಕಚೇರಿಯೊಂದಕ್ಕೆ ನುಗ್ಗಿದ ಶಸ್ತ್ರಯುಕ್ತ ವ್ಯಕ್ತಿಯೊಬ್ಬ ಕರ್ತವ್ಯನಿರತ ಪೊಲೀಸ್ ಅಧಿಕಾರಿ ಸೇರಿದಂತೆ ನಾಲ್ವರ ಮೇಲೆ ಗುಂಡುಹಾರಿಸಿ ಕೊಂದಿದ್ದಾನೆ. ಘಟನೆ ನಂತರ ಆತನೂ ಸಹ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ನ್ಯೂಯಾರ್ಕ್ ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

ಕೊಲೆಯಾದ ಅಧಿಕಾರಿ ನದನಯ ದಿದರುಲ್ ಇಸ್ಲಾಂ (36) ಎಂದು ಗುರುತಿಸಲಾಗಿದ್ದು, ಇವರು ಮೂಲತ ಬಾಂಗ್ಲಾದೇಶದಿಂದ ವಲಸೆ ಬಂದವರು. ಮತ್ತು ನ್ಯೂಯಾರ್ಕ್ ನಗರದಲ್ಲಿ ಸುಮಾರು 4 ವರ್ಷದಿಂದ ಪೊಲೀಸ್ ಅಧಿಕಾರಿಯಾಗಿ ಸೇವೆ ಸಲ್ಲಿಸಿದ್ದರು ಎಂದು ಪೊಲೀಸ್ ಆಯುಕ್ತ ಜೆಸ್ಸಿಕಾ ಟಿಶ್ ಪತ್ರಿಕಾಗೋಷ್ಠಿಯಲ್ಲಿ ಹೇಳಿದರು. ಪೊಲೀಸರು ಬಂದೂಕುದಾರಿ ವ್ಯಕ್ತಿಯನ್ನು ಲಾಸ್ ವೇಗಾಸ್‌ನ ಶೇನ್ ಟಮುರಾ ಎಂದು ಗುರುತಿಸಿದ್ದಾರೆ ಮತ್ತು ಅವರು ಸ್ವತಃ ಗುಂಡು ಹಾರಿಸಿಕೊಂಡು ಸಾವನ್ನಪ್ಪಿದ್ದಾನೆ ಎಂದು ಹೇಳಿದರು. ಆರೋಪಿಯ ಮಾನಸಿಕ ಆರೋಗ್ಯ ಮತ್ತು ಆದರ ಹಿಂದಿನ ಉದ್ದೇಶ ತಿಳಿದಿಲ್ಲ. ತನಿಖೆ ನಡೆಯುತ್ತಿದೆ ಎಂದು ಆಯುಕ್ತರು ಹೇಳಿದರು. ನಂತರ ಲಿಫ್ಟ ಬ್ಯಾಂಕ್‌ಗೆ ಹೋಗಿ ಭದ್ರತಾ ಮೇಜಿನ ಹಿಂದೆ ರಕ್ಷಣೆ ಪಡೆಯುತ್ತಿದ್ದ ಭದ್ರತಾ ಸಿಬ್ಬಂದಿಯ ಮೇಲೂ ಗುಂಡು ಹಾರಿಸಿ ಲಾಬಿಯಲ್ಲಿದ್ದ ಮತ್ತೊಬ್ಬ ವ್ಯಕ್ತಿಯ ಮೇಲೂ ಗುಂಡು ಹಾರಿಸಿದ್ದಾರೆ ಎಂದು ಆಯುಕ್ತರು ಹೇಳಿದರು.

**ಒಬ್ಬರ ಸ್ಥಿತಿ ಗಂಭೀರ**

ನಾಲ್ವರು ಮೃತಪಟ್ಟಿದ್ದು ಆರು ಮಂದಿ ಗಾಯಗೊಂಡಿದ್ದಾರೆ ಮತ್ತು ಅದರಲ್ಲಿ ಒಬ್ಬರ ಸ್ಥಿತಿ ಗಂಭೀರವಾಗಿದೆ, ಏನಾಯಿತು ಎಂಬುದನ್ನು ಅಧಿಕಾರಿಗಳು ಇನ್ನೂ ತನಿಖೆ ನಡೆಸುತ್ತಿದ್ದಾರೆ ಎಂದು ನ್ಯೂಯಾರ್ಕ್ ಮೇಯರ್ ಎರಿಕ್ ಆಡಮ್ಸ್ ಹೇಳಿದ್ದಾರೆ. ಕಣ್ಗಾವಲು ವಿಡಿಯೋದಲ್ಲಿ ವಾಹನದಿಂದ ಹೊರಬಂದು ಆರೋಪಿ 4 ರೈಫಲ್ ಹಿಡಿದು ಕಟ್ಟಡದ ಕಡೆಗೆ ನಡೆದುಕೊಂಡು ಹೋಗುತ್ತಿರುವುದನ್ನು ತೋರಿಸಲಾಗಿದೆ. ಕಟ್ಟಡವನ್ನು ಪ್ರವೇಶಿಸುತ್ತಿದ್ದಂತೆ ಪೊಲೀಸ್ ಅಧಿಕಾರಿಯ ಮೇಲೆ ತಕ್ಷಣವೇ ಗುಂಡು ಹಾರಿಸಿದ ಅವರು, ರಕ್ಷಣೆ ಪಡೆಯಲು ಪ್ರಯತ್ನಿಸಿದ ಮಹಿಳೆಯೊಬ್ಬರನ್ನು ಗುಂಡು ಹಾರಿಸಿ, ನಂತರ ಲಾಬಿಯ ಮೇಲೆ ಗುಂಡು ಹಾರಿಸಲು ಪ್ರಾರಂಭಿಸಿದರು ಎಂದು ಟಿಶ್ ಹೇಳಿದರು.

# ಕೇರಳ ನರ್ಸ್ ನಿಮಿಷಪ್ರಿಯಾ ಮರಣದಂಡನೆ ರದ್ದು

• ಯೆಮೆನ್‌ನಿಂದ ಅಧಿಕೃತ ಮಾಹಿತಿ ಬಂದಿಲ್ಲ: ಭಾರತೀಯ ವಿದೇಶಾಂಗ ಸಚಿವಾಲ ಹೇಳಿಕೆ



**ಸನಾ:** ಕೊಲೆ ಆರೋಪದ ಹಿನ್ನೆಲೆಯಲ್ಲಿ ಕೇರಳದ ನರ್ಸ್ ನಿಮಿಷಪ್ರಿಯಾಗೆ ಯೆಮೆನ್‌ನಲ್ಲಿ ನೀಡಲಾದ ಮರಣದಂಡನೆ ಶಿಕ್ಷೆಯನ್ನು ರದ್ದುಪಡಿಸಲಾಗಿದೆ ಎಂದು ಕ್ರಿಶ್ಚಿಯನ್ ಧಾರ್ಮಿಕ ಮುಖಂಡ ಹಾಗೂ ಸಂಧಾನಕಾರರಾಗಿರುವ ಡಾ. ಕೆ.ಎ. ಪಾಲ್ ಹೇಳಿದ್ದಾರೆ. ಯೆಮೆನ್ ರಾಜಧಾನಿ ಸನಾದಿಂದ ಬಿಡುಗಡೆ ಮಾಡಿದ ವಿಡಿಯೊ ಸಂದೇಶದಲ್ಲಿ ಅವರು ಈ ವಿಚಾರವನ್ನು ಬಹಿರಂಗಪಡಿಸಿದ್ದಾರೆ.

"ಭಾರತೀಯ ರಾಜತಾಂತ್ರಿಕ ಅಧಿಕಾರಿಗಳು ಮತ್ತು ಯೆಮೆನ್ ನಾಯಕರೊಂದಿಗೆ ಹಲವು ದಿನಗಳ ವಿಸ್ತೃತ ಚರ್ಚೆಯ ನಂತರ ಯಶಸ್ಸು ಸಾಧಿಸಲಾಗಿದೆ. ಇದು ದೇವರ ದಯೆಯಿಂದ ಸಾಧ್ಯವಾಗಿದೆ. ನಿಮಿಷಪ್ರಿಯಾ ಶೀಘ್ರದಲ್ಲೇ ಭಾರತಕ್ಕೆ ಮರಳಲಿದ್ದಾರೆ. ಭಾರತ ಸರಕಾರವು ಅವರ ಸುರಕ್ಷಿತ ವರ್ಗಾವಣೆಗೆ ಈಗಾಗಲೇ ವ್ಯವಸ್ಥೆಗಳನ್ನು ಮಾಡುತ್ತಿದೆ," ಎಂದು ಕೆ.ಎ. ಪಾಲ್ ಹೇಳಿದರು.

ಪೌಲ್ ತಮ್ಮ 'ಎಕ್ಸ್' ಖಾತೆಯ ಲ್ಲಿ ತಮ್ಮೊಂದಿಗೆ ಯೆಮೆನ್ ನಾಯಕರ ವಿಡಿಯೋವನ್ನು ಪೋಸ್ಟ್ ಮಾಡಿದ್ದಾರೆ. ನಿಮಿಷಾಳಿಂದ ಮೃತ ಮೆಹ್ದಿ ಅವರ ಕುಟುಂಬವು ಪರಿಹಾರದ ಹಣವನ್ನು ಸ್ವೀಕರಿಸದ ಕಾರಣ ಪ್ರಕರಣವು ಮತ್ತಷ್ಟು ಜಟಿಲವಾಗಿತ್ತು. ಎ.ಪಿ.ಅಬುಬಕ್ಕರ್ ಮುಸ್ಲಿಯಾರ್ ಅವರು ಕೂಡ ನಿಮಿಷಾ ಪರವಾಗಿ ಯೆಮೆನ್ ಧಾರ್ಮಿಕ ಮುಖಂಡರೊಂದಿಗೆ ಮಾತುಕತೆ ನಡೆಸಿದ್ದರು. ಮೃತರ ಕುಟುಂಬವು "ನಮಗೆ ನ್ಯಾಯ ಬೇಕು, ಹಣ ಬೇಡ. ಆಕೆಗೆ ಕ್ಷಮೆ ನೀಡಲ್ಲ, ಎಂದು ಪಟ್ಟು ಹಿಡಿದಿತ್ತು. ಜುಲೈ 16 ರಂದು ನಿಗದಿಯಾಗಿದ್ದ ಮರಣದಂಡನೆಯನ್ನು ತಾತ್ಕಾಲಿಕವಾಗಿ ಮುಂದೂಡಲಾಗಿತ್ತು.

**ಕೊಲೆ ಪ್ರಕರಣದಲ್ಲಿ ನಿಮಿಷಾ**

ತನ್ನ ದಾಖಲೆಗಳನ್ನು ಮರಳಿ ಪಡೆಯಲು, ಪ್ರಿಯಾ 2017 ರಲ್ಲಿ ಮಹದಿಗೆ ನಿದ್ರೆ ಮಾತ್ರೆ ನೀಡಲು ಪ್ರಯತ್ನಿಸಿದರು. ಆದರೆ, ಅದು ವಿಫಲವಾಗಿ ಮಹದಿ ಅತಿಯಾದ ಡ್ರಗ್ಸ್ ಸೇವನೆಯಿಂದ ಸಾವನ್ನಪ್ಪಿದನು. 2018 ರಲ್ಲಿ ಆಕೆಯನ್ನು ಬಂಧಿಸಲಾಯಿತು ಮತ್ತು ಕೊಲೆಗಾಗಿ ಶಿಕ್ಷೆ ವಿಧಿಸಲಾಯಿತು. 2020 ರಲ್ಲಿ ಯೆಮೆನ್ ನ್ಯಾಯಾಲಯವು ಗಲ್ಲು ಶಿಕ್ಷೆ ವಿಧಿಸಿತು.

ಯೆಮೆನ್ ಅಧ್ಯಕ್ಷ ರಶಾದ್ ಅಲ್–ಅಲಿಮಿ ಮತ್ತು ಹೌತಿ ನಾಯಕ ಮಹದಿ ಅಲ್–ಮಶಾತ್ ಕ್ರಮವಾಗಿ 2024 ರ ಕೊನೆಯಲ್ಲಿ ಮತ್ತು 2025 ರ ಆರಂಭದಲ್ಲಿ ಗಲ್ಲು ಶಿಕ್ಷೆಯನ್ನು ಅನುಮೋದಿಸಿದ ನಂತರ ಆಕೆಯ ಪ್ರಕರಣವು ಸಅಂತರರಾಷ್ಟ್ರೀಯ ಗಮನ ಸೆಳೆಯಿತು. ಭಾರತ ಸರ್ಕಾರ ಮತ್ತು ಧಾರ್ಮಿಕ ಮುಖಂಡರು ನಿರಂತರವಾಗಿ ಮಧ್ಯಪ್ರವೇಶಿಸಿದ ನಂತರ ಶಿಕ್ಷೆಯನ್ನು ಮುಂದೂಡಲಾಯಿತು.

ಮೂಲಗಳು ನಿಮಿಷಾ ಪ್ರಿಯಾ ಪ್ರಕರಣದ ಬಗ್ಗೆ ಕೆಲವು ವ್ಯಕ್ತಿಗಳು ಹಂಚಿಕೊಳ್ಳುತ್ತಿರುವ ಮಾಹಿತಿ ನಿಖರವಾಗಿಲ್ಲ ಎಂದು ಹೇಳಿವೆ. ಗ್ರ್ಯಾಂಡ್ ಮುಫ್ತಿ ಕಚೇರಿಯ ಪ್ರಕಾರ, ಈ ಹಿಂದೆ ತಡೆಹಿಡಿಯಲಾಗಿದ್ದ ನಿಮಿಷಾ ಪ್ರಿಯಾ ಅವರ ಗಲ್ಲು ಶಿಕ್ಷೆಯನ್ನು ರದ್ದು ಮಾಡಲಾಗಿದೆ. ಸನಾದಲ್ಲಿ ನಡೆದ ಉನ್ನತ ಮಟ್ಟದ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಆದರೆ, ಯೆಮೆನ್ ಸರ್ಕಾರದಿಂದ ಅಧಿಕೃತ ಲಿಖಿತ ದೃಢೀಕರಣಕ್ಕಾಗಿ ಕಾಯಲಾಗುತ್ತಿದೆ.

**ನಿಮಿಷಾ ಪ್ರಿಯಾ ಅವರನ್ನು ಏಕೆ ಶಿಕ್ಷಿಸಲಾಯಿತು?**

ಕೇರಳದ ಪಾಲಕ್ಕಾಡ್ ಜಿಲ್ಲೆಯ ನಿಮಿಷಾ ಪ್ರಿಯಾ (38), ಉತ್ತಮ ಉದ್ಯೋಗಕ್ಕಾಗಿ 2008 ರಲ್ಲಿ ಯೆಮೆನ್‌ಗೆ ತೆರಳಿದರು. ತರಬೇತಿ ಪಡೆದ ದಾದಿಯಾದ ಅವರು, ನಂತರ ಯೆಮೆನ್ ಪ್ರಜೆ ತಲಾಲ್ ಅಬ್ದೋ ಮಹದಿ ಅವರೊಂದಿಗೆ ಪಾಲುದಾರಿಕೆ ಮಾಡಿಕೊಂಡು ಸನಾ ನಗರದಲ್ಲಿ ಕ್ಲಿನಿಕ್ ನಡೆಸುತ್ತಿದ್ದರು. ಮಹದಿ ತನ್ನನ್ನು ಮದುವೆಯಾಗಿದ್ದಾನೆ ಎಂದು ಸುಳ್ಳು ಹೇಳಿ ಕಿರುಕುಳ ನೀಡಲು ಪ್ರಾರಂಭಿಸಿದಾಗ ಮತ್ತು ಆಕೆಯ ಪಾಸ್‌ಪೋರ್ಟ್ ಅನ್ನು ವಶಪಡಿಸಿಕೊಂಡು ಭಾರತಕ್ಕೆ ಹಿಂದಿರುಗುವುದನ್ನು ತಡೆದಾಗ ಇಬ್ಬರ ಸಂಬಂಧ ಹದಗೆಟ್ಟಿದೆ.

**ನಮಗಿನ್ನೂ ಅಧಿಕೃತ ಮಾಹಿತಿ ಬಂದಿಲ್ಲ: ಎಂಇಎ**

ಕೇರಳದ ದಾದಿ ನಿಮಿಷಾ ಪ್ರಿಯಾ ಅವರ ಗಲ್ಲು ಶಿಕ್ಷೆಯನ್ನು ರದ್ದುಪಡಿಸಿರುವ ಬಗ್ಗೆ ನಮಗೆ ಅಧಿಕೃತ ಮಾಹಿತಿ ಬಂದಿಲ್ಲ ಎಂದು ಭಾರತದ ವಿದೇಶಾಂಗ ಸಚಿವಾಲಯ ಹೇಳಿದೆ. 2017ರಲ್ಲಿ ಯೆಮೆನ್‌ನಲ್ಲಿ ನಡೆದ ಕೊಲೆ ಪ್ರಕರಣದಲ್ಲಿ ನಿಮಿಷಾ ಪ್ರಿಯಾ ಶಿಕ್ಷೆ ಅನುಭವಿಸುತ್ತಿದ್ದಾರೆ. ಈ ಪ್ರಕರಣದ ಬಗ್ಗೆ ಕೆಲವರು ತಪ್ಪು ಮಾಹಿತಿ ಹಬ್ಬಿಸುತ್ತಿದ್ದಾರೆ. ಮರಣದಂಡನೆ ರದ್ದಾಗಿರುವ ಬಗ್ಗೆ ಯೆಮೆನ್ ಸರ್ಕಾರದಿಂದ ಅಧಿಕೃತ ಲಿಖಿತ ದೃಢೀಕರಣ ಇನ್ನೂ ಬಂದಿಲ್ಲ ಎಂದು ಕಚೇರಿ ಸ್ಪಷ್ಟಪಡಿಸಿದೆ.

## ಮಿನಿ ನ್ಯೂಸ್

### ತಮಿಳುನಾಡಿನಲ್ಲಿ ಮರ್ಯಾದಾ ಹತ್ಯೆ

**ತಿರುನಲ್ವೇಲಿ:** ತಮಿಳು ನಾಡಿನಲ್ಲಿ ಮತ್ತೊಂದು ಮರ್ಯಾದಾ ಹತ್ಯೆ ನಡೆದಿದೆ. ಪರಿಶಿಷ್ಟ ಜಾತಿಗೆ ಸೇರಿದ ಐಟಿ ಉದ್ಯೋಗಿಯನ್ನು ಅಂತರ್ಜಾತಿ ಸಂಬಂಧದ ಆರೋಪದ ಮೇಲೆ ಯುವಕನೊಬ್ಬ ಕಡಿದು ಕೊಂದಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

27 ವರ್ಷದ ಬಲಿಪಶು ಚೆನ್ನೈನಲ್ಲಿ ಸಾಫ್ಟ್‌ವೇರ್ ಕಂಪನಿಯಲ್ಲಿ ಎಂಜಿನಿಯರ್ ಆಗಿ ಕೆಲಸ ಮಾಡುತ್ತಿದ್ದರು. ಆರೋಪಿ ಯುವಕನ ನೇತೃತ್ವದ ಸಶಸ್ತ್ರ ಗ್ಯಾಂಗ್ ಇಲ್ಲಿನ ಸಿದ್ಧ ಸೌಲಭ್ಯದ ಬಳಿ ಅವರನ್ನು ಕೊಲೆ ಮಾಡಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಮಾರ್ಯಾದಾ ಹತ್ಯೆ ಮಾಡಿದ ಸುರ್ಜಿತ್‌ನನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಆರೋಪಿಗಳ ಪೋಷಕರು ಇಬ್ಬರೂ ಸಬ್ ಇನ್ಸ್‌ಪೆಕ್ಟರ್‌ಗಳು.ಎಸ್‌ಐ ದಂಪತಿ ಮತ್ತು ಅವರ ಮಗ ಸುರ್ಜಿತ್ ವಿರುದ್ಧ ಬಿಎನ್‌ಎಸ್ ಮತ್ತು ಎಸ್‌ಸಿ/ಎಸ್‌ಟಿ (ದೌರ್ಜನ್ಯ ತಡೆ) ಕಾಯ್ದೆಯ ವಿವಿಧ ವಿಭಾಗಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

### ಟ್ರಕ್‌ಗೆ ಬಸ್ ಡಿಕ್ಕಿ: 18 ಸಾವು

**ರಾಂಚಿ:** ಜಾರ್ಖಂಡ್‌ನ ದಿಯೋಘರ್ ಜಿಲ್ಲೆಯಲ್ಲಿ ಅಡುಗೆ ಅನಿಲ ಸಿಲಿಂಡರ್‌ಗಳನ್ನು ತುಂಬಿದ್ದ ಟ್ರಕ್‌ಗೆ ಬಸ್ ಡಿಕ್ಕಿ ಹೊಡೆದ ಪರಿಣಾಮ ಕನಿಷ್ಠ 18 ಕನ್ವಾರಿಯಾಗಳು ಸಾವನ್ನಪ್ಪಿದ್ದು, ಹಲವರು ಗಾಯಗೊಂಡಿರುವ ಘಟನೆ ಸಂಭವಿಸಿದೆ. ಹಲವಾರು ಗಾಯಾಳುಗಳ ಸ್ಥಿತಿ ಗಂಭೀರವಾಗಿರುವುದರಿಂದ ಸಾವು–ನೋವುಗಳು ಹೆಚ್ಚಾಗುವ ಸಾಧ್ಯತೆ ಇದೆ. ಮೃತಪಟ್ಟವರ ಗುರುತು ಇನ್ನೂ ಪತ್ತೆಯಾಗಿಲ್ಲ. ಸದ್ಯ ಮೃತದೇಹಗಳನ್ನು ದಿಯೋಘರ್ ಸದರ್ ಆಸ್ಪತ್ರೆಗೆ ರವಾನಿಸಲಾಗಿದ್ದು, ಗಾಯಾಳುಗಳು ಚಿಕಿತ್ಸೆ ಪಡೆಯುತ್ತಿದ್ದಾರೆ. ಸ್ಥಳೀಯರ ಪ್ರಕಾರ, 20ಕ್ಕೂ ಹೆಚ್ಚು ಭಕ್ತರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಮೋಹನಪುರ ಪೊಲೀಸ್ ಠಾಣೆ ವ್ಯಾಪ್ತಿಯ ಜಮುನಿಯಾ ಅರಣ್ಯದ ಬಳಿ ಬೆಳಿಗ್ಗೆ 4.30 ರ ಸುಮಾರಿಗೆ ಅಪಘಾತ ಸಂಭವಿಸಿದೆ. ದಿಯೋಘರ್‌ನ ಮೋಹನಪುರದ ಜಮುನಿಯಾ ಅರಣ್ಯದ ಬಳಿ, ಕನ್ವಾರಿಯಾ ಕುಟುಂಬವನ್ನು ಹೊತ್ತೊಯ್ಯುತ್ತಿದ್ದ 32 ಆಸನಗಳ ಬಸ್, ಗ್ಯಾಸ್ ಸಿಲಿಂಡರ್‌ಗಳನ್ನು ಸಾಗಿಸುತ್ತಿದ್ದ ಟ್ರಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಕನಿಷ್ಠ ಐದು ಜನರು ಸಾವನ್ನಪ್ಪಿದ್ದಾರೆ ಮತ್ತು ಅನೇಕರು ಗಾಯಗೊಂಡಿದ್ದಾರೆ ಎಂದು ಸಿನ್ಹಾ ಪಿಟಿಐಗೆ ತಿಳಿಸಿದ್ದಾರೆ.

### 22 ಮಕ್ಕಳ ದತ್ತು ಪಡೆಯಲು ರಾಹುಲ್ ಗಾಂಧಿ ನಿರ್ಧಾರ

**ನವದೆಹಲಿ:** ಆಪರೇಷನ್ ಸಿಂಧೂರ್ ಕಾರ್ಯಾಚರಣೆ ಬಳಿಕ ಜಮ್ಮು ಕಾಶ್ಮೀರದ ವಿವಿಧ ಭಾಗಗಳಲ್ಲಿ ಪಾಕಿಸ್ತಾನ ನಡೆಸಿದ ಶೆಲ್ ದಾಳಿಯಲ್ಲಿ ಪೋಷಕರನ್ನು ಕಳೆದುಕೊಂಡ 22 ಮಕ್ಕಳನ್ನು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ 'ದತ್ತು' ಪಡೆಯಲು ನಿರ್ಧರಿಸಿದ್ದಾರೆ. ಪಾಕಿಸ್ತಾನದ ನಡೆಸಿದ ಶೆಲ್ ದಾಳಿಯಲ್ಲಿ ತಮ್ಮ ಪೋಷಕರಿಬ್ಬರನ್ನೂ ಅಥವಾ ಕುಟುಂಬದ ಏಕೈಕ ಜೀವನಾಧಾರವಾಗಿದ್ದ ಮಂದಿಯನ್ನು ಕಳೆದುಕೊಂಡ ಪೂಂಚ್‌ನ ವಲಯದ 22 ಮಕ್ಕಳ ಸಂಪೂರ್ಣ ಶೈಕ್ಷಣಿಕ ಖರ್ಚು ವೆಚ್ಚ ಮತ್ತು ಅವರ ಆರೋಗ್ಯ, ಆಹಾರ ಸೇರಿದಂತೆ ಇನ್ನಿತರೆ ಖರ್ಚು ವೆಚ್ಚ ಪಾವತಿಸಲು ಮುಂದಾಗಿದ್ದಾರೆ.

ಈ ಕುರಿತು ಮಾಹಿತಿ ನೀಡಿರುವ ಜಮ್ಮು ಕಾಶ್ಮೀರದ ಕಾಂಗ್ರೆಸ್ ಮುಖ್ಯಸ್ಥ ತಾರಿಕ್ ಹಮೀದ್ ಕರ್ರಾ, ದತ್ತು ಪಡೆದ ಮಕ್ಕಳಿಗೆ ಮೊದಲ ಕಂತಿನ ಹಣವನ್ನು ನಾಳೆ ಬಿಡುಗಡೆ ಮಾಡಲಾಗುವುದು. ಈ ಮಕ್ಕಳು ಪದವಿ ಅಥವಾ ಉನ್ನತ ಶಿಕ್ಷಣದ ತನಕ ವ್ಯಾಸಂಗ ಮಾಡಲು ಬಯಸಿದರೆ ಎಲ್ಲಾ ಖರ್ಚು ವೆಚ್ಚ ಭರಿಸುವುದಾಗಿ ತಿಳಿಸಿದ್ದಾರೆ. ಕಳೆದ ಮೇ ತಿಂಗಳಲ್ಲಿ ಪೂಂಚ್‌ಗೆ ಭೇಟಿ ನೀಡಿದ್ದ ರಾಹುಲ್ ಗಾಂಧಿ, ಸ್ಥಳೀಯ ಪಕ್ಷದ ನಾಯಕರಿಗೆ ಪೋಷಕರನ್ನು ಕಳೆದುಕೊಂಡು ಸಮಸ್ಯೆ ಸಿಲುಕಿದ್ದ ಪೀಡಿತ ಮಕ್ಕಳ ಪಟ್ಟಿ ಸಂಗ್ರಹಿಸಲು ಸೂಚಿಸಿದ್ದರು. ಅದರನ್ವಯ ಸಮೀಕ್ಷೆ ನಡೆಸಲಾಗಿತ್ತು. ಸರ್ಕಾರಿ ದಾಖಲೆ ಪರಿಶೀಲಿಸಿದ ನಂತರ ಮಕ್ಕಳನ್ನು ದತ್ತು ಪಡೆಯಲಿದ್ದಾರೆ.

### ಗಾಜಾದಲ್ಲಿ ಹಸಿವಿನಿಂದ ಬಳಲುತ್ತಿರುವ ಜನ: ಟ್ರಂಪ್

**ಟೆಲ್ ಅವೀವಾ:** ಇಸ್ರೇಲ್ ಮತ್ತು ಗಾಜಾ ನಡುವಿನ ಸಂಘರ್ಷದಲ್ಲಿ ಗಾಜಾ ಪಟ್ಟಿಯಲ್ಲಿರುವ ಅನೇಕ ಮಂದಿ ಹಸಿವಿನಿಂದ ಬಳಲುತ್ತಿರುವ ಸಂಗತಿಯನ್ನು ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಖಚಿತ ಪಡಿಸಿದ್ದಾರೆ. ಗಾಜಾದಲ್ಲಿ ಹಸಿವಿನಿಂದ ಬಳಲುವ ಯಾವುದೇ ಪ್ರಕರಣ ವರದಿಯಾಗಿಲ್ಲ ಎಂದು ಹೇಳಿದ ಬೆನ್ನಲ್ಲೇ ಡೊನಾಲ್ಡ್ ಟ್ರಂಪ್, ಗಾಜಾದಲ್ಲಿ ನಿಜವಾದ ಹಸಿವು ಮತ್ತು ಅಪೌಷ್ಟಿಕತೆಯ ಸಮಸ್ಯೆ ಇದೆ ಎಂದಿದ್ದಾರೆ. ಇಸ್ರೇಲ್ ಗಾಜಾದಲ್ಲಿ ಹಸಿವನ್ನು ಹೆಚ್ಚಿಸುತ್ತಿದೆ. ಅಲ್ಲಿನ ಮಕ್ಕಳು, ಹಿರಿಯ ನಾಗರಿಕರು ಹಸಿವಿನಿಂದ ಬಳಲುತ್ತಿದ್ದಾರೆ.ಇದಕ್ಕೆ ತಕ್ಷಣ ಪರಿಹಾರ ಕಂಡುಕೊಳ್ಳುವ ಅಗತ್ಯವಿದೆ ಎಂದು ತಿಳಿಸಿದ್ದಾರೆ.

ಸ್ಕಾಟ್ಲೆಂಡ್‌ನಲ್ಲಿ ಇಂಗ್ಲೆಂಡ್ ಪ್ರಧಾನಿ ಕೀರ್ ಸ್ಟಾರ್ಮರ್ ಅವರೊಂದಿಗಿನ ಸಭೆ ಬಳಿಕ ಮಾತನಾಡಿದ ಡೊನಾಲ್ಡ್ ಟ್ರಂಪ್, ಗಾಜಾದಲ್ಲಿ ಯಾರೂ ಆರಾಮವಾಗಿಲ್ಲ, ಇಸ್ರೇಲ್ ಮತ್ತು ಹಮಾಸ್ ಬಂಡುಕೋರರ ನಡುವಿನ ಯುದ್ಧಿಂದ ಎಲ್ಲವೂ ಅಸ್ತವ್ಯಸ್ತವಾಗಿದೆ ಎಂದಿದ್ದಾರೆ.

### ಲಂಡನ್ ಟವರ್ ಬ್ರಿಡ್ಜ್ ಬಳಿ ಚಾಕು ಇರಿದು ಇಬ್ಬರ ಕೊಲೆ

**ಲಂಡನ್:** ಲಂಡನ್ ನ ಖ್ಯಾತ ಪ್ರವಾಸಿ ಸ್ಥಳ ಟವರ್ ಬ್ರಿಡ್ಜ್ ಬಳಿ ಚಾಕು ಇರಿತ ಘಟನೆ ನಡೆದಿದ್ದು, ಇಬ್ಬರು ಮೃತಪಟ್ಟಿರುವುದು ವರದಿಯಾಗಿದೆ. ಈ ಪ್ರದೇಶದಲ್ಲಿ ಹಿಂಸಾತ್ಮಕ ಅಪರಾಧ ಕೃತ್ಯಗಳು ನಡೆಯುವುದು ಅಪರೂಪ. ಘಟನೆಯಲ್ಲಿ 58 ವರ್ಷದ ವ್ಯಕ್ತಿಯೊಬ್ಬರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

27 ವರ್ಷದ ವ್ಯಕ್ತಿ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ. ಇದು ಕೊಲೆ ಪ್ರಕರಣವಾಗಿದ್ದು, ಪೊಲೀಸರು ತನಿಖೆ ಆರಂಭಿಸಿದ್ದಾರೆ. ಮತ್ತೊಬ್ಬ 30 ವರ್ಷದ ವ್ಯಕ್ತಿ ಗಾಯಗೊಂಡಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಗಂಭೀರ ಗಾಯಗಳಿಲ್ಲದೆ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಘಟನೆಗೆ ಸಂಬಂಧಿಸಿದಂತೆ 30 ವರ್ಷದ ಮತ್ತೊಬ್ಬ ವ್ಯಕ್ತಿಯನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಆತನ ಸ್ಥಿತಿ ಗಂಭೀರವಾಗಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಬೆಚ್ಚಿಬೀಳಿಸುವಂತಹ ಘಟನೆ ಕೊಲೆ ಪ್ರಕರಣದ ತನಿಖೆಯನ್ನು ಪೊಲೀಸರು ನಡೆಸುತ್ತಿದ್ದು ಇನ್ನೂ ಆರಂಭಿಕ ಹಂತದಲ್ಲಿದೆ. ಡಿಟೆಕ್ಟಿವ್ ಚೀಫ್ ಎಮ್ಮ ಬಾಂಡ್ ಮಾತನಾಡಿ, ಸದ್ಯದ ಪರಿಸ್ಥಿತಿಯಲ್ಲಿ ಯಾವುದೇ ಉಗ್ರ ಚಟುವಟಿಯ ಕೈವಾಡ ಇರುವ ಸಾಧ್ಯತೆ ಇಲ್ಲ, ಮುಂದೆ ಸಾರ್ವಜನಿಕರಿಗೆ ಯಾವುದೇ ಅಪಾಯವೂ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

# ಡಿ-ಕಂಪನಿಗೆ ಡುಬಾಕ್ ಅಂದ ಒಳ್ಳೆ ಹುಡ್ಗ



ಡಿ ಕಂಪನಿ ಅದೊಂದು ಡುಬಾಕ್ ಕಂಪನಿ, ದರ್ಬೇಸಿಗಳ ಕಂಪನಿ ಅಂತಾ ಹೆಸರಿಟ್ಕೊಳ್ಳಿ ಎಂದು ದರ್ಶನ್ ಫ್ಯಾನ್ಸ್‌ಗೆ ಒಳ್ಳೆ ಹುಡ್ಗ ಪ್ರಥಮ್ ತರಾಟೆಗೆ ತೆಗೆದುಕೊಂಡಿದ್ದಾರೆ. ಸೋಷಿಯಲ್ ಮೀಡಿಯಾದಲ್ಲಿ ವಿಡಿಯೋವೊಂದನ್ನು ಹರಿಬಿಟ್ಟಿರುವ ಅವರು, ರಾಷ್ಟ್ರೀಯ ತನಿಖಾ ಸಂಸ್ಥೆ, ಇಂಟರ್‌ಪೋಲ್, ಸೈಬರ್ ಕ್ರೈಮ್, ಇಂಟಲಿಜೆನ್ಸ್ ಇವೆಲ್ಲಾ ದೇಶದ ಬಹಳ ದೊಡ್ಡ ಬೇಹುಗಾರಿಗೆ ಕಂಪನಿಗಳು. ಇವನ್ನೆಲ್ಲಾ ಮುಚ್ಚಿ ಎಲ್ಲಾ ಕೇಸ್‌ಗಳನ್ನು ಆ ಡಿ-ಕಂಪನಿ, ಡುಬಾಕ್ ಕಂಪನಿಗೆ ಕೊಡಿ. ಪರಿಹರಿಸ್ತಾರೆ. ಅವತ್ತು ದೊಡ್ಡಬಳ್ಳಾಪುರದಲ್ಲಿ ನಾನು ರೌಡಿಗಳ ಬಳಿ ಚಿಪ್ಸ್-ಪಪ್ಸ್ ತಿನ್ನೋಕೆ ಹೋಗಿದ್ದನಂತೆ. ಸುಮ್ನೆ ತಪ್ಪು ಮಾಹಿತಿ ಹಬ್ಬಿಸಬೇಡಿ. ಮೊದಲು ಶಿಕ್ಷಣ ಮುಖ್ಯ. ಸುಮ್ನಿದ್ದು ನಿಮ್ಮ ಅಮ್ಮ-ಅಪ್ಪನಿಗೆ ದುಡಿದು ತಂದು ಸಾಕಿ ಎಂದು ಕ್ಲಾಸ್ ತೆಗೆದುಕೊಂಡಿದ್ದಾರೆ. ಈ ಡುಬಾಕ್ ಕಂಪನಿಯ ಇಂಟಲಿಜೆನ್ಸ್ ಪ್ರಕಾರ ಇನ್ವೆಸ್ಟಿಕೇಷನ್ ಮಾಡಿ ಹೇಳಿದ್ರಂತೆ ಅವತ್ತು ಹಲ್ಲೆ ಮಾಡೋಕೆ ಚಿಪ್ಸ್-ಪಪ್ಸ್ ಮ್ಯಾಟರಂತೆ. ಜೊತೆಗೆ ಅಲ್ಲಿರುವವರು ದರ್ಶನ್ ಫ್ಯಾನ್ಸ್ ಅಲ್ವಂತೆ ಅಂತ ಹೇಳ್ತಿದ್ದಾರೆ. ಸುಮ್ಮನೇ ಡಿ-ಕಂಪನಿ ಅಂತ ಹೆಸರಿಟ್ಕೊಂಡು ಪುಂಡಾಟ ಮಾಡ್ತಾರೆ. ಅಲ್ಲಿ ಏನಾಯ್ತು ಅಂತ ಎಸ್‌ಪಿಯವರು ಹೇಳ್ತಾರೆ. ನಿಮಗೆ ಒಂದು ಚೂರಾದರೂ ಬುದ್ಧಿ ಇದ್ರೆ, ತಪ್ಪು ಮ್ಯಾಟರ್ ಹಬ್ಬಿಸೋದು ಬಿಡಿ. ನಾನು ಅಲ್ಲೇನೂ ಚಿಪ್ಸ್ ತಿನ್ನಕ್ಕೆ ಹೋಗಿರಲಿಲ್ಲ ಎಂದು ಸೆಲ್ಫಿ ವಿಡಿಯೋ ಮಾಡಿ ಟಾಂಗ್ ಕೊಟ್ಟಿದ್ದಾರೆ. ನಟ ಪ್ರಥಮ್‌ಗೆ ಕಿಡಿಗೇಡಿಗಳಿಂದ ಜೀವ ಬೆದರಿಕೆ ಬಂದಿದೆ ಅನ್ನೋ ಆಡಿಯೋವೊಂದು ಸ್ಫೋಟಗೊಂಡಿತ್ತು. ದೊಡ್ಡಬಳ್ಳಾಪುರ ದೇವಸ್ಥಾನಕ್ಕೆ ಹೋಗಿದ್ದ ವೇಳೆ ದುಷ್ಕರ್ಮಿಗಳ ಗುಂಪೊಂದು ಪ್ರಥಮ್‌ಗೆ ಜೀವ ಬೆದರಿಕೆ ಒಡ್ಡಿರುವುದಾಗಿ ತಿಳಿದುಬಂದಿತ್ತು.

ಈ ಕುರಿತು ವ್ಯಕ್ತಿಯೊಬ್ಬರೊಂದಿಗೆ ಪ್ರಥಮ್ ಮಾತನಾಡಿರುವ ಆಡಿಯೋ ಕೂಡ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿತ್ತು.

ದೊಡ್ಡಬಳ್ಳಾಪುರ ದೇವಸ್ಥಾನಕ್ಕೆ ಹೋಗಿದ್ದ ವೇಳೆ ದುಷ್ಕರ್ಮಿಗಳು ಡ್ಯಾಗ್ರರ್ ತೋರಿಸಿ ನಟನಿಗೆ ಜೀವಬೆದರಿಕೆ ಹಾಕಿದ್ದರು. ಪೂಜೆ ಮುಗಿಸಿ ಹೊರಟ ವೇಳೆ ಕಾರಿಗೆ ಅಡ್ಡಬಂದ ಕೆಲವರು ಪ್ರಥಮ್‌ನನ್ನ ಬಲವಂತವಾಗಿ ಕರೆದೊಯ್ದು, ನಮ್ ಬಾಸ್ ಬಗ್ಗೆ ಮಾತಾಡ್ತಿಯ ಅಂತ ಹಲ್ಲೆಗೆ ಯತ್ನಿಸಿ ಅವಾಚ್ಯವಾಗಿ ನಿಂದಿಸಿ ಬೆದರಿಸಿದ್ದರು.

# ಹುಲಿಬೀರ ಟ್ರೈಲರ್ ರಿಲೀಸ್

ಉತ್ತರ ಕರ್ನಾಟಕದ ಪ್ರತಿಭೆಗಳೇ ಸೇರಿ ನಿರ್ಮಾಣ ಮಾಡಿರುವ ಚಿತ್ರ ಹುಲಿಬೀರ. ಈ ಹಿಂದೆ ರಂಗ್ ಬಿರಂಗಿ ಚಿತ್ರ ನಿರ್ದೇಶಿಸಿದ್ದ ಮದರಂಗಿ ಮಲ್ಲಿಕಾರ್ಜುನ ಈ ಚಿತ್ರಕ್ಕೆ ಕಥೆ, ಚಿತ್ರಕಥೆ ಬರೆದು ಆಕ್ಷನ್ ಕಟ್ ಹೇಳಿದ್ದಾರೆ. ಯರ್ರಾಬಿರ್ರಿ ಚಿತ್ರದಲ್ಲಿ ನಾಯಕನಾಗಿ ನಟಿಸಿದ್ದ ರೂರಲ್ ಸ್ಟಾರ್ ಅಂಜನ್ ಚಿತ್ರದ ನಾಯಕನಾಗಿ ನಟಿಸಿದ್ದು, ಚೈತ್ರ ತೋಟದ ನಾಯಕಿ ಪಾತ್ರ ನಿರ್ವಹಿಸಿದ್ದಾರೆ. ಉತ್ತರ ಕರ್ನಾಟಕದ ನೇಟಿವಿಟಿ, ನಾಯಕ, ನಾಯಕಿ, ನಿರ್ಮಾಪಕ, ನಿರ್ದೇಶಕ ಹೀಗೆ ಎಲ್ಲರೂ ಸೇರಿ ಮಾಡಿರುವ ಅದೇ ಸೊಗಡಿನ ಚಿತ್ರವಿದು. ಸೋಮವಾರ ಈ ಚಿತ್ರದ ಟೀಸರ್ ಬಿಡುಗಡೆ ಸಮಾರಂಭ ನಡೆಯಿತು.

ವೀರಸಮರ್ಥ ಅವರ ಸಂಗೀತ ಸಂಯೋಜನೆ, ಸನಾತನ ಅವರ ಕ್ಯಾಮೆರಾ ವರ್ಕ್ ಈ ಚಿತ್ರಕ್ಕಿದೆ. ಸಾಯಿ ಸ್ಟಾರ್ ಸಿನಿಮಾಸ್ ಮೂಲಕ ದಾವಲ ಸಾಹೇಬ ಹುಣಶೀಮರದ, ಅಶೋಕ್ ಎನ್.(ತುರುವೇಕೆರೆ) ಹಾಗೂ ಸುಜಾತ ಗಿರೀಶ್ ಸೇರಿ ಈ ಚಿತ್ರವನ್ನು ನಿರ್ಮಿಸುತ್ತಿದ್ದಾರೆ. ವೇದಿಕೆಯಲ್ಲಿ ಮಾತನಾಡಿದ ನಿರ್ದೇಶಕ ಮದರಂಗಿ ಮಲ್ಲಿಕಾರ್ಜುನ ಇದು ನನ್ನ ನಿರ್ದೇಶನದ





# ರಮ್ಯಾ ಬೆಂಬಲಕ್ಕೆ ನಿಂತ ದೊಡ್ಮನೆ ಕುಟುಂಬ

ದರ್ಶನ್ ಅಭಿಮಾನಿಗಳ ವಿರುದ್ಧ ಕಾನೂನು ಸಮರಕ್ಕಿಳಿದಿರುವ ಸ್ಯಾಂಡಲ್‌ವುಡ್ ಕ್ವೀನ್ ರಮ್ಯಾಗೆ ದೊಡ್ಮನೆ ಕುಟುಂಬ ಸಾಥ್ ನೀಡಿದೆ. ನಟ ಶಿವರಾಜ್‌ಕುಮಾರ್ ಹಾಗೂ ಪತ್ನಿ ಗೀತಾ ಶಿವರಾಜ್‌ಕುಮಾರ್ ಅವರು ತಮ್ಮ ಇನ್‌ಸ್ಟಾಗ್ರಾಂ ಖಾತೆಯಲ್ಲಿ ಈ ಕುರಿತು ಪೋಸ್ಟ್‌ವೊಂದನ್ನು ಹಂಚಿಕೊಂಡಿದ್ದಾರೆ. ರಮ್ಯಾ ಅವರ ವಿರುದ್ಧ ಬಳಸಿರುವ ಪದಗಳು ಖಂಡನೀಯ. ಯಾವ ಮಹಿಳೆಯ ವಿರುದ್ಧವೂ ಆ ರೀತಿ ಮಾತನಾಡುವುದು ಸರಿಯಲ್ಲ, ಅದನ್ನು ನಾವು ಸಹಿಸಬಾರದು. ಮಹಿಳೆಯರನ್ನು ತಾಯಿಯಾಗಿ, ಅಕ್ಕನಾಗಿ, ಮಗಳಾಗಿ, ಮಡದಿಯಾಗಿ ಮತ್ತು ಮೊಟ್ಟಮೊದಲು ಒಬ್ಬ ವ್ಯಕ್ತಿಯಾಗಿ ಗೌರವಿಸುವುದು ತುಂಬಾ ಮುಖ್ಯ. ಇದು ಸರಿಯಲ್ಲ ಎಂದು ಪರೋಕ್ಷವಾಗಿ ಡಿ-ಬಾಸ್ ಅಭಿಮಾನಿಗಳ ವಿರುದ್ಧ ಸಿಡಿದೆದ್ದಿದ್ದಾರೆ. ಸೋಶಿಯಲ್ ಮೀಡಿಯಾ ತುಂಬಾ ಬಲಿಷ್ಠವಾದ ಅಸ್ತ್ರ. ಅದನ್ನು ತಮ್ಮ ಏಳಿಗೆಗಾಗಿ ಬಳಸಬೇಕೇ ಹೊರತು, ಅವಾಚ್ಯ ಶಬ್ದಗಳಿಂದ ನಿಂದಿಸಿ, ದ್ವೇಷ-ಅಸೂಯೆಯನ್ನು ಬಿತ್ತಲು ಬಳಸಬಾರದು. ರಮ್ಯಾ, ನಿಮ್ಮ ನಿಲುವು ಸರಿಯಿದೆ, ನಿಮ್ಮ ಜೊತೆಗೆ ನಾವು ಸದಾ ನಿಲ್ಲುತ್ತೇವೆ ಎಂದು ಬೆಂಬಲ ಸೂಚಿಸಿದ್ದಾರೆ.

**ನಿಮ್ಮ ಜೊತೆಗೆ ನಾವು ಸದಾ ನಿಲ್ಲುತ್ತೇವೆ**

# ಚಂದನ್ ನಿರ್ದೇಶನದ ಚಿತ್ರಕ್ಕೆ ಕಿಚ್ಚನ ಕಂಠ



ಸಾಮಾನ್ಯವಾಗಿ ಹುಡುಗಿಯರನ್ನು ಚುಡಾಯಿಸಿಕೊಂಡು ಓಡಾಡುವ ಹುಡುಗರನ್ನು 'ಫ್ಲರ್ಟ್' ಎನ್ನುತ್ತಾರೆ. ಇದೀಗ ಇದೇ ಹೆಸರಿನಲ್ಲಿ ಚಲನಚಿತ್ರವೊಂದು ನಿರ್ಮಾಣವಾಗಿದೆ. ಕಿಚ್ಚ ಸುದೀಪ್ ಗರಡಿಯ ಹುಡುಗ, ಸಿಸಿಎಲ್ ಸಹಪಾಠಿಯೂ ಆದ ಚಂದನ್ ಕುಮಾರ್ ನಾಯಕನಾಗಿ ಅಭಿನಯಿಸಿರುವ ಈ ಚಿತ್ರದ ಹಾಡೊಂದಕ್ಕೆ ಸುದೀಪ್ ಅವರೇ ದನಿ ಆಗಿದ್ದಾರೆ. ಈ ಫ್ರೆಂಡ್ ಶಿಪ್ ಆಂಥೆಮ್‌ನ ಬಿಡುಗಡೆ ಕಾರ್ಯಕ್ರಮ ಸೋಮವಾರ ಸಂಜೆ ನೆರವೇರಿತು. 'ಫ್ಲರ್ಟ್' ಚಿತ್ರದಲ್ಲಿ ನಟಿಸುವ ಜತೆಗೆ ಚಿತ್ರದ ನಿರ್ದೇಶನದ ಜವಾಬ್ದಾರಿಯನ್ನೂ ಸಹ ಚಂದನ್ ಕುಮಾರ್ ಅವರೇ ಹೊತ್ತಿದ್ದಾರೆ. ಅಲ್ಲದೆ ಎವರೆಸ್ಟ್ ಪಿಕ್ಚರ್ಸ್ ಬ್ಯಾನರ್ ಅಡಿ ಚಂದನ್ ಅವರ ಪತ್ನಿ ಕವಿತಾಗೌಡ ಈ ಚಿತ್ರವನ್ನು ನಿರ್ಮಿಸಿದ್ದಾರೆ. 'ಎ ಪ್ಯೂರ್ ಡವ್ ಸ್ಟೋರಿ' ಎಂಬ ಅಡಿಬರಹ ಫ್ಲರ್ಟ್ ಚಿತ್ರಕ್ಕಿದ್ದು, ಇದಕ್ಕೆ ವಿವರಣೆಯನ್ನೂ ಚಂದನ್ ನೀಡಿದ್ದಾರೆ. ವಿಶೇಷವಾಗಿ ಸುದೀಪ್ ಅವರ ಹಾಡಿಗೆ ನಕುಲ್ ಅಭಯಂಕರ್ ಸಂಗೀತ ಸಂಯೋಜನೆ ಮಾಡಿದ್ದಾರೆ. ಹಾಡಿನ ಬಿಡುಗಡೆ ಸಂದರ್ಭದಲ್ಲಿ ಸುದೀಪ್ ಅವರು ಚಂದನ್ ಗೆ ವಿಡಿಯೋ ಮೂಲಕ ಶುಭ ಹಾರೈಸಿದರು. ಈ ಸಂದರ್ಭದಲ್ಲಿ ನಾಯಕ, ನಿರ್ದೇಶಕ ಚಂದನ್ ಮಾತನಾಡುತ್ತ ಇದೊಂದು ರೋಮ್ ಕಾಮ್ ಸಿನಿಮಾ ಆದರೂ ಫ್ರೆಂಡ್ ಶಿಪ್, ಲವ್, ಹೀಗೆ ಎಲ್ಲಾ ಥರದ ಎಂಟರ್ ಟೈನಿಂಗ್ ಎಲಿಮೆಂಟ್ಸ್ ಒಳಗೊಂಡಿದೆ. ಫ್ಲರ್ಟ್ ಎಂದರೆ ಬರೀ ಚುಡಾಯಿಸುವುದು ಎಂದರ್ಥವಲ್ಲ. ಗಾಢವಾದ ಪ್ರೀತಿಯನ್ನೂ ಸಹ ಫ್ಲರ್ಟ್ ಎಂದೇ ಕರೆಯುತ್ತಾರೆ ಎಂದು ಮಾತು ಆರಂಭಿಸಿದ ಚಂದನ್, ಎಲ್ಲರ ಡವ್ ನಲ್ಲೂ ಒಂದೊಂದು ಲವ್ ಇದೆ ಎನ್ನುತ್ತಾರೆ. ಈ ಚಿತ್ರದಲ್ಲಿ ರೋಮ್ ಕಾಮ್ ಜತೆಗೆ ಸೈಕೋ ಕ್ಯಾರೆಕ್ಟರ್ ಕೂಡ ಇದೆ. ಇಡೀ ಚಿತ್ರ ಎಲ್ಲೂ ಬೋರಾಗದಂತೆ ಫಾಸ್ಟ್ ಆಗಿ ಸಾಗುತ್ತದೆ. ಈಗ ರಿಲೀಸಾಗಿರುವ ಫ್ರೆಂಡ್ ಶಿಪ್ ಆಂಥೆಮ್ ಸಾಂಗನ್ನು ಸುದೀಪ್ ಹಾಡಿದ್ದಾರೆ ಎಂದು ಹೇಳಿದರು.

**ರೋಮ್ ಕಾಮ್ ಸಿನಿಮಾ**

# ಮಿರಾಯ್ ಮೊದಲ ಹಾಡಿಗೆ ಭರ್ಜರಿ ರೆಸ್ಪಾನ್ಸ್

'ಹನುಮಾನ್' ಖ್ಯಾತಿಯ ನಟ ತೇಜ್ ಸಜ್ಜಾ ನಟನೆಯ 'ಮಿರಾಯ್' ಚಿತ್ರ ಮೂಲಕ ಬರಲು ಸಜ್ಜಾಗಿದ್ದಾರೆ. 'ಹನುಮಾನ್' ಚಿತ್ರ ಆದ್ಮೇಲೆ ಮಾಡಿರೋ ಮತ್ತೊಂದು ಸೂಪರ್ ಹೀರೋ ಚಿತ್ರವೇ ಇದಾಗಿದೆ. ಬಹುಭಾಷೆಯಲ್ಲಿಯೇ ತೆರೆಗೆ ಬರುತ್ತಿರುವ ಈ ಸಿನಿಮಾದ ಮೊದಲ ಹಾಡು ಬಿಡುಗಡೆಯಾಗಿದ್ದು, ಭರ್ಜರಿ ಪ್ರತಿಕ್ರಿಯೆ ಪಡೆದುಕೊಂಡಿದೆ.



ವೈಬ್ ಐತೆ ಬೇಬಿ ಎಂದು ನಾಯಕ ತೇಜ್ ಸಜ್ಜಾ ಮತ್ತು ರಿತಿಕಾ ನಾಯಕ್ ಭರ್ಜರಿಯಾಗಿ ಹೆಜ್ಜೆ ಹಾಕಿದ್ದಾರೆ. ಕನ್ನಡದಲ್ಲಿಯೂ ಈ ಹಾಡು ರಿಲೀಸ್ ಆಗಿದ್ದು, ಅರ್ಮಾನ್ ಮಲಿಕ್ ಧ್ವನಿಯಾಗಿದ್ದಾರೆ. ಗೌರ ಹರಿ ಸಂಗೀತವನ್ನು ನೀಡಿದ್ದಾರೆ, ವರದರಾಜ್ ಚಿಕ್ಕಬಳ್ಳಾಪುರ ಸಾಹಿತ್ಯ ಬರೆದಿದ್ದಾರೆ. 'ಮಿರಾಯ್' ಚಿತ್ರದಲ್ಲಿ ಭರ್ಜರಿ ಆಯಕ್ಷನ್ ಗಳಿವೆ. ಈ ಆಕ್ಷನ್ ಚಿತ್ರವನ್ನ ಕಾರ್ತಿಕ್ ಘಟ್ಟಮನೇನಿ ಡೈರೆಕ್ಷನ್ ಮಾಡಿದ್ದಾರೆ. ವಿಶೇಷವಾಗಿ ಈ ಚಲನಚಿತ್ರವು 2ಡಿ ಮತ್ತು 3ಡಿ ರೂಪದಲ್ಲಿಯೇ ಸಿನಿಮಾ ರಿಲೀಸ್ ಆಗುತ್ತಿದೆ. ಅತೀ ದೊಡ್ಡ ಮಟ್ಟದಲ್ಲಿಯೇ ಈ ಚಿತ್ರ ರಿಲೀಸ್ ಆಗುತ್ತಿದೆ. ಸೆಪ್ಟೆಂಬರ್ 5ರಂದು ಮಿರಾಯ್ ಬಿಡುಗಡೆಯಾಗಲಿದೆ. 'ಮಿರಾಯ್' ಎಂದರೆ ಭವಿಷ್ಯ ಎಂದರ್ಥ. ಅಶೋಕ ಚಕ್ರವರ್ತಿ ಹಾಗೂ ಆತನ 9 ರಹಸ್ಯದ ಕಥೆಯನ್ನು ಸಿನಿಮಾ ಹೇಳುತ್ತದೆ. ದಕ್ಷಿಣ ಭಾರತದ ಪ್ರತಿಷ್ಠಿತ ನಿರ್ಮಾಣ ಸಂಸ್ಥೆ ಪೀಪಲ್ ಮೀಡಿಯಾ ಫ್ಯಾಕ್ಟರಿ ಅಡಿ ಟಿ.ಜಿ.ವಿಶ್ವಪ್ರಸಾದ್ ಚಿತ್ರ ನಿರ್ಮಾಣ ಮಾಡುತ್ತಿದ್ದಾರೆ. ಮನೋಜ್ ಮಂಚು ಖಳನಾಯಕನಾಗಿ ಮತ್ತು ನಾಯಕಿಯಾಗಿ ರಿತಿಕಾ ನಾಯಕ್ ನಟಿಸಿರುವ ಈ ಚಿತ್ರದಲ್ಲಿ ಡಿಫರೆಂಟ್ ರೋಲ್‌ನಲ್ಲಿ ತೇಜ್ ಸಜ್ಜಾ ನಟಿಸುತ್ತಿದ್ದಾರೆ. ಕಾರ್ತಿಕ್ 'ಮಿರಾಯ್'ಗೆ ಚಿತ್ರಕಥೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ. ಮಣಿಬಾಬು ಕರಣಂ ಸಂಭಾಷಣೆ ಬರೆದಿದ್ದಾರೆ. ನಾಗೇಂದ್ರ ತಂಗಳ ಕಲಾ ನಿರ್ದೇಶನ, ಗೌರ ಹರಿ ಸಂಗೀತ ಚಿತ್ರಕ್ಕಿದೆ.

# ಟೀಮ್ ಇಂಡಿಯಾದಲ್ಲಿ 3 ಬದಲಾವಣೆ ಬಹುತೇಕ ಖಚಿತ

ಭಾರತ ಮತ್ತು ಇಂಗ್ಲೆಂಡ್ ನಡುವಣ 5ನೇ ಟೆಸ್ಟ್ ಪಂದ್ಯವು ಗುರುವಾರದಿಂದ (ಜುಲೈ 31) ಶುರುವಾಗಲಿದೆ. ಲಂಡನ್‌ನ ಕೆನ್ನಿಂಗ್ಟನ್ ಓವಲ್ ಮೈದಾನದಲ್ಲಿ ನಡೆಯಲಿರುವ ಈ ಪಂದ್ಯದಿಂದ ಟೀಮ್ ಇಂಡಿಯಾದ ವಿಕೆಟ್ ಕೀಪರ್ ಬ್ಯಾಟರ್ ರಿಷಭ್ ಪಂತ್ ಹೊರಗುಳಿದಿದ್ದಾರೆ

ಹಾಗೆಯೇ ಕಳೆದ ಪಂದ್ಯದಿಂದ ಹೊರಗುಳಿದಿದ್ದ ಆಕಾಶ್ ದೀಪ್ ಇದೀಗ ಸಂಪೂರ್ಣ ಫಿಟ್ ಆಗಿದ್ದಾರೆ. ಇಂಗ್ಲೆಂಡ್ ವಿರುದ್ಧದ ಐದನೇ ಟೆಸ್ಟ್ ಪಂದ್ಯಕ್ಕಾಗಿ ಟೀಮ್ ಇಂಡಿಯಾ ತನ್ನ ಪ್ಲೇಯಿಂಗ್ ಇಲೆವೆನ್‌ನಲ್ಲಿ ಮೂರು ಬದಲಾವಣೆ ಮಾಡುವುದು ಬಹುತೇಕ ಖಚಿತ. ಏಕೆಂದರೆ ಈ ಪಂದ್ಯದಕ್ಕೆ ಟೀಮ್ ಇಂಡಿಯಾದ ವಿಕೆಟ್ ಕೀಪರ್ ಬ್ಯಾಟರ್ ರಿಷಭ್ ಪಂತ್ ಅಲಭ್ಯರಾಗಿದ್ದಾರೆ. ಹೀಗಾಗಿ ಅವರ ಬದಲಿಗೆ ಮತ್ತೋರ್ವ ವಿಕೆಟ್ ಕೀಪರ್ ಕಣಕ್ಕಿಳಿಯುವುದು ಖಚಿತ.

**ಜಸ್‌ಪ್ರೀತ್ ಬುಮ್ರಾ ಆಡ್ತಾರಾ**





### ಪಂತ್ ಬದಲಿಗೆ ಯಾರು

ಕಳೆದ ಎರಡು ಪಂದ್ಯಗಳಲ್ಲಿ ಗಾಯದಿಂದ ಬಳಲುತ್ತಿದ್ದ ರಿಷಭ್ ಪಂತ್ ಬದಲಿಯಾಗಿ ಧ್ರುವ್ ಜುರೇಲ್ ವಿಕೆಟ್ ಕೀಪಿಂಗ್ ಜವಾಬ್ದಾರಿ ನಿರ್ವಹಿಸಿದ್ದರು. ಹೀಗಾಗಿ ಕೆನ್ನಿಂಗ್ಟನ್ ಓವಲ್ ಮೈದಾನದಲ್ಲಿ ನಡೆಯಲಿರುವ ಐದನೇ ಪಂದ್ಯದ ಪ್ಲೇಯಿಂಗ್ ಇಲೆವೆನ್‌ನಲ್ಲಿ ವಿಕೆಟ್ ಕೀಪರ್ ಆಗಿ ಧ್ರುವ್ ಜುರೇಲ್ ಕಾಣಿಸಿಕೊಳ್ಳಲಿದ್ದಾರೆ.

ಇನ್ನು ತೊಡೆಸಂದು ನೋವಿನ ಕಾರಣ ಕಳೆದ ಪಂದ್ಯದಲ್ಲಿ ಆಕಾಶ್ ದೀಪ್ ಕಣಕ್ಕಿಳಿದಿರಲಿಲ್ಲ. ಇದೀಗ ಅವರು ಸಂಪೂರ್ಣ ಫಿಟ್ ಆಗಿದ್ದು, ಐದನೇ ಪಂದ್ಯದಲ್ಲಿ ಕಣಕ್ಕಿಳಿಯುವುದು ಖಚಿತವಾಗಿದೆ. ಹೀಗಾಗಿ ಅವರು ಸಹ ಪ್ಲೇಯಿಂಗ್ ಇಲೆವೆನ್‌ನಲ್ಲಿ ಕಾಣಿಸಿಕೊಳ್ಳಲಿದ್ದಾರೆ.

**ಆಕಾಶ್ ದೀಪ್‌ಗಾಗಿ ಯಾರು ಔಟ್:** ಬರ್ಮಿಂಗ್‌ಹ್ಯಾಮ್ ಹಾಗೂ ಲಾರ್ಡ್ಸ್ ಟೆಸ್ಟ್‌ನಲ್ಲಿ ಕಣಕ್ಕಿಳಿದಿದ್ದ ಆಕಾಶ್ ದೀಪ್ ಉತ್ತಮ ಬೌಲಿಂಗ್ ಪ್ರದರ್ಶನ ನೀಡಿದ್ದರು. ಹೀಗಾಗಿ ಓವಲ್ ಮೈದಾನದಲ್ಲಿ ನಡೆಯಲಿರುವ ಕೊನೆಯ ಟೆಸ್ಟ್ ಪಂದ್ಯದಲ್ಲಿ ಅವರಿಗೆ ಮತ್ತೆ ಅವಕಾಶ ನೀಡಲಿದ್ದಾರೆ. ಇತ್ತ ಆಕಾಶ್ ದೀಪ್ ಎಂಟ್ರಿಯಿಂದಾಗಿ ಕಳೆದ ಮ್ಯಾಚ್‌ನಲ್ಲಿ ಕಣಕ್ಕಿಳಿದಿದ್ದ ಅನ್ಶುಲ್ ಕಂಬೋಜ್ ಪ್ಲೇಯಿಂಗ್ ಇಲೆವೆನ್‌ನಿಂದ ಹೊರಬೀಳಲಿದ್ದಾರೆ. ಹಾಗೆಯೇ ಕೊನೆಯ ಟೆಸ್ಟ್ ಪಂದ್ಯದಲ್ಲಿ ಟೀಮ್ ಇಂಡಿಯಾ ಪರ ಕುಲ್ದೀಪ್ ಯಾದವ್ ಸಹ ಕಣಕ್ಕಿಳಿಯಲಿದ್ದಾರೆ ಎಂದು ಬಲ್ಲ ಮೂಲಗಳಿಂದ ತಿಳಿದು ಬಂದಿದೆ. ಕಳೆದ ನಾಲ್ಕು ಮ್ಯಾಚ್‌ಗಳಲ್ಲಿ ಬೆಂಚ್ ಕಾದಿದ್ದ ಅನುಭವಿ ಸ್ಪಿನ್ನರ್‌ಗೆ ಅವಕಾಶ ನೀಡಲು ನಿರ್ಧರಿಸಲಾಗಿದೆ. ಹೀಗಾಗಿ ಅವರು ಸಹ ಆಡುವ ಬಳಗದಲ್ಲಿ ಕಾಣಿಸಿಕೊಳ್ಳಲಿದ್ದಾರೆ.

**ಹೊರಬೀಳುವ ಆಟಗಾರ ಯಾರು:** ಕುಲ್ದೀಪ್ ಯಾದವ್‌ಗೆ ಅವಕಾಶ ಕಲ್ಪಿಸಲು ಭಾರತದ ಪ್ಲೇಯಿಂಗ್ ಇಲೆವೆನ್‌ನಿಂದ ಶಾರ್ದೂಲ್ ಠಾಕೂರ್ ಅವರನ್ನು ಕೈ ಬಿಡುವ ಸಾಧ್ಯತೆ ಹೆಚ್ಚಿದೆ. ಏಕೆಂದರೆ ಕಳೆದ ಪಂದ್ಯದಲ್ಲಿ ಕಣಕ್ಕಿಳಿದಿದ್ದ ಶಾರ್ದೂಲ್ 11 ಓವರ್‌ಗಳಲ್ಲಿ 55 ರನ್ ನೀಡಿದ್ದರು. ಇದಾಗ್ಯೂ ವಿಕೆಟ್ ಪಡೆದಿರಲಿಲ್ಲ. ಹೀಗಾಗಿ ಅವರ ಬದಲಿಗೆ ಕುಲ್ದೀಪ್ ಯಾದವ್‌ಗೆ ಚಾನ್ಸ್ ನೀಡಬಹುದು.

ಐದನೇ ಟೆಸ್ಟ್ ಪಂದ್ಯದಲ್ಲಿ ಜಸ್‌ಪ್ರೀತ್ ಬುಮ್ರಾ ಆಡುವ ಬಗ್ಗೆ ಇನ್ನೂ ಅಂತಿಮ ನಿರ್ಧಾರ ತೆಗೆದುಕೊಂಡಿಲ್ಲ. ಒಂದು ವೇಳೆ ಬುಮ್ರಾ ಹೊರಗುಳಿದರೆ ಎಡಗೈ ವೇಗಿ ಅರ್ಷದೀಪ್ ಸಿಂಗ್ ಅವರನ್ನು ಕಣಕ್ಕಿಳಿಸಬಹುದು.

ಅಂದರೆ ಬುಮ್ರಾ ಕೊನೆಯ ಟೆಸ್ಟ್ ಪಂದ್ಯದಿಂದ ಹೊರಗೆ ಉಳಿದರೆ, ಟೀಂ ಇಂಡಿಯಾ ತಂಡದ ಪ್ಲೇಯಿಂಗ್ ಇಲೆವೆನ್‌ನಲ್ಲಿ 4 ಬದಲಾವಣೆ ಕಂಡು ಬರಬಹುದು.

ಇಲ್ಲದಿದ್ದರೆ ಟೀಮ್ ಇಂಡಿಯಾ 3 ಬದಲಾವಣೆಯೊಂದಿಗೆ ಅಂತಿಮ ಪಂದ್ಯದಲ್ಲಿ ಕಣಕ್ಕಿಳಿಯುವುದು ಬಹುತೇಕ ಖಚಿತ. ಅದರಂತೆ ಭಾರತ ತಂಡದ ಸಂಭಾವ್ಯ ಪ್ಲೇಯಿಂಗ್ ಇಲೆವೆನ್ ಈ ಕೆಳಗಿನಂತಿರಲಿದೆ

ಭಾರತ ಟೆಸ್ಟ್ ತಂಡ: ಶುಭ್‌ಮನ್ ಗಿಲ್ (ನಾಯಕ), ರಿಷಭ್ ಪಂತ್ (ಉಪನಾಯಕ), ಯಶಸ್ವಿ ಜೈಸ್ವಾಲ್, ಕೆಎಲ್ ರಾಹುಲ್, ಸಾಯಿ ಸುದರ್ಶನ್, ಅಭಿಮನ್ಯು ಈಶ್ವರನ್, ಕರುಣ್ ನಾಯರ್, ರವೀಂದ್ರ ಜಡೇಜಾ, ಧ್ರುವ್ ಜುರೇಲ್, ವಾಷಿಂಗ್ಟನ್ ಸುಂದರ್, ಶಾರ್ದೂಲ್ ಠಾಕೂರ್, ಜಸ್‌ಪ್ರೀತ್ ಬುಮ್ರಾ, ಮೊಹಮ್ಮದ್ ಸಿರಾಜ್, ಪ್ರಸಿದ್ಧ್ ಕೃಷ್ಣ, ಆಕಾಶ್ ದೀಪ್, ಕುಲ್ದೀಪ್ ಯಾದವ್, ಅರ್ಷದೀಪ್ ಸಿಂಗ್, ಅನ್ಶುಲ್ ಕಂಬೋಜ್, ಎನ್. ಜಗದೀಸನ್

# ಕೊನೆಯ ಟೆಸ್ಟ್‌ನಲ್ಲಿ ಕಣಕ್ಕಿಳಿಯಲ್ವಾ ಬುಮ್ರಾ


ಭಾರತ ಮತ್ತು ಇಂಗ್ಲೆಂಡ್ ನಡುವಣ ಐದನೇ ಟೆಸ್ಟ್ ಪಂದ್ಯವು ಜುಲೈ 31 ರಿಂದ ಶುರುವಾಗಲಿದೆ. ಲಂಡನ್‌ನ ಕೆನ್ನಿಂಗ್ಟನ್ ಓವಲ್ ಮೈದಾನದಲ್ಲಿ ನಡೆಯಲಿರುವ ಈ ಪಂದ್ಯದಲ್ಲಿ ಟೀಮ್ ಇಂಡಿಯಾ ಗೆದ್ದರೆ ಸರಣಿಯನ್ನು 2-2 ಅಂತರದಿಂದ ಡ್ರಾಗೊಳಿಸಬಹುದು. ಹೀಗಾಗಿ ಈ ಮ್ಯಾಚ್ ಭಾರತ ತಂಡದ ಪಾಲಿಗೆ ನಿರ್ಣಾಯಕ. ಭಾರತ ಮತ್ತು ಇಂಗ್ಲೆಂಡ್ ನಡುವಣ 5ನೇ ಟೆಸ್ಟ್ ಪಂದ್ಯವು ಜುಲೈ 31 ರಿಂದ ಶುರುವಾಗಲಿದೆ. ಲಂಡನ್‌ನ ಕೆನ್ನಿಂಗ್ಟನ್ ಓವಲ್ ಮೈದಾನದಲ್ಲಿ ನಡೆಯಲಿರುವ ಈ ನಿರ್ಣಾಯಕ ಪಂದ್ಯದಲ್ಲಿ ಟೀಮ್ ಇಂಡಿಯಾ ಪರ ಜಸ್‌ಪ್ರೀತ್ ಬುಮ್ರಾ ಕಣಕ್ಕಿಳಿಯಲಿದ್ದಾರಾ ಎಂಬುದೇ ಈಗ ಕುತೂಹಲ. ಏಕೆಂದರೆ ಇಂಗ್ಲೆಂಡ್ ವಿರುದ್ಧದ 5 ಪಂದ್ಯಗಳ ಸರಣಿಯಲ್ಲಿ ಬುಮ್ರಾ ಕೇವಲ 3 ಪಂದ್ಯಗಳನ್ನು ಮಾತ್ರ ಆಡಲಿದ್ದಾರೆ ಎಂದು ಈಗಾಗಲೇ ಬಿಸಿಸಿಐ ತಿಳಿಸಿದೆ. ಆದರೀಗ ಟೀಮ್ ಇಂಡಿಯಾ ಮುಂದಿರುವುದು ಸರಣಿ ನಿರ್ಣಾಯಕ ಪಂದ್ಯ. ಕೆನ್ನಿಂಗ್ಟನ್ ಓವಲ್ ಮೈದಾನದಲ್ಲಿ ನಡೆಯಲಿರುವ ಈ ಪಂದ್ಯದಲ್ಲಿ ಭಾರತ ತಂಡ ಗೆದ್ದರೆ ಮಾತ್ರ ಸರಣಿಯನ್ನು 2-2 ಅಂತರದಿಂದ ಡ್ರಾನಲ್ಲಿ ಅಂತ್ಯಗೊಳಿಸಬಹುದು. ಹೀಗಾಗಿ ಭಾರತ ತಂಡಕ್ಕೆ ಪ್ರಮುಖ ವೇಗಿಯ ಅವಶ್ಯಕತೆಯಿದೆ. ಆದರೆ ಅತ್ತ ಬುಮ್ರಾಗೆ ವಿಶ್ರಾಂತಿ ನೀಡುವ ಯೋಜನೆಯೊಂದು ಬಿಸಿಸಿಐ ಮುಂದಿದೆ. ಈ ಯೋಜನೆಯ ಬಗ್ಗೆ ಟೀಮ್ ಇಂಡಿಯಾ ಕೋಚ್ ಗೌತಮ್ ಗಂಭೀರ್ ಅವರನ್ನು ಪ್ರಶ್ನಿಸಿದಾಗ, ಸ್ಪಷ್ಟ ಉತ್ತರ ದೊರಕಿಲ್ಲ. ಅಂದರೆ ಐದನೇ ಟೆಸ್ಟ್ ಪಂದ್ಯದಲ್ಲಿ ಬುಮ್ರಾ ಕಣಕ್ಕಿಳಿಯುತ್ತಾರಾ ಎಂಬ ಪ್ರಶ್ನೆಗೆ ಗಂಭೀರ್, ಇನ್ನೂ ಸಹ ಯಾವುದೇ ನಿರ್ಧಾರ ತೆಗೆದುಕೊಂಡಿಲ್ಲ ಎಂಬ ಉತ್ತರ ನೀಡಿದ್ದಾರೆ. ಹೀಗಾಗಿ ಓವಲ್ ಟೆಸ್ಟ್‌ನಲ್ಲಿ ಬುಮ್ರಾ ಕಣಕ್ಕಿಳಿಯುವುದು ಇನ್ನೂ ಸಹ ಖಚಿತವಾಗಿಲ್ಲ ಎನ್ನಬಹುದು. ಜಸ್‌ಪ್ರೀತ್ ಬುಮ್ರಾ, ಆಸ್ಟ್ರೇಲಿಯಾ ವಿರುದ್ಧದ ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಯ ಕೊನೆಯ ಪಂದ್ಯದ ವೇಳೆ ಬೆನ್ನು ನೋವಿನ ಸಮಸ್ಯೆಗೆ ಒಳಗಾಗಿದ್ದರು. ಈ ಸಮಸ್ಯೆಯ ಕಾರಣ ಅವರು ಚಾಂಪಿಯನ್ಸ್ ಟ್ರೋಫಿಯಲ್ಲಿ ಕಣಕ್ಕಿಳಿದಿರಲಿಲ್ಲ. ಇತ್ತ ಬುಮ್ರಾ ಅವರ ಅನುಪಸ್ಥಿತಿಯ ನಡುವೆಯೂ ಟೀಮ್ ಇಂಡಿಯಾ ಚಾಂಪಿಯನ್ಸ್ ಟ್ರೋಫಿ ಗೆಲ್ಲುವಲ್ಲಿ ಯಶಸ್ವಿಯಾಗಿತ್ತು. ಇದಾದ ಬಳಿಕ ಇಂಡಿಯನ್ ಪ್ರೀಮಿಯರ್ ಲೀಗ್‌ನಲ್ಲಿ ಸಂಪೂರ್ಣ ಫಿಟ್‌ನೆಸ್‌ನೊಂದಿಗೆ ಕಾಣಿಸಿಕೊಂಡಿದ್ದ ಬುಮ್ರಾ ಅವರನ್ನು ಇಂಗ್ಲೆಂಡ್ ಸರಣಿಗೆ ಆಯ್ಕೆ ಮಾಡಲಾಗಿತ್ತು. ಆದರೆ ಅವರ ಮೇಲಿರುವ ಒತ್ತಡವನ್ನು ಕಡಿಮೆ ಮಾಡುವ ಸಲುವಾಗಿ ಇಂಗ್ಲೆಂಡ್ ವಿರುದ್ಧದ ಸರಣಿ ನಡುವೆ ಬುಮ್ರಾಗೆ ವಿಶ್ರಾಂತಿ ನೀಡಲು ಬಿಸಿಸಿಐ ನಿರ್ಧರಿಸಿದೆ.



**ಬುಮ್ರಾಗೆ ವಿಶ್ರಾಂತಿ ಏಕೆ**

# ಮೌನ ಮುರಿದ ನಿತೀಶ್

ಇಂಡಿಯನ್ ಪ್ರೀಮಿಯರ್ ಲೀಗ್‌ನಲ್ಲಿ ನಿತೀಶ್ ಕುಮಾರ್ ರೆಡ್ಡಿ ಕಳೆದ 3 ವರ್ಷಗಳಿಂದ ಸನ್ ರೈಸರ್ಸ್ ಪರ ಕಣಕ್ಕಿಳಿಯುತ್ತಿದ್ದಾರೆ. ಎಸ್‌ಆರ್‌ಹೆಚ್ ಪರ ಈವರೆಗೆ 28 ಪಂದ್ಯಗಳಲ್ಲಿ ಕಣಕ್ಕಿಳಿದಿರುವ ಅವರು ಮುಂಬರುವ ಸೀಸನ್‌ನಲ್ಲಿ ಹೊಸ ತಂಡದ ಪರ ಕಣಕ್ಕಿಳಿಯಲಿದ್ದಾರೆ ಎಂಬ ಸುದ್ದಿಗಳು ಹರಿದಾಡಿದ್ದವು. ಈ ಸುದ್ದಿಗಳಿಗೆ ನಿತೀಶ್ ಕುಮಾರ್ ರೆಡ್ಡಿ ಸ್ಪಷ್ಟನೆ ನೀಡಿದ್ದಾರೆ. ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-19 ಕ್ಕೂ ಮುನ್ನ ನಿತೀಶ್ ಕುಮಾರ್ ರೆಡ್ಡಿ ಸನ್‌ರೈಸರ್ಸ್ ಹೈದರಾಬಾದ್ ತಂಡಕ್ಕೆ ಗುಡ್ ಬೈ ಹೇಳಲಿದ್ದಾರೆ. ಎಸ್‌ಆರ್‌ಹೆಚ್ ಜೊತೆಗಿನ ಒಪ್ಪಂದವನ್ನು ಅವರು ಶೀಘ್ರದಲ್ಲೇ ಕೊನೆಗೊಳಿಸಲಿದ್ದಾರೆ ಎಂಬ ಸುದ್ದಿಗಳು ಕಳೆದ ಕೆಲ ದಿನಗಳಿಂದ ಸೋಷಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿದೆ. ಈ ಸುದ್ದಿಗಳಿಗೆ ಖುದ್ದು ನಿತೀಶ್ ಕುಮಾರ್ ರೆಡ್ಡಿ ಬ್ರೇಕ್ ಹಾಕಿದ್ದಾರೆ. ಈ ಬಗ್ಗೆ ಸೋಷಿಯಲ್ ಮೀಡಿಯಾ ಪೋಸ್ಟ್ ಹಂಚಿಕೊಂಡಿರುವ ನಿತೀಶ್, ಸನ್‌ರೈಸರ್ಸ್ ಹೈದರಾಬಾದ್ ಜೊತೆಗಿನ ನನ್ನ ಬಂಧವು ನಂಬಿಕೆ, ಗೌರವ ಮತ್ತು ವರ್ಷಗಳ ಉತ್ಸಾಹದ ಮೇಲೆ ನಿರ್ಮಿತವಾಗಿದೆ. ಹೀಗಾಗಿ ನಾನು ಯಾವಾಗಲೂ ಎಸ್‌ಆರ್‌ಹೆಚ್ ತಂಡದೊಂದಿಗೆ ಇರುತ್ತೇನೆ ಎಂದು ತಿಳಿಸಿದ್ದಾರೆ. ಈ ಮೂಲಕ ಸನ್‌ರೈಸರ್ಸ್ ಹೈದರಾಬಾದ್ ತಂಡದಿಂದ ನಾನು ಹೊರ ನಡೆಯಲಿದ್ದೇನೆ ಎಂಬುದು ಕೇವಲ ವದಂತಿ ಅಷ್ಟೇ.





**ಟೀಮ್ ಇಂಡಿಯಾಗೆ ಮೇಜರ್ ಸರ್ಜರಿ**

# ಗಂಭೀರ್ ಬಂಟರಿಗೆ ಗೇಟ್ ಪಾಸ್


ಗೌತಮ್ ಗಂಭೀರ್ ಕೊಲ್ಕತ್ತಾ ನೈಟ್ ರೈಡರ್ಸ್ ತಂಡದ ನಾಯಕರಾಗಿದ್ದ ವೇಳೆ ರಿಯಾನ್ ಟೆನ್ ದೋಸ್ಚಾಟೆ ಹಾಗೂ ಮೋರ್ನೆ ಮೊರ್ಕೆಲ್ ಕೆಕೆಆರ್ ತಂಡದ ಭಾಗವಾಗಿದ್ದರು. ಇಬ್ಬರೊಂದಿಗೆ ಉತ್ತಮ ಒಡನಾಟ ಹೊಂದಿದ್ದ ಗಂಭೀರ್ ಟೀಮ್ ಇಂಡಿಯಾದ ಕೋಚ್ ಆದ ಬಳಿಕ ಅವರನ್ನೇ ಸಹಾಯಕ ಕೋಚ್‌ಗಳಾಗಿ ನೇಮಿಸಿಕೊಂಡಿದ್ದರು. ಆದರೀಗ ಗಂಭೀರ್ ಅವರ ಬಲಗೈ ಬಂಟರೆಂದು ಗುರುತಿಸಿಕೊಂಡಿರುವ ಇಬ್ಬರು ಸಿಬ್ಬಂದಿಗಳಿಗೆ ಗೇಟ್ ಪಾಸ್ ನೀಡಲು ಬಿಸಿಸಿಐ ನಿರ್ಧರಿಸಿದೆ ಎಂದು ವರದಿಯಾಗಿದೆ.

ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿಯ ಮುಕ್ತಾಯದ ಬೆನ್ನಲ್ಲೇ ಟೀಮ್ ಇಂಡಿಯಾಗೆ ಮೇಜರ್ ಸರ್ಜರಿಯಾಗಲಿದೆಯಾ?

ಈ ಪ್ರಶ್ನೆಗೆ ಸದ್ಯದ ಉತ್ತರ ಹೌದು. ಆದರೆ ಈ ಬಾರಿ ಸರ್ಜರಿಯಾಗಲಿರುವುದು ಸಿಬ್ಬಂದಿ ವರ್ಗದಲ್ಲಿ ಎಂಬುದಷ್ಟೇ ವ್ಯತ್ಯಾಸ.

ಅಂದರೆ ಗೌತಮ್ ಗಂಭೀರ್ ಅವರೊಂದಿಗೆ ಕಾರ್ಯ ನಿರ್ವಹಿಸುತ್ತಿರುವ ಸಹಾಯಕ ಸಿಬ್ಬಂದಿಗಳ ಕಾರ್ಯ ವೈಖರಿ ಬಗ್ಗೆ ಬಿಸಿಸಿಐ ಸಂತುಷ್ಟರಾಗಿಲ್ಲ. ಹೀಗಾಗಿ ಏಷ್ಯಾಕಪ್‌ಗೂ ಮುನ್ನ ಇಬ್ಬರ ತಲೆದಂಡವಾಗಲಿದೆ ಎಂದು ವರದಿಯಾಗಿದೆ.

ಬಿಸಿಸಿಐ, ಟೀಮ್ ಇಂಡಿಯಾದ ಸಹಾಯಕ ಕೋಚ್ ರಿಯಾನ್ ಟೆನ್ ದೋಸ್ಚಾಟೆ ಅವರನ್ನು ವಜಾಗೊಳಿಸಲು ನಿರ್ಧರಿಸಿದ್ದು, ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿಯ ಬಳಿಕ ಕ್ರಮ ಕೈಗೊಳ್ಳುವ ಸಾಧ್ಯತೆಯಿದೆ. ಇವರೊಂದಿಗೆ ಬೌಲಿಂಗ್ ಕೋಚ್ ಮೋರ್ನೆ ಮೊರ್ಕೆಲ್‌ಗೂ ಕೂಡ ಗೇಟ್ ಪಾಸ್ ನೀಡಲಿದ್ದಾರೆ ಎಂಬ ಸುದ್ದಿಗಳು ಕೂಡ ಹರಿದಾಡುತ್ತಿದೆ. ಕಳೆದ ವರ್ಷ ಜುಲೈನಲ್ಲಿ ಗೌತಮ್ ಗಂಭೀರ್ ಅವರನ್ನು ಭಾರತದ ಮುಖ್ಯ ಕೋಚ್ ಆಗಿ ನೇಮಕ ಮಾಡಲಾಗಿತ್ತು. ಈ ವೇಳೆ ಅವರ ಕೋರಿಕೆಯಂತೆ ರಿಯಾನ್ ಟೆನ್ ದೋಸ್ಚಾಟೆ ಅವರನ್ನು ಸಹಾಯಕ ಕೋಚ್, ಮೋರ್ನೆ ಮೊರ್ಕೆಲ್ ಅವರನ್ನು ಬೌಲಿಂಗ್ ಕೋಚ್ ಆಗಿ ಆಯ್ಕೆ ಮಾಡಲಾಗಿತ್ತು. ಹಾಗೆಯೇ ಬ್ಯಾಟಿಂಗ್ ಕೋಚ್ ಆಗಿ ಅಭಿಷೇಕ್ ನಾಯರ್ ಕಾಣಿಸಿಕೊಂಡಿದ್ದರು. ಕೊಲ್ಕತ್ತಾ ನೈಟ್ ರೈಡರ್ಸ್ ತಂಡದಲ್ಲಿದ್ದ ತನ್ನ ಸಹಪಾಠಿಗಳನ್ನೇ ಸಿಬ್ಬಂದಿ ವರ್ಗದಲ್ಲಿ ನೇಮಿಸಿಕೊಂಡಿದ್ದ ಗೌತಮ್ ಗಂಭೀರ್‌ಗೆ ಕೆಲ ತಿಂಗಳುಗಳ ಹಿಂದೆಯಷ್ಟೇ ಬಿಸಿಸಿಐ ಆಘಾತ ನೀಡಿದ್ದರು.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news

ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966